ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಫೆಬ್ರವರಿ 13 ಮಂಗಳವಾರ 2024

ಸಂಪುಟ: 44 | ಸಂಚಿಕೆ: 296 | ಪುಟಗಳು: 12


ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಬಸವಣ್ಣನವರ ಭಾವಚಿತ್ರದಡಿ 'ವಿಶ್ವಗುರು ಬಸವಣ್ಣ ಸಾಂಸ್ಕೃತಿಕ ನಾಯಕ'

ನಮೂದಿಸಲು ಸಿಎಂ ಸೂಚನೆ



ವಿಶ್ವಗುರು ಬಸವಣ್ಣನವರು

ಬೆಂಗಳೂರು, ಫೆ.12(ಕೆಎಂಶಿ)– ಹನ್ನೆರಡನೇ ಶತಮಾನದಲ್ಲಿ ಸಾಮಾಜಿಕ ಕ್ರಾಂತಿ ಮೂಲಕ ಸಮ ಸಮಾಜ ನಿರ್ಮಾಣಕ್ಕೆ ಶ್ರಮಿಸಿದ ಕ್ರಾಂತಿಕಾರಿ ಬಸವಣ್ಣ ಅವರನ್ನು ಕರ್ನಾಟಕದ ಸಾಂಸ್ಕೃತಿಕ ನಾಯಕ ಎಂದು ಘೋಷಿಸಿದ್ದು, ಸರ್ಕಾರಿ ಕಚೇರಿಗಳಲ್ಲಿರುವ ಸರ್ಕಾರ ಅನುಮೋದಿಸಿರುವ ಬಸವಣ್ಣ ಅವರ ಭಾವಚಿತ್ರಗಳಲ್ಲಿ "ವಿಶ್ವ ಗುರು ಬಸವಣ್ಣ ಸಾಂಸ್ಕೃತಿಕ ನಾಯಕ" ಎಂದು ಅಳವಡಿಸಲು ಕ್ರಮಕೈಗೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮುಖ್ಯ ಕಾರ್ಯದರ್ಶಿ ಅವರಿಗೆ ಆದೇಶಿಸಿದ್ದಾರೆ. ರಾಜ್ಯ, ಜಿಲ್ಲೆ ಹಾಗೂ ತಾಲೂಕು ಮಟ್ಟಗಳಲ್ಲಿ ನಡೆಯುವ ಎಲ್ಲಾ ಕಾರ್ಯಕ್ರಮಗಳಲ್ಲಿ ಬಸವಣ್ಣನವರ ಚಿಂತನೆಗಳು ಹಾಗೂ ಸರ್ಕಾರದ ಉದ್ದೇಶಗಳ ಕುರಿತು ಅರಿವು ಮೂಡಿಸುವಲ್ಲಿ ಸೂಕ್ತ ನಿರ್ದೇಶನಗಳನ್ನು ಹೊರಡಿಸಬೇಕೆಂದು ಮುಖ್ಯಮಂತ್ರಿ ಅವರು ಬರೆದಿರುವ ಪತ್ರದಲ್ಲಿ ಸೂಚಿಸಿದ್ದಾರೆ.

'ಗ್ಯಾರಂಟಿ'ಯಿಂದ 1.2 ಕೋಟಿಗೂ ಅಧಿಕ ಬಡವರು

ಮಧ್ಯಮ ವರ್ಗಕ್ಕೇರಿರುವುದು 'ಗ್ಯಾರಂಟಿ'

ವಿಧಾನಮಂಡಲದ ಜಂಟಿ ಸದನ ಉದ್ದೇಶಿಸಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಭಾಷಣದಲ್ಲಿ ಘೋಷಣೆ

- ವಿಧಾನ ಮಂಡಲ ಬಜೆಟ್ ಅಧಿವೇಶನ ಆರಂಭ
- ರಾಜ್ಯದ 3.5 ಕೋಟಿ ಮಹಿಳೆಯರಿಗೆ 'ಶಕ್ತಿ'; ಅನ್ನಭಾಗ್ಯದಡಿ 5 ಕೆಜಿ ಅಕ್ಕಿ, 5 ಕೆಜಿಗೆ ದುಡ್ಡು; 'ಗೃಹ ಜ್ಯೋತಿ'ಯಡಿ 1.60 ಕೋಟಿ ಗ್ರಾಹಕರಿಗೆ 200 ಯೂನಿಟ್ ವಿದ್ಯುತ್; ಗೃಹ ಲಕ್ಷ್ಮಿಯಡಿ 1.17 ಕೋಟಿ ಮಹಿಳೆಯರ ಖಾತೆಗೆ 2000 ರೂ. ಯಶಸ್ವಿ ವರ್ಗಾವಣೆ

ಬೆಂಗಳೂರು, ಫೆ.12(ಕೆಎಂಶಿ)– ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದ 1.2 ಕೋಟಿಗೂ ಹೆಚ್ಚು ಕುಟುಂಬಗಳು ಬಡತನ ರೇಖೆಯಿಂದ ಹೊರ ಬಂದು ಮಧ್ಯಮ ವರ್ಗದ ಆರ್ಥಿಕ ಸ್ಥಿತಿಗೆ ಏರಿದ್ದಾರೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಸೋಮವಾರ ವಿಧಾನಮಂಡಲಕ್ಕೆ ತಿಳಿಸಿದ್ದಾರೆ.

ಉಭಯ ಸದನಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ಬರ ಪರಿಹಾರ ನೀಡದಿದ್ದರೂ, ಸಂಕಷ್ಟ ಸನ್ನಿವೇಶದಲ್ಲಿ ರಾಜ್ಯ ನೀಡಿದ ನೆರವಿನಿಂದ ಬಡವರು ಮತ್ತು ರೈತರಿಗೆ ತೊಂದರೆಯಾಗಲಿಲ್ಲ ಎಂದರು. ನನ್ನ ಸರ್ಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ನಿರ್ಣಯದಿಂದ ರಾಜ್ಯದ ಐದು ಕೋಟಿಗೂ ಹೆಚ್ಚು ಜನರು ಮಧ್ಯಮ ವರ್ಗದ ಸ್ಥಿತಿಗೆ ಏರಿರುವುದು ಜಾಗತಿಕ ● 9ನೇ ಪುಟಕ್ಕೆ




ಉಭಯ ಸದನಗಳನ್ನು ಉದ್ದೇಶಿಸಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಭಾಷಣ

ಅನುದಾನ ನೀಡುವಲ್ಲಿ ಕೇಂದ್ರದ ವಿಳಂಬ ಧೋರಣೆ

ರಾಜ್ಯಪಾಲರ ಬಾಯಿಂದಲೇ ಹೇಳಿಸಿದ ರಾಜ್ಯ ಸರ್ಕಾರ

ಬೆಂಗಳೂರು, ಫೆ.12(ಕೆಎಂಶಿ)– ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರದ ಸಾಧನೆಗಳನ್ನು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ವಿಧಾನ ಮಂಡಲದಲ್ಲಿ ಬಿಡಿಸಿಟ್ಟಿದ್ದಲ್ಲದೆ, ಅನುದಾನ ನೀಡುವಲ್ಲಿ ಕೇಂದ್ರದ ವಿಳಂಬವನ್ನು ವಿವರಿಸಿದರು. ಉಭಯ ಸದನಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಬರ ಪೀಡಿತ ತಾಲೂಕುಗಳಲ್ಲಿ ಬರ ಪರಿಹಾರ ಕಾಮಗಾರಿಗಾಗಿ ಎನ್‌ಡಿಆರ್‌ಎಫ್‌ನಿಂದ 18,171.44 ಕೋಟಿ ರೂ. ಆರ್ಥಿಕ ನೆರವನ್ನು ಕೋರಿ ರಾಜ್ಯ ಸರ್ಕಾರ ಕೇಂದ್ರಕ್ಕೆ ಮನವಿ ಸಲ್ಲಿಸಿದೆ. ಅವರು ಇದುವರೆಗೂ ಯಾವುದೇ ಹಣ ಬಿಡುಗಡೆ ಮಾಡಿಲ್ಲ, ಅನುದಾನಕ್ಕೆ ಪ್ರಯತ್ನ ಮುಂದುವರೆಸಿದೆ. ಎಸ್‌ಡಿಆರ್‌ಎಫ್ ಮಾರ್ಗಸೂಚಿಗಳ ಪ್ರಕಾರ ಸರ್ಕಾರ ಈಗಾಗಲೇ ಮೊದಲನೇ ಕಂತಿನ ಬೆಳೆ ಹಾನಿ ಪರಿಹಾರವನ್ನು ಅರ್ಹತೆಗೆ ಅನುಗುಣವಾಗಿ 2,000 ರೂ.ಗಳಂತೆ 32.50 ಲಕ್ಷ ರೈತರರಿಗೆ 617 ಕೋಟಿ ರೂ. ಇನ್‌ಪುಟ್ ಸಬ್ಸಿಡಿ ನೀಡಿದೆ. ● 9ನೇ ಪುಟಕ್ಕೆ

ಫೆಬ್ರವರಿ, ಮಾರ್ಚ್‌ಗೆ ತಮಿಳುನಾಡಿಗೆ 5 TMC ಕಾವೇರಿ ನೀರು ಹರಿಸಲು CWRC ಶಿಫಾರಸು



ನವದೆಹಲಿ: ಫೆಬ್ರವರಿ ಹಾಗೂ ಮಾರ್ಚ್ ತಿಂಗಳಲ್ಲಿ ತಲಾ 2.5 ಟಿಎಂಸಿ ಕಾವೇರಿ ನೀರನ್ನು ತಮಿಳುನಾಡಿಗೆ ಕರ್ನಾಟಕ ರಾಜ್ಯ ಹರಿಸಬೇಕು ಎಂದು ಕಾವೇರಿ ನೀರು ನಿಯಂತ್ರಣ ಸಮಿತಿ (CWRC) ಸೋಮವಾರ ಶಿಫಾರಸು ಮಾಡಿದೆ.

ಫೆಬ್ರವರಿ 12 ರಂದು ಸೋಮವಾರ ದೆಹಲಿಯಲ್ಲಿ ನಡೆದ CWRC ಸಭೆಯಲ್ಲಿ ಈ ಶಿಫಾರಸು ಮಾಡಲಾಯಿತು. ಕರ್ನಾಟಕವು CWRC ಮುಂದೆ 01.06.2023 ರಿಂದ 09.02.2024 ರವರೆಗೆ ಕರ್ನಾಟಕದ ನಾಲ್ಕು ಜಲಾಶಯಗಳಿಗೆ ಸಂಚಿತ ಒಳಹರಿವಿನ ಕೊರತೆಯು ಶೇ.52.43 ಇರುತ್ತದೆ.

ಅನಿಯಂತ್ರಿತ ಜಲಾನಯನ ಪ್ರದೇಶದಿಂದ ಉಂಟಾಗುವ ಕೊಡುಗೆಯನ್ನು ಹೊರತುಪಡಿಸಿ ಬಿಳಿಗುಂಡ್ಲು ತಲುಪಲು ಕರ್ನಾಟಕವು ತನ್ನ ಜಲಾಶಯಗಳಿಂದ ಯಾವುದೇ ನೀರನ್ನು ಬಿಡುಗಡೆ ಮಾಡಲು ಸಾಧ್ಯವಾಗುವುದಿಲ್ಲ ಎಂದು ಸ್ಪಷ್ಟಪಡಿಸಿದೆ.

7.61 ಟಿಎಂಸಿ ಬಾಕಿಯ (backlog) ಜೊತೆಗೆ, ಫೆಬ್ರವರಿ 2024ರಿಂದ ಮೇ 2024ರ ತಿಂಗಳುಗಳಿಗೆ, ಕರ್ನಾಟಕವು ಪ್ರತಿ ತಿಂಗಳು 2.50 ಟಿಎಂಸಿಯಂತೆ ಪರಿಸರ ಹರಿವನ್ನು ನಿರಂತರವಾಗಿ ಬಿಡುಗಡೆ ಮಾಡಬೇಕು ಎಂದು ತಮಿಳುನಾಡು ಒತ್ತಾಯಿಸಿತು. ಅಂತಿಮವಾಗಿ, ಫೆಬ್ರವರಿ 2024 ಮತ್ತು ಮಾರ್ಚ್ 2024ರ ಉಳಿದ ಅವಧಿಗೆ ಸುಪ್ರೀಂ ಕೋರ್ಟ್ ಮಾರ್ಪಡಿಸಿದಂತೆ CWDTಯ ಆದೇಶದ ಪ್ರಕಾರ ಅಂತರ–ರಾಜ್ಯ ಸಂಪರ್ಕ ಬಿಂದು ಬಿಳಿಗುಂಡ್ಲುನಲ್ಲಿ ಕರ್ನಾಟಕವು ನಿಗದಿತ ಪ್ರಮಾಣದ ನೀರು ಹರಿವನ್ನು ಖಚಿತಪಡಿಸಿಕೊಳ್ಳಬೇಕು ಎಂದು CWRC ನಿರ್ಧರಿಸಿತು.

ರಾಜ್ಯಪಾಲರ ಭಾಷಣದಲ್ಲಿ ಉಪ್ಪು, ಹುಳಿ, ಖಾರ ಏನಿಲ್ಲ

ಇದೊಂದು ಜಾಹೀರಾತುಗಳಿಂದ ನಡೆಯುತ್ತಿರೋ ಸರ್ಕಾರ



ಬೆಂಗಳೂರು, ಫೆ.12(ಕೆಎಂಶಿ)– ರಾಜ್ಯಪಾಲರ ಭಾಷಣದಲ್ಲಿ ಉಪ್ಪು ಹುಳಿ ಖಾರ ಏನೂ ಇಲ್ಲ, ಇದೊಂದು ಜಾಹೀರಾತುಗಳಿಂದ ನಡೆಯುತ್ತಿರುವ ಸರ್ಕಾರ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಕಟುವಾಗಿ ಟೀಕಿಸಿದ್ದಾರೆ.

ಒಂದು ಕಡೆ ಬರಗಾಲ, ಕೇಂದ್ರ ಸರ್ಕಾರದಿಂದ ಹಣ ಬರುತ್ತಿಲ್ಲ ಎನ್ನುವ ಸರ್ಕಾರ, ಗಂಜಿ ಕೇಂದ್ರಗಳನ್ನು ಸೃಷ್ಟಿ ಮಾಡಿ 90 ಮಂದಿಗೆ ಸಂಪುಟ ದರ್ಜೆ ನೀಡಿದೆ, ಅದರಲ್ಲಿ 77 ಶಾಸಕರಿಗೆ ಸಂಪುಟ ದರ್ಜೆ ಭಾಗ್ಯ ನೀಡಿದ್ದರೆ, ಮುಖ್ಯಮಂತ್ರಿ ಕಚೇರಿಯಲ್ಲಿ 9 ಜನರಿಗೆ ಸಂಪುಟ ಭಾಗ್ಯ ಕರುಣಿಸಲಾಗಿದೆ. ರಾಜ್ಯದ ಆಡಳಿತದ ಇತಿಹಾಸದಲ್ಲಿ ಇಷ್ಟು ● 9ನೇ ಪುಟಕ್ಕೆ

ಗಂಜಿ ಕೇಂದ್ರ ತೆರೆದು 90 ಮಂದಿಗೆ ಸಂಪುಟ ದರ್ಜೆ ಸ್ಥಾನಮಾನ

ಬಿಜೆಪಿ ಯೋಜನೆಗಳ ನನ್ನದೆಂದೇ ರಾಜ್ಯಪಾಲರಿಂದ ಸರ್ಕಾರ ಹೇಳಿಸಿದೆ



ಬೆಂಗಳೂರು, ಫೆ.12(ಕೆಎಂಶಿ)–ಕಾಂಗ್ರೆಸ್ ಸರ್ಕಾರ ರಾಜ್ಯಪಾಲರ ಬಾಯಲ್ಲಿ ಸುಳ್ಳು ಹೇಳಿಸಿದ್ದಲ್ಲದೆ, ಬಿಜೆಪಿ ಸರ್ಕಾರದ ಯೋಜನೆಗಳನ್ನು ತಮ್ಮದೇ ಯೋಜನೆಯಾಗಿ ಬಿಂಬಿಸಿಕೊಂಡಿದೆ ಎಂದು ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್. ಅಶೋಕ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಪಾಲರು ಇಂದು ವಿಧಾನಮಂಡಲದ ಜಂಟಿ ಸದನಗಳನ್ನು ಉದ್ದೇಶಿಸಿ ಮಾಡಿದ ಭಾಷಣದಲ್ಲಿ ಕಾಂಗ್ರೆಸ್ ಸರ್ಕಾರ ಐದು ಗ್ಯಾರಂಟಿಗಳನ್ನು ಜಾರಿಗೆ ತಂದಿದ್ದೇವೆ ಎಂದಿದೆಯಾದರೂ ಯುವನಿಧಿ ಯೋಜನೆ ಇನ್ನೂ ನಿರುದ್ಯೋಗಿಗಳ ಕೈ ಸೇರಿಲ್ಲ ಎಂದರು. ಬರ ಪರಿಹಾರ ಕೊಟ್ಟಿದ್ದೇವೆ ಎನ್ನುತ್ತಾರೆ, ಪರಿಹಾರವನ್ನು ಕಂತಾಗಿ ನೀಡಬಾರದು, ಹಿಂದಿನ ಬಿಜೆಪಿ ● 9ನೇ ಪುಟಕ್ಕೆ

ಮೈಸೂರಿನ ಸಿವಿ ರಸ್ತೆ ಪ್ಲಾಸ್ಟಿಕ್ ಗೋದಾಮಿನಲ್ಲಿ ಬೆಂಕಿ ಅವಘಡ

ಬನ್ನಿಮಂಟಪ ಅಗ್ನಿಶಾಮಕ ಅಧಿಕಾರಿಗಳ ಕ್ಷಿಪ್ರ ಕಾರ್ಯಾಚರಣೆಯಿಂದ ತಪ್ಪಿದ ಭಾರಿ ಅನಾಹುತ

■ ಪುಟ–2

ಅಪಘಾತದಲ್ಲಿ ಯುವಕನ ಸಾವಿಗೆ ಕಾರಣರಾದವರ 'ಪಶ್ಚಾತ್ತಾಪ ಸಾವು'

ಯುವಕನ ಸಾವಿಗೆ ನಾನೇ ಕಾರಣನಾದೆ ಎಂದು ಮನನೊಂದು ವ್ಯಕ್ತಿ ಆತ್ಮಹತ್ಯೆ



ಧನಲ್ ಸುಬ್ಬಯ್ಯ



ಹೆಚ್.ಡಿ.ತಮ್ಮಯ್ಯ

ಮಡಿಕೇರಿ, ಫೆ.12–ರಸ್ತೆ ಅಪಘಾತದಲ್ಲಿ ಯುವಕನ ಸಾವಿಗೆ ನಾನೇ ಕಾರಣ ಎಂದು ಮನನೊಂದು, ವ್ಯಕ್ತಿಯೋರ್ವ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಮಡಿಕೇರಿ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯ ಹೆರವನಾಡು ಗ್ರಾಮದಲ್ಲಿ ಸೋಮವಾರ ನಡೆದಿದೆ. ಮಡಿಕೇರಿ ತಾಲೂಕಿನ ಹೆರವನಾಡು ಗ್ರಾಮದ ನಿವಾಸಿ ಹೆಚ್.ಡಿ.ತಮ್ಮಯ್ಯ (57) ಆತ್ಮಹತ್ಯೆ ಮಾಡಿಕೊಂಡವರು.

ಘಟನೆ: ಶುಕ್ರವಾರ ಮಡಿಕೇರಿ ನಗರದ ಚೈನ್ ಗೇಟ್ ಬಳಿ ಹಾಲೇರಿಯ ಕಾಂಡನಕೊಲ್ಲಿಯ ನಿವಾಸಿ ಹಾಗೂ ಮಡಿಕೇರಿಯ ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಕಾಲೇಜಿನ ಸ್ನಾತಕೋತ್ತರ ಪದವಿ ವಿದ್ಯಾರ್ಥಿ ಧನಲ್ ಸುಬ್ಬಯ್ಯ (24) ಹೋಗುತ್ತಿದ್ದ ಬೈಕ್‌ಗೆ ಹೆಚ್.ಡಿ.ತಮ್ಮಯ್ಯ ಅವರ ಬೈಕ್ ಡಿಕ್ಕಿ ಹೊಡೆದಿದೆ. ಧನಲ್ ಸುಬ್ಬಯ್ಯ ರಸ್ತೆಗೆ ಬಿದ್ದಿದ್ದಾರೆ. ಇದೇ ವೇಳೆ ವೇಗವಾಗಿ ಬಂದ ಲಾರಿ ಧನಲ್ ಸುಬ್ಬಯ್ಯ ಮೇಲೆ ಹರಿದಿದೆ. ತೀವ್ರವಾಗಿ ಗಾಯಗೊಂಡಿದ್ದ ಧನಲ್ ಸುಬ್ಬಯ್ಯನನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಧನಲ್ ಸುಬ್ಬಯ್ಯ ಭಾನುವಾರ ಮೃತಪಟ್ಟಿದ್ದಾರೆ.

ಯುವಕನ ಸಾವಿನ ವಿಷಯ ತಿಳಿಯುತ್ತಿದ್ದಂತೆ ಆತನ ಸಾವಿಗೆ ನಾನೇ ಕಾರಣ ಎಂದು ಮನನೊಂದು ಹೆಚ್.ಡಿ.ತಮ್ಮಯ್ಯ ಸ್ವಗ್ರಾಮ ಹೆರವನಾಡುವಿನ ಕಾಫಿ ತೋಟಕ್ಕೆ ತೆರಳಿ ಅಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ರಸ್ತೆ ಅಪಘಾತ ಸಂಬಂಧ ಮಡಿಕೇರಿ ಸಂಚಾರಿ ಠಾಣೆಯಲ್ಲಿ ಹಾಗೂ ಹೆಚ್.ಡಿ. ತಮ್ಮಯ್ಯ ಆತ್ಮಹತ್ಯೆ ಸಂಬಂಧ ಮಡಿಕೇರಿ ಪೊಲೀಸ್ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಧನ್ವಂತರಿ ರಸ್ತೆಯಲ್ಲಿ ನಿಲ್ಲಿಸಿದ್ದ ಕಾರಿನ ಕಿಟಕಿ ಗಾಜು ಒಡೆದು ನಗದು ಕಳವು

ಗಾಂಧಿ ವೃತ್ತದ ಬಳಿ ದಾಖಲಾತಿಗಳಿದ್ದ ಬ್ಯಾಗ್ ಎಸೆದು ಖದೀಮರು ಪರಾರಿ



(ಸಂಗ್ರಹ ಚಿತ್ರ)

ಮೈಸೂರು, ಫೆ. 12(ಆರ್‌ಕೆ)– ಮೈಸೂರಿನ ಧನ್ವಂತರಿ ರಸ್ತೆಯಲ್ಲಿ ನಿಲ್ಲಿಸಿದ್ದ ಕಾರಿನ ಕಿಟಕಿ ಗಾಜು ಒಡೆದು ನಗದು, ದಾಖಲೆಗಳಿದ್ದ ಬ್ಯಾಗ್ ಎಗರಿಸಿದ ಖದೀಮರು, ಗಾಂಧಿ ವೃತ್ತದ ಹೋಟೆಲ್‌ವೊಂದರ ಬಳಿ ದಾಖಲಾತಿಗಳಿದ್ದ ಬ್ಯಾಗ್ ಬಿಸಾಕಿ ಅದರಲ್ಲಿದ್ದ 4000 ರೂ. ನಗದಿನೊಂದಿಗೆ ಪರಾರಿಯಾಗಿದ್ದಾರೆ. ಈ ಘಟನೆ ಶುಕ್ರವಾರ ಸಂಭವಿಸಿದೆ.

ಮೈಸೂರಿನ ಕುವೆಂಪುನಗರದ ಶಾಂತಿಸಾಗರ ಬಳಿಯ ನಿವಾಸಿಯಾದ ಎಲೆಕ್ಟ್ರಿಕಲ್ ಕಂಟ್ರಾಕ್ಟರ್ ವಿನೋದ್‌ಕುಮಾರ್ ಅವರ ಕಾರಿನಲ್ಲಿದ್ದ ಬ್ಯಾಗ್ ಎಗರಿಸಿ, ಅದರಲ್ಲಿದ್ದ ನಗದು ಕಳವು ಮಾಡಲಾಗಿದೆ. ವಿನೋದ್‌ಕುಮಾರ್ ಪತ್ನಿ ಶ್ರೀಮತಿ ಸುಜಾತ ತಮ್ಮ ಫಿಗೋ ಇವಿ ಕಾರನ್ನು ಇಂದು ಮಧ್ಯಾಹ್ನ 3.30ರ ವೇಳೆಗೆ ಧನ್ವಂತರಿ ರಸ್ತೆಯಲ್ಲಿ ನಿಲ್ಲಿಸಿ, ಔಷಧಿ ತರಲೆಂದು ಮೆಡಿಕಲ್ ಸ್ಟೋರ್‌ಗೆ ತೆರಳಿದ್ದರು. ಅಂಗಡಿಯಿಂದ ವಾಪಸ್ ಬಂದಾಗ ಕಾರಿನ ಕಿಟಕಿ ಗಾಜು ಒಡೆದಿರುವುದನ್ನು ಕಂಡು, ಸುಜಾತ ಅವರಿಗೆ ಶಾಕ್ ಆಯಿತು. ಅಕ್ಕಪಕ್ಕದವರು ಬಿಸಿಲಿಗೆ ಗಾಜು ಒಡೆದಿರಬಹುದೆಂದು ಹೇಳಿದರು. ನಿಜವಿರಬಹುದೆಂದು ಅಂದುಕೊಂಡ ಅವರು, ಕಾರಿನ ಹಿಂಬದಿ ಸೀಟಿನ ಬಳಿ ಬ್ಯಾಗ್ ಇಟ್ಟಿರುವುದ ಮರೆತು, ಕಾರನ್ನು ಮನೆಗೆ ಕೊಂಡೊಯ್ದರು.

ರಾತ್ರಿ ಸುಮಾರು 8.30ರಲ್ಲಿ ಗಾಂಧಿ ಸ್ಕ್ವೇರ್‌ನ ಆರ್‌ಆರ್ ಹೋಟೆಲ್ ಬಳಿಯಿಂದ ಅಲ್ಲಿನ ಸೆಕ್ಯುರಿಟಿ ಗಾರ್ಡ್ ಒಬ್ಬರಿಗೆ ಬ್ಯಾಗ್‌ವೊಂದು ಸಿಕ್ಕಿದ್ದು, ಅದರಲ್ಲಿ ವಿನೋದ್‌ಕುಮಾರ್ ಅವರ ವಿಸಿಟಿಂಗ್ ಕಾರ್ಡ್, ಆಧಾರ್ ಕಾರ್ಡ್‌ನಲ್ಲಿದ್ದ ಮೊಬೈಲ್ ನಂಬರ್‌ಗೆ ಕರೆ ಮಾಡಿ ಬ್ಯಾಗ್ ವಿಷಯ ● 9ನೇ ಪುಟಕ್ಕೆ

ಮೈಸೂರು ಮಿತ್ರ ಮಂಗಳವಾರ 13 ಫೆಬ್ರವರಿ 2024

ಮೈಸೂರಿನ ಸಿವಿ ರಸ್ತೆ ಪ್ಲಾಸ್ಟಿಕ್ ಗೋದಾಮಿನಲ್ಲಿ ಬೆಂಕಿ ಅವಘಡ

ಬನ್ನಿಮಂಟಪ ಅಗ್ನಿಶಾಮಕ ಅಧಿಕಾರಿಗಳ ಕ್ಷಿಪ್ರ ಕಾರ್ಯಾಚರಣೆಯಿಂದ ತಪ್ಪಿದ ಭಾರಿ ಅನಾಹುತ

ಮೈಸೂರು, ಫೆ. 12 (ಆರ್‌ಕೆ)– ಮೈಸೂರಿನ ಮಂಡಿ ಮೊಹಲ್ಲಾದ ಸಿವಿ ರಸ್ತೆಯಲ್ಲಿರುವ ಹಳೇ ಪ್ಲಾಸ್ಟಿಕ್ ವಸ್ತುಗಳ ಗೋದಾಮಿನಲ್ಲಿ ಆಕಸ್ಮಿಕ ಬೆಂಕಿ ಕಾಣಿಸಿಕೊಂಡು, ದಿಢೀರ್ ಪ್ಲಾಸ್ಟಿಕ್ ಪದಾರ್ಥ ಸುಟ್ಟು ಹೋದ ಘಟನೆ ಇಂದು ಸಂಭವಿಸಿದೆ.

ಬೆಳಗ್ಗೆ 10.15 ಗಂಟೆ ವೇಳೆಗೆ ಕಾಣಿಸಿಕೊಂಡ ಬೆಂಕಿ ನೋಡ ನೋಡುತ್ತಿದ್ದಂತೆಯೇ ದಟ್ಟ ಹೊಗೆಯೊಂದಿಗೆ ಪ್ರಸರಿಸಲಾರಂಭಿಸಿತು. ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ಬನ್ನಿಮಂಟಪ ಅಗ್ನಿಶಾಮಕ ಠಾಣೆ ಅಧಿಕಾರಿಗಳು ಹಾಗೂ ಸಿಬ್ಬಂದಿ ತ್ವರಿತ ಕಾರ್ಯಾಚರಣೆ ನಡೆಸಿ ಬೆಂಕಿ ನಂದಿಸಿದರು.

ಪರಿಣಾಮ ಸ್ಥಳದಲ್ಲಿ ದಟ್ಟ ಹೊಗೆ ಆವರಿಸಿ ಸುತ್ತಲಿನ ಪ್ರದೇಶಕ್ಕೆ ಹರಡುತ್ತಿದ್ದಂತೆಯೇ ಆತಂಕಗೊಂಡ ಸಾರ್ವಜನಿಕರು ಜಮಾಯಿಸತೊಡಗಿದಾಗ ಮಂಡಿ ಮತ್ತು ಎನ್.ಆರ್. ಠಾಣೆ ಪೊಲೀಸರು ಆಗಮಿಸಿ ಜನರನ್ನು ದೂರ ಕಳುಹಿಸಿ ಬೆಂಕಿ ಆರಿಸುವ ಕಾರ್ಯಾಚರಣೆಗೆ ಅನುವು ಮಾಡಿಕೊಟ್ಟರು.

ಮೂರು ವಾಹನಗಳ 30ಕ್ಕೂ ಹೆಚ್ಚು ಸಿಬ್ಬಂದಿಗಳು ಅಗ್ನಿಶಾಮಕ ಉಪಕರಣಗಳ ಮೂಲಕ ಸುಮಾರು ಮೂರು ತಾಸು ಕಾರ್ಯಾಚರಣೆ ನಡೆಸಿದ ಪರಿಣಾಮ ಮಧ್ಯಾಹ್ನದ ವೇಳೆಗೆ ಬೆಂಕಿ ಶಮನವಾಯಿತಲ್ಲದೆ, ಸುತ್ತಮುತ್ತಲಿನ ಗೋಡೌನ್‌ಗಳಿಗೆ ಹರಡಿ ಸಂಭವಿಸಬಹುದಾದ ಭಾರಿ ಬೆಂಕಿ ಅನಾಹುತ ತಪ್ಪಿಸುವಲ್ಲಿ ಯಶಸ್ವಿಯಾದರು. ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದಾಗಿ ಬೆಂಕಿ ಹೊತ್ತಿಕೊಂಡಿರಬಹುದೆಂದು ಶಂಕಿಸಲಾಗಿದೆಯಾದರೂ ನಿಜವಾದ ಕಾರಣ ಏನೆಂಬುದು ತಿಳಿದಿಲ್ಲ. ಆದರೆ ಬೆಂಕಿಗೆ ಲಕ್ಷಾಂತರ ರೂ. ಮೌಲ್ಯದ ಪ್ಲಾಸ್ಟಿಕ್ ಪದಾರ್ಥಗಳು ಭಸ್ಮವಾಗಿವೆ ಎಂದು ಮಹಜರು ನಡೆಸಿದ ಪೊಲೀಸರು ತಿಳಿಸಿದ್ದಾರೆ.

ಸೆಸ್ಕ್ ಅಧಿಕಾರಿಗಳೂ ಬೆಂಕಿ ಅನಾಹುತವಾದ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪ್ರಧಾನ ಅಗ್ನಿಶಾಮಕ ಅಧಿಕಾರಿ ಜಯರಾಮಯ್ಯ, ಪ್ರಾದೇಶಿಕ ಅಗ್ನಿಶಾಮಕ ಅಧಿಕಾರಿ ಚಂದನ್, ಜಿಲ್ಲಾ ಅಗ್ನಿಶಾಮಕ ಅಧಿಕಾರಿಗಳಾದ ಗುರುರಾಜ್, ಗಂಗಾ ನಾಯಕ್, ಕೆ.ಜಿ. ರಮೇಶ್ ಸೇರಿದಂತೆ ಹಲವು ಅಧಿಕಾರಿಗಳು ಹಾಗೂ ಸಿಬ್ಬಂದಿ ಬೆಂಕಿ ನಂದಿಸುವ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

ಘಟನೆಯಲ್ಲಿ ಪ್ಲಾಸ್ಟಿಕ್ ಪದಾರ್ಥ ಸುಟ್ಟು ಹೋಗಿದ್ದನ್ನು ಹೊರತುಪಡಿಸಿದರೆ, ಯಾವುದೇ ಆಸ್ತಿಪಾಸ್ತಿ, ಪ್ರಾಣಹಾನಿ ಸಂಭವಿಸಿಲ್ಲ ಎಂದು ಮಹಜರು ನಡೆಸಿದ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ಮಂಡಿ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

ಮೈಸೂರು ಮಹಾ ನಗರಪಾಲಿಕೆ ಅಧಿಕಾರಿಗಳೂ ಸ್ಥಳಕ್ಕೆ ಭೇಟಿ ನೀಡಿದರಲ್ಲದೆ, ಗೋದಾಮು ಬಳಿ ಅಗತ್ಯ ಮುಂಜಾಗ್ರತಾ ಕ್ರಮಗಳ ಪರಿಶೀಲಿಸಿ, ಸಲಹೆ–ಸೂಚನೆ ನೀಡಿದರು.



ಮೈಸೂರಿನ ಮಂಡಿ ಮೊಹಲ್ಲಾದ ಸಿವಿ ರಸ್ತೆಯಲ್ಲಿರುವ ಹಳೇ ಪ್ಲಾಸ್ಟಿಕ್ ವಸ್ತುಗಳ ಗೋದಾಮಿನಲ್ಲಿ ಆಕಸ್ಮಿಕ ಬೆಂಕಿ ಕಾಣಿಸಿಕೊಂಡು, ದಿಢೀರ್ ಪ್ಲಾಸ್ಟಿಕ್ ಪದಾರ್ಥ ಸುಟ್ಟು ಹೋಗಿರುವುದು.

ಬಿಹಾರದಲ್ಲಿ ನಿತೀಶ್‌ಕುಮಾರ್‌ಗೆ ವಿಶ್ವಾಸಮತ; 243ರಲ್ಲಿ 129 ಶಾಸಕರ ಬೆಂಬಲ



ಪಟ್ನಾ: ಬಿಹಾರದಲ್ಲಿ ನಿತೀಶ್ ಕುಮಾರ್ ನೇತೃತ್ವದ ಎನ್‌ಡಿಎ ಸರ್ಕಾರ ಸೋಮವಾರ ವಿಧಾನಸಭೆಯಲ್ಲಿ ವಿಶ್ವಾಸ ಮತ ಸಾಬೀತುಪಡಿಸುವಲ್ಲಿ ಯಶಸ್ವಿಯಾಗಿದೆ. 129 ಶಾಸಕರು ನಿತೀಶ್ ಕುಮಾರ್ ಅವರನ್ನು ಬೆಂಬಲಿಸಿದ್ದಾರೆ.

ಮುಖ್ಯಮಂತ್ರಿ ನಿತೀಶ್‌ಕುಮಾರ್ ಅವರ ಜೆಡಿಯು ಪಕ್ಷವು 15 ದಿನಗಳ ಹಿಂದಷ್ಟೇ 'ಮಹಾಘಟಬಂಧನ್' ಮೈತ್ರಿಕೂಟದಿಂದ ಹೊರ ಬಂದು, ಎನ್‌ಡಿಎ ಜತೆ ಸೇರಿ ಹೊಸ ಸರ್ಕಾರ ರಚಿಸಿತ್ತು. ಈಗ ಬಿಹಾರ ವಿಧಾನಸಭೆ ಸದಸ್ಯರ ಸಂಖ್ಯೆ 243ಕ್ಕೆ ಏರಿಕೆಯಾಗಿದೆ. 243 ಸದಸ್ಯಬಲದ ಬಿಹಾರ ವಿಧಾನಸಭೆಯಲ್ಲಿ ಜೆಡಿಯು 45 ಶಾಸಕರನ್ನು ಹೊಂದಿದೆ. ಬಿಜೆಪಿ ಮತ್ತು ಹಿಂದುಸ್ತಾನಿ ಅವಾಮ್ ಮೋರ್ಚಾ ಕ್ರಮವಾಗಿ 79 ಹಾಗೂ 4 ಶಾಸಕರನ್ನು ಹೊಂದಿವೆ. ಸ್ವತಂತ್ರ ಅಭ್ಯರ್ಥಿಯೊಬ್ಬರ ಬೆಂಬಲದಿಂದ ಈ ಒಕ್ಕೂಟದ ಒಟ್ಟು ಸದಸ್ಯಬಲ 128 ಆಗಲಿದೆ. ಮತ್ತೊಂದೆಡೆ ಮಹಾಘಟಬಂಧನದ ಬಳಿ 115 ಶಾಸಕರ ಬಲವಿದೆ. ಬಹುಮತ ಸಾಬೀತುಪಡಿಸಲು 122 ಸ್ಥಾನಗಳು ಅಗತ್ಯ. ನಿತೀಶ್ ಕುಮಾರ್ ವಿಶ್ವಾಸಮತ ಸಾಬೀತುಪಡಿಸುತ್ತಿದ್ದಂತೆ ವಿರೋಧ ಪಕ್ಷ ಸದಸ್ಯರು ವಿಧಾನಸಭೆಯಿಂದ ಹೊರನಡೆದಿದ್ದಾರೆ.

ಮೈಸೂರು ತಂಡಕ್ಕೆ 'ಜ್ಞಾನ ಪ್ರಕಾಶೋತ್ಸವ ಕಪ್'



ಅಂತರ ಜಿಲ್ಲಾ ಕ್ರಿಕೆಟ್ ಪಂದ್ಯಾವಳಿ 'ಜ್ಞಾನ ಪ್ರಕಾಶೋತ್ಸವ ಕಪ್' ಮೈಸೂರಿನ ಮಹಾಜನ ಕಾಲೇಜು ಕ್ರೀಡಾಂಗಣದಲ್ಲಿ ನಡೆಯಿತು. ಹಾಸನ, ತುಮಕೂರು, ಮೈಸೂರು ಹಾಗೂ ಬೆಂಗಳೂರು ಜಿಲ್ಲೆಗಳಿಂದ ತಂಡಗಳು ಭಾಗವಹಿಸಿದ್ದವು. ಪ್ರತಿಷ್ಠಿತ ಟ್ರೋಫಿಗಾಗಿ ತಂಡಗಳ ನಡುವೆ ಲೀಗ್ ಪಂದ್ಯಗಳು ನಡೆದು ಅಂತಿಮ ಸುತ್ತಿಗೆ ಮೈಸೂರು, ಬೆಂಗಳೂರು ತಂಡ ಆಯ್ಕೆಯಾದವು. ಅಂತಿಮ ಪಂದ್ಯದಲ್ಲಿ ರೋಚಕ ಆಟವನ್ನಾಡಿದ ಮೈಸೂರು ತಂಡವು 'ಜ್ಞಾನಪ್ರಕಾಶೋತ್ಸವ ಕಪ್' ತನ್ನದಾಗಿಸಿಕೊಂಡಿತು. ಈ ವೇಳೆ ಅರ್ಜುನ್ ಅವಧೂತರು ಉಪಸ್ಥಿತರಿದ್ದರು.

ಕಾಟಾಚಾರಕ್ಕೆ ನಡೆಸಿದ ಕಾಯಕ ಶರಣರ ಜಯಂತಿ ಕಾರ್ಯಕ್ರಮ



ಕಾಯಕ ಶರಣರ ಜಯಂತಿ ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ ಆಯೋಜಿಸದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಂ.ಡಿ.ಸುದರ್ಶನ್ ವಿರುದ್ಧ ಕ್ರಮ ಕೈಗೊಳ್ಳುವಂತೆ ದಲಿತ ಸಂಘಟನೆ ಹಾಗೂ ಆದಿಜಾಂಬವ ಸಂಘಟನೆ ವತಿಯಿಂದ ಎಂಎಲ್‌ಸಿ ಡಾ.ಡಿ.ತಿಮ್ಮಯ್ಯ ಅವರಿಗೆ ಮನವಿ ಸಲ್ಲಿಸಲಾಯಿತು.

ಮೈಸೂರು,ಫೆ.12–ಮೈಸೂರು ಜಿಲ್ಲಾಡಳಿತ ಕಿರು ಕಲಾಮಂದಿರದಲ್ಲಿ ದಲಿತ ಸಮುದಾಯದ ಕಾಯಕ ಶರಣರ ಜಯಂತಿ ಕಾರ್ಯಕ್ರಮ ಏರ್ಪಡಿಸಿದ್ದೇವೆ ಎಂದು ಹೇಳಿಕೊಂಡು ಕಾಟಾಚಾರಕ್ಕೆ ಒಂದು ಸಣ್ಣ ಬ್ಯಾನರ್ ಕಟ್ಟಿ ಫೋಟೋಗಳನ್ನು ಅಚ್ಚಾಕಿಸಿದ್ದಾರೆ. ಯಾವ ಜನಪ್ರತಿನಿಧಿಗಳು ಹಾಗೂ ಆಯಾಯ ಸಮುದಾಯದ ಮುಖಂಡರ ಗಮನಕ್ಕೆ ತಾರದೆ, ಪೂರ್ವಭಾವಿ ಸಭೆಯನ್ನು ಕರೆಯದೆ ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ ಆಯೋಜಿಸದೆ ಕಡೆಗಣನೆ ಮಾಡಲಾಗಿದೆ. ಇದಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಎಂ.ಡಿ. ಸುದರ್ಶನ್ ವಿರುದ್ಧ ಕ್ರಮ ಕೈಗೊಳ್ಳುವಂತೆ ದಲಿತ ಸಂಘಟನೆಗಳ ಒಕ್ಕೂಟ ಮತ್ತು ಆದಿಜಾಂಬವ ಸಂಘಟನೆಯು ಸರ್ಕಾರವನ್ನು ಒತ್ತಾಯಿಸಿ ವಿಧಾನಪರಿಷತ್ ಶಾಸಕ ಡಾ.ಡಿ.ತಿಮ್ಮಯ್ಯ ಅವರಿಗೆ ಮನವಿ ಸಲ್ಲಿಸಿದೆವು.

ಈ ಸಂದರ್ಭದಲ್ಲಿ ಜನಾಂಗದ ನಾಯಕರಾದ ಎಡತೊರೆ ಎಂ. ನಿಂಗರಾಜ್, ದುರ್ಗೇಶ್, ಡಿ.ಕುಮಾರ್, ದುದ್ದಗೆರೆ ರಾಮು, ಲೋಕೇಶ್, ಗೋಪಾಲಕೃಷ್ಣಸ್ವಾಮಿ, ಸಿ.ರಾಚಪ್ಪಜೆಟ್ಟಿಹುಂಡಿ, ಪ್ರಸನ್ನ ಚಕ್ರವರ್ತಿ, ಅಹಿಂದ ಜವರಪ್ಪ, ಮಹೇಶ್, ಕಾಳ ಸುರೇಶ, ಸೌರಭ್, ಸುನೀಲ್ ಬುಗಾರಿ ಮತ್ತಿತರರು ಉಪಸ್ಥಿತರಿದ್ದರು.

ಕಾಂಗ್ರೆಸ್ ತೊರೆದ ಮಹಾರಾಷ್ಟ್ರದ ಮಾಜಿ ಸಿಎಂ ಅಶೋಕ್ ಚೌಹಾಣ್



ಮುಂಬೈ: ಮಹಾರಾಷ್ಟ್ರದ ಮಾಜಿ ಮುಖ್ಯಮಂತ್ರಿ ಹಾಗೂ ಹಿರಿಯ ಕಾಂಗ್ರೆಸ್ ನಾಯಕ ಅಶೋಕ್ ಚೌಹಾಣ್ ಅವರು ಕಾಂಗ್ರೆಸ್ ಪ್ರಾಥಮಿಕ ಸದಸ್ಯತ್ವ ಮತ್ತು ಶಾಸಕ ಸ್ಥಾನಕ್ಕೆ ದಿಢೀರ್ ರಾಜೀನಾಮೆ ನೀಡಿದ್ದಾರೆ. ಸೋಮವಾರ ಬೆಳಗ್ಗೆ 11.24ಕ್ಕೆ ವಿಧಾನಸಭಾಧ್ಯಕ್ಷ ರಾಹುಲ್ ನಾರ್ವೇಕರ್ ಅವರಿಗೆ ತಮ್ಮ ರಾಜೀನಾಮೆ ಪತ್ರವನ್ನು ಸಲ್ಲಿಸಿದ್ದಾರೆ.

ಮಹಾರಾಷ್ಟ್ರದ ಬೋಕರ್ ವಿಧಾನಸಭಾ ಕ್ಷೇತ್ರವನ್ನು ಪ್ರತಿನಿಧಿಸುವ ಅಶೋಕ್ ಚೌಹಾಣ್, ರಾಜ್ಯ ಕಾಂಗ್ರೆಸ್ ಅಧ್ಯಕ್ಷ ನಾನಾ ಪಟೋಲೆ ಅವರಿಗೂ ಪತ್ರ ಬರೆದಿದ್ದಾರೆ. 'ನಾನು ನನ್ನ ವಿಧಾನಸಭೆಯ ಸದಸ್ಯ ಸ್ಥಾನಕ್ಕೆ ರಾಜೀನಾಮೆ ಪತ್ರವನ್ನು ವಿಧಾನಸಭಾಧ್ಯಕ್ಷ ರಾಹುಲ್ ನಾರ್ವೇಕರ್ ಅವರಿಗೆ ಸಲ್ಲಿಸಿದ್ದೇನೆ' ಎಂದು ಅವರು ಖಚಿತಪಡಿಸಿದ್ದಾರೆ.

ಮಹಾರಾಷ್ಟ್ರದ ಹಿರಿಯ ಕಾಂಗ್ರೆಸ್ ನಾಯಕರಾದ ಬಾಬಾ ಸಿದ್ದಿಕ್ ಮತ್ತು ಮಿಲಿಂದ್ ದಿಯೋರಾ ಅವರು ಇತ್ತೀಚೆಗಷ್ಟೇ ಕಾಂಗ್ರೆಸ್ ಪಕ್ಷವನ್ನು ತೊರೆದಿದ್ದರು. ಅವರ ಬೆನ್ನಲ್ಲೇ ಅಶೋಕ್ ಚೌಹಾಣ್ ಕೂಡ ಕಾಂಗ್ರೆಸ್ ಪಕ್ಷದಿಂದ ಹೊರ ಬಂದಿದ್ದಾರೆ. ಇವರ ರಾಜೀನಾಮೆಯಿಂದ ರಾಜ್ಯ ರಾಜಕೀಯ ವಲಯದಲ್ಲಿ ದೊಡ್ಡ ಮಟ್ಟದ ಚರ್ಚೆ ನಡೆಯುತ್ತಿದೆ. ಚೌಹಾಣ್ ಅವರ ರಾಜೀನಾಮೆಯಿಂದ ಲೋಕಸಭಾ ಚುನಾವಣೆ ಹಾಗೂ ವಿಧಾನಸಭಾ ಚುನಾವಣೆಗಳ ಮೇಲೆ ಭಾರಿ ಪರಿಣಾಮ ಬೀರಲಿದೆ ಎಂಬ ಚರ್ಚೆಗಳು ಶುರುವಾಗಿವೆ.

ಮೂಲಗಳ ಪ್ರಕಾರ ಅವರು ಬಿಜೆಪಿ ಸೇರುವ ಸಾಧ್ಯತೆ ಇದ್ದು, ರಾಜ್ಯಸಭಾ ಚುನಾವಣೆಗೆ ಬಿಜೆಪಿ ಟಿಕೆಟ್ ಸಿಗುವ ಸಂಭವವಿದೆ ಎಂಬ ರಾಜಕೀಯ ಲೆಕ್ಕಾಚಾರ ಕೂಡ ನಡೆದಿದೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಈ ತಿಂಗಳ ಅಂತ್ಯಕ್ಕೆ ಮಹಾರಾಷ್ಟ್ರಕ್ಕೆ ಭೇಟಿ ನೀಡಲಿದ್ದು, ಈ ವೇಳೆ ಅವರು ಬಿಜೆಪಿ ಸೇರಲಿದ್ದಾರೆ ಎಂದು ಮಾತುಗಳು ಕೇಳಿ ಬರುತ್ತಿವೆ.

ಕಾಮನಕೆರೆ ಹುಂಡಿ ವ್ಯಕ್ತಿ ನಾಪತ್ತೆ



ಮೈಸೂರು, ಫೆ. 12– ಮೈಸೂರು ತಾಲೂಕು ಕಾಮನಕೆರೆ ಹುಂಡಿ ನಿವಾಸಿ ಲೇಟ್ ಚಿಕ್ಕಣ್ಣ ಅವರ ಪುತ್ರ ನಾರಾಯಣ (55) ಜನವರಿ 27ರಂದು ಮನೆಯಿಂದ ಹೊರ ಹೋದವರು ಇದುವರೆಗೂ ವಾಪಸ್ ಬಂದಿಲ್ಲ ಎಂದು ಆತನ ಪತ್ನಿ ಮೈಸೂರು ದಕ್ಷಿಣ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಇವರ ಬಗ್ಗೆ ಮಾಹಿತಿ ತಿಳಿದಲ್ಲಿ ದೂ. 2520040, 2444800, 0821–2444955 ಸಂಪರ್ಕಿಸಲು ಕೋರಲಾಗಿದೆ.

ಹೆಣ್ಣು ಭ್ರೂಣ ಹತ್ಯೆ: ಆರೋಗ್ಯ ಇಲಾಖೆಗೆ ವರದಿ

ಬೆಂಗಳೂರು: ಹೆಣ್ಣು ಭ್ರೂಣ ಹತ್ಯೆ ಪ್ರಕರಣದ ತನಿಖೆ ನಡೆಸುತ್ತಿರುವ ಸಿಐಡಿ ಅಧಿಕಾರಿಗಳು, ಪ್ರಕರಣದ ಬಗ್ಗೆ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ತನಿಖಾ ವರದಿ ಸಲ್ಲಿಸಲು ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ.

ಬೈಯಪ್ಪನಹಳ್ಳಿ ಠಾಣೆಯಲ್ಲಿ ದಾಖಲಾಗಿದ್ದ ಪ್ರಕರಣದ ತನಿಖೆ ಕೈಗೆತ್ತಿಕೊಂಡಿರುವ ಸಿಐಡಿ ಅಧಿಕಾರಿಗಳು, ವೈದ್ಯರು ಸೇರಿ ಹಲವರನ್ನು ಈಗಾಗಲೇ ಬಂಧಿಸಿ ವಿಚಾರಣೆ ನಡೆಸಿದ್ದಾರೆ. 900ಕ್ಕೂ ಹೆಚ್ಚು ಭ್ರೂಣ ಹತ್ಯೆ ಮಾಡಿರುವ ಮಾಹಿತಿ ತನಿಖೆಯಿಂದ ಲಭ್ಯವಾಗಿದೆ. ಭ್ರೂಣ ಹತ್ಯೆ ಜಾಲದ ಬಗ್ಗೆ ಮಾಹಿತಿ ಸಂಗ್ರಹಿಸಿರುವ ಸಿಐಡಿ ಅಧಿಕಾರಿಗಳು, ಪುರಾವೆ ಸಮೇತ ವರದಿಯಲ್ಲಿ ಉಲ್ಲೇಖಿಸಿರುವುದಾಗಿ ಗೊತ್ತಾಗಿದೆ. ಸ್ಕ್ಯಾನಿಂಗ್ ಯಂತ್ರಗಳ ಅಕ್ರಮ ಮಾರಾಟ ಹಾಗೂ ಬಳಕೆಗೆ ಸಂಬಂಧಪಟ್ಟ ಅಂಶಗಳು ತನಿಖೆಯಲ್ಲಿ ಪತ್ತೆಯಾಗಿವೆ. ವೈದ್ಯರು ಹಾಗೂ ಇತರರು, ಹೆಚ್ಚು ಹಣ ಸಂಪಾದಿಸಲು ತಮ್ಮದೇ ತಂಡ ಕಟ್ಟಿಕೊಂಡು ಕೃತ್ಯ ಎಸಗುತ್ತಿದ್ದರು. ಎಲ್ಲ ಅಂಶಗಳನ್ನು ವರದಿಯಲ್ಲಿ ಉಲ್ಲೇಖಿಸಲಾಗಿದೆ. ಕಾಯ್ದೆ ಪ್ರಕಾರ ವರದಿಯೊಂದನ್ನು ಆರೋಗ್ಯ ಅಧಿಕಾರಿಗಳಿಗೆ ನೀಡಬೇಕು. ವರದಿ ಹಸ್ತಾಂತರಿಸುವ ಪ್ರಕ್ರಿಯೆ ಆರಂಭಿಸಬೇಕಿದೆ. ನ್ಯಾಯಾಲಯಕ್ಕೂ ದೋಷಾರೋಪ ಪಟ್ಟಿ ಸಲ್ಲಿಸಲು ತಯಾರಿ ನಡೆದಿದೆ' ಎಂದು ಮೂಲಗಳು ಹೇಳಿವೆ.

ಕೇಂದ್ರದಿಂದ ರಾಜ್ಯಕ್ಕೆ ಅನುದಾನ ತಾರತಮ್ಯ ಖಂಡಿಸಿ ಸಿಪಿಐ ಪ್ರತಿಭಟನೆ



ಅನುದಾನ ಹಂಚಿಕೆಯಲ್ಲಿ ಕೇಂದ್ರ ಸರ್ಕಾರ, ರಾಜ್ಯಕ್ಕೆ ಅನ್ಯಾಯ ಮಾಡುತ್ತಿದೆ ಎಂದು ಆರೋಪಿಸಿ ಭಾರತ ಕಮ್ಯೂನಿಸ್ಟ್ ಪಕ್ಷ(ಸಿಪಿಐ)ದ ಕಾರ್ಯಕರ್ತರು ಸೋಮವಾರ ಮೈಸೂರಿನ ಮೆಟ್ರೋಪೋಲ್ ವೃತ್ತದಲ್ಲಿರುವ ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಪ್ರತಿಮೆ ಮುಂದೆ ಪ್ರತಿಭಟನೆ ನಡೆಸಿದರು.

ಮೈಸೂರು,ಫೆ.12(ಎಂಟಿವೈ)– ಕೇಂದ್ರ ಸರ್ಕಾರವು ಅನುದಾನ, ತೆರಿಗೆ ಹಣ ಹಂಚಿಕೆಯಲ್ಲಿ ಕರ್ನಾಟಕ ರಾಜ್ಯಕ್ಕೆ ಅನ್ಯಾಯ ಮಾಡುತ್ತಿದೆ ಎಂದು ಆರೋಪಿಸಿ ಭಾರತ ಕಮ್ಯೂನಿಸ್ಟ್ ಪಕ್ಷ(ಸಿಪಿಐ)ದ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಮೈಸೂರಿನ ಮೆಟ್ರೋಪೋಲ್ ವೃತ್ತದಲ್ಲಿರುವ ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಪ್ರತಿಮೆ ಮುಂದೆ ಸೋಮವಾರ ಪ್ರತಿಭಟನೆ ನಡೆಸಿದ ಸಿಪಿಐ ಕಾರ್ಯಕರ್ತರು, ಕೇಂದ್ರ ಸರ್ಕಾರದ ಮಲತಾಯಿ ಧೋರಣೆಯ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಕರ್ನಾಟಕವನ್ನು ಕೇಂದ್ರ ಸರ್ಕಾರ ನಿರ್ಲಕ್ಷಿಸುತ್ತಿದೆ. ಜಿಎಸ್‌ಟಿ, ತೆರಿಗೆ ಹಣ, ಬರ ಪರಿಹಾರ ಸೇರಿದಂತೆ ವಿವಿಧ ಅನುದಾನ ಹಂಚಿಕೆ ಸಂದರ್ಭದಲ್ಲಿ ಕೇಂದ್ರ ಸರ್ಕಾರವು ರಾಜ್ಯಕ್ಕೆ ತಾರತಮ್ಯ ಮಾಡುತ್ತಿದೆ. ಈ ಅನ್ಯಾಯವನ್ನು ರಾಜ್ಯ ಸಂಸದರು ಪ್ರಶ್ನಿಸುತ್ತಿಲ್ಲ. ಭಾರತದ ಒಕ್ಕೂಟ ವ್ಯವಸ್ಥೆಯೊಳಗಿರುವ ರಾಜ್ಯಗಳ ಮೂಲಕ ಸಂಗ್ರಹವಾಗುವ ವಸ್ತುಗಳು, ಆಸ್ತಿಗಳು, ವಾಹನಗಳು ಇತ್ಯಾದಿಗಳ ಮೇಲೆ ತೆರಿಗೆ, ಸೆಸ್, ಸರ್ಚಾರ್ಜ್ ರೂಪದಲ್ಲಿ ತೆರಿಗೆ ಸಂಗ್ರಹಿಸಲಾಗುತ್ತಿದೆ. ಇದರಲ್ಲಿ ಕೇಂದ್ರ, ರಾಜ್ಯಗಳಿಗೆ ಇಂತಿಷ್ಟು ಪ್ರಮಾಣದಲ್ಲಿ ಹಂಚಿಕೆಯಾಗಬೇಕೆಂದು ಹಣಕಾಸು ಆಯೋಗವನ್ನು ರಚಿಸಲಾಗಿದೆ. ನಿಯಮದಂತೆ ತೆರಿಗೆ ಹಣವನ್ನು ನ್ಯಾಯಸಮ್ಮತವಾಗಿ ರಾಜ್ಯಗಳಿಗೆ ಅಗತ್ಯವಾದ ಅನುದಾನವನ್ನು ಕಾಲಕಾಲಕ್ಕೆ ಬಿಡುಗಡೆ ಮಾಡುವುದು ಭಾರತದ ಒಕ್ಕೂಟ ಸರ್ಕಾರದ ಹೊಣೆಗಾರಿಕೆಯಾಗಿದೆ. ಆದರೆ, ಕಳೆದ 4 ವರ್ಷಗಳಿಂದ ರಾಜ್ಯಕ್ಕೆ ಲಭಿಸಬೇಕಾದ ತೆರಿಗೆ ಹಂಚಿಕೆಯಲ್ಲಿ ಕೇಂದ್ರ ಸರ್ಕಾರವು ರಾಜ್ಯಕ್ಕೆ ಅನ್ಯಾಯ ಮಾಡಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ರಾಜ್ಯಕ್ಕೆ 45 ಕೋಟಿ ರೂ. ನಷ್ಟವಾಗಿದೆ ಎಂದು ಸಿಎಂ ಹೇಳಿದ್ದಾರೆ. ರಾಜ್ಯದ ಬರ ಪರಿಹಾರದ ಅನುದಾನವನ್ನು ಸಹ ಬಿಡುಗಡೆಗೊಳಿಸಿಲ್ಲ. ಇದು ರಾಜ್ಯಕ್ಕೆ ಮಾಡಿದ ಮಹಾ ಅನ್ಯಾಯವಾಗಿದೆ. ರಾಜ್ಯದ ಪಾಲಿನ ತೆರಿಗೆ ಹಣ ಸೇರಿದಂತೆ ನೆಲ–ಜಲ–ಭಾಷೆಯಂತಹ ರಾಜ್ಯದ ಅಸ್ಮಿತೆಯ ಪ್ರಶ್ನೆಗಳು ಎದುರಾದಾಗ ರಾಜ್ಯದ ಪರ ಧ್ವನಿಯೆತ್ತದೆ ಮೌನ ತಾಳಿರುವ ಸಂಸದರು ನಿರ್ಲಕ್ಷ್ಯ ತೋರಿದ್ದಾರೆ. ಸಂಸದರ ಕ್ಷೇತ್ರ ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನ ಎಷ್ಟು? ಇದರಿಂದ ಎಷ್ಟು ಅಭಿವೃದ್ಧಿ ಕಾಮಗಾರಿಗಳು ನಡೆದಿವೆ ಎಂಬುದರ ಕುರಿತು ಶ್ವೇತಪತ್ರ ಹೊರಡಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಸಿಪಿಐ ಮುಖಂಡರಾದ ಹೆಚ್.ಬಿ.ರಾಮಕೃಷ್ಣ, ಕೆ.ಎಸ್. ರೇವಣ್ಣ, ಕೆ.ಜಿ.ಸೋಮರಾಜೇ ಅರಸ್, ಎಂ.ಶಿವಣ್ಣ, ಡಿ.ಜಗನ್ನಾಥ್, ಸಿ.ರಾಜು, ಡಿ.ಸುರೇಶ್, ಎನ್.ಕೃಷ್ಣ ಇನ್ನಿತರರು ಪಾಲ್ಗೊಂಡಿದ್ದರು.

ರಾಜ್ಯ ಮಟ್ಟದ ಪುರುಷರ ವಾಲಿಬಾಲ್ ಪಂದ್ಯಾವಳಿ

ಮೈಸೂರು,ಫೆ.12–ತಾಲೂಕಿನ ವರುಣ ಹೋಬಳಿಯ ಕೂಡನಹಳ್ಳಿಯಲ್ಲಿ ಶ್ರೀ ಬಸವೇಶ್ವರ ಯುವಕರ ಸಂಘದ ವತಿಯಿಂದ ರಾಜ್ಯ ಮಟ್ಟದ ಪುರುಷರ ಹೊನಲು ಬೆಳಕಿನ ವಾಲಿಬಾಲ್ ಪಂದ್ಯಾವಳಿಯನ್ನು ಫೆ.17(ಶನಿವಾರ) ಹಾಗೂ ಫೆ.18 (ಭಾನುವಾರ) ಆಯೋಜಿಸಲಾಗಿದ್ದು, ವಿಜೇತ ತಂಡಗಳಿಗೆ ನಗದು ಬಹುಮಾನ ಮತ್ತು ಆಕರ್ಷಕ ಟ್ರೋಫಿಯನ್ನು, ಅತ್ಯುತ್ತಮ ಪಂದ್ಯಾವಳಿ ಆಟಗಾರ ಪ್ರಶಸ್ತಿಯನ್ನು ನೀಡಲಾಗುತ್ತದೆ. ಆಸಕ್ತ ತಂಡಗಳು ಫೆ.15ರೊಳಗೆ ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ 9739737838, 7829848464 ಸಂಪರ್ಕಿಸಲು ಕೋರಲಾಗಿದೆ.

ವಿವಿಧ ಆಟಗಳ ಸ್ಪರ್ಧೆ

ಮೈಸೂರು, ಫೆ. 12–ಸಖಿ ಫೌಂಡೇಶನ್ ಮತ್ತು ಸೂರ್ಯ ಚಾರಿಟೆಬಲ್ ಟ್ರಸ್ಟ್ ಭೀಷ್ಮಾಷ್ಟಮಿಯ ಅಂಗವಾಗಿ ಫೆ. 17ರ ಶನಿವಾರದಂದು ಹಿರಿಯ ನಾಗರಿಕರಿಗಾಗಿ ಒಳಾಂಗಣ ಆಟಗಳ ಸ್ಪರ್ಧೆಯನ್ನು ಆಯೋಜಿಸಿದೆ. 'ಗಂಟು ಹಾಕೆ ಗಂಗಮ್ಮ, ರಾಮ ಶ್ಯಾಮ ಭಾಮ, ಕೆರೆ ದಡ, ಆಶುಭಾಷಣ ಸ್ಪರ್ಧೆ, ಚುಕ್ಕಿ ಚಂದ್ರಮ' ಆಟಗಳನ್ನು ರಾಮಕೃಷ್ಣನಗರದ ಜಯಲಕ್ಷ್ಮಿದೇವಿ ಪದವಿಪೂರ್ವ ಕಾಲೇಜಿನಲ್ಲಿ ಅಪರಾಹ್ನ ಮೂರರಿಂದ 5 ಗಂಟೆಯವರೆಗೆ ಆಯೋಜಿಸಿದ್ದು ಐವತ್ತೈದರ ನಂತರದ ಆಸಕ್ತ ಪುರುಷರು ಹಾಗೂ ಮಹಿಳೆಯರು ಇದರಲ್ಲಿ ಭಾಗವಹಿಸಬಹುದಾಗಿದೆ. ಮಾಹಿತಿಗೆ 8310306882, 9964790442 ಸಂಪರ್ಕಿಸಬಹುದು.

ಸರ್ಕಾರಿ ಶಾಲೆಗಳಲ್ಲೇ ವಿದ್ಯಾರ್ಥಿಗಳ ಜ್ಞಾನ, ವ್ಯಕ್ತಿತ್ವ ವಿಕಾಸ



ಮೈಸೂರು ತಾಲೂಕಿನ ಕೆ.ಹೆಮ್ಮನಹಳ್ಳಿ ಗ್ರಾಮದಲ್ಲಿ ಶಾಲೆಯ ನಾಲ್ಕು ಹೊಸ ಕೊಠಡಿಗಳು ಮತ್ತು ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಶಾಸಕ ಜಿ.ಟಿ.ದೇವೇಗೌಡರು ಉದ್ಘಾಟಿಸಿದರು.

ಮೈಸೂರು, ಫೆ. 12– ಸರ್ಕಾರಿ ಶಾಲೆಗಳಿಂದ ವಿದ್ಯಾರ್ಥಿಗಳ ಜ್ಞಾನ ಮತ್ತು ವ್ಯಕ್ತಿತ್ವ ವಿಕಾಸವಾಗುತ್ತದೆ ಎಂದು ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರು ಹೇಳಿದರು.

ಮೈಸೂರು ತಾಲೂಕಿನ ಕೆ.ಹೆಮ್ಮನಹಳ್ಳಿ ಗ್ರಾಮದಲ್ಲಿ ನಾಲ್ಕು ಹೊಸ ಕೊಠಡಿಗಳು ಮತ್ತು ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ನೈಜ ಪ್ರತಿಭೆ ಹೊರಹೊಮ್ಮುತ್ತದೆ. ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು ರಾಜಕೀಯ,ಸಾಹಿತ್ಯ, ಸಿನಿಮಾ, ಶಿಕ್ಷಣ ಮುಂತಾದ ಕ್ಷೇತ್ರಗಳಲ್ಲಿ ಮುಂಚೂಣಿಯಲ್ಲಿದ್ದಾರೆ ಎಂದರು.

ಕೆ. ಹೆಮ್ಮನಹಳ್ಳಿ ಸರ್ಕಾರಿ ಶಾಲೆಯಲ್ಲಿ 'ಅನುಭವ ಮಂಟಪ' ನಾಟಕ ಅಭಿನಯಿಸುತ್ತಿರುವುದು ತುಂಬಾ ಸಂತಸದ ವಿಷಯ. ಒಂದು ಎಕರೆ ಜಾಗದಲ್ಲಿ ನಾಲ್ಕು ಕೊಠಡಿಗಳು ನಿರ್ಮಾಣವಾಗಿದ್ದು, ಈ ಶಾಲೆಗೆ ಅಗತ್ಯವಾದ ಶೌಚಾಲಯ, ನೀರು ಮತ್ತು ಕಾಂಪೌಂಡ್ ಸೌಲಭ್ಯಗಳನ್ನು ಕೂಡಲೇ ಬೋಗಾದಿ ಪಟ್ಟಣ ಪಂಚಾಯಿತಿಯವರು ನಿರ್ಮಿಸಲು ಸ್ಥಳದಲ್ಲಿಯೇ ಮುಖ್ಯಾಧಿಕಾರಿಗಳಿಗೆ ಆದೇಶಿಸಿದರು. ವಿದ್ಯಾರ್ಥಿಗಳು ತಂದೆ ತಾಯಿಗಳನ್ನು ಗೌರವಿಸಬೇಕು ಮತ್ತು ಅವರಿಗೆ ವಯಸ್ಸಾದ ಮೇಲೆ ಅವರನ್ನು ಚೆನ್ನಾಗಿ ನೋಡಿಕೊಳ್ಳಬೇಕು ಎಂದು ಜಿ.ಟಿ.ದೇವೇಗೌಡರು ನೀತಿ ಪಾಠ ಹೇಳಿದರು.

ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಸಾಂಸ್ಕೃತಿಕ ನೃತ್ಯ, ಅನುಭವ ಮಂಟಪ ನಾಟಕ ಮತ್ತು ಛದ್ಮವೇಷ ನಡೆಸಿಕೊಟ್ಟರು. ಕಾರ್ಯಕ್ರಮದಲ್ಲಿ ಬಿ.ಆರ್.ಸಿ ಮಹದೇವು, ಬೋಗಾದಿ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಎಂ.ಬಸವರಾಜು, ಮಾಜಿ ಜಿ.ಪಂ. ಸದಸ್ಯ ಮರಿಜೋಗಿಗೌಡ, ಮಾಜಿ ಗ್ರಾ.ಪಂ ಸದಸ್ಯರಾದ ಎಂ.ಗಣೇಶ್, ರಮೇಶ್, ಹನುಮೇಶ್, ಎಂ.ಆರ್. ಮಾಣಿಕ್ಯಂ, ವಸಂತ, ಪೂರ್ಣಿಮಾ, ಮಾಲೇಗೌಡ, ಮಹದೇವ್, ರಮೇಶ್, ಪುನೀತ್ ಕುಮಾರ್, ಗುರುಪ್ರಸಾದ್, ನಾಗಮಣಿ, ರೂಪ ಕುಮಾರಸ್ವಾಮಿ, ಸಿದ್ಧಲಿಂಗು, ಲಲಿತ, ಮಂಜುನಾಥ್ ಶಾಲಾ ಮುಖ್ಯ ಶಿಕ್ಷಕಿ ಸುಮಂಗಲ ಸಹಶಿಕ್ಷಕರಾದ ಕುಮಾರಸ್ವಾಮಿ, ತಾರಾ, ಕಲ್ಪನಾಬಾಯಿ ಉಪಸ್ಥಿತರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

13.2.2024 ಮಂಗಳವಾರ, ಮಳೆ ನಕ್ಷತ್ರ: ಧನಿಷ್ಠ 6.2.2024 ರಿಂದ 19.02.2024 ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಮಾಘ ಮಾಸ, ಶುಕ್ಲ ಪಕ್ಷ, ತಿಥಿ: ಚೌತಿ, ನಕ್ಷತ್ರ: ಉಭಾ, ರಾಹುಕಾಲ: ಮಧ್ಯಾಹ್ನ 3 ರಿಂದ 4.30ರವರೆಗೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಶ್ರದ್ಧೆಯ ಶಿಲ್ಪ–ಲೇಖನ ಮತ್ತು ಪ್ರಸ್ತುತಿ–ಟಿ.ಎಸ್.ಗೋಪಾಲ್, 6.40 ಪದಸಂಸ್ಕೃತಿ, ಪ್ರಸ್ತುತಿ–ಡಾ.ಜ್ಯೋತಿ ಶಂಕರ್, 6.50 ರೈತರಿಗೆ ಸಲಹೆ, 7.15 ಕಾದಂಬರಿ ವಿಹಾರ–ನಾ ಕಸ್ತೂರಿ ಅವರ ರಂಗನಾಯಕಿ ಕಾದಂಬರಿಯ ಬಾನುಲಿ ಓದು, ಪ್ರಸ್ತುತಿ– ಉಮೇಶ್ ಎಸ್.ಎಸ್., 8.30 ಪರಾಗ–ಬೇಸಾಯದ ಬದುಕು ಸರಾಗ, ಬಾನುಲಿ ಸರಣಿ, ಪ್ರಸ್ತುತಿ–ಎನ್.ಕೇಶವಮೂರ್ತಿ, 8.45 ಕರೆಗೊಂದು ಗೀತೆ, 10.00 ಎನ್.ಭಾರತಿ–ವೀಣಾವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.30 ದೇವರನಾಮ–ಪಿ.ರಮಾ, 12.45 'ಸುಸ್ಥಿರ ದಾಂಪತ್ಯ' ಕುರಿತು ಡಾ.ಎಂ.ಪುಷ್ಪಾವತಿ ಅವರೊಂದಿಗೆ ಸಂದರ್ಶನ, 1.20 ಭಾವಗೀತೆಗಳು–ರಮಾ ರಾಮಕೃಷ್ಣ, 3.00 ಜಿ.ಅಭಿಲಾಶ್–ಹಾಡುಗಾರಿಕೆ, 4.00 ಕಥಾ ಕಾಲಕ್ಷೇಪ–ಭಕ್ತ ಪುರಂದರದಾಸರು, ಪ್ರಸ್ತುತಿ–ವಿದ್ವಾನ್ ಭದ್ರಗಿರಿ ಅಚ್ಯುತದಾಸರು, 6.50 ಕೃಷಿರಂಗ–ರೇಷ್ಮೆ ಸಿರಿ ಬಾನುಲಿ ಸರಣಿ, ರೇಷ್ಮೆ ಕೃಷಿಯಲ್ಲಿ ಮಿಶ್ರ ತಳಿಗಿಂತ ದ್ವಿತಳಿ ಪ್ರಾಮುಖ್ಯತೆ ಕುರಿತು ವಿಜ್ಞಾನಿ ಡಾ.ಕೆ.ಬಿ.ಚಂದ್ರಶೇಖರ, 9.30 ಹೆಚ್.ಎಸ್.ರಮೇಶ್–ವೀಣಾವಾದನ, 10.00 ಗಮಕ ವ್ಯಾಖ್ಯಾನ, ವಾಚನ–ಲಲಿತಾ ಶೇಖರ್, ವ್ಯಾಖ್ಯಾನ–ಸುಮಾ ವಸಂತ್, 10.30 ಸವಿನೆನಪು

■ **ಅರ್ಕಧಾಮ :** ಶ್ರೀ ಅರ್ಕ ಮಹಾ ಗಣಪತಿ ಪ್ರತಿಷ್ಠಾಪನೆ ಹಾಗೂ ಬ್ರಹ್ಮ ಕಲಶೋತ್ಸವ, ಶ್ರೀ ಅರ್ಕ ಮಹಾಗಣಪತಿಯ ವಿಗ್ರಹ ಪ್ರತಿಷ್ಠೆ, ಪ್ರತಿಷ್ಠಾಂಗ ಹೋಮಗಳು, ನೇತ್ರೋನ್ಮೀಲನ, ಮ. 12ಕ್ಕೆ ಪೂರ್ಣಾಹುತಿ, ಪ್ರಸಾದ ವಿನಿಯೋಗ, ಸಂಜೆ 6 ರಿಂದ ಬ್ರಹ್ಮಕಲಶ ಸ್ಥಾಪನೆ, ಕಲಶ ಪ್ರತಿಷ್ಠಾಹೋಮ, ವೇದಮಂತ್ರ ಪಾರಾಯಣ, ಸುದರ್ಶನ ಹೋಮ, ಚಕ್ರಾರಾಧನೆ, ಸಂಜೆ 8ಕ್ಕೆ ಮಹಾಮಂಗಳಾರತಿ, ಪ್ರಸಾದ ವಿನಿಯೋಗ, ಸ್ಥಳ: ಕಣಿಯನಹುಂಡಿ ಗೇಟ್, ಗದ್ದಿಗೆ ಮುಖ್ಯ ರಸ್ತೆ.

■ **ರಾಮಸನ್ಸ್ ಬೊಂಬೆ ಮನೆ :** ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ ಸಂಜೆ 7ರವರೆಗೆ.

■ **ಸ್ವರ್ಣ ನೃಸಿಂಹ ದತ್ತ ಸಾಯಿ ಪೀಠಿಕ ಸೇವಾ ಟ್ರಸ್ಟ್ :** ಶ್ರೀ ಶ್ರೀ ವೆಂಕಟಾಚಲ ಅವಧೂತರ ಸಾನ್ನಿಧ್ಯದಲ್ಲಿ ಶ್ರೀ ಅರ್ಜುನ ಅವಧೂತರ ಆಧ್ಯಾತ್ಮಿಕ ಜನ್ಮದಿನದ ಅಂಗವಾಗಿ ಜ್ಞಾನ ಪ್ರಕಾಶೋತ್ಸವ ಕಾರ್ಯಕ್ರಮ, ಸಂಗೀತ ವಿದ್ಯಾನಿಧಿ ಡಾ. ವಿದ್ಯಾಭೂಷಣ ಮತ್ತು ತಂಡದವರಿಂದ ಭಕ್ತಿ ಸಂಗೀತ ಕಾರ್ಯಕ್ರಮ, ಆಶೀರ್ವಚನ : ಶ್ರೀ ಅರ್ಜುನ ಅವಧೂತರಿಂದ ಸ್ಥಳ: ಶ್ರೀಮತಿ ರಮಾಬಾಯಿ ಗೋವಿಂದ ರಾವ್ ಸಭಾಂಗಣ, ಗಾನಭಾರತಿ ಆವರಣ, ಆದಿಚುಂಚನಗಿರಿ ರಸ್ತೆ, ಸಂಜೆ 6ಕ್ಕೆ.

■ **ಸಂಚಲನ ಮೈಸೂರು, ಪ್ರವಾಸೋದ್ಯಮ ಇಲಾಖೆ (ಬೆಂಗಳೂರು), ಡ್ರೀಮ್ ಬಜ್ಜ್ ಫೌಂಡೇಷನ್, ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ (ಬೆಂಗಳೂರು) :** ಸಂಚಲನ ಮಕ್ಕಳ ನಾಟಕೋತ್ಸವ, ಜಾನಪದ ಉತ್ಸವ, ಸಂಚಲನ ಮಕ್ಕಳ ರಂಗ ತಂಡದಿಂದ ಲಂಬ ಕರ್ಣನ ಉಷ್ಣೀಷ ನಾಟಕ ಪ್ರದರ್ಶನ, ರಚನೆ: ಲೀಲಾ ಗರಡಿ, ಸಹ ನಿರ್ದೇಶನ : ವಿ. ಸಂಜಯ್, ನಿರ್ದೇಶನ : ಅಶೋಕ್ ನೀನಾಸಂ, ಅಭ್ಯಾಸಿ ಟ್ರಸ್ಟ್ ಚಾಮರಾಜನಗರ ಮಕ್ಕಳಿಂದ ನನ್ನ ಗೋಪಾಲ ನಾಟಕ ಪ್ರದರ್ಶನ, ರಚನೆ : ಕುವೆಂಪು, ನಿರ್ದೇಶನ : ಕಿರಣ್ ಗಿರ್ಗಿ, ಸ್ಥಳ: ಕಿರುರಂಗಮಂದಿರ, ಕಲಾಮಂದಿರ ಆವರಣ, ಸಂಜೆ 6.30.

ಇಟಲಿ ಬೆನ್ನಲ್ಲೇ ಶ್ರೀಲಂಕಾ, ಮಾರಿಷಸ್‌ನಲ್ಲೂ ಯುಪಿಐ ಪಾವತಿ ಸೇವೆ ಆರಂಭ

'ವಿಶೇಷ ದಿನ' ಎಂದ ಪ್ರಧಾನಿ ಮೋದಿ





ಕೊಲಂಬೋ: ಭಾರತದ ಯುಪಿಐ ಆಧಾರಿತ ಡಿಜಿಟಲ್ ಪಾವತಿ ವ್ಯವಸ್ಥೆ (Unified Payments Interface) ಇಟಲಿ ಬಳಿಕ ಇದೀಗ ಶ್ರೀಲಂಕಾ ಮತ್ತು ಮಾರಿಷಸ್‌ನಲ್ಲೂ ತನ್ನ ಸೇವೆ ಆರಂಭಿಸಿದೆ.

ಭಾರತದ ಯುಪಿಐ ಆಧಾರಿತ ಡಿಜಿಟಲ್ ಪಾವತಿ ವ್ಯವಸ್ಥೆಗೆ ನೆರೆಯ ಶ್ರೀಲಂಕಾ ಮತ್ತು ಮಾರಿಷಸ್‌ನಲ್ಲಿ ಇಂದು ಚಾಲನೆ ನೀಡಲಾಗಿದ್ದು, ಯುಪಿಐ ಮಾತ್ರವಲ್ಲದೆ ಭಾರತದ ರುಪೇ ಕಾರ್ಡ್ ಅನ್ನು ಕೂಡ ಮಾರಿಷಸ್‌ನಲ್ಲಿ ಬಳಸಬಹುದಾಗಿದೆ. ಮಾರಿಷಸ್ ಪ್ರಧಾನಿ ಪ್ರವಿಂದ್ ಜುಗನೌತ್ ಮತ್ತು ಶ್ರೀಲಂಕಾ ಅಧ್ಯಕ್ಷ ರನಿಲ್ ವಿಕ್ರಮ ಸಿಂಘೆ ಜತೆಗೆ ಕಾರ್ಯಕ್ರಮಕ್ಕೆ ವರ್ಚುವಲ್ ಮೂಲಕ ಭಾಗಿಯಾದ ಪ್ರಧಾನಿ ನರೇಂದ್ರ ಮೋದಿ ಆಧುನಿಕ ಡಿಜಿಟಲ್ ತಂತ್ರಜ್ಞಾನದೊಂದಿಗೆ ಐತಿಹಾಸಿಕ ಸಂಬಂಧಗಳನ್ನು ಜೋಡಿಸಲಾಗಿದೆ ಎಂದು ಬಣ್ಣಿಸಿದ್ದಾರೆ.

ಮೂರು ದೇಶಗಳಿಗೆ ಇಂದು ಪ್ರಮುಖ ದಿನವಾಗಿದ್ದು, ಶ್ರೀಲಂಕಾ ಮತ್ತು ಮಾರಿಷಸ್ ಯುಪಿಐ ಬಳಕೆಯಿಂದ ಸಾಕಷ್ಟು ಉಪಯೋಗಗಳನ್ನು ಪಡೆಯಲಿದೆ ಎಂದು ಭಾವಿಸುತ್ತೇನೆ. ಯುಪಿಐ ಭಾರತದೊಂದಿಗೆ ಪಾಲುದಾರರನ್ನು ಒಗ್ಗೂಡಿಸುವ ಹೊಸ ಜವಾಬ್ದಾರಿಯನ್ನು ಕಾರ್ಯಗತಗೊಳಿಸುತ್ತಿದೆ. ಡಿಜಿಟಲ್ ಪಾವತಿಯು ಭಾರತದಲ್ಲಿ ಕ್ರಾಂತಿಕಾರಿ ಬದಲಾವಣೆಯನ್ನು ತಂದಿದೆ. ನೈಸರ್ಗಿಕ ವಿಪತ್ತು, ಆರೋಗ್ಯ ಸಂಬಂಧಿತ, ಆರ್ಥಿಕ ಅಥವಾ ಅಂತರರಾಷ್ಟ್ರೀಯ ವೇದಿಕೆಯಲ್ಲಿ ಮೊದಲು ಪ್ರತಿಸ್ಪಂದಿಸುವ ರಾಷ್ಟ್ರ ಎಂದರೆ ಭಾರತ. ಅದು ಹೀಗೆಯೇ ಮುಂದುವರಿಯುತ್ತದೆ. ಇದರಿಂದಾಗಿ ಭಾರತೀಯರು ಮಾರಿಷಸ್ ಮತ್ತು ಶ್ರೀಲಂಕಾಕ್ಕೆ ಪ್ರಯಾಣಿಸಿದರೆ ಅಥವಾ ಅವೆರಡೂ ದೇಶದವರು ಭಾರತಕ್ಕೆ ಬಂದಾಗ ಹಣ ಪಾವತಿ ಇನ್ನಷ್ಟು ಸುಲಭವಾಗಲಿದೆ ಎಂದು ಪ್ರಧಾನಿ ಮೋದಿ ಹೇಳಿದರು. ಅಂತೆಯೇ ನೆರೆಹೊರೆಯ ಮೊದಲ ನೀತಿಯ ಮೇಲೆ ಭಾರತದ ಗಮನವನ್ನು ಇದು ತೋರಿಸುತ್ತದೆ. ಇದು ನೈಸರ್ಗಿಕ ವಿಪತ್ತು, ಆರೋಗ್ಯ ಸಂಬಂಧಿತ, ಆರ್ಥಿಕ ಅಥವಾ ಅಂತಾರಾಷ್ಟ್ರೀಯ ವೇದಿಕೆಯಲ್ಲಿ ಬೆಂಬಲವಾಗಿರಲಿ, ಭಾರತವು ಮೊದಲ ಪ್ರತಿಸ್ಪಂದಕವಾಗಿದೆ ಮತ್ತು ಅದು ಮುಂದುವರಿಯುತ್ತದೆ ಎಂದರು.

ನ್ಯಾಷನಲ್ ಪೇಮೆಂಟ್ಸ್ ಕಾರ್ಪೊರೇಷನ್ ಆಫ್ ಇಂಡಿಯಾ ಅಭಿವೃದ್ಧಿಪಡಿಸಿದ UPI ಮೊಬೈಲ್ ಫೋನ್‌ಗಳ ಮೂಲಕ ಅಂತರ-ಬ್ಯಾಂಕ್ ವಹಿವಾಟುಗಳನ್ನು ಸುಲಭಗೊಳಿಸಲು ತ್ವರಿತ ನೈಜ-ಸಮಯದ ಪಾವತಿ ವ್ಯವಸ್ಥೆಯಾಗಿದೆ. RuPay ಭಾರತದಿಂದ ಜಾಗತಿಕ ಕಾರ್ಡ್ ಪಾವತಿ ಜಾಲವಾಗಿದ್ದು, ಅಂಗಡಿಗಳು, ATM ಗಳು ಮತ್ತು ಆನ್‌ಲೈನ್‌ನಲ್ಲಿ ವ್ಯಾಪಕ ಸ್ವೀಕಾರವನ್ನು ಹೊಂದಿದೆ.

ತಮಿಳುನಾಡು ವಿಧಾನಸಭೆಯಲ್ಲಿ ಹೈಡ್ರಾಮಾ

ರಾಷ್ಟ್ರಗೀತೆಗೆ ಡಿಎಂಕೆ ಸರ್ಕಾರ ವಿರೋಧ; ಭಾಷಣ ತಿರಸ್ಕರಿಸಿ ಹೊರ ನಡೆದ ರಾಜ್ಯಪಾಲ ರವಿ



ಚೆನ್ನೈ: ತಮಿಳುನಾಡು ವಿಧಾನಸಭೆಯಲ್ಲಿ ಸೋಮವಾರ ಹೈಡ್ರಾಮಾವೇ ನಡೆದಿದೆ. ರಾಷ್ಟ್ರಗೀತೆಗೆ ಡಿಎಂಕೆ ಸರ್ಕಾರ ವಿರೋಧ ವ್ಯಕ್ತಪಡಿಸಿದೆ ಎಂದು ಆರೋಪಿಸಿ ರಾಜ್ಯಪಾಲ ರವಿ ಅವರು ಕಾರ್ಯಕ್ರಮ ಮೊಟಕುಗೊಳಿಸಿ ಹೊರನಡೆದಿದ್ದಾರೆ.

ತಮಿಳುನಾಡು ರಾಜ್ಯಪಾಲ ಆರ್‌ಎನ್ ರವಿ ಅವರು ವಿಧಾನಸಭೆಯ ಅಧಿವೇಶನದ ಆರಂಭಿಕ ಸಾಂಪ್ರದಾಯಿಕ ಭಾಷಣವನ್ನು ಓದಲು ನಿರಾಕರಿಸಿದ್ದು, ಸದನ ಆರಂಭವಾಗುವ ಮುನ್ನ ಹಾಗೂ ಕೊನೆಯಲ್ಲಿ ರಾಷ್ಟ್ರಗೀತೆ ಹಾಡಬೇಕೆಂದು ಸಲಹೆ ನೀಡಿದ್ದೆ ಆದರೆ ಅವರು ನಿರ್ಲಕ್ಷಿಸಿದ್ದಾರೆ ಎಂದು ಹೇಳಿ ಸದನದಿಂದ ಹೊರನಡೆದಿದ್ದಾರೆ. ರಾಷ್ಟ್ರಗೀತೆಗೆ ಗೌರವ ಕೊಡದ ಕಾರಣ ನನಗೆ ಭಾಷಣ ಮಾಡಲು ಸಾಧ್ಯವಿಲ್ಲ ಎಂದು ಹೇಳಿ ತಮಿಳುನಾಡು ವಿಧಾನಸಭೆಯಿಂದ ರಾಜ್ಯಪಾಲ ಆರ್.ಎನ್.ರವಿ ಹೊರನಡೆದಿದ್ದು, ಸದನ ಆರಂಭ ಹಾಗೂ ಕೊನೆಯಲ್ಲಿ ರಾಷ್ಟ್ರಗೀತೆ ಹಾಡುವಂತೆ ಎನ್.ರವಿ ಸಲಹೆ ನೀಡಿದ್ದರು. ಆದರೆ ಸ್ಟಾಲಿನ್ ಸರ್ಕಾರವು ಅದನ್ನು ನಿರಾಕರಿಸಿದೆ. ರಾಷ್ಟ್ರಗೀತೆಗೆ ಅವಮಾನ ಮಾಡಿದ್ದಾರೆ ಎಂದು ಆರೋಪಿಸಿ ಅವರು ಸದನದಿಂದ ಹೊರ ನಡೆದಿದ್ದಾರೆ.

ಈ ಬೆಳವಣಿಗೆ ಬೆನ್ನಲ್ಲೇ ವಿಧಾನಸಭೆಯಲ್ಲಿ ಸರ್ಕಾರ ನೀಡಿದ ಭಾಷಣದ ಪ್ರತಿಯನ್ನು ಓದಲು ನಿರಾಕರಿಸಿದ ಆರ್.ಎನ್. ರವಿ ವಿಧಾನಸಭೆಯಿಂದ ಹೊರ ಹೋಗಿದ್ದಾರೆ. ಎಐಎಡಿಎಂಕೆ ನಾಯಕ ಎಡಪ್ಪಾಡಿ ಕೆ ಪಳನಿಸ್ವಾಮಿ ಮಾತನಾಡಿ, ತಮಿಳುನಾಡು ವಿಧಾನಸಭೆಯ ಅಧಿವೇಶನದ ಆರಂಭ ಹಾಗೂ ಕೊನೆಯಲ್ಲಿ ರಾಷ್ಟ್ರಗೀತೆಯನ್ನು ಹಾಡುವಂತೆ ರಾಜ್ಯಪಾಲರು ವಿನಂತಿಸಿದ್ದರು. ಅವರ ಸಲಹೆಯನ್ನು ನಿರ್ಲಕ್ಷಿಸಿದ ಕಾರಣ ಅವರು ಸಾಂಪ್ರದಾಯಿಕ ಭಾಷಣ ಮಾಡಲು ನಿರಾಕರಿಸಿದ್ದು, ಇದು ರಾಜ್ಯಪಾಲರು ಹಾಗೂ ಸರ್ಕಾರದ ನಡುವಿನ ಸಮಸ್ಯೆ ಯಾಗಿದೆ ಎಂದಿದ್ದಾರೆ. ತಮಿಳುನಾಡು ಸರ್ಕಾರ ತಮಗಾಗಿ ಸಿದ್ಧಪಡಿಸಿರುವ ಭಾಷಣದಲ್ಲಿ ಮಾಡಿರುವ ಕೆಲವು ಟೀಕೆಗಳನ್ನು ಒಪ್ಪುವುದಿಲ್ಲ ಎಂದು ಹೇಳುತ್ತಾ ಭಾಷಣ ಮುಗಿಸಿದರು. ಕೆಲವೇ ನಿಮಿಷಗಳಲ್ಲಿ ರಾಜ್ಯ ಪಾಲರು ಭಾಷಣ ಮುಗಿಸಿ ಹೊರ ನಡೆದಿದ್ದಾರೆ.

ಶಾಸಕ ಶಿವಲಿಂಗೇಗೌಡ ಸಚಿವರಾಗೇ ಆಗುತ್ತಾರೆ: ಸಚಿವ ಕೆ.ಎನ್.ರಾಜಣ್ಣ ವಿಶ್ವಾಸ



ಶಿವಲಿಂಗೇಗೌಡ



ಕೆ.ಎನ್.ರಾಜಣ್ಣ

ಹಾಸನ: ಸಚಿವ ಸ್ಥಾನ ವಂಚಿತರಲ್ಲಿ ಶಾಸಕ ಕೆ.ಎಂ.ಶಿವಲಿಂಗೇಗೌಡರು ಒಬ್ಬರು. ಮುಂದೆ ನೂರಕ್ಕೆ ನೂರರಷ್ಟು ಅವರು ಸಚಿವರಾಗುತ್ತಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎನ್.ರಾಜಣ್ಣ ವಿಶ್ವಾಸ ವ್ಯಕ್ತಪಡಿಸಿದರು. ನಗರದ ಜಿಲ್ಲಾಧಿಕಾರಿ ನಿವಾಸದ ಹಿಂಭಾಗದ ರಸ್ತೆಯಲ್ಲಿ ಗೃಹಮಂಡಳಿಗೆ ನೂತನ ಅಧ್ಯಕ್ಷರಾಗಿ ಆಯ್ಕೆಗೊಂಡ ಕೆ.ಎಂ. ಶಿವಲಿಂಗೇಗೌಡರಿಗೆ ಏರ್ಪಡಿಸಿದ್ದ ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಶಿವಲಿಂಗೇಗೌಡ ಸಚಿವ ಸ್ಥಾನ ವಂಚಿತ ಶಾಸಕರಲ್ಲಿ ಒಬ್ಬರು. ಅವರ ಹೆಸರು ಕೂಡ ಪಟ್ಟಿಯಲ್ಲಿ ಇತ್ತು. ಕೊನೆಗಳಿಗೆಯಲ್ಲಿ ಕೈತಪ್ಪಿತು. ಆದರೆ ಮುಂದೆ ನೂರಕ್ಕೆ ನೂರರಷ್ಟು ಅವರು ಸಚಿವರಾಗ್ತಾರೆ. ನಂತರ ಅವರೇ ಜಿಲ್ಲಾ ಉಸ್ತುವಾರಿ ಸಚಿವರಾಗಿ ಕೂಡ ಬರ್ತಾರೆ ಎಂದು ಹೇಳಿದರು. ಶಾಸಕ ಶಿವಲಿಂಗೇಗೌಡರು ಮಾತನಾಡಿ, ರಾಜ್ಯದಲ್ಲಿ ಬರ ಬಂದಿದೆ. ಇದುವರೆಗೆ ಹತ್ತು ರೂಪಾಯಿ ಬರ ಪರಿಹಾರ ಕೊಟ್ಟಿಲ್ಲ. ರಾಜ್ಯ ಬಿಜೆಪಿ ನಾಯಕರು ರೈತರಿಗೆ ಪರಿಹಾರ ಕೊಡದೆ ಹೋದರೆ ಹೋರಾಟ ಮಾಡ್ತಿವಿ ಅಂತಾರೆ. ಅದನ್ನು ಬಿಟ್ಟು ಕೇಂದ್ರದ ಬಳಿ ಪರಿಹಾರ ಕೇಳಿ ಎಂದು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.

ಬಿಜೆಪಿಗರು ಉತ್ತರಿಸಲಿ: ಕೇಂದ್ರ ಸರ್ಕಾರದಿಂದ ನಮಗೆ ಅನ್ಯಾಯ ಆಗಿರುವ ಕುರಿತು ಸಿಎಂ ಸಿದ್ದರಾಮಯ್ಯನವರು ಅಂಕಿ-ಅಂಶಗಳ ಪ್ರಕಾರ ಹೇಳಿದ್ದಾರೆ. ಅದೆಲ್ಲಾ ಸುಳ್ಳು ಎಂದು ಸಾಬೀತು ಮಾಡಿದರೆ ರಾಜಕೀಯ ನಿವೃತ್ತಿ ಪಡೆಯುತ್ತೇನೆ ಎಂದೂ ಅವರು ಸವಾಲು ಹಾಕಿದ್ದಾರೆ. ಈ ಬಗ್ಗೆ ಬಿಜೆಪಿಗರು ಉತ್ತರ ನೀಡಲಿ ಎಂದು ಸಹಕಾರ ಸಚಿವ ಕೆ.ಎನ್.ರಾಜಣ್ಣ ಹೇಳಿದರು.

ಮಾನಸಿಕ ಒತ್ತಡ, ನಿದ್ರೆ ಸಮಸ್ಯೆ, ತಲೆನೋವು, ಖಿನ್ನತೆಗೆ ಚಿಕಿತ್ಸೆ

ಮೈಸೂರು: ಮೈಸೂರಿನ ಲಲಿತಾದ್ರಿಪುರ ರಸ್ತೆಯಲ್ಲಿರುವ ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆಯಲ್ಲಿ ಫೆ. 14 ರಿಂದ 21 ರವರೆಗೆ ಮಾನಸಿಕ ಒತ್ತಡ, ಚಟುವಟಿಕೆಗಳಲ್ಲಿ ಆಸಕ್ತಿ ಇಲ್ಲದಿರುವುದು, ನಿದ್ರೆ ಸಮಸ್ಯೆ, ದೇಹದ ನೋವು, ತಲೆನೋವು ಮುಂತಾದ ಖಿನ್ನತೆಯ ತೊಂದರೆಗಳಿಗೆ ತಜ್ಞ ವೈದ್ಯರಿಂದ ತಪಾಸಣೆ, ಸಲಹೆ ಮತ್ತು ಚಿಕಿತ್ಸೆ ನೀಡಲಾಗುವುದು. ಶಿಬಿರವು ಬೆಳಗ್ಗೆ 9 ರಿಂದ ಸಂಜೆ 4 ರವರೆಗೆ ನಡೆಯಲಿದೆ. ಹೆಚ್ಚಿನ ಮಾಹಿತಿಗೆ ಮೊ. 8722821894, ದೂ. 0821-2548231 ಸಂಪರ್ಕಿಸಬಹುದು.



ಎರಡು ತಿಂಗಳ ಬಳಿಕ ಚಿಕ್ಕಕಾನ್ಯದಲ್ಲಿ ಮತ್ತೆ ಹುಲಿ ಪ್ರತ್ಯಕ್ಷ

■ ತೋಟದಲ್ಲಿ ಹುಲಿ ಹೆಜ್ಜೆ ಪತ್ತೆ ■ ಸ್ಥಳಕ್ಕೆ ಅರಣ್ಯ ಸಿಬ್ಬಂದಿ ದೌಡು ■ ಹುಲಿ ಜಾಡು ದೃಢಪಡಿಸಿದ ಹೆಜ್ಜೆ ಗುರುತು



ಮೈಸೂರು, ಫೆ.12(ಎಂಟಿವೈ)- ಮೈಸೂರು ತಾಲೂಕಿನ ಚಿಕ್ಕಕಾನ್ಯದಲ್ಲಿ ಎರಡು ತಿಂಗಳ ಬಳಿಕ ಹುಲಿ ಸಂಚಾರ ಕಂಡು ಬಂದಿದ್ದು, ಸ್ಥಳೀಯರಲ್ಲಿ ಮತ್ತೆ ಆತಂಕ ಮನೆ ಮಾಡಿದೆ. ತೋಟದಲ್ಲಿ ಹುಲಿ ಹೆಜ್ಜೆ ಗುರುತುಗಳು ಪತ್ತೆಯಾಗಿದ್ದು, ಸ್ಥಳಕ್ಕೆ ಅರಣ್ಯ ಸಿಬ್ಬಂದಿ ತೆರಳಿ ಕೂಂಬಿಂಗ್ ಕಾರ್ಯಾಚರಣೆ ಮುಂದುವರೆಸಿದ್ದಾರೆ.

ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಿಂದ ಹೊರಬಂದು ಮೈಸೂರು ವಿಭಾಗ ವ್ಯಾಪ್ತಿಯ ಸರಗೂರು ಸಮೀಪದ ಚಿಕ್ಕನಹಳ್ಳಿಯಲ್ಲಿ ಹೆಣ್ಣು ಹುಲಿಯೊಂದು ನಾಲ್ಕು ಮರಿಗಳಿಗೆ ಜನ್ಮ ನೀಡಿ ಆರೈಕೆ ಮಾಡಿದ್ದು, ಕಳೆದ ನಾಲ್ಕು ತಿಂಗಳ ಹಿಂದೆ ತಾಯಿಯಿಂದ ಬೇರ್ಪಟ್ಟಿದ್ದ ಒಂದೂವರೆ ವರ್ಷದ ಮರಿಗಳು ಮೈಸೂರು ಸುತ್ತಮುತ್ತಲಿನ ಗ್ರಾಮಗಳ ಹೊರ ವಲಯದಲ್ಲಿ ಕಾಣಿಸಿಕೊಂಡು ಆತಂಕವನ್ನುಂಟು ಮಾಡಿದ್ದವು. ಟಿ-7 ಹೆಸರಿನ ಹೆಣ್ಣು ಹುಲಿ ಮರಿ ಮೈಸೂರು ತಾಲೂಕಿನ ಚಿಕ್ಕಕಾನ್ಯ, ದೊಡ್ಡಕಾನ್ಯ ಸುತ್ತಮುತ್ತ ಬೀಡು ಬಿಟ್ಟಿತ್ತು. ಟಿ-6 ಹೆಸರಿನ ಗಂಡು ಹುಲಿ ಮರಿ ಮಂಡಕಳ್ಳಿ ವಿಮಾನ ನಿಲ್ದಾಣದ ಬಳಿ ಮೈಸೂರು-ನಂಜನಗೂಡು ಮುಖ್ಯ ರಸ್ತೆಯಲ್ಲಿ ಮರಸೆ ಕಡೆಯಿಂದ ವಿಮಾನ ನಿಲ್ದಾಣದ ಕಡೆ ರಸ್ತೆ ದಾಟುವಾಗ ಕಾರಿಗೆ ಸಿಲುಕಿ ಮೃತಪಟ್ಟಿತ್ತು.

ಕಡಕೊಳ ಬಳಿ ಡಿ.28ರಂದು ಟಿ-9 ಹೆಸರಿನ ಹುಲಿ ಕಂಡು ಬಂದಿತ್ತು. ನಂತರ ಇಪ್ಪತ್ತು ದಿನದ ನಂತರ ಟಿ-9 ಹುಲಿ ಶ್ರೀರಂಗಪಟ್ಟಣ ತಾಲೂಕಿನ ಬಿದರಳ್ಳಿಹುಂಡಿ-ಚನ್ನಹಳ್ಳಿ ಬಳಿ ಕಾಣಿಸಿಕೊಂಡಿತ್ತು. ಈ ನಡುವೆ ಚಿಕ್ಕಕಾನ್ಯ ಬಳಿ ಕಾಣಿಸಿಕೊಂಡಿದ್ದ ಹುಲಿ ನಿಗೂಢವಾಗಿತ್ತು. ಅದು ಅರಣ್ಯ ಪ್ರದೇಶಕ್ಕೆ ವಾಪಸ್ಸಾಗಿರಬಹುದು ಎಂದು ಸಂಶಯ ವ್ಯಕ್ತವಾಗಿತ್ತು. ಇದರಿಂದ ಕಾರ್ಯಾಚರಣೆಯನ್ನು ನಿಲ್ಲಿಸಿದ್ದರೂ, ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯ ನಡೆಸಲಾಗುತ್ತಿತ್ತು.

> **“** ಚಿಕ್ಕಕಾನ್ಯ ಬಳಿ ತೋಟದಲ್ಲಿ ಹುಲಿ ಸಂಚರಿಸಿರುವ ದೃಶ್ಯವನ್ನು ಯಾರೂ ನೋಡಿಲ್ಲ. ಹುಲಿ ನೋಡಿದ ಬಗ್ಗೆ ಯಾರಿಂದಲೂ ಮಾಹಿತಿ ಲಭ್ಯವಾಗಿಲ್ಲ. ಕೇವಲ ಹೆಜ್ಜೆ ಗುರುತುಗಳಷ್ಟೇ ಸಿಕ್ಕಿದೆ. ಪರಿಶೀಲಿಸಲು ಸಿಬ್ಬಂದಿಗಳನ್ನು ಕಳುಹಿಸಲಾಗಿದೆ. ದೊರೆತಿರುವ ಹೆಜ್ಜೆ ಯಾವ ಹುಲಿಯದೆಂದು ಪರಿಶೀಲಿಸುತ್ತೇವೆ.
>
> -ಡಾ.ಬಸವರಾಜು, ಡಿಸಿಎಫ್

ಆದರೆ ಎರಡು ತಿಂಗಳ ಬಳಿಕ ಮತ್ತೆ ಚಿಕ್ಕಕಾನ್ಯ ಬಳಿ ಹುಲಿ ಸದ್ದು ಮಾಡುತ್ತಿದೆ. ಗ್ರಾಮದ ಜಮೀನು ಹಾಗೂ ತೋಟದಲ್ಲಿ ಹುಲಿಯ ಹೆಜ್ಜೆ ಗುರುತು ಪತ್ತೆಯಾಗಿವೆ. ಇದನ್ನು ಗಮನಿಸಿದ ತೋಟದ ಮಾಲೀಕರು ಅರಣ್ಯ ಇಲಾಖೆಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಬಂದ ಸಿಬ್ಬಂದಿ ಹೆಜ್ಜೆ ಗುರುತು ಹುಲಿಯದ್ದೇ ಎಂಬುದನ್ನು ಖಚಿತಪಡಿಸಿದ್ದಾರೆ. ಅಲ್ಲದೇ ಹೆಜ್ಜೆ ಗುರುತು ಈ ಹಿಂದೆ ಕಾಣಿಸಿಕೊಂಡ ಹುಲಿಯದ್ದೇ ಅಥವಾ ಬೇರೆಯದ್ದೇ ಎಂದು ಪರಿಶೀಲಿಸಲು ಟೈಗರ್ ಸೆಲ್ ಪರಿಶೀಲನೆಗೆ ಕಳುಹಿಸಿದ್ದಾರೆ.

ತಾಯಿ ಹುಲಿಯ ಸಂಶಯ: ಸ್ಥಳೀಯರು ನೀಡಿರುವ ಮಾಹಿತಿಯಂತೆ ತೋಟದಲ್ಲಿ ಕಂಡು ಬಂದಿರುವ ಹೆಜ್ಜೆ ಗುರುತು ದೊಡ್ಡದಾಗಿದ್ದು, ಅದು ಭಾರಿ ಹುಲಿ ಅಥವಾ ತಾಯಿ ಹುಲಿಯದ್ದೇ ಇರಬಹುದೆಂದು ಶಂಕೆ ವ್ಯಕ್ತಪಡಿಸಿದ್ದಾರೆ.

ನಂಜನಗೂಡು, ತಲಕಾಡು ಬಳಿ ಬೋನಿಗೆ ಬಿದ್ದ ಚಿರತೆಗಳು



ಮೈಸೂರು, ಫೆ.12(ಎಂಟಿವೈ)- ಆಹಾರ ಅರಸಿ ಬಂದ ಎರಡು ಗಂಡು ಚಿರತೆಗಳು ಪ್ರತ್ಯೇಕ ಸ್ಥಳದಲ್ಲಿ ಸೆರೆ ಸಿಕ್ಕಿವೆ. ಎರಡೂ ಚಿರತೆಗಳಿಗೂ ಮೈಕ್ರೋಚಿಪ್ ಅಳವಡಿಸಿ ಅರಣ್ಯ ಪ್ರದೇಶದಲ್ಲಿ ಬಿಡುಗಡೆ ಮಾಡಲಾಗಿದೆ. ಮೈಸೂರು ಪ್ರಾದೇಶಿಕ ಅರಣ್ಯ ವಲಯ ವ್ಯಾಪ್ತಿಗೆ ಒಳಪಡುವ ತಿ.ನರಸೀಪುರ ತಾಲೂಕಿನ ತಲಕಾಡು ಬೀಟ್ ಸೆಕ್ಷನ್‌ಗೆ ಸೇರುವ ಕುರುಬೂರುಹುಂಡಿ ಗ್ರಾಮದ ಜಮೀನೊಂದರಲ್ಲಿ ಇಡಲಾಗಿದ್ದ ಬೋನಿಗೆ 4 ವರ್ಷದ ಗಂಡು ಚಿರತೆ ಹಾಗೂ ನಂಜನಗೂಡು ತಾಲೂಕಿನ ಚಿಕ್ಕಕಾನ್ಯ ಛತ್ರ ಹೋಬಳಿಯ ರಾಮಾಪುರ ಗ್ರಾಮದ ಜಮೀನಿನಲ್ಲಿಡಲಾಗಿದ್ದ ಬೋನಿಗೆ 5 ವರ್ಷದ ಗಂಡು ಚಿರತೆ ಸೆರೆಸಿಕ್ಕಿದೆ. ಸೆರೆಯಾದ 2 ಚಿರತೆಗಳು ಆರೋಗ್ಯವಾಗಿವೆ ಎಂದು ಡಿಸಿಎಫ್ ಡಾ.ಬಸವರಾಜ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸರ್ಕಾರ ಇಕ್ಕಟ್ಟಿಗೆ ಸಿಲುಕಿಸಲು

ಬಿಜೆಪಿ ಶಾಸಕಾಂಗ ಸಭೆಯಲ್ಲಿ ತೀರ್ಮಾನ

ಬೆಂಗಳೂರು, ಫೆ. 12- ಇಂದಿನಿಂದ ಕರ್ನಾಟಕ ವಿಧಾನಮಂಡಲ ಅಧಿವೇಶನ ಆರಂಭವಾಗಿದ್ದು, ಮೊದಲ ದಿನವೇ ವಿಪಕ್ಷ ಬಿಜೆಪಿ ಸದಸ್ಯರು ಕೇಸರಿ ಶಾಲು ಹಾಕಿಕೊಂಡು ಜೈ ಶ್ರೀರಾಮ್.. ಜೈ ಶ್ರೀರಾಮ್ ಘೋಷಣೆಗಳನ್ನು ಕೂಗಿ ರಾಮನ ಜಪ ಮಾಡಿದೆ. ಇನ್ನು ನಾಳೆಯಿಂದ (ಫೆಬ್ರವರಿ 13) ಅಧಿವೇಶನದಲ್ಲಿ ಯಾವೆಲ್ಲಾ ವಿಷಯಗಳನ್ನ ಪ್ರಸ್ತಾಪಿಸಿ ಸರ್ಕಾರವನ್ನು ಕಟ್ಟಿಹಾಕಬೇಕೆಂದು ಬಿಜೆಪಿ ಇಂದು ಶಾಸಕಾಂಗ ಸಭೆ ನಡೆಸಿದ್ದು, ಕೆಲವು ಮಹತ್ವದ ನಿರ್ಧಾರಗಳನ್ನು ತೆಗೆದುಕೊಂಡಿದೆ.

ಶಾಸಕಾಂಗ ಪಕ್ಷದ ನಾಯಕ ಆರ್. ಅಶೋಕ್ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಲೋಕಸಭೆ ಚುನಾವಣೆಯ ರಾಜ್ಯ ಉಸ್ತುವಾರಿ ರಾಧಾಮೋಹನ್ ದಾಸ್, ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ, ಮಾಜಿ ಸಿಎಂ ಬೊಮ್ಮಾಯಿ, ಪರಿಷತ್ ವಿರೋಧ ಪಕ್ಷದ ನಾಯಕ ಕೋಟ ಶ್ರೀನಿವಾಸ ಪೂಜಾರಿ, ವಿಧಾನಸಭೆ ವಿಪಕ್ಷ ಉಪನಾಯಕ ಅರವಿಂದ ಬೆಲ್ಲದ್ ಸೇರಿದಂತೆ ಶಾಸಕರು ಹಾಜರಿದ್ದರು. ಸಭೆಗೆ ಶಾಸಕರಾದ ಬಸನಗೌಡ ಪಾಟೀಲ್ ಯತ್ನಾಳ್, ಎಸ್.ಟಿ. ಸೋಮಶೇಖರ್, ಅರೆಬೈಲ್ ಶಿವರಾಮ್ ಹೆಬ್ಬಾರ್, ರಮೇಶ್ ಜಾರಕಿಹೊಳಿ ಗೈರಾಗಿದ್ದರು. ಮುಂದೆ ಲೋಕಸಭಾ ಚುನಾವಣೆ ಇರುವುದರಿಂದ ಈ ಅಧಿವೇಶನವನ್ನು ಬಿಜೆಪಿ ಗಂಭೀರವಾಗಿ ಪರಿಗಣಿಸಲು ತೀರ್ಮಾನಿಸಿದ್ದು, ಸರ್ಕಾರದ ಲೋಪದೋಷಗಳನ್ನು ಸದನದಲ್ಲಿ ಚರ್ಚಿಸುವ ಮೂಲಕ ಜನರಿಗೆ ತಲುಪಿಸಲು ತೀರ್ಮಾನಿಸಿದೆ. ಇನ್ನು ಪಕ್ಷದಲ್ಲಿನ ಅಸಮಾಧಾನ ಸೇರಿದಂತೆ ಇನ್ನಿತರ ವಿಷಯಗಳ ಬಗ್ಗೆ ಚರ್ಚೆಗಳು ನಡೆದಿವೆ. ಅದರಲ್ಲೂ ಮುಖ್ಯವಾಗಿ ಸರ್ಕಾರದ ವಿರುದ್ಧ ಗುತ್ತಿಗೆದಾರರ ಸಂಘ ಆರೋಪಿಸಿರುವ ಕಮಿಷನ್ ದಂಧೆ ಬಗ್ಗೆಯು ಸದನದಲ್ಲಿ ಪ್ರಸ್ತಾಪಿಸಿ ಸರ್ಕಾರದ ವಿರುದ್ಧ ಹೋರಾಟ ಮಾಡುವ ಬಗ್ಗೆ ಸಭೆಯಲ್ಲಿ ತೀರ್ಮಾನಿಸಲಾಗಿದೆ.

ಮಾಜಿ ಶಾಸಕ ರಾಮದಾಸ್ ನೇತೃತ್ವದಲ್ಲಿ 'ಭಾರತ್ ರೈಸ್' ವಿತರಣೆ



ಮೈಸೂರು, ಫೆ.12(ಎಂಕೆ)- ಮೈಸೂರಿನ ಚಾಮುಂಡಿಪುರಂ ವೃತ್ತದಲ್ಲಿ ಮಾಜಿ ಶಾಸಕ ಎಸ್.ಎ.ರಾಮದಾಸ್ ನೇತೃತ್ವದಲ್ಲಿ ಸೋಮವಾರ 'ಭಾರತ್ ರೈಸ್' ಅಕ್ಕಿ ವಿತರಣೆ ಮಾಡಲಾಯಿತು.

ಕೆ.ಜಿಗೆ 29 ರೂ.ನಂತೆ 20 ಕೆ.ಜಿಯುಳ್ಳ ಚೀಲಗಳನ್ನು ವಿತರಿಸಲಾಯಿತು. ಸರತಿ ಸಾಲಿನಲ್ಲಿ ನಿಂತ ನೂರಾರು ಮಂದಿ ಅಕ್ಕಿ ಚೀಲಗಳನ್ನು ಖರೀದಿಸಿದರು. ಈ ವೇಳೆ ಮಾತನಾಡಿದ ಮಾಜಿ ಶಾಸಕ ಎಸ್.ಎ. ರಾಮದಾಸ್, ಕೊರೊನಾ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಉಚಿತವಾಗಿ ಮನೆ ಮನೆಗೆ ಅಕ್ಕಿ ನೀಡುವ ಮೂಲಕ ಬಡವರು, ಮಧ್ಯಮ ಕುಟುಂಬಸ್ಥರ ಹಸಿವು ನೀಗಿಸಿತ್ತು.

ಇಂದು ಅದೇ ಮಾದರಿಯಲ್ಲಿ ಕಡಿಮೆ ಬೆಲೆಯಲ್ಲಿ ಅಕ್ಕಿ ನೀಡುವ 'ಭಾರತ್ ರೈಸ್' ಯೋಜನೆ ಮೂಲಕ ಮಧ್ಯಮ ಕುಟುಂಬದವರು ಗುಣಮಟ್ಟದ ಅಕ್ಕಿ ಪಡೆಯಲು ಕೇಂದ್ರ ಸರ್ಕಾರ ಅನುವು ಮಾಡಿಕೊಟ್ಟಿದೆ. ಬಿಪಿಎಲ್ ಕಾರ್ಡ್ ಇಲ್ಲದ ಮಧ್ಯಮ ವರ್ಗದವರಿಗೆ ಈ ಯೋಜನೆ ಅನುಕೂಲ ಮಾಡಿಕೊಡಲಿದೆ. ಇದರಿಂದ ರೈತರಿಗೂ ಬೆಂಬಲ ಬೆಲೆ ದೊರೆಯಲಿದೆ ಎಂದು ತಿಳಿಸಿದರಲ್ಲದೆ 'ಭಾರತ್ ರೈಸ್' ಯೋಜನೆಯಲ್ಲಿ ಅಕ್ಕಿ ಜೊತೆಗೆ ಗೋಧಿ ಮತ್ತು ಕಡಲೆ ಬೇಳೆ ಕಾಳುಗಳನ್ನು ಕೂಡ ಕಡಿಮೆ ಬೆಲೆಗೆ ನೀಡಲಾಗುವುದು. ಸಾರ್ವಜನಿಕರು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳುವಂತೆ ಮನವಿ ಮಾಡಿದರು.

ಅನಾಥರ ಸಮಾಜವೇ ಪೋಷಿಸಬೇಕು

● ಮೈಸೂರು ಕಸಾಪ ಅಧ್ಯಕ್ಷರ ಮನವಿ ● ಸಾಹಿತ್ಯ ಭವನ ಸುಧಾರಣೆಗೆ ಯಾರೂ ಸಹಾಯ ಮಾಡುತ್ತಿಲ್ಲ; ವಿಷಾದ

ಮೈಸೂರು, ಫೆ.12(ಎಸ್‌ಪಿಎನ್)- ಅನಾಥ ಮಕ್ಕಳಿಗೆ ಸಮಾಜವೇ ತಂದೆ-ತಾಯಿ. ಈ ಮಕ್ಕಳ ಜೀವನದಲ್ಲಿ ಒಮ್ಮೆಯೂ ತಾನು ಅನಾಥ ಎಂಬ ಭಾವನೆ ಬಾರದಂತೆ ನೋಡಿಕೊಳ್ಳುವ ಹೊಣೆ ಸಮಾಜದ್ದು ಎಂದು ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್ ಅಭಿಪ್ರಾಯಪಟ್ಟರು.

ಮೈಸೂರು ವಿಜಯನಗರ ಒಂದನೇ ಹಂತದಲ್ಲಿರುವ ಜಿಲ್ಲಾ ಕಸಾಪ ಭವನದ ನಾಲ್ವಡಿ ಕೃಷ್ಣರಾಜ ಒಡೆಯರ್ ಸಭಾಂಗಣದಲ್ಲಿ ಜಿಲ್ಲಾ ಕಸಾಪ ಹಾಗೂ ಸವಿನೆನಪು ಫೌಂಡೇಷನ್ ಸೇವಾಶ್ರಮ ಸಹಯೋಗದೊಂದಿಗೆ ನಡೆದ 3ನೇ ವಾರ್ಷಿಕೋತ್ಸವ, ಸಾಧಕರಿಗೆ ಸನ್ಮಾನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಸವಿನೆನಪು ಫೌಂಡೇಶನ್ ಸೇವಾಶ್ರಮದ ಪದಾಧಿಕಾರಿಗಳು 60ಕ್ಕೂ ಹೆಚ್ಚು ಅನಾಥ ಮಕ್ಕಳನ್ನು ತಮ್ಮ ಸ್ವಂತ ಮಕ್ಕಳಂತೆ ನೋಡಿಕೊಂಡು ಅವರಿಗೆ ಉತ್ತಮ ವಿದ್ಯಾಭ್ಯಾಸ ಕೊಡಿಸುವ ಜವಾಬ್ದಾರಿ ತೆಗೆದುಕೊಂಡಿರುವುದು ಸಂತೋಷದ ಸಂಗತಿ. ಇವರ ಜೊತೆಗೆ ಸಮಾಜವೂ ಇಂತಹ ಮಕ್ಕಳ ಓದಿಗೆ ನೆರವು ನೀಡಬೇಕು ಎಂದು ಮನವಿ ಮಾಡಿದರು.

ಸ್ವಾಭಿಮಾನದ ಬದುಕು: ಕಳೆದ ಹತ್ತು ವರ್ಷಗಳ ಹಿಂದೆ ಮೈಸೂರು ನಗರ ಪಾಲಿಕೆ ಹಾಗೂ ಮೈಸೂರಿನ ಸಂಘ-ಸಂಸ್ಥೆಗಳ ಸಹಯೋಗದೊಂದಿಗೆ ಬೀದಿಬದಿಯ ನಿರಾಶ್ರಿತರ ಸಮೀಕ್ಷೆ ಮಾಡಿಸಲಾಯಿತು. ಅದರಲ್ಲಿ 1350ಕ್ಕೂ ಹೆಚ್ಚು ಜನರನ್ನು ಭೇಟಿ ಮಾಡಿ ಸಂದರ್ಶನ ಮಾಡಿದಾಗ, ಅವರಲ್ಲಿ ಕೆಲವರು ವಿದ್ಯಾವಂತರು, ಇನ್ನು ಕೆಲವರು ಮೈಸೂರು ಜಿಲ್ಲೆಯ ಬೇರೆ ಬೇರೆ ಊರುಗಳಿಂದ ಆಗಮಿಸಿ, ನಗರದ ಹೋಟೆಲ್, ಬೀದಿ ಬದಿ ವ್ಯಾಪಾರದಲ್ಲಿ ತೊಡಗಿಸಿಕೊಂಡಿದ್ದವರು. ಅವರು ಬೆಳಗಿನ ವೇಳೆ ಕೆಲಸ, ರಾತ್ರಿ ವೇಳೆ ಫುಟ್‌ಪಾತ್‌ನಲ್ಲಿ ಮಲಗಿ, ಸ್ವಾಭಿಮಾನ ಬದುಕು ಸಾಗಿಸುತ್ತಿದ್ದ ಪ್ರಸಂಗವನ್ನು ಎಳೆಎಳೆಯಾಗಿ ವಿವರಿಸಿದರು.



ನಾಲ್ವಡಿ ಕೃಷ್ಣರಾಜ ಒಡೆಯರ್ ಸಭಾಂಗಣದಲ್ಲಿ ಜಿಲ್ಲಾ ಕಸಾಪ ಹಾಗೂ ಸವಿನೆನಪು ಫೌಂಡೇಷನ್ ಸೇವಾಶ್ರಮ ಸಹಯೋಗದೊಂದಿಗೆ ನಡೆದ 3ನೇ ವಾರ್ಷಿಕೋತ್ಸವ, ಸಾಧಕರಿಗೆ ಸನ್ಮಾನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಕಸಾಪ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್ ಮಾತನಾಡಿದರು.

ಚಿಂದಿ ಆಯುವ ಹುಡುಗ ಐಎಎಸ್ ಅಧಿಕಾರಿ: ಅಲ್ಲದೆ, ಉತ್ತರ ಪ್ರದೇಶದ ಮಾಜಿ ಮುಖ್ಯಮಂತ್ರಿ ಹಾಗೂ ಹಾಲಿ ವಿರೋಧ ಪಕ್ಷದ ನಾಯಕ ಅಖಿಲೇಶ್ ಯಾದವ್, ಮುಖ್ಯಮಂತ್ರಿ ಆಗಿದ್ದಾಗ ಚಿಂದಿ ಆಯುವ ಹುಡುಗನೊಬ್ಬ ಕಷ್ಟಪಟ್ಟು ವಿದ್ಯಾಭ್ಯಾಸ ಮಾಡಿ, ಐಎಎಸ್ ಪಾಸ್ ಮಾಡಿದ್ದ ಪ್ರಸಂಗವೊಂದು ಮಾಧ್ಯಮಗಳ ಮೂಲಕ ಬೆಳಕಿಗೆ ಬಂತು. ಆ ಕೂಡಲೇ ಅಂದಿನ ಸಿಎಂ ಅಖಿಲೇಶ್, ಆ ಐಎಎಸ್ ಅಧಿಕಾರಿಯನ್ನು ತಮ್ಮ ವಿಶೇಷ ಅಧಿಕಾರಿಯಾಗಿ ನೇಮಿಸಿಕೊಂಡು ಬಡವರ ಸೇವೆಗೆ ಅನುವು ಮಾಡಿಕೊಟ್ಟ ಪ್ರಸಂಗವನ್ನು ವಿವರಿಸಿದರಲ್ಲದೆ, ಕಾಶಿಗೆ ಹೋಗಿದ್ದಾಗ ಅವರನ್ನು ಕಂಡು ಮಾತನಾಡಿಸಿ, ಗೌರವಿಸಿದ ಪ್ರಸಂಗವನ್ನು ವಿವರಿಸಿದರು.

ಸಾಹಿತ್ಯಭವನ ನವೀಕರಣಕ್ಕೆ ಮನವಿ: ಆದರೆ, ಮುಖ್ಯಮಂತ್ರಿಗಳ ತವರು ಜಿಲ್ಲೆಯಲ್ಲೇ ಜಿಲ್ಲಾ ಸಾಹಿತ್ಯ ಭವನ ನವೀಕರಣಕ್ಕೆ ಅನುದಾನ ಕೊರತೆ ಇದೆ. ಈ ಭಾಗದ ಎಲ್ಲಾ ಶಾಸಕರು, ವಿಧಾನ ಪರಿಷತ್ ಸದಸ್ಯರಿಗೂ ಮನವಿ ಮಾಡಿದ್ದರೂ ಯಾವುದೇ ಪ್ರಯೋಜನವಾಗಿಲ್ಲ. ಹಾಗಾಗಿ ಮೈಸೂರಿನ ಎಲ್ಲಾ ಜನಪ್ರತಿನಿಧಿಗಳು ಈ ಭವನದ ನವೀಕರಣಕ್ಕೆ ಕೈಜೋಡಿಸುವಂತೆ ಮನವಿ ಮಾಡಿದರು.

ವಿವಿಧ ಕ್ಷೇತ್ರದ ಸಾಧಕರಿಗೆ ಸನ್ಮಾನ: ಈ ವೇಳೆ ವಿವಿಧ ಕ್ಷೇತ್ರಗಳಲ್ಲಿ ಗುರುತಿಸಿಕೊಂಡಿರುವ ಎಂ.ಎಸ್.ವಿನೋದ್, ಡಾ.ಜಿ.ವಿ.ದೇವರಾಜು, ನಿತ್ಯಾನಂದ ನಾಯಕ್, ಕೆ.ಕೆ.ಅನಂತನಾರಾಯಣ, ಜೈಭಜರಂಗಿ ನಂದೀಶ್, ಡಿ.ರವಿಕುಮಾರ್, ಕಸ್ತೂರಿ ಚಂದ್ರ, ಮುರುಳಿಧರ್‌ರಾವ್, ಶೋಭರಾಣಿ, ಗಂಗಾಧರಪ್ಪ, ಎನ್.ಶಿವಕುಮಾರ್, ದಾಸಪ್ಪ, ಡಾ.ಜಯಪ್ಪ ಹೊನ್ನಾಳಿ, ಪ್ರೇಮಾ, ಮೂರ್ತಿ ಸೇರಿದಂತೆ ಇತರೆ ಸಾಧಕರನ್ನು ಸನ್ಮಾನಿಸಲಾಯಿತು.

ಈ ವೇಳೆ ಮೈಸೂರು ನಗರ ಪಾಲಿಕೆ ಸದಸ್ಯ ಪಿ.ದೇವರಾಜ್, ಸವಿನೆನಪು ಫೌಂಡೇಶನ್ ಅಧ್ಯಕ್ಷೆ ಮಾನಸ ಪಿ.ಗೌಡ, ಕಾರ್ಯದರ್ಶಿ ವಿನಯ್ ಪ್ರಸಾದ್, ನೇಗಿಲಯೋಗಿ ಸಂಸ್ಥೆಯ ರವಿಕುಮಾರ್, ಲಯನ್ ಎಸ್.ಗಂಗಾಧರಪ್ಪ, ರಾಗಿಮುದ್ದನಹಳ್ಳಿಯ ಡಾ.ನಾಗೇಶ್, ಪ್ರಭಾಮಣಿ ಸೇರಿದಂತೆ ಇತರರಿದ್ದರು. ವೇದಿಕೆ ಕಾರ್ಯಕ್ರಮದ ನಂತರ ಸವಿನೆನಪು ಫೌಂಡೇಶನ್‌ನ ವಿದ್ಯಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು.

ನಕ್ಕರೆ ಅದೇ ಸ್ವರ್ಗ

ಹುಡುಗ : ಸಾರಿ ಕಣೇ... ನಾನು ನಿನ್ನನ್ನು ಮದುವೆ ಆಗಕ್ಕಾಗೊಲ್ಲಾ.
ಹುಡುಗಿ : ಓ ಗಾಡ್... ಯಾಕೆ?
ಹುಡುಗ : ಮನೆಯಲ್ಲಿ ಒಪ್ತಾ ಇಲ್ಲಾ.
ಹುಡುಗಿ : ಮನೆಯಲ್ಲಿ ಯಾರ‍್ಯಾರು ಇದ್ದಾರೆ!
ಹುಡುಗ : ಹೆಂಡತಿ, ಮೂವರು ಮಕ್ಕಳು...!!

ಮೈಸೂರು ಮಿತ್ರ
ಮಂಗಳವಾರ, 13 ಫೆಬ್ರವರಿ 2024
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ *M.A.*


ಅಮೃತವಾಹಿನಿ..........

ನಿಮ್ಮ ಹಸಿವು ಇಂಗಿಸುವಷ್ಟು ಊಟ ಮಾಡಿ. ದಾಹ ತಣಿಯುವಷ್ಟು ನೀರು ಕುಡಿಯಿರಿ. ಚಿಟ್ಟೆ ಹೂವಿನ ಸುವಾಸನೆಯನ್ನೂ, ಸೌಂದರ್ಯವನ್ನೂ ಹಾಳುಗೆಡವದೆ ಮಕರಂದವನ್ನು ಹೀರುವಂತೆ ಜೀವನದ ಅಗತ್ಯತೆಗಳನ್ನು ಪೂರೈಸಿಕೊಳ್ಳಿ. –ಭಗವಾನ್ ಬುದ್ಧ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಅಂಚಿಲ್ಲದ ಹೊಲ ಇಲ್ಲ, ಸಂಚಿಲ್ಲದ ಮಾತಿಲ್ಲ

ನಿಮ್ಮ ಪತ್ರಗಳು

ಮೈಸೂರು ಮಹಾನಗರ ಪಾಲಿಕೆ ಆಯುಕ್ತರ ನಿವಾಸದ ಮುಂದಿನ ರಸ್ತೆ ಮೇಲೆ ಆಪತ್ತಿಗೆ ಕಾದಿರುವ ಬೋಲ್ಟ್, ನಟ್ಸ್



ಮಾನ್ಯರೆ,

ಬೋಗಾದಿ ಮುಖ್ಯರಸ್ತೆಯಲ್ಲಿ ಅವೈಜ್ಞಾನಿಕ ರಸ್ತೆ ಹಂಪ್‌ಗಳಿಂದಾಗಿ ಮೂವರು ವಾಹನ ಸವಾರರು ಪ್ರಾಣ ಕಳೆದುಕೊಂಡಿದ್ದು ವಿಷಾದನೀಯ. ಅವೈಜ್ಞಾನಿಕ, ದೋಷಪೂರಿತ ವಿನ್ಯಾಸದ ಹಂಪ್‌ಗಳಿಂದ ಈ ರೀತಿಯ ಅನಾಹುತಗಳಾಗುತ್ತಿವೆ. ಜೊತೆಗೆ ಬೆನ್ನುಮೂಳೆಗೆ ಹಾನಿಯಾಗಿ ಹಲವರು ದೀರ್ಘಕಾಲಿಕ ಬೆನ್ನುನೋವಿನಿಂದ ನರಳುತ್ತಿದ್ದಾರೆ.

ರಸ್ತೆ ಹಂಪ್‌ಗಳು ದ್ವಿಚಕ್ರ ವಾಹನ ಸವಾರರಿಗೆ ಮಾರಣಾಂತಿಕವಾಗಿ ಪರಿಣಮಿಸುತ್ತಿವೆ. ಈ ರೀತಿಯ ಸಾಲು ಸಾಲು ಅವಘಡಗಳಿಂದ ಎಚ್ಚರಿಕೆಯಿಂದ ಸಂಚರಿಸಬೇಕೆಂಬ ಅರಿವು ಹೆಚ್ಚಾಗಿದೆ. ಹೀಗೆಯೇ ಇಂದು ಯಾದವಗಿರಿಯಲ್ಲಿನ ಮೈಸೂರು ನಗರ ಪಾಲಿಕೆ ಆಯುಕ್ತರ ನಿವಾಸದ ಬಳಿ ಸಂಚರಿಸುವಾಗ ಅಪಾಯಕಾರಿ ರಬ್ಬರ್ ಹಂಪ್ ಎದುರಿಸಿದೆ.

ಆ ರಬ್ಬರ್ ಹಂಪ್‌ನ ಮಧ್ಯದ ಭಾಗ ಕಾಣೆಯಾಗಿದ್ದು, ಅದನ್ನು ರಸ್ತೆಗೆ ಅಳವಡಿಸಲು ಬಳಸಿರುವ ಉದ್ದವಾದ ನಟ್ ಹಾಗೂ ಬೋಲ್ಟ್‌ಗಳು ಅಪಾಯಕಾರಿಯಾಗಿ ನಿಂತಿವೆ. ಭಾರಿ ವಾಹನ ಸಂಚಾರದಿಂದ ಒಂದು ಬೋಲ್ಟ್ ಮಾತ್ರ ಬಾಗಿದ್ದು, ಉಳಿದವು ಹಾಗೆಯೇ ಇವೆ. ರಬ್ಬರ್ ಹಂಪ್‌ನ ಇಕ್ಕೆಲ ಭಾಗಗಳ ಮೇಲೆ ಒತ್ತಡ ಹೆಚ್ಚಾಗಿ ಕೆಲವೇ ದಿನಗಳಲ್ಲಿ ಅವುಗಳ ಸ್ಥಿತಿಯೂ ಇದೇ ಆಗಬಹುದು. ಇಡೀ ಹಂಪ್ ಹಾಳಾಗಿ ನಟ್–ಬೋಲ್ಟ್‌ಗಳಿಂದ ಅಪಘಾತ–ಅವಘಡಗಳು ಸಂಭವಿಸಬಹುದು.

ಮೈಸೂರು ನಗರ ಪಾಲಿಕೆ ಆಯುಕ್ತರ ನಿವಾಸದ ಮುಂದೆಯೇ ಈ ದುಸ್ಥಿತಿ ಇದೆ. ರಬ್ಬರ್ ಹಂಪ್ ಕಿತ್ತು ನಟ್–ಬೋಲ್ಟ್‌ಗಳಿಂದ ಸಂಭವಿಸಬಹುದಾದ ಅಪಾಯದ ಬಗ್ಗೆ ಇಲ್ಲಿ ಓಡಾಡುವ ಪಾಲಿಕೆ ಅಧಿಕಾರಿಗಳಿಗೆ ತಿಳಿಯಲಿಲ್ಲವೇ? ರಸ್ತೆ ಸುರಕ್ಷತೆ ನಿರ್ವಹಿಸುವವರು ಸೇರಿದಂತೆ ಜವಾಬ್ದಾರಿಯುತ ಇತರೆ ಅಧಿಕಾರಿಗಳು ಈ ಗಂಭೀರ ಸಮಸ್ಯೆಯನ್ನು ನಿರ್ಲಕ್ಷಿಸಿದ್ದಾರಾ?. ಇನ್ನು ನಗರದ ಇತರೆಡೆ ಇರುವ ಸಮಸ್ಯೆಗಳಿಗೆ ಇವರಿಂದ ಪರಿಹಾರ ನಿರೀಕ್ಷಿಸಲು ಸಾಧ್ಯವೇ? ಎಂಬ ಪ್ರಶ್ನೆಗಳು ಸಹಜವಾಗಿ ಮೂಡುತ್ತವೆ.

ರಬ್ಬರ್ ಹಂಪ್‌ನ ಕಾಣೆಯಾದ ಭಾಗವನ್ನು ಕೂಡಲೇ ದುರಸ್ತಿಪಡಿಸಿ. ಇದು ನಿಮ್ಮಿಂದ ಸಾಧ್ಯವಾಗದಿದ್ದರೆ ಅಪಾಯಕ್ಕೆ ಆಹ್ವಾನ ನೀಡುತ್ತಿರುವ ನಟ್–ಬೋಲ್ಟ್‌ಗಳನ್ನು ಸಂಪೂರ್ಣವಾಗಿ ತೆರವುಗೊಳಿಸುವ ಮೂಲಕ ಈ ಸಮಸ್ಯೆಯನ್ನು ತ್ವರಿತವಾಗಿ ಪರಿಹರಿಸಬೇಕೆಂದು ನಾನು ಅಧಿಕಾರಿಗಳನ್ನು ಒತ್ತಾಯಿಸುತ್ತೇನೆ. ಪರಿಹಾರ ಕ್ರಮ ಕೈಗೊಳ್ಳದಿದ್ದರೆ ಇಲ್ಲಿ ಸಂಭವಿಸಬಹುದಾದ ಅಪಘಾತ–ಅವಘಡಗಳಿಗೆ ಅಧಿಕಾರಿಗಳೇ ಹೊಣೆಗಾರರಾಗಬಹುದು.

–ಕಾಳಜಿಯುಳ್ಳ ನಾಗರಿಕ

'ಭಾರತ್ ರೈಸ್' ವಿತರಣೆ ಸ್ವಾಗತಾರ್ಹ

ಮಾನ್ಯರೆ,

ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಬಳಲುತ್ತಿರುವ ಜನಸಾಮಾನ್ಯರಿಗೆ ತುಸು ನಿರಾಳ ಕೊಡಲು ಹಾಗೂ ಭಾರಿ ಪ್ರಮಾಣದಲ್ಲಿ ಹೆಚ್ಚಾಗಿರುವ ಅಕ್ಕಿ ದರಗಳನ್ನು ನಿಯಂತ್ರಿಸಲು ಕೇಂದ್ರ ಸರ್ಕಾರ ಕೆಜಿವೊಂದಕ್ಕೆ 29 ರೂ.ಗೆ 'ಭಾರತ್ ರೈಸ್' ಎಂಬ ಹೆಸರಿನಲ್ಲಿ ಅಕ್ಕಿ ಮಾರಾಟ ಮಾಡುವುದಕ್ಕೆ ನಿರ್ಧರಿಸಿರುವುದು ಸ್ವಾಗತಾರ್ಹವಾಗಿದೆ.

ಭಾರತ್ ಅಕ್ಕಿಯನ್ನು ಗ್ರಾಹಕರಿಗೆ ಕೈಗೆಟುಕುವ ಬೆಲೆಯಲ್ಲಿ ಪರಿಚಯಿಸಲಾಗಿದೆ. ಇದರಿಂದ ಜನರಿಗೆ ಅನುಕೂಲವಾಗಲಿದೆ. ಈಗಾಗಲೇ ಪ್ರಧಾನಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆಯಡಿ ಸುಮಾರು 81 ಕೋಟಿ ಜನರು ಉಚಿತ ಆಹಾರ ಧಾನ್ಯಗಳನ್ನು ಪಡೆಯುತ್ತಿದ್ದು, ಈಗ ಉಪಕ್ರಮವನ್ನು ಹೆಚ್ಚುವರಿ 5 ವರ್ಷಗಳವರೆಗೆ ಹೆಚ್ಚಿಸಲಾಗಿದೆ. ಈ ಯೋಜನೆಯು ಬಡ ಕುಟುಂಬಗಳಿಗೆ ತಿಂಗಳಿಗೆ ಸುಮಾರು ರೂ. 1500––2000 ಉಳಿಸಲು ಸಹಾಯ ಮಾಡುತ್ತಿದೆ. ಈ ಮಧ್ಯೆ ಮಧ್ಯಮ ವರ್ಗದವರಿಗೂ ಸಹಾಯಕವಾಗಲೆಂದು ಕೇಂದ್ರ ಸರ್ಕಾರ ಭಾರತ್ ರೈಸ್ ವಿತರಣೆ ಮಾಡುತ್ತಿರುವುದು ಒಳ್ಳೆಯ ಬೆಳವಣಿಗೆಯಾಗಿದೆ. ದಿನನಿತ್ಯದ ಆಹಾರ ಪದಾರ್ಥಗಳು ಸಾರ್ವಜನಿಕರಿಗೆ ಸಮಂಜಸವಾದ ಬೆಲೆಯಲ್ಲಿ ಲಭ್ಯವಾಗುವಂತೆ ನೋಡಿಕೊಳ್ಳಲು ಸರ್ಕಾರ ಮುಂದಾಗಿರುವುದು ಆಶಾದಾಯಕವಾಗಿದೆ. ಈ ಭಾರತ್ ರೈಸ್ ಅಕ್ಕಿ, ಕಾಳಸಂತೆಗೆ ಸೇರದೆ ಅರ್ಹ ಫಲಾನುಭವಿಗಳಿಗೆ ದೊರೆತಾಗ ಕೇಂದ್ರ ಸರ್ಕಾರದ ಈ ಯೋಜನೆ ಸಾಕಾರಗೊಳ್ಳಲು ಸಾಧ್ಯವಾಗುತ್ತದೆ. ಸರ್ಕಾರ ಈ ಬಗ್ಗೆ ಗಮನ ಹರಿಸಬೇಕು ಹಾಗೂ ಎಲ್ಲಾ ಫಲಾನುಭವಿಗಳಿಗೂ ಸರಳ ಸುಲಭ ಹಾಗೂ ಮುಕ್ತವಾಗಿ ದೊರಕುವ ನಿಟ್ಟಿನಲ್ಲಿ ಸರ್ಕಾರ ಕ್ರಮ ಕೈಗೊಳ್ಳಬೇಕಿದೆ.

–ಹರಳಹಳ್ಳಿ ಪುಟ್ಟರಾಜು, ಪಾಂಡವಪುರ.

ಪುಸ್ತಕ ಪರಿಚಯ

ಯದುವಂಶದ ರಾಜಚರಿತೆ



ಗೌರಿ ಸತ್ಯ
ಹಿರಿಯ ಪತ್ರಕರ್ತರು
ಮೊ: 8762788685

ಕೆಲವು ದಿನಗಳ ಹಿಂದೆ ನನ್ನ ಮಿತ್ರರಾದ ಪಿ.ಎಸ್.ಸಿದ್ಧಾಚಾರ್ ಅವರು ತಮ್ಮ ಮೂರು ಗ್ರಂಥಗಳನ್ನು ಕಳುಹಿಸಿಕೊಟ್ಟರು. ಒಂದು: 'ಮೈಸೂರು ಮಹಾರಾಜ ಚರಿತೆ', ಯದುರಾಯರಿಂದ ಯದುವೀರರವರೆಗಿನ ಕುರಿತಾದ ಕಥನ ಕೃತಿ, ಎರಡು: 'ಕನಕ ಕಥನಾಮೃತ', ಕನಕದಾಸರನ್ನು ಕುರಿತ ಭಾಮಿನಿ ಷಟ್ಪದಿಯಲ್ಲಿ ರಚಿತವಾಗಿರುವ ಮಹಾಕಾವ್ಯ, ಮೂರು: 'ಅಮರಶಿಲ್ಪಿ', ಐತಿಹ್ಯ ಕಥಾನಕ ಕೃತಿ. ಈ ಮೂರು ಗ್ರಂಥಗಳನ್ನು ಅವರು ತಮ್ಮ 'ಕವಿಮಿತ್ರ ಪ್ರಕಾಶನ'ದ ಅಡಿಯಲ್ಲಿ ಪ್ರಕಟಿಸಿದ್ದಾರೆ. 'ಕವಿಮಿತ್ರ' ಎಂಬುದು ಸಿದ್ಧಾಚಾರ್ ಅವರ ಕಾವ್ಯನಾಮ. ಈ ಮಹಾಕಾವ್ಯಗಳಲ್ಲದೆ ಸಿದ್ಧಾಚಾರ್ ಅವರು ಇಪ್ಪತ್ತಕ್ಕೂ ಹೆಚ್ಚು ಕೃತಿಗಳನ್ನು ಹೊರತಂದಿದ್ದು ಅವುಗಳಲ್ಲಿ ಕವನ ಸಂಕಲನ, ಕಥಾ ಸಂಕಲನ, ಕಾದಂಬರಿ, ಮುಕ್ತಕಗಳೂ ಸೇರಿವೆ.

ಅವರು ಈಗಾಗಲೇ ಮೈಸೂರು ಮಹಾರಾಜರುಗಳ ಚರಿತ್ರೆಯನ್ನು ವಾರ್ಧಿಕ ಷಟ್ಪದಿಯಲ್ಲಿ ರಚಿಸಿ ಪ್ರಕಟಿಸಿದ್ದಾರೆ. ಈ ಮಹಾಕಾವ್ಯ ಓದುಗರಲ್ಲಿ ಜನಪ್ರಿಯವಾಗಿದೆ. ಅದೇ ಚರಿತ್ರೆಯನ್ನು ಈಗ ಗದ್ಯ ರೂಪದಲ್ಲಿ ಕಥನಕೃತಿಯಾಗಿ ಪ್ರಕಟಿಸಿದ್ದಾರೆ. ಹೀಗೆ ಕಾವ್ಯವಾಗಿ, ಗದ್ಯವಾಗಿ ಮೈಸೂರು ಮಹಾರಾಜರ ಚರಿತ್ರೆಯನ್ನು ಬರೆದು ಸಿದ್ಧಾಚಾರ್ ಸಾಹಸವನ್ನೇ ಎಸಗಿದ್ದಾರೆ. ಇವರ ಪ್ರಯತ್ನವನ್ನು ಮೆಚ್ಚಬೇಕಾದ್ದು. ಪ್ರಾಯಶಃ ಮೈಸೂರು ಮಹಾರಾಜರ ಇತಿಹಾಸವನ್ನು ಕಾವ್ಯ ಮತ್ತು ಗದ್ಯ ಎರಡೂ ರೂಪಗಳಲ್ಲಿ ಬರೆದು ಪ್ರಕಟಿಸಿರುವವರು ಇವರೇ ಮೊದಲೆಂದು ಕಾಣುತ್ತದೆ.

"ಶ್ರೀಮನ್ಮಹಾರಾಜ ಚರಿತಾಮೃತ"ದ ಕಾವ್ಯವಸ್ತುವನ್ನು ಸಿದ್ಧಾಚಾರ್ ಹತ್ತು ಪರ್ವಗಳನ್ನಾಗಿ ವಿಂಗಡಿಸಿಕೊಂಡಿದ್ದಾರೆ. ಪ್ರತಿ ಪರ್ವದಲ್ಲಿಯೂ ಹತ್ತು ಅಧ್ಯಾಯಗಳಿವೆ. ಮೊದಲನೆಯ ಪರ್ವದಲ್ಲಿ ಯದುಕುಲದ ಬಗ್ಗೆ ಪ್ರಸ್ತಾಪಿಸುತ್ತಾ ಯದುಕುವರರ ಪ್ರಯಾಣ, ಮಾರನಾಯಕನ ವಧೆ, ಮತ್ತು ಯದುಕುಲದ ಪುನರುತ್ಥಾನವನ್ನು ವರ್ಣಿಸಿದ್ದಾರೆ. ಎರಡನೆಯ ಪರ್ವ ಯದುರಾಯರ ಪಟ್ಟಾಭಿಷೇಕದಿಂದ ಐದನೆಯ ಬೆಟ್ಟದ ಚಾಮರಾಜ ಒಡೆಯರವರೆಗೆ ವರ್ಣಿತವಾಗಿದೆ. ಪೂರ್ವ ದಸರೆಯ ಕಥನ, ರಾಜ ಒಡೆಯರ ಕಥನ, ಅಲಮೇಲಮ್ಮನ ಶಾಪ, ರಾಜ ಒಡೆಯರ ಸಿಂಹಾಸನಾರೋಹಣ, ಆರನೇ ಚಾಮರಾಜ ಒಡೆಯರು ಹಾಗೂ ಇಮ್ಮಡಿ ರಾಜ ಒಡೆಯರನ್ನು ಒಳಗೊಂಡಿದೆ.

ನಾಲ್ಕನೆಯ ಪರ್ವ ರಣಧೀರ ಕಂಠೀರವ ನರಸರಾಜ ಒಡೆಯರಿಗೆ ಬಹುಮಟ್ಟಿಗೆ ಸೀಮಿತವಾಗಿ ದೊಡ್ಡ ದೇವರಾಜ ಒಡೆಯರ ಚರಿತ್ರೆಯನ್ನು ಹೊಂದಿದ್ದರೆ, ಐದನೆಯ ಪರ್ವವಾದರೋ ಚಿಕ್ಕದೇವರಾಜ ಒಡೆಯರು, ಎರಡನೇ ಕಂಠೀರವ ನರಸರಾಜ ಒಡೆಯರು, ದೊಡ್ಡ ಕೃಷ್ಣರಾಜ ಒಡೆಯರು, ಏಳನೆಯ ಚಾಮರಾಜ ಒಡೆಯರು, ಎರಡನೆಯ ಕೃಷ್ಣರಾಜ ಒಡೆಯರು, ಎಂಟನೆಯ ಬೆಟ್ಟದ ಚಾಮರಾಜ ಒಡೆಯರು ಹಾಗೂ ಒಂಬತ್ತನೆಯ ಖಾಸಾ ಚಾಮರಾಜ ಒಡೆಯರ ಇತಿಹಾಸವನ್ನು ವರ್ಣಿಸುತ್ತದೆ. ಹೈದರಾಲಿ, ದಿವಾನ್ ಪೂರ್ಣಯ್ಯ, ಟಿಪ್ಪು ಸುಲ್ತಾನ್, ಮುಮ್ಮಡಿ ಕೃಷ್ಣರಾಜ ಒಡೆಯರು, ಕಮೀಷನರುಗಳ ಆಡಳಿತವನ್ನು ಆರನೆಯ ಪರ್ವ ಕಾವ್ಯವಾಗಿಸಿದೆ. ಮುಂದಿನ ಪರ್ವ ಹತ್ತನೆಯ ಚಾಮರಾಜ ಒಡೆಯರು, ದಿವಾನ್ ರಂಗಾಚಾರ್ಲು, ದಿವಾನ್ ಶೇಷಾದ್ರಿ ಅಯ್ಯರ್, ವಾಣಿ ವಿಲಾಸ ಸನ್ನಿಧಾನ ಅಲ್ಲದೆ ಆ ಕಾಲಕ್ಕೆ ಸಂಬಂಧಿಸಿದ ಇತರೆ ಒಂದೆರಡು ವಿಷಯಗಳನ್ನು ಪ್ರಸ್ತಾಪಿಸುತ್ತದೆ.

ನಾಲ್ವಡಿ ಕೃಷ್ಣರಾಜ ಒಡೆಯರು, ಆಗಿನ ಪ್ರಸಿದ್ಧ ದಿವಾನರುಗಳಾದ ಮಾಧವರಾವ್, ಆನಂದರಾವ್, ವಿಶ್ವೇಶ್ವರಯ್ಯ, ಕಾಂತರಾಜ ಅರಸ್, ಆಲ್ಬಿಯನ್ ಬ್ಯಾನರ್ಜಿ, ಮಿರ್ಜಾ ಇಸ್ಮಾಯಿಲ್ ಅವರ ಸೇವೆಯನ್ನು ಎಂಟನೆಯ ಪರ್ವ ವಿವರಿಸುತ್ತದೆ. ಒಂಬತ್ತನೆಯ ಪರ್ವ ಯದುವಂಶದ 25ನೇ ಹಾಗೂ ಕೊನೆಯ ಮಹಾರಾಜ ಜಯಚಾಮರಾಜ ಒಡೆಯರ ಬಗ್ಗೆ ವರ್ಣಿತವಾಗಿದೆ. ಕೊನೆಯ ಪರ್ವ ಶ್ರೀಕಂಠದತ್ತ ನರಸಿಂಹರಾಜ ಒಡೆಯರು, ಯದುವೀರ ಕೃಷ್ಣದತ್ತ ಒಡೆಯರ ಬಗ್ಗೆ ಪ್ರಸ್ತಾಪಿಸಿ, ಮೈಸೂರು ಇತಿಹಾಸದ ಪ್ರಮುಖ ಮೂವರು ರಾಜಮಾತೆಯರಾದ ಕೆಂಪನಂಜಮ್ಮಣ್ಣಿ, ಲಕ್ಷಮ್ಮಣ್ಣಿ, ಹಾಗೂ ದೇವಾಜಮ್ಮಣ್ಣಿ ಅವರುಗಳನ್ನೂ, ಅರಮನೆ, ಅಂಬಾರಿ, ಸಿಂಹಾಸನಗಳನ್ನೂ ವರ್ಣಿಸುತ್ತದೆ. ಹೀಗೆ ಇಡೀ ಹತ್ತು ಪರ್ವಗಳಲ್ಲಿ ಮೈಸೂರು ಮಹಾರಾಜರ ಇತಿಹಾಸವನ್ನು ಸಿದ್ಧಾಚಾರ್ ಕಾವ್ಯವನ್ನಾಗಿಸಿದ್ದಾರೆ.

ಗದ್ಯರೂಪದ "ಮೈಸೂರು ಮಹಾರಾಜರ ಚರಿತೆ" ಯಲ್ಲಿ ಗ್ರಂಥಕರ್ತೃ ಕಾವ್ಯದಲ್ಲಿದ್ದಂತೆ ಕಾವ್ಯವಸ್ತುವನ್ನು ವಿಂಗಡಿಸಿಕೊಂಡಿದ್ದರೂ ಅದನ್ನು ಏಳೇ ಅಧ್ಯಾಯಗಳಿಗೆ ಸೀಮಿತಗೊಳಿಸಿದ್ದಾರೆ. ಕೊನೆಯ ಮೂರು ಅಧ್ಯಾಯಗಳನ್ನು ದಿವಾನರು, ಪ್ರಾತಃಸ್ಮರಣೀಯ ಮಹಾರಾಣಿಯರು, ಮಹಾರಾಜರ ಕಾಲದ ಕೆಲವು ಗಣ್ಯರು, ಮಹಾರಾಜರ ಸಾಧನೆಗಳು–ಕೊಡುಗೆ, ವಿವಿಧ ಕ್ಷೇತ್ರಗಳಲ್ಲಿನ ಅಭಿವೃದ್ಧಿಗಳ ವಿವರಗಳಿಗೆ ಮೀಸಲಿಟ್ಟಿದ್ದಾರೆ.

ಯದುವಂಶದ ಮಹಾರಾಜರ ಇಡೀ ಚರಿತ್ರೆಯನ್ನು ಜಯಚಾಮರಾಜರ ನಂತರದ ಶ್ರೀಕಂಠದತ್ತ ನರಸಿಂಹರಾಜ ಒಡೆಯರು, ಈಗಿನ ಯದುವೀರರವರೆಗೆ ಸಮಗ್ರವಾಗಿ, ಸುದೀರ್ಘವಾಗಿ ಈ ಎರಡೂ ಕೃತಿಗಳಲ್ಲಿ ವಿವರಿಸಿರುವುದು ಗಮನಾರ್ಹ. ಪ್ರಾಯಶಃ ಇಂತಹ ಸಮಗ್ರ ಕೃತಿ ಈವರೆಗೆ ಪ್ರಕಟವಾಗಿಲ್ಲ ಎಂದರೆ ತಪ್ಪಾಗಲಾರದು. ಈ ಕಾರ್ಯವನ್ನು ಸಾಧಿಸಿ ಈ ಎರಡು ಕೃತಿಗಳ ಕರ್ತೃ ಸಿದ್ಧಾಚಾರ್ ದೊಡ್ಡ ಸಾಧನೆಯನ್ನೇ ಮಾಡಿದ್ದಾರೆ ಎಂದರೆ ತಪ್ಪಿಲ್ಲ.


ಸಿದ್ಧಾಚಾರ್ ಅವರು ಮೈಸೂರು ಮಹಾರಾಜರ ಚರಿತ್ರೆಯನ್ನು ಗುರುತಿಸುವಾಗ ಕೆಲವು ಬದಲಾವಣೆಗಳನ್ನು ಮಾಡಿರುವುದನ್ನು ಗಮನಿಸಬಹುದು. ಉದಾಹರಣೆಗೆ ಈ ಕಾವ್ಯದಲ್ಲಿ ಮಾರನಾಯಕನ ವಧೆಯಾಗುವುದಿಲ್ಲ. ಬದಲಿಗೆ ಅವನು ಯದುರಾಯರೊಂದಿಗೆ ಹೋರಾಡುವಾಗ ನಿತ್ರಾಣನಾಗಿ ಅವರಿಗೆ ಶರಣಾಗತನಾಗುತ್ತಾನೆ.

ಅದೇ ರೀತಿ ಶ್ರೀರಂಗರಾಯನ ಪತ್ನಿ ಅಲಮೇಲಮ್ಮ ಮೈಸೂರು ಮಹಾರಾಜರಿಗೆ ಶಾಪ ಕೊಡಲು ರಾಜ ಒಡೆಯರು ನೇರ ಕಾರಣರಾಗಿಲ್ಲದೆ ಕೆಲವರ ಕುತಂತ್ರ–ಕುಯುಕ್ತಿಗಳು ಕಾರಣ ಎನ್ನುತ್ತಾರೆ ಸಿದ್ಧಾಚಾರ್. ಆ ಕುತಂತ್ರಿಗಳು ಆಭರಣಗಳನ್ನು ಮುಚ್ಚಿಟ್ಟು ಅಲಮೇಲಮ್ಮ ಅವನ್ನು ತಲಕಾಡಿಗೆ ತೆಗೆದು ಹೋಗಿದ್ದಾಳೆಂದು ಹೇಳಿ ರಾಜ ಒಡೆಯರನ್ನು ತಪ್ಪುದಾರಿಗೆ ಎಳೆಯುತ್ತಾರೆ. ಅವರ ಮಾತನ್ನು ನಂಬಿ ರಾಜ ಒಡೆಯರು ತಮ್ಮ ಭಟರನ್ನು ಕಳುಹಿಸಿ ಅಲಮೇಲಮ್ಮನಿಂದ ಆಭರಣಗಳನ್ನು ತೆಗೆದುಕೊಂಡು ಬರುವಂತೆ, ಅವಳು ಕೊಡದಿದ್ದರೆ ಬಲವಂತವಾಗಿ ತೆಗೆದುಕೊಂಡು ಬರುವಂತೆ ಆಜ್ಞಾಪಿಸುತ್ತಾರೆ. ಅವರು ತಲಕಾಡಿಗೆ ಬಂದು ಅಲಮೇಲಮ್ಮನನ್ನು ಆಭರಣಗಳಿಗಾಗಿ ಬಲವಂತ ಮಾಡುತ್ತಿದ್ದಾಗ, ರಾಜ ಒಡೆಯರಿಗೆ ಕುತಂತ್ರಿಗಳ ಒಳಸಂಚು ತಿಳಿದು ಮುಚ್ಚಿಟ್ಟಿರುವ ಆಭರಣಗಳು ದೊರೆತಾಗ ಅಲಮೇಲಮ್ಮನಿಗೆ ವಿಚಾರ ತಿಳಿಸಿ ಸಮಾಧಾನಪಡಿಸಲು ಮಾಲಿಂಗಿಗೆ ಬರುತ್ತಾರೆ. ಆದರೆ ರಾಜ ಒಡೆಯರನ್ನು ದೂರದಿಂದ ನೋಡುತ್ತಲೇ ಅಲಮೇಲಮ್ಮ ಇನ್ನಷ್ಟು ಕೋಪಗೊಂಡು ಅವರಿಗೆ ಶಾಪ ಕೊಟ್ಟು ನದಿಗೆ ಹಾರುತ್ತಾಳೆ. ಈ ಪ್ರಸಂಗ ಇಲ್ಲಿ ಈ ರೀತಿ ಬದಲಾವಣೆಯಾಗಿದೆ.


ಅದೇ ರೀತಿ ದಿವಾನ್ ಪೂರ್ಣಯ್ಯನವರನ್ನೂ ಅವರು ಸ್ವಲ್ಪ ಭಿನ್ನವಾಗಿ ಪ್ರಸ್ತಾಪಿಸಿದ್ದಾರೆ. ಯದುಕುಲದ ದೊರೆಗಳನ್ನು ಮೀರಿ ಹೈದರ್ ತಾನು ಮೆರೆದದ್ದು ಪೂರ್ಣಯ್ಯನವರನ್ನು ಬಾಧಿಸುತ್ತಿತ್ತು. ಟಿಪ್ಪು ರಾಜ ಮನೆತನವನ್ನು ಸಂಪೂರ್ಣವಾಗಿ ಕಡೆಗಣಿಸಿ, ಬಂಧನದಲ್ಲಿಟ್ಟಿದ್ದು ಪೂರ್ಣಯ್ಯನವರ ಕರುಳನ್ನು ಕತ್ತರಿಸಿತ್ತು. ಪೂರ್ಣಯ್ಯನವರ ಸಲಹೆಗಳನ್ನು ಅಲಕ್ಷಿಸುತ್ತಾ ಟಿಪ್ಪು ಅವರನ್ನು ಒಲ್ಲದ ಮನಸ್ಸಿನಿಂದ ದಿವಾನ ಪದವಿಯಲ್ಲಿ ಬಿಸಿ ತುಪ್ಪದಂತೆ ಮುಂದುವರಿಸಿಕೊಂಡುಹೋದ. ಇವೆಲ್ಲದರಿಂದ ಬೇಸರಗೊಂಡಿದ್ದ ಪೂರ್ಣಯ್ಯ ಯುದ್ಧದಿಂದಲೂ ದೂರ ಉಳಿದರು. ದಿವಾನರಾಗಿದ್ದರೂ ಅವರು ರಾಜವಂಶದ ಪರವಾಗಿಯೇ ಇದ್ದು ಮಹಾರಾಣಿ ಲಕ್ಷಮ್ಮಣ್ಣಿ ಅವರು 'ಪೂರ್ಣಯ್ಯ ಮೂಲಕವೆ, ಟಿಪ್ಪುವನ್ನು ಮಣಿಸಲೆಂದು ವೇದಿಕೆಯ ಸಿದ್ಧತೆಯು ಗೌಪ್ಯದಲಿ ನಡೆಸುತ್ತಾರೆ. ಟಿಪ್ಪು ಸತ್ತು ರಾಜ್ಯವನ್ನು ಯದುಕುಲದ ಅರಸನಿಗೆ ಒಪ್ಪಿಸಿದ್ದು ಪೂರ್ಣಯ್ಯನವರ 'ಮನ ಹಿಗ್ಗಿ ಕುಣಿದಿದ್ದಿತು.' ಮುಮ್ಮಡಿ ಕೃಷ್ಣರಾಜ ಒಡೆಯರಿಗೆ ಪಟ್ಟವನ್ನು ಕಟ್ಟಲು ಪೂರ್ಣಯ್ಯನವರು ನೆರವಾದರು. ಇತಿಹಾಸಕ್ಕೆ ಹೊರತಾದ ಇಂತಹ ಕೆಲವು ಬದಲಾವಣೆಗಳನ್ನು ಅವರ ಕೃತಿಯಲ್ಲಿ ನಾವು ಕಾಣಬಹುದು.

ಕೆಲವು ಐತಿಹಾಸಿಕ ಸಂಗತಿಗಳನ್ನು ಪ್ರಸ್ತಾಪಿಸುವಾಗ ಅವರು ಜನಪದಗಳ ಹಿನ್ನೆಲೆಯಲ್ಲಿ ರೂಢಿಯಾಗಿ ಬಂದಿರುವ ಹಲವು ದಂತಕಥೆಗಳನ್ನು ಮತ್ತು ಪುರಾಣದ ಉಲ್ಲೇಖಗಳನ್ನು ಸೇರಿಸಿದ್ದಾರೆ. ಈ ಮಾತನ್ನು ಸಿದ್ಧಾಚಾರ್ ಅವರೇ ತಮ್ಮ ಪ್ರಸ್ತಾಪನೆಯಲ್ಲಿ ಸ್ಪಷ್ಟಪಡಿಸುತ್ತಾರೆ. 'ಯದುರಾಯರಿಂದ ಆರಂಭವಾಗುವ ಮೈಸೂರು ಸಂಸ್ಥಾನದ ಅಂದಿನ ಕಾಲಘಟ್ಟದಲ್ಲಿ ಬರುವ ಮಂಟೇಸ್ವಾಮಿ, ರಾಚಪ್ಪಾಜಿ, ಸಿದ್ದಪ್ಪಾಜಿ, ಅಂಥತ್ತವುಳ್ಳ ರಾಜಕುಮಾರಿಯೊಬ್ಬರ ಕಥೆಯು ನಾನು ಬಾಲ್ಯದಲ್ಲಿ ಕೇಳಿರುವ ಜಾನಪದ ಕಥೆಯಾಗಿದ್ದು, ಆಧಾರಗಳು ದೊರೆಯುವುದಿಲ್ಲ. ಆದ್ದರಿಂದ ಮೊದಲೇ ತಿಳಿಸಿರುತ್ತೇನೆ, ಕಥೆಯು ಆರಂಭವಾಗುವುದು ಜನಪದದ ಕಥಾಹಂದರದ ತಿರುಳಿನ ಮೂಲಕ. ಓದಿದವರಿಗೆ ಕೆಲವರಿಗೆ ಗೊಂದಲವೋ ಕೌತುಕವೋ ಆಶ್ಚರ್ಯವೋ ಪ್ರಶ್ನೆಗಳೋ ಮೂಡಿ ಇತಿಹಾಸದ ದಾಖಲೆಗಳನ್ನು ಬಯಸಬಹುದೆಂಬ ಕಾರಣಕ್ಕಾಗಿ ಮೊದಲೇ ಸ್ಪಷ್ಟಪಡಿಸಿದ್ದೇನೆ' ಎನ್ನುತ್ತಾರೆ.

ಒಟ್ಟಿನಲ್ಲಿ ಮೈಸೂರು ಅರಸರ ಹಿರಿಮೆಗೆ ಮಾರುಹೋಗಿ ಇವರು ರಚಿಸಿರುವ ಕೃತಿಗಳಲ್ಲಿ ಐತಿಹ್ಯವಿದೆ, ಜಾನಪದವಿದೆ, ಕಥೆಗಳಿವೆ ಹಾಗೂ ಪುರಾಣದ ಪ್ರಭಾವವಿದೆ. ಸಂಶೋಧನೆಯ ಕೊರತೆ ಕಂಡುಬಂದರೂ ಯದುವಂಶದ ಇತಿಹಾಸವನ್ನು ಖಾಸಗಿ ಕಂಪನಿಯೊಂದರಲ್ಲಿ ಅಧಿಕಾರಿಯಾಗಿದ್ದು ನಿವೃತ್ತರಾದ ನಂತರ ಗದ್ಯ, ಪದ್ಯ ಎರಡೂ ಶೈಲಿಯಲ್ಲಿ ಗ್ರಂಥಗಳನ್ನು ರಚಿಸಿರುವ ಸಿದ್ಧಾಚಾರ್ ಅವರ ಪ್ರಯತ್ನವನ್ನು ಶ್ಲಾಘಿಸಬೇಕಾದ್ದೆ.



ಮೈಸೂರು ಮಹಾರಾಜ ಚರಿತೆ
ಲೇಖಕರು: ಪಿ.ಎಸ್.ಸಿದ್ಧಾಚಾರ್ (ಕವಿಮಿತ್ರ)
ಪ್ರಕಟಿತ ವರ್ಷ: 2022
ಪುಟಗಳು: 671
ಪ್ರಕಾಶಕರು: ಕವಿಮಿತ್ರ ಪ್ರಕಾಶನ, ಮೈಸೂರು



ಶ್ರೀಮನ್ಮಹಾರಾಜ ಚರಿತಾಮೃತ
ಲೇಖಕರು: ಪಿ.ಎಸ್.ಸಿದ್ಧಾಚಾರ್ (ಕವಿಮಿತ್ರ)
ಪ್ರಕಟಿತ ವರ್ಷ: 2020
ಪುಟಗಳು: 480
ಪ್ರಕಾಶಕರು: ಕವಿಮಿತ್ರ ಪ್ರಕಾಶನ, ಮೈಸೂರು

ಅಕ್ರಮ ಮರಳು ಸಾಗಾಟ ವಿರುದ್ಧ ಕ್ರಮಕ್ಕೆ ಮುಂದಾದ ಕರ್ತವ್ಯನಿರತ ಕಾನ್‌ಸ್ಟೆಬಲ್ ಮೇಲೆ ಹಲ್ಲೆ

ದೇವದುರ್ಗ ಜೆಡಿಎಸ್ ಶಾಸಕಿ ಪುತ್ರನ ವಿರುದ್ಧ ಎಫ್‌ಐಆರ್ ದಾಖಲು

ರಾಯಚೂರು: ಅಕ್ರಮವಾಗಿ ಮರಳು ಸಾಗಾಟ ಮಾಡುತ್ತಿದ್ದ ಟ್ರ್ಯಾಕ್ಟರ್ ತಡೆದ ಕರ್ತವ್ಯನಿರತ ಪೊಲೀಸ್ ಪೇದೆ ಮೇಲೆ ಹಲ್ಲೆ ನಡೆಸಿದ ಆರೋಪದ ಮೇಲೆ ದೇವದುರ್ಗ ಜೆಡಿಎಸ್ ಶಾಸಕಿ ಕರೆಮ್ಮ ನಾಯಕ್ ಅವರ ಪುತ್ರ ಸಂತೋಷ ಹಾಗೂ ಇತರ 7 ಮಂದಿ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಪೊಲೀಸರು ಸೋಮವಾರ ತಿಳಿಸಿದ್ದಾರೆ. ಭಾನುವಾರ ದೇವದುರ್ಗ ಪೊಲೀಸ್ ಠಾಣೆಯಲ್ಲಿ ನಿಯೋಜಿತರಾಗಿರುವ ಕಾನ್‌ಸ್ಟೆಬಲ್ ಹನುಮಂತರಾಯ ಅವರು ಅಕ್ರಮವಾಗಿ ಮರಳು ಸಾಗಿಸುತ್ತಿದ್ದ ಟ್ರ್ಯಾಕ್ಟರ್ ಅನ್ನು ತಡೆದು ವಾಹನ ಮತ್ತು ಅದರ ಚಾಲಕನನ್ನು ತನಿಖೆಗಾಗಿ ಠಾಣೆಗೆ ಕರೆದೊಯ್ದಾಗ ಈ ಘಟನೆ ನಡೆದಿದೆ ಎಂದು ಹೇಳಿದ್ದಾರೆ. ಪೊಲೀಸರ ಪ್ರಕಾರ, ಕಾನ್‌ಸ್ಟೆಬಲ್‌ಗೆ ನಂತರ ಶಾಸಕಿಯ ಪುತ್ರ ಸಂತೋಷ್‌ನಿಂದ ಕರೆ ಬಂದಿದ್ದು, ಇನ್‌ಸ್ಪೆಕ್ಷನ್ ಬಂಗಲೆಯಲ್ಲಿ ಸಭೆ ನಡೆಸುವಂತೆ ಸೂಚಿಸಿದ್ದಾರೆ. ಅದರಂತೆ ಕಾನ್‌ಸ್ಟೆಬಲ್ ಹನುಮಂತರಾಯ ಅವರು ಪ್ರವಾಸಿ ಮಂದಿರ ತಲುಪಿದ ನಂತರ, ಜೆಡಿಎಸ್ ಕಾರ್ಯಕರ್ತರ ಗುಂಪು ಅವರನ್ನು ಥಳಿಸಿದೆ. ಗಾಯಗೊಂಡ ಕಾನ್‌ಸ್ಟೆಬಲ್‌ನನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

ವಿಧಾನಮಂಡಲ ಅಧಿವೇಶನದಲ್ಲೂ ಮೊಳಗಿದ ಜೈ ಶ್ರೀರಾಮ್; ಪ್ರತಿಯಾಗಿ ಜೈ ಭೀಮ್ ಘೋಷಣೆ



ಬೆಂಗಳೂರು: ರಾಜ್ಯ ವಿಧಾನಮಂಡಲ ಅಧಿವೇಶನ ಸೋಮವಾರ ಆರಂಭವಾಗಿದ್ದು, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಭಾಷಣ ಮುಗಿಸುತ್ತಿದ್ದಂತೆ ಬಿಜೆಪಿ ಶಾಸಕರು 'ಜೈ ಶ್ರೀ ರಾಮ್' ಎಂದು ಕೂಗಿದ್ದು, ಇದಕ್ಕೆ ಪ್ರತಿಯಾಗಿ ಕಾಂಗ್ರೆಸ್ ಶಾಸಕರು 'ಜೈ ಭೀಮ್' ಎಂದು ಘೋಷಣೆ ಕೂಗಿದ ಘಟನೆ ನಡೆದಿದೆ.

ಅಲ್ಲದೆ ಇಂದು ಬಿಜೆಪಿ ಶಾಸಕರು ಕೇಸರಿ ಶಾಲು ಧರಿಸಿ ಕಲಾಪದಲ್ಲಿ ಪಾಲ್ಗೊಂಡಿದ್ದು ವಿಶೇಷವಾಗಿತ್ತು. ಸದನ ಆರಂಭಕ್ಕೂ ಮುನ್ನವೇ ಸದನದ ಒಳಗೆ ಕೇಸರಿ ಶಾಲು ಹಾಕಿಕೊಂಡು ಬಂದ ವಿಧಾನಸಭೆ ಸದಸ್ಯರು ಹಾಗೂ ವಿಧಾನಪರಿಷತ್ ಸದಸ್ಯರು ಜೈ ಶ್ರೀ ರಾಮ್ ಘೋಷಣೆ ಕೂಗಿದರು.

ಅಧಿವೇಶನದ ಮೊದಲ ದಿನವಾದ ಇಂದು ರಾಜ್ಯಪಾಲರು ಸದನವನ್ನು ಉದ್ದೇಶಿಸಿ ಭಾಷಣ ಮಾಡಿದರು. ಭಾಷಣ ಮುಗಿಸಿ ರಾಜ್ಯಪಾಲರು ಜೈ ಹಿಂದ್, ಜೈ ಕರ್ನಾಟಕ, ಧನ್ಯವಾದ ಎಂದು ಹೇಳುತ್ತಿದ್ದಂತೆ ಬಿಜೆಪಿ ಸದಸ್ಯರು ಜೈ ಶ್ರೀ ರಾಮ್ ಎಂದು ಘೋಷಣೆ ಕೂಗಿದರು. ಅಷ್ಟರಲ್ಲಿ ರಾಷ್ಟ್ರಗೀತೆ ಮೊಳಗಿತು. ರಾಷ್ಟ್ರಗೀತೆ ಮುಗಿಯುತ್ತಿದ್ದಂತೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ವಿಧಾನಸಭೆ ಅಧ್ಯಕ್ಷ ಯು.ಟಿ.ಖಾದರ್, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾನೂನು ಸಚಿವ ಎಚ್.ಕೆ. ಪಾಟೀಲ್ ಅವರು ಸಭೆಯಿಂದ ನಿರ್ಗಮಿಸಿದರು.

ರಾಜ್ಯಪಾಲರು ತೆರಳುವವರೆಗೂ ಬಿಜೆಪಿ ಸದಸ್ಯರು ಜೈ ಶ್ರೀರಾಮ್ ಘೋಷಣೆ ಕೂಗುತ್ತಿದ್ದರು. ಇದಕ್ಕೆ ಪ್ರತಿಯಾಗಿ ಸಚಿವರಾದ ಸಂತೋಷ್ ಲಾಡ್, ಬೈರತಿ ಸುರೇಶ್, ಕಾಂಗ್ರೆಸ್ ಶಾಸಕ ಪ್ರದೀಪ್ ಈಶ್ವರ್ ಸೇರಿದಂತೆ ಇತರರು 'ಜೈ ಭೀಮ್, ಜೈ ಸಂವಿಧಾನ' ಎಂದು ಘೋಷಣೆ ಕೂಗಿದರು.

ಇನ್ನು ಎನ್‌ಡಿಎ ಮೈತ್ರಿ ಜೆಡಿಎಸ್ ಸದಸ್ಯರು ಯಾವುದೇ ಘೋಷಣೆ ಕೂಗದೆ ತಟಸ್ಥವಾಗಿ ಉಳಿದರು. ಮಂಡ್ಯದಲ್ಲಿ ಕೆರಗೋಡು ಪ್ರತಿಭಟನೆಯ ಸಂದರ್ಭದಲ್ಲಿ ಮಾಜಿ ಸಿಎಂ ಎಚ್ ಡಿ ಕುಮಾರಸ್ವಾಮಿ ಕೇಸರಿ ತೊಟ್ಟಿದ್ದು ಚರ್ಚೆಗೆ ಗ್ರಾಸವಾಗಿತ್ತು. ಈ ವೇಳೆ ಜೆಡಿಎಸ್ ವರಿಷ್ಠರೂ ಆಗಿರುವ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರು ಕೇಸರಿ ಶಾಲು ಧರಿಸಿದ್ದಕ್ಕೆ ಆಕ್ಷೇಪ ವ್ಯಕ್ತಪಡಿಸಿದ್ದರು. ಆ ಬಳಿಕ ಜೆಡಿಎಸ್ ಕೂಡ ಕೇಸರಿ ಶಾಲು ವಿವಾದದಿಂದ ದೂರ ಉಳಿದಿತ್ತು. ಸೋಮವಾರ ಸಹ ವಿಧಾನಸಭೆಯಲ್ಲಿ ಬಿಜೆಪಿ ಸದಸ್ಯರು ಕೇಸರಿ ತೊಟ್ಟರೂ ಜೆಡಿಎಸ್ ಸದಸ್ಯರು ಕೇಸರಿಯಿಂದ ಅಂತರ ಕಾಯ್ದುಕೊಂಡಿರುವುದು ಕಂಡು ಬಂದಿತ್ತು.

ಇದಕ್ಕೂ ಮುನ್ನ ವಿಧಾನಮಂಡಲದ ಜಂಟಿ ಅವೇಶನ ಉದ್ದೇಶಿಸಿ ಭಾಷಣ ಮಾಡಲು ಆಗಮಿಸಿದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರನ್ನು ಸಂಪ್ರದಾಯದಂತೆ ಸ್ವಾಗತಿಸಲಾಯಿತು. ರಾಜಭವನದಿಂದ ವಿಶೇಷ ವಾಹನದಲ್ಲಿ ಆಗಮಿಸಿದ ಅವರನ್ನು ಶಿಷ್ಟಾಚಾರದಂತೆ ಶಾಸಕರ ಭವನ ಪ್ರವೇಶಿಸುವ ಗೇಟ್ ಬಳಿ ಅಶ್ವದಳದ ಮೂಲಕ ಬರಮಾಡಿಕೊಳ್ಳಲಾಯಿತು. ನಂತರ ವಿಧಾನಸೌಧ ಮುಂಭಾಗ ಆಗಮಿಸಿದ ರಾಜ್ಯಪಾಲರನ್ನು ವಿಧಾನಸಭೆಯ ಸಭಾಧ್ಯಕ್ಷ ಯು.ಟಿ.ಖಾದರ್, ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ಹೂಗುಚ್ಛ ನೀಡಿ ಬರಮಾಡಿಕೊಂಡರು.

ಬಳಿಕ ವಿಧಾನಸಭೆ ಪ್ರಾಂಗಣ ಪ್ರವೇಶಿಸುತ್ತಿದ್ದಂತೆ ಸಂಪ್ರದಾಯದಂತೆ ಪೊಲೀಸ್ ಬ್ಯಾಂಡ್ ಮೂಲಕ ಸ್ವಾಗತ ಕೋರಲಾಯಿತು. ಬಳಿಕ ಸದನದ ಸದಸ್ಯರೆಲ್ಲರೂ ಎದ್ದು ನಿಂತು ರಾಜ್ಯಪಾಲರಿಗೆ ಸ್ವಾಗತ ಕೋರಿದರು.

ದೆಹಲಿಗೆ ತೆರಳುತ್ತಿದ್ದ ರಾಜ್ಯದ ರೈತರ ಬಂಧಿಸಿದ ಮಧ್ಯಪ್ರದೇಶ ಸರ್ಕಾರದ ಕ್ರಮ ಖಂಡನೀಯ

ಮುಖ್ಯಮಂತ್ರಿ ಸಿದ್ದರಾಮಯ್ಯ ಆಕ್ರೋಶ



ಬೆಂಗಳೂರು: ದೆಹಲಿಯಲ್ಲಿ ನಾಳೆ ನಡೆಯಲಿರುವ ಪ್ರತಿ ಭಟನೆಯಲ್ಲಿ ಪಾಲ್ಗೊಳ್ಳಲು ದೆಹಲಿಗೆ ಹೋಗುತ್ತಿದ್ದ ರಾಜ್ಯದ ರೈತರನ್ನು ಭೋಪಾಲ್‌ನಲ್ಲಿ ಬಂಧಿಸಿರುವ ಮಧ್ಯಪ್ರದೇಶ ಸರ್ಕಾರದ ಕ್ರಮ ಅತ್ಯಂತ ಖಂಡನೀಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಸಿಎಂ ಸಿದ್ದರಾಮಯ್ಯ, ಬಂಧಿಸಲಾದ ರಾಜ್ಯದ ನಮ್ಮ ಎಲ್ಲ ರೈತರನ್ನು ತಕ್ಷಣ ಬಿಡುಗಡೆಗೊಳಿಸಿ ನಾಳೆ ದೆಹಲಿಯ ಜಂತರ್ ಮಂತರ್‌ನಲ್ಲಿ ನಡೆಯಲಿರುವ ಪ್ರತಿಭಟನೆಯಲ್ಲಿ ಭಾಗವಹಿಸಲು ಅವಕಾಶ ನೀಡಬೇಕು ಎಂದು ಮಧ್ಯಪ್ರದೇಶ ಸರ್ಕಾರವನ್ನು ಒತ್ತಾಯಿಸಿದ್ದಾರೆ. ನಮ್ಮ ರೈತರನ್ನು ಬಂಧಿಸಿರುವುದು ಮಧ್ಯಪ್ರದೇಶದ ಸರ್ಕಾರವಾದರೂ ಈ ದುಷ್ಕೃತ್ಯದ ಹಿಂದಿನ ಕ್ರಿಮಿನಲ್ ಮೆದುಳು ಪ್ರಧಾನಿ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಎನ್ನುವುದು ಸ್ಪಷ್ಟ. ಈ ರೀತಿ ಬಂಧಿಸಿ, ಬೆದರಿಸಿ ರೈತರ ಹೋರಾಟವನ್ನು ಹತ್ತಿಕ್ಕಲಾಗದು. ಇಂತಹ ದಬ್ಬಾಳಿಕೆಯಿಂದ ಇನ್ನಷ್ಟು ರೈತರು ಬೀದಿಗಿಳಿಯಬಹುದೇ ಹೊರತು ಮಣ್ಣಿನ ಮಕ್ಕಳ ಹೋರಾಟ ನಿಲ್ಲದು. ಶಾಂತಿ–ಸುವ್ಯವಸ್ಥೆಯ ಕಾಳಜಿಯನ್ನು ಕೇಂದ್ರ ಸರ್ಕಾರ ಹೊಂದಿದ್ದರೆ ತಕ್ಷಣ ರೈತರ ಬೇಡಿಕೆಗಳನ್ನು ಈಡೇರಿಸಿ ಸಮಸ್ಯೆ ಬಗೆಹರಿಸಬೇಕೇ ಹೊರತು ಈ ರೀತಿ ದಮನ–ದೌರ್ಜನ್ಯ ನಡೆಸಿ ರೈತರ ಬಾಯಿ ಮುಚ್ಚಿಸುವುದಲ್ಲ ಎಂದು ಕೇಂದ್ರದ ವಿರುದ್ಧ ಕಿಡಿಕಾರಿದ್ದಾರೆ. ಕೇಂದ್ರದಲ್ಲಿ ಇರಲಿ, ರಾಜ್ಯಗಳಲ್ಲಿ ಇರಲಿ ಬಿಜೆಪಿ ಕೈಗೆ ಅಧಿಕಾರ ಬಂದ ಕೂಡಲೇ ಅವರು ಮೊದಲು ದಂಡ ಪ್ರಯೋಗ ಮಾಡುವುದು ಅನ್ನದಾತರ ಮೇಲೆ ಎನ್ನುವುದಕ್ಕೆ ಇತಿಹಾಸ ಸಾಕ್ಷಿ. ಕರ್ನಾಟಕದಲ್ಲಿ ಮೊದಲ ಬಾರಿ ಅಧಿಕಾರಕ್ಕೆ ಬಂದಿದ್ದ ಬಿಜೆಪಿ, ಗೊಬ್ಬರ ಕೇಳಿದ್ದ ರೈತರನ್ನು ನಿರ್ದಯವಾಗಿ ಬಿ.ಎಸ್.ಯಡಿಯೂರಪ್ಪ ನೇತೃತ್ವದ ಸರ್ಕಾರ ಗುಂಡಿಕ್ಕಿ ಕೊಂದಿತ್ತು. ಕೇಂದ್ರದ ನರೇಂದ್ರ ಮೋದಿಯವರ ಸರ್ಕಾರ ದೆಹಲಿ ಮತ್ತು ಉತ್ತರಪ್ರದೇಶದಲ್ಲಿ ಪ್ರತಿಭಟನಾನಿರತ ರೈತರ ಮೇಲೆ ನಡೆಸಿದ್ದ ದೌರ್ಜನ್ಯದಲ್ಲಿ ಹಲವಾರು ರೈತರು ಸಾವಿಗೀಡಾಗಿದ್ದರು. ನರೇಂದ್ರ ಮೋದಿ ಅವರ ಸರ್ಕಾರದ ಈಗಿನ ಕ್ರಮಗಳನ್ನು ನೋಡಿದರೆ ರೈತರನ್ನು ಬೆದರಿಸಿ ತಲೆ ಎತ್ತದಂತೆ ಮಾಡುವುದೇ ಅವರ ಮುಖ್ಯ ಉದ್ದೇಶವಿದ್ದಂತೆ ಕಾಣುತ್ತಿದೆ ಎಂದು ವಾಗ್ದಾಳಿ ನಡೆಸಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Vishveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ಮಿತ್ರ

ಸಿದ್ದರಾಮಯ್ಯ ಸರ್ಕಾರದಲ್ಲಿ 90 ಮಂದಿಗೆ ಕ್ಯಾಬಿನೆಟ್ ದರ್ಜೆ!

ಇತಿಹಾಸದಲ್ಲಿ ಇದೇ ಮೊದಲು; 'ಅಧಿಕಾರ ಮಹಾ ದರ್ಬಾರ್', ಭಾರಿ ಆರ್ಥಿಕ ಹೊರೆ





ಬೆಂಗಳೂರು: ಕ್ಯಾಬಿನೆಟ್ ದರ್ಜೆ ಸ್ಥಾನಮಾನ ನೀಡುವಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕರ್ನಾಟಕ ಸರ್ಕಾರ ದಾಖಲೆ ಸೃಷ್ಟಿಸಿದೆ. ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಸುಮಾರು 90 ಜನರಿಗೆ ಕ್ಯಾಬಿನೆಟ್ ದರ್ಜೆ ಸ್ಥಾನಮಾನವನ್ನು ನೀಡಲಾಗಿದೆ.

ಇದರಲ್ಲಿ 77 ಶಾಸಕರು ಹಾಗೂ ಜನಪ್ರತಿನಿಧಿಗಳಲ್ಲದ 9 ಮಂದಿಗೆ ಕ್ಯಾಬಿನೆಟ್ ರ್‍ಯಾಂಕ್ ನೀಡಲಾಗಿದ್ದು, ಆರ್ಥಿಕ ಇಲಾಖೆ ಭಾರಿ ವೆಚ್ಚ ಭರಿಸಬೇಕಿದೆ.

2023ರ ವಿಧಾನಸಭಾ ಚುನಾವಣೆಯಲ್ಲಿ 135 ಶಾಸಕರ ಗೆಲುವಿನೊಂದಿಗೆ ಕಾಂಗ್ರೆಸ್ ಬಹುದೊಡ್ಡ ವಿಜಯವನ್ನು ಕರ್ನಾಟಕದಲ್ಲಿ ದಾಖಲಿಸಿತ್ತು. 135 ಶಾಸಕರ ಪೈಕಿ 77 ಶಾಸಕರಿಗೆ ಹಾಗೂ 4 ಜನ ವಿಧಾನಪರಿಷತ್ ಸದಸ್ಯರಿಗೆ ಕ್ಯಾಬಿನೆಟ್ ದರ್ಜೆಯ ಸ್ಥಾನಮಾನವನ್ನು ನೀಡಲಾಗಿದೆ. ಇದರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರು, ನಿಗಮ ಮಂಡಳಿಗಳ ಮುಖ್ಯಸ್ಥರು, ಮುಖ್ಯಮಂತ್ರಿಗಳ ವಿವಿಧ ಸಲಹೆಗಾರರು, ಪರಿಷತ್ ಹಾಗೂ ವಿಧಾನಸಭೆಯ ಆಡಳಿತ ಪಕ್ಷದ ಮುಖ್ಯ ಸಚೇತಕರು ಇದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ತಮಗೆ 9 ಜನ ಸಲಹೆಗಾರರನ್ನು ನೇಮಕ ಮಾಡಿದ್ದು, ಇವರು ಯಾವುದೇ ಸದನದ ಸದಸ್ಯರಲ್ಲದಿದ್ದರೂ ಎಲ್ಲರಿಗೂ ಕ್ಯಾಬಿನೆಟ್ ದರ್ಜೆಯ ಸ್ಥಾನಮಾನ ನೀಡಲಾಗಿದೆ. ಇದರಲ್ಲಿ ಕಾಂಗ್ರೆಸ್ ವಿಜಯದಲ್ಲಿ ಪ್ರಮುಖ ಪಾತ್ರ ವಹಿಸಿದ್ದ ಚುನಾವಣಾ ತಂತ್ರಗಾರ ಸುನಿಲ್ ಕನಗೋಡು, ಮುಖ್ಯಮಂತ್ರಿಗಳ ವೈದ್ಯಕೀಯ ಸಲಹೆಗಾರ ಡಾ.ಎಚ್.ರವಿಕುಮಾರ್, ಮಾಜಿ ಐಎಎಸ್ ಅಧಿಕಾರಿ ಹಾಗೂ ಬ್ರಾಂಡ್ ಬೆಂಗಳೂರು ತಜ್ಞ ಬಿ.ಎಸ್.ಪಾಟೀಲ್ ಹಾಗೂ ಎನ್‌ಆರ್‌ಐ ಸೆಲ್‌ನ ಉಪಾಧ್ಯಕ್ಷೆ ಡಾ.ಆರತಿ ಕೃಷ್ಣ ಇದ್ದಾರೆ.

ಸರ್ಕಾರಕ್ಕೆ ಆರ್ಥಿಕ ಹೊರೆ

ಕ್ಯಾಬಿನೆಟ್ ದರ್ಜೆ ಸ್ಥಾನಮಾನ ಪಡೆದವರು ಹೆಚ್ಚಿನ ವೇತನ, ಗರಿಷ್ಠ 14 ಸಿಬ್ಬಂದಿ ನೇಮಿಸಿಕೊಳ್ಳುವ ಅವಕಾಶ, ಕಾರು ಮತ್ತು ಪೊಲೀಸ್ ಎಸ್ಕಾರ್ಟ್ ಸೌಲಭ್ಯವನ್ನು ಪಡೆಯಲಿದ್ದಾರೆ. ಇಷ್ಟು ಜನಕ್ಕೆ ಕ್ಯಾಬಿನೆಟ್ ದರ್ಜೆ ಸ್ಥಾನಮಾನ ನೀಡಿರುವುದರಿಂದ ಸರ್ಕಾರಕ್ಕೆ ಆರ್ಥಿಕವಾಗಿ ಭಾರಿ ವೆಚ್ಚ ಆಗಲಿದೆ. ಈ ಹಿನ್ನೆಲೆಯಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಅಧಿಕಾರಿಗಳು ನಿಗಮ–ಮಂಡಳಿಗಳು, ಮುಖ್ಯ ಸಚೇತಕರು ಅಥವಾ ರಾಜಕೀಯ ಕಾರ್ಯದರ್ಶಿಗಳಿಗೆ ಕ್ಯಾಬಿನೆಟ್ ದರ್ಜೆ ಸ್ಥಾನಮಾನ ನೀಡಬಾರದು ಎಂದು ಅಭಿಪ್ರಾಯಪಡುತ್ತಾರೆ.

ಈ ಹಿಂದೆ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರು ಕೂಡ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರದ ನಡೆಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದರು. ಕ್ಯಾಬಿನೆಟ್ ದರ್ಜೆಯ ಸ್ಥಾನಮಾನ ನೀಡುವ ಸಂಖ್ಯೆ ಕರ್ನಾಟಕ ವಿಧಾನಸಭೆಯ ಒಟ್ಟು ಸದಸ್ಯರ ಪೈಕಿ ಶೇ.15 ಮೀರಬಾರದು ಎಂಬ ನಿಯಮ ಇದೆ ಎಂದು ಹೇಳಿದ್ದರು. ಆದರೆ, ಈಗ ಈ ಸಂಖ್ಯೆ ಶೇ.40ನ್ನು ಮೀರಿದ್ದು, ಅಲಿಖಿತ ನಿಯಮವನ್ನು ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಮುರಿದಿದೆ ಎನ್ನಲಾಗಿದೆ.

ಅಸಮಾಧಾನಿತರ ಸಮಾಧಾನಪಡಿಸುವ ತಂತ್ರ!

135 ಶಾಸಕರ ಪೈಕಿ 77 ಶಾಸಕರಿಗೆ ಕ್ಯಾಬಿನೆಟ್ ಸ್ಥಾನಮಾನ ನೀಡಿರುವುದರ ಹಿಂದೆ ಸಚಿವ ಸ್ಥಾನ ವಂಚಿತರನ್ನು ಸಮಾಧಾನಪಡಿಸುವ ತಂತ್ರ ಇದೆ ಎಂದು ಹೇಳಲಾಗಿದೆ. ಅದಕ್ಕಾಗಿಯೇ ಹಲವು ಹಿರಿಯ ಶಾಸಕರಿಗೆ ಸಿಎಂ ರಾಜಕೀಯ ಕಾರ್ಯದರ್ಶಿ ಸ್ಥಾನಗಳನ್ನು, ಕ್ಯಾಬಿನೆಟ್ ದರ್ಜೆ ಸ್ಥಾನಮಾನದೊಂದಿಗೆ ನೀಡಲಾಗಿದೆ.

ರೈತಪರ ಕಾರ್ಯಕ್ರಮ ಜಾರಿಗೆ ಸಿದ್ದರಾಮಯ್ಯರಿಗೆ ಮನವಿ

- ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ವಿವರಣೆ
- ರೈತರಿಗೆ ಉಚಿತ ವಿದ್ಯುತ್ ಸಂಪರ್ಕ, ತೋಟದ ಮನೆಗೆ ಗೃಹ ಬಳಕೆ ವಿದ್ಯುತ್ ಶುಲ್ಕಗಳ ಯಥಾಸ್ಥಿತಿಗೆ ಆಗ್ರಹ

ಮೈಸೂರು,ಫೆ.12(ಎಂಟಿವೈ)– ಕೃಷಿ ಕ್ಷೇತ್ರದಲ್ಲಿ ಕರ್ನಾಟಕವನ್ನು ಮಾದರಿಯಾಗಿ ಮಾಡಬೇಕೆಂಬ ಉದ್ದೇಶದಿಂದ ಈ ಬಾರಿಯ ರಾಜ್ಯ ಬಜೆಟ್‌ನಲ್ಲಿ ರೈತಪರ ಕಾರ್ಯಕ್ರಮ ಜಾರಿಗೊಳಿಸಬೇಕು. ರೈತ ಸಮುದಾಯದ ಹಕ್ಕೊತ್ತಾಯಗಳ ಈಡೇರಿಕೆಗಾಗಿ ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ರಾಜ್ಯ ರೈತ ಸಂಘ ಮನವಿ ಸಲ್ಲಿಸಿದೆ ಎಂದು ರಾಜ್ಯ ರೈತ ಸಂಘ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ತಿಳಿಸಿದ್ದಾರೆ.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ರಾಜ್ಯ ಸರ್ಕಾರಕ್ಕೆ ಸಲ್ಲಿಸಿದ ಕೃಷಿ ಕ್ಷೇತ್ರದ ಬೇಡಿಕೆಯುಳ್ಳ ಕಿರುಹೊತ್ತಿಗೆ ಬಿಡುಗಡೆ ಮಾಡಿದರು.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ಸರ್ಕಾರದ ಹತ್ತು ವರ್ಷಗಳ ಕೃಷಿ ನೀತಿ ಹೇಗಿರಬೇಕು ಎಂಬ ಪರಿಕಲ್ಪನೆಯೊಡನೆ ಅಲ್ಪಕಾಲೀನ ಹಾಗೂ ದೀರ್ಘಕಾಲೀನ ಹಕ್ಕೊತ್ತಾಯಗಳನ್ನು ಸರ್ಕಾರದ ಮುಂದೆ ರೈತ ಸಂಘ ಇಟ್ಟಿದೆ. ನಾವು ನೂರೆಂಟು ನಿರೀಕ್ಷೆ ಇಟ್ಟುಕೊಂಡು ಮನವಿ ಸಲ್ಲಿಸಿದ್ದೇವೆ. ಅಲ್ಲದೆ, ರಾಜ್ಯ ಸರ್ಕಾರ ತನ್ನ ಆರ್ಥಿಕ ಇತಿಮಿತಿಯೊಳಗೆ ಕೃಷಿ ಕ್ಷೇತ್ರಕ್ಕೆ ಏನೇನು ಮಾಡಬಹುದು ಎಂಬ ಸಲಹೆಯನ್ನೂ ನೀಡಿದ್ದೇವೆ. ಬರಮುಕ್ತ ಕರ್ನಾಟಕವಾಗಿಸಲು ಕೈಗೊಳ್ಳಬೇಕಾದ ಕ್ರಮವನ್ನು ಸರ್ಕಾರದ ಗಮನಕ್ಕೆ ತಂದಿದ್ದೇವೆ ಎಂದು ವಿವರಿಸಿದರು.

ಕೃಷಿ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಸಂಪರ್ಕ, ತೋಟದ ಮನೆಯಲ್ಲಿ ಇರುವವರಿಗೆ ಗೃಹ ಬಳಕೆಯ ವಿದ್ಯುತ್, ಸಣ್ಣ ಕಾಫಿ ಬೆಳೆಗಾರರಿಗೆ ವಿದ್ಯುತ್ ಸಬ್ಸಿಡಿ, ಹದ್ದುಬಸ್ತು, ಪೋಡಿ ದುರಸ್ತಿ, ಸ್ಕೆಚ್, ಹೌಸಿಂಗ್ ಇ–ಸ್ವತ್ತು ದರ ಮೊದಲು ಇದ್ದಷ್ಟೇ ದರ ಮುಂದುವರೆಸಬೇಕು. ಬರದ ಕಾರಣ ರೈತರಿಂದ ಬಲವಂತವಾಗಿ ಸಾಲ ವಸೂಲಾತಿ ಮಾಡುವುದನ್ನು ನಿಲ್ಲಿಸಬೇಕು. 2018ರಲ್ಲಿ ಘೋಷಿಸಿದ ಸಾಲ ಮನ್ನಾ ಪ್ರಯೋಜನ ಎಲ್ಲ ರೈತರಿಗೂ ಸಿಗುವಂತೆ ನೋಡಿಕೊಳ್ಳಬೇಕು ಎಂದು ಒತ್ತಾಯಿಸಿದರು. ಬಿಸಿಯೂಟ, ಅಂಗನವಾಡಿ, ಹಾಸ್ಟೆಲ್, ಜೈಲು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸೇರಿದಂತೆ ಇನ್ನಿತರ ಇಲಾಖೆಗಳಿಗೆ ಎಲ್ಲ ಬಗೆಯ ಕೃಷಿ ಉತ್ಪನ್ನಗಳು ಮತ್ತು ಸಂಸ್ಕರಿತ ಆಹಾರ ಪದಾರ್ಥಗಳನ್ನು ಕಡ್ಡಾಯವಾಗಿ ರೈತ ಸಹಕಾರಿಗಳು, ನೋಂದಾಯಿತ ಸ್ವಸಹಾಯ ಸಂಘಗಳ ಮೂಲಕವೇ ಖರೀದಿಸುವ ನಿರ್ಧಾರ ಕೈಗೊಳ್ಳಬೇಕು ಎಂದು ಸಲಹೆ ನೀಡಲಾಗಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ರೈತ ಸಂಘದ ಮುಖಂಡರಾದ ಹೊಸೂರು ಕುಮಾರ್, ಹೊಸಕೋಟೆ ಬಸವರಾಜು, ನಾಗನಹಳ್ಳಿ ವಿಜೇಂದ್ರ, ಮಂಡಕಳ್ಳಿ ಮಹೇಶ್, ಪಿ.ಮರಂಕಯ್ಯ ಇದ್ದರು.

> ಇತ್ತೀಚಿನ ದಿನಗಳಲ್ಲಿ ಕೃಷಿ ವ್ಯವಸ್ಥೆ ದಿಕ್ಕು ತಪ್ಪಿರುವುದರಿಂದ ರೈತ ಸಮುದಾಯದ ಮೇಲೆ ಹಲವು ದುಷ್ಪರಿಣಾಮವುಂಟಾಗುತ್ತಿವೆ. ರೈತರ ಆತ್ಮಹತ್ಯೆ ಪ್ರಕರಣ ಹೆಚ್ಚುತ್ತಿದೆ. ಅನೇಕ ಸಮಸ್ಯೆ ಸುಳಿಯಲ್ಲಿ ಸಿಲುಕಿರುವ ರೈತರು ಖಿನ್ನತೆಗೆ ಒಳಗಾಗುತ್ತಿದ್ದಾರೆ. ಕೃಷಿ ಕ್ಷೇತ್ರದ ಬೆಳೆಗೆ ಉತ್ತಮ ಬೆಲೆ ಸಿಗದ ಕಾರಣ, ರೈತರಿಗೆ ಹಣ್ಣು ಸಿಗುತ್ತಿಲ್ಲ. ಹೀಗಾಗಿ ಕೃಷಿ ಲಾಭದಾಯಕವಾಗಿಸಲು ಸರ್ಕಾರ ಕ್ರಮ ಕೈಗೊಳ್ಳಬೇಕು. –ಬಡಗಲಪುರ ನಾಗೇಂದ್ರ

ಅಶೋಕಪುರಂ ಬಳಿ ರಸ್ತೆಗುರುಳಿದ ಭಾರೀ ಗಾತ್ರದ ಮರ



ಮೈಸೂರಿನ ಅಶೋಕಪುರಂ ಬಳಿ ಸೋಮವಾರ ಭಾರಿ ಗಾತ್ರದ ಮರವೊಂದು ರಸ್ತೆಗೆ ಉರುಳಿ ಬಿದ್ದಿರುವುದನ್ನು ಕಾಣಬಹುದು.

ಕೆಲಕಾಲ ವಾಹನ ಸಂಚಾರಕ್ಕೆ ಅಡ್ಡಿ

ಮೈಸೂರು,ಫೆ12(ಆರ್‌ಕೆ)–ಕಾಂಡ ಟೊಳ್ಳಾಗಿದ್ದು ಭಾರಿ ಗಾತ್ರದ ಮರವೊಂದು ರಸ್ತೆಗೆ ಉರುಳಿ ಬಿದ್ದ ಪರಿಣಾಮ ಕೆಲ ಸಮಯ ವಾಹನ ಸಂಚಾರಕ್ಕೆ ಅಡ್ಡಿಯುಂಟಾದ ಘಟನೆ ಮೈಸೂರಿನ ಅಶೋಕಪುರಂ ಬಳಿ ಇಂದು ಬೆಳಿಗ್ಗೆ ಸಂಭವಿಸಿದೆ.

ಅಶೋಕಪುರಂ 13ನೇ ಕ್ರಾಸ್‌ನ ಎನ್‌ಐಇ ಮಹಿಳಾ ವಿದ್ಯಾರ್ಥಿನಿಲಯ ಸಮೀಪ ಬೆಳಿಗ್ಗೆ 7 ಗಂಟೆಗೆ ವೇಳೆ ರಸ್ತೆ ಬದಿಯ ಮರ ಉರುಳಿಬಿದ್ದಿತು. ಬೆಳಗಿನ ಜಾವವಾದ ಕಾರಣ ರಸ್ತೆಯಲ್ಲಿ ವಾಹನ, ಜನ ಸಂಚಾರವಿರದಿದ್ದರಿಂದ ಅದೃಷ್ಟವಶಾತ್ ಪ್ರಾಣಾಪಾಯ ಸಂಭವಿಸಲಿಲ್ಲ.

ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಮೈಸೂರು ಮಹಾನಗರ ಪಾಲಿಕೆ ಅಭಯ–1 ತಂಡದ ಸಿಬ್ಬಂದಿ ನೆಲಕ್ಕುರುಳಿದ ಮರವನ್ನು ಕತ್ತರಿಸಿ ತೆರವುಗೊಳಿಸಲೆತ್ನಿಸಿದರೂ ಕೆಲವರು ಪ್ರತಿಭಟನೆ ನಡೆಸಿ ಕಾರ್ಯಾಚರಣೆಗೆ ಅಡ್ಡಿಯುಂಟು ಮಾಡಿದರು. ಪರಿಣಾಮ ಆ ಮಾರ್ಗ ಕೆಲ ಕಾಲ ವಾಹನ ಸಂಚಾರಕ್ಕೆ ಅಡ್ಡಿಯುಂಟಾಯಿತು. ಅದರಿಂದ ಅಸಮಾಧಾನಗೊಂಡ ವಾಹನ ಸವಾರರು ಸಮಸ್ಯೆ ಇದ್ದರೆ ಇತ್ಯರ್ಥ ಮಾಡಿಕೊಳ್ಳಿ, ಮೊದಲು ಮರ ತೆರವುಗೊಳಿಸಲು ಬಿಡಿ ಎಂದಾಗ ಸ್ಥಳೀಯ ನಿವಾಸಿಗಳು, ಮರದ ಬುಡದಲ್ಲಿ ಕಿಡಿಗೇಡಿಗಳು ಬೆಂಕಿ ಹಾಕುವುದರಿಂದ ಕಾಂಡ ಟೊಳ್ಳಾಗಿ ಉರುಳಿ ಬೀಳಲು ಕಾರಣ ಎಂದು ಆರೋಪಿಸಿದರು.

ಕಡೆಗೆ ಅರಣ್ಯ ಇಲಾಖೆ ಅಧಿಕಾರಿಗಳು ಮಧ್ಯೆ ಪ್ರವೇಶಿಸಿ ಆ ಸಂಬಂಧ ಮುಂದೆ ಕ್ರಮ ವಹಿಸುವುದಾಗಿ ತಿಳಿಸಿದ ಬಳಿಕ ಮರ ತೆರವುಗೊಳಿಸಲು ಅನುವು ಮಾಡಿಕೊಟ್ಟರು. ಅಭಯ–1ರ ಡಿ.ಮಂಜುನಾಥ, ಶ್ರೇಯಸ್, ರವಿಕುಮಾರ್ ಹಾಗೂ ಇತರರು ಅರಣ್ಯ ಸಿಬ್ಬಂದಿಗಳೊಂದಿಗೆ ರಸ್ತೆಗೆ ಅಡ್ಡಲಾಗಿ ಬಿದ್ದಿದ್ದ ಮರ ತೆರವುಗೊಳಿಸಿದ ಬಳಿಕ ವಾಹನ ಸಂಚಾರ ಸುಗಮಗೊಂಡಿತು. ಇತ್ತೀಚೆಗಷ್ಟೇ ಬೋಗಾದಿ ರಸ್ತೆಯ ಕುಕ್ಕರಹಳ್ಳಿ ಕೆರೆ ಸಮೀಪ ಒಣಗಿದ ಅರಳೀಮರದ ರೆಂಬೆ ಉರುಳಿ ಬಿದ್ದು ಹಿರಿಯ ನಾಗರಿಕರೊಬ್ಬರು ಸಾವನ್ನಪ್ಪಿದ ಬೆನ್ನಲ್ಲೇ ಇದೀಗ ಅಶೋಕಪುರಂ ಬಳಿ ಮರವೊಂದು ಬುಡ ಸಮೇತ ಉರುಳಿ ಬಿದ್ದಿದೆ.

ರಾಜ್ಯಸಭೆ ಚುನಾವಣೆ; ಐದನೇ ಅಭ್ಯರ್ಥಿ ಕಣಕ್ಕಿಳಿಸಲು ಬಿಜೆಪಿ–ಜೆಡಿಎಸ್ ಚಿಂತನೆ

ಸಾಧ್ಯವಾದರೆ; ಪ್ರಕಾಶ್ ಶೆಟ್ಟಿ, ಕುಪೇಂದ್ರ ರೆಡ್ಡಿ, ಬಿ.ಎಂ.ಫಾರೂಕ್ ಅಭ್ಯರ್ಥಿ!

ಬೆಂಗಳೂರು, ಫೆ.12(ಕೆಎಂಶಿ)– ವಿಧಾನಸಭೆಯಿಂದ ರಾಜ್ಯಸಭೆಯ ನಾಲ್ಕು ಸ್ಥಾನಗಳಿಗೆ ಇದೇ 27ರಂದು ನಡೆಯಲಿರುವ ದ್ವೈವಾರ್ಷಿಕ ಚುನಾವಣೆಗೆ ಬಿಜೆಪಿ–ಜೆಡಿಎಸ್ ಎನ್‌ಡಿಎ ಕೂಟದಿಂದ 5ನೇ ಅಭ್ಯರ್ಥಿಯನ್ನು ನಿಲ್ಲಿಸುವ ಚಿಂತನೆಯಲ್ಲಿದೆ. ಈಗಾಗಲೇ ಸುಲಭವಾಗಿ ಗೆಲ್ಲಬಹುದಾದ ಒಂದು ಸ್ಥಾನಕ್ಕೆ ನಾರಾಯಣ ಬಾಂಡಗೆ ಅವರನ್ನು ಅಭ್ಯರ್ಥಿಯನ್ನಾಗಿ ಮಾಡಿದೆ. ಉಳಿದಿರುವ ತಮ್ಮ ಹೆಚ್ಚುವರಿ ಮತಗಳ ಜೊತೆಗೆ ಕಾಂಗ್ರೆಸ್ ಹಾಗೂ ಪಕ್ಷೇತರ ಶಾಸಕರ ಮತ ಪಡೆದು ಗೆಲ್ಲಬಹುದಾದ ವ್ಯಕ್ತಿಗಾಗಿ ತಲಾಶ್ ಮುಂದುವರೆದಿದೆ.

ಉದ್ಯಮಿಗಳಾದ ಪ್ರಕಾಶ್ ಶೆಟ್ಟಿ, ಕುಪೇಂದ್ರ ರೆಡ್ಡಿ ಹಾಗೂ ಬಿ.ಎಂ.ಫಾರೂಕ್ ಅವರ ಹೆಸರುಗಳು ಮುಂಚೂಣಿಯಲ್ಲಿವೆ.

ಎರಡನೇ ಅಭ್ಯರ್ಥಿ ಕಣಕ್ಕಿಳಿಸುವ ಬಗ್ಗೆ ಪಕ್ಷದಲ್ಲೇ ಪರ–ವಿರೋಧವಿದೆ, ಲೋಕಸಭಾ ಚುನಾವಣಾ ಸಮೀಪದಲ್ಲಿ ಇಕ್ಕಟ್ಟಿಗೆ ಸಿಲುಕುವುದು ಬೇಡ, ಕಾಂಗ್ರೆಸ್ ಸರ್ಕಾರದಲ್ಲಿ ಬಲಿಷ್ಠರಿದ್ದಾರೆ, ಅವರು ನಮ್ಮವರನ್ನೇ ಖರೀದಿಸಿದರೆ ಮುಖಭಂಗಕ್ಕೆ ಒಳಗಾಗುತ್ತೇವೆ ಎಂದು ಪಕ್ಷದ ನಾಯಕರುಗಳಿಗೆ ಮನವರಿಕೆ ಮಾಡಿದ್ದಾರೆ.

ವಿಧಾನಸಭೆಯಲ್ಲಿನ ಸದಸ್ಯ ಬಲದ ಆಧಾರದ ಮೇಲೆ ಕಾಂಗ್ರೆಸ್‌ಗೆ ಸುಲಭವಾಗಿ ಮೂರು ಸ್ಥಾನಗಳು ದೊರೆಯಲಿದ್ದು, ಅಭ್ಯರ್ಥಿಗಳ ಆಯ್ಕೆಗೆ ಬುಧವಾರ ನಗರದಲ್ಲೇ ಕೇಂದ್ರೀಯ ಚುನಾವಣಾ ಸಮಿತಿ ಸಭೆ ನಡೆಯಲಿದೆ. ಸಭೆಯಲ್ಲಿ ಮೂವರು ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ, ಅಂದೇ ನಾಮಪತ್ರ ಸಲ್ಲಿಸುವ ಸಾಧ್ಯತೆ ಇದೆ. ಚುನಾವಣಾ ಸಮಿತಿ ಸಭೆಯಲ್ಲಿ ಪಾಲ್ಗೊಳ್ಳಲು ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಲ್ಲಿ ಒಬ್ಬರಾದ ಮುಕುಲ್ ವಾಸ್ನಿಕ್ ಹಾಗೂ ರಾಜ್ಯ ಉಸ್ತುವಾರಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್‌ಸಿಂಗ್ ಸುರ್ಜೇವಾಲ ನಗರಕ್ಕೆ ಆಗಮಿಸಲಿದ್ದಾರೆ.

ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ

ಮೈಸೂರು, ಫೆ. 12– ಮೈಸೂರಿನ ಲಕ್ಷ್ಮೀಪುರಂನಲ್ಲಿರುವ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ಫೆ.15ರಂದು ಬೆಳಗ್ಗೆ 10ರಿಂದ ರಾತ್ರಿ 8 ಗಂಟೆಯವರೆಗೆ ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ದೂ. 0821–4259259 ಸಂಪರ್ಕಿಸಬಹುದು.

ಧನಗಹಳ್ಳಿ ಗ್ರಾಮದಲ್ಲಿ ಅಯೋಧ್ಯೆ ಹಬ್ಬ



ಮೈಸೂರು ತಾಲೂಕು ಜಯಪುರ ಹೋಬಳಿಯ ಧನಗಹಳ್ಳಿ ಗ್ರಾಮದಲ್ಲಿ ಅಯೋಧ್ಯೆಯಲ್ಲಿ ಶ್ರೀ ರಾಮನ ಪ್ರಾಣ ಪ್ರತಿಷ್ಠಾಪನೆ ಹಾಗೂ ಶ್ರೀ ರಾಮಮಂದಿರ ಉದ್ಘಾಟನೆ ಅಂಗವಾಗಿ ಅಯೋಧ್ಯೆ ಹಬ್ಬ ಆಚರಿಸಲಾಯಿತು. ಈ ವೇಳೆ ಶ್ರೀ ರಾಮ ಹಾಗೂ ಶ್ರೀ ಮಹರ್ಷಿ ವಾಲ್ಮೀಕಿಯವರ ಭಾವಚಿತ್ರಗಳ ಅದ್ದೂರಿ ಮೆರವಣಿಗೆ ನಡೆಯಿತು. ವಕೀಲ ಹೇಮಂತ್‌ಕುಮಾರ್‌ಗೌಡ, ಶ್ರೀ ರಾಜ ವೀರ ಮದಕರಿ ನಾಯಕ ಮಹರ್ಷಿ ವಾಲ್ಮೀಕಿ ಸಂಘದ ಪದಾಧಿಕಾರಿಗಳು, ಸಂಸದ ಪ್ರತಾಪ್ ಸಿಂಹ ಅಭಿಮಾನಿ ಬಳಗ, ನಾಯಕ ಯೂತ್ ಅಸೋಸಿಯೇಷನ್ ಪದಾಧಿಕಾರಿಗಳು, ಗ್ರಾಮದ ಮುಖಂಡರು ತೇರು ಎಳೆಯುವ ಮೂಲಕ ಜೈ ಶ್ರೀರಾಮ ಘೋಷಣೆ ಕೂಗಿ, ಸಂಭ್ರಮಿಸಿದರು.

ಫೆ.25ರಂದು ವೀರಶೈವ ಲಿಂಗಾಯತ ವಧು–ವರರ ಉಚಿತ ಸಾಮೂಹಿಕ ವಿವಾಹ

ಮೈಸೂರು,ಫೆ.12–ಮೈಸೂರು–ಚಾಮರಾಜನಗರ ಜಿಲ್ಲಾ ವೀರಶೈವ ಲಿಂಗಾಯತ ಮಠಾಧಿಪತಿಗಳ ಗೋಷ್ಠಿ ಹಾಗೂ ಸರಗೂರು ತಾಲೂಕು ಬಿಡುಗಲು ಪಡುವಲು ಶ್ರೀ ವಿರಕ್ತ ಮಠದ ಸಹಯೋಗದಲ್ಲಿ ಫೆ.25ರಂದು ವೀರಶೈವ–ಲಿಂಗಾಯತ ವಧುವರರ ಉಚಿತ ಸಾಮೂಹಿಕ ವಿವಾಹ ಏರ್ಪಡಿಸಲಾಗಿದೆ. ವಧುವರರಿಗೆ ಸೀರೆ, ಕುಪ್ಪಸ, ಪಂಚೆ, ವಲ್ಲಿ, ಶರ್ಟ್, ಮಾಂಗಲ್ಯ ಮತ್ತು ಬೆಳ್ಳಿ ಕಾಲುಂಗುರಗಳನ್ನು ಉಚಿತವಾಗಿ ನೀಡಲಾಗುತ್ತದೆ. ಆಸಕ್ತರು ಫೆ.20ರೊಳಗೆ ಮೈಸೂರಿನ ಜಗದ್ಗುರು ಡಾ.ಶಿವರಾತ್ರಿ ರಾಜೇಂದ್ರ ವೃತ್ತದಲ್ಲಿರುವ ಗೋಷ್ಠಿಯ ಕಚೇರಿ ಅಥವಾ ಪಡುವಲು ಶ್ರೀ ವಿರಕ್ತ ಮಠದಲ್ಲಿ ನಿಗದಿತ ಅರ್ಜಿ ನಮೂನೆಯಲ್ಲಿ ದಾಖಲಾತಿಗಳೊಂದಿಗೆ ವಿವರಗಳನ್ನು ಸಲ್ಲಿಸಬಹುದಾಗಿದೆ. ವಿವರಗಳಿಗೆ ಮೊ. 9964151105, 94815 28665, 9449030588 ಸಂಪರ್ಕಿಸಬಹುದು.

ನನ್ನ ಹೋರಾಟದ ಹಿಂದೆ ನೂರಾರು ಕೈಗಳು, ಕಣ್ಣುಗಳು, ಹೃದಯಗಳಿವೆ...

- ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಸೋಮಣ್ಣ ಅಭಿಮತ
- ಕಲ್ಪತರು ಚಾರಿಟೆಬಲ್ ಟ್ರಸ್ಟ್‌ನಿಂದ ಸನ್ಮಾನ ಸ್ವೀಕಾರ

ಮೈಸೂರು, ಫೆ. 12– ನನ್ನ ಹೋರಾಟದ ಹಿಂದೆ ನೂರಾರು ಕೈಗಳು, ಕಣ್ಣುಗಳು ಹಾಗೂ ಹೃದಯಗಳಿವೆ ಎಂದು ಪ್ರಸಕ್ತ ಸಾಲಿನ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರಾದ ಆದಿವಾಸಿ ಮುಖಂಡ ಎಚ್.ಡಿ.ಕೋಟೆ ತಾಲೂಕು ಮೊತ್ತ ಹಾಡಿಯ ಸೋಮಣ್ಣ ಹೇಳಿದರು.

ಕುವೆಂಪುನಗರದ ಕೆ ಬ್ಲಾಕಿನ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ ಎದುರು ಕಲ್ಪತರು ಚಾರಿಟೆಬಲ್ ಟ್ರಸ್ಟಿನಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಆಗಷ್ಟೇ ಜೀತದಿಂದ ವಿಮುಕ್ತನಾಗಿದ್ದ ನಾನು ಮೊದಲಿಗೆ ನನ್ನ ಹೋರಾಟ ದಲಿತ ಸಂಘರ್ಷ ಸಮಿತಿಯ ಮೂಲಕ ಆರಂಭವಾಯಿತು. ಚಾ. ನಂಜುಂಡಮೂರ್ತಿ, ಬೆಟ್ಟಯ್ಯಕೋಟೆ ಅವರೊಂದಿಗೆ ಸೇರಿ ಹೋರಾಟಕ್ಕಿಳಿದೆ. ನಂತರ ಕ್ಷೀರಸಾಗರ ಜೊತೆಯಾದರು. ಈ ಹೋರಾಟದಲ್ಲಿ ನೂರಾರು ಕೈಗಳು, ಕಣ್ಣುಗಳು, ಹೃದಯಗಳು ಬೆಂಬಲಿಸಿದ್ದರಿಂದ ಇಲ್ಲಿಯವರೆಗೆ ಬರಲು ಸಾಧ್ಯವಾಯಿತು ಎಂದರು.

ಕಳೆದ ಐದು ದಶಕಗಳಿಂದ ಆದಿವಾಸಿಗಳ ಹಕ್ಕುಗಳಿಗಾಗಿ ಹೋರಾಟ ಮಾಡುತ್ತಾ ಬಂದರೂ ಇನ್ನೂ ಹಲವಾರು ಸಮಸ್ಯೆಗಳು ಹಾಗೆಯೇ ಉಳಿದಿವೆ. ಅರಣ್ಯ ಹಕ್ಕು ಕಾಯ್ದೆ ಸಮರ್ಪಕವಾಗಿ ಜಾರಿಯಾಗಬೇಕು. ಆದಿವಾಸಿಗಳಿಗೆ ಒಳ ಮೀಸಲಾತಿ ನೀಡಬೇಕು. ಆದಿವಾಸಿಗಳ ಮಕ್ಕಳ ಕಲಿಕೆಗೆ ಪ್ರತ್ಯೇಕ ವಿವಿ ಸ್ಥಾಪಿಸಬೇಕು. ಈ ಮಕ್ಕಳು ಕೂಡ ಪಿಎಚ್.ಡಿ ಪಡೆಯುವ ವಾತಾವರಣ ನಿರ್ಮಾಣವಾಗಬೇಕು ಎಂದು ಆಶಿಸಿದರು. ಇದೇ ವೇಳೆ ಸೋಮಣ್ಣ ಅವರು ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು. ನಂತರ ಅವರನ್ನು ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಟ್ರಸ್ಟಿನ ಅಧ್ಯಕ್ಷ ಡಾ. ಅಮ್ಮಸಂದ್ರ ಸುರೇಶ್, ಕಾರ್ಯದರ್ಶಿ ಜಗದೀಶ್ ತುಂಗಾ, ಉಪಾಧ್ಯಕ್ಷ ಪಿ.ಕುಮಾರ್, ಖಜಾಂಚಿ ಪುರುಷೋತ್ತಮ, ಟ್ರಸ್ಟಿ ಲಕ್ಷ್ಮೀಕಾಂತ, ಮಹದೇವ ಸನ್ಮಾನಿಸಿದರು.



ಮೈಸೂರು ಕುವೆಂಪುನಗರದ ಕೆ–ಬ್ಲಾಕಿನ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ ಎದುರು ಕಲ್ಪತರು ಚಾರಿಟೆಬಲ್ ಟ್ರಸ್ಟಿನಿಂದ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರಾದ ಆದಿವಾಸಿ ಮುಖಂಡ ಎಚ್.ಡಿ.ಕೋಟೆ ತಾಲೂಕು ಮೊತ್ತ ಹಾಡಿಯ ಸೋಮಣ್ಣ ಅವರನ್ನು ಸನ್ಮಾನಿಸಲಾಯಿತು.

'ದಿಲ್ಲಿ ಚಲೋ'ಗೆ ಹೊರಟ ಕರ್ನಾಟಕ ರೈತರ ಭೋಪಾಲ್‌ನಲ್ಲಿ ಬಂಧನ

ಕುರುಬೂರು ಶಾಂತಕುಮಾರ್ ಪತ್ನಿ ತಲೆಗೆ ಗಾಯ!

ನವದೆಹಲಿ,ಫೆ.12–ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ದೆಹಲಿಯಲ್ಲಿ ರೈತರು ನಡೆಸುತ್ತಿರುವ ಡೆಲ್ಲಿ ಚಲೋ ಪ್ರತಿಭಟನೆಗೆ ಹೊರಟಿದ್ದ ಕರ್ನಾಟಕದ ರೈತರನ್ನು ಮಧ್ಯಪ್ರದೇಶದಲ್ಲಿ ಪೊಲೀಸರು ಬಂಧಿಸಿದ್ದಾರೆ.

ಪೊಲೀಸರ ಕಾರ್ಯಾಚರಣೆ ವೇಳೆ ಹಲವು ರೈತ ಮಹಿಳೆಗೆ ಗಾಯಗಳಾಗಿದ್ದು, ಇದರಲ್ಲಿ ಕರ್ನಾಟಕ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಕುರುಬೂರು ಶಾಂತಕುಮಾರ್ ಅವರ ಪತ್ನಿ ಪದ್ಮಾ ಶಾಂತಕುಮಾರ್ ತಲೆಗೆ ಗಾಯವಾಗಿದೆ. ಈ ಕುರಿತು ರೈತರು ಪತ್ರಿಕಾ ಪ್ರಕಟಣೆ ಮೂಲಕ ಮಧ್ಯಪ್ರದೇಶ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ದೇಶಾದ್ಯಂತ ಬೀದಿಗಿಳಿಯಲು ಸಜ್ಜಾಗಿರುವುದನ್ನು ಗಮನಿಸಿ, ರೈತರ ಹೋರಾಟವನ್ನು ಹತ್ತಿಕ್ಕಲು ಕೇಂದ್ರ ಸರ್ಕಾರ ಪೊಲೀಸ್ ಬಲವನ್ನು ಬಳಸಿಕೊಳ್ಳುತ್ತಿದೆ. ಇದು ಖಂಡನೀಯ. ಕರ್ನಾಟಕದಿಂದ ನೂರಾರು ಸಂಖ್ಯೆಯಲ್ಲಿ ದೆಹಲಿಗೆ ಬರುತ್ತಿದ್ದಾಗ, ಮಧ್ಯಪ್ರದೇಶದ ಭೋಪಾಲ್ ರೈಲ್ವೆ ನಿಲ್ದಾಣದಲ್ಲಿ ಮಧ್ಯರಾತ್ರಿ 2 ಗಂಟೆ ವೇಳೆಗೆ ರೈಲಿನೊಳಗೆ ನುಗ್ಗಿ ಪೊಲೀಸರು ಬೆದರಿಸಿ, ದಬ್ಬಾಳಿಕೆ ನಡೆಸಿದ್ದಾರೆ. ರೈಲಿನ ಒಳಗೆ ರೈತರನ್ನು ಎಳೆದಾಡಿದ್ದು, ಈ ವೇಳೆ ಮಹಿಳೆಯರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ರೈತ ಮಹಿಳೆ ಪದ್ಮಾ ಶಾಂತಕುಮಾರ್ ಅವರ ತಲೆಗೆ ಪೆಟ್ಟಾಗಿದ್ದು, ಅವರನ್ನು ಆಸ್ಪತ್ರೆ ಸೇರಿಸಿದ್ದಾರೆ. ಇನ್ನು ಆಸ್ಪತ್ರೆಯಲ್ಲಿಯೂ ಸರಿಯಾದ ಚಿಕಿತ್ಸೆ ಕೊಡಿಸದೆ ಡಿಸ್ಚಾರ್ಜ್ ಮಾಡಿಸಿ, ಬಂಧಿತ ರೈತರ ಸ್ಥಳಕ್ಕೆ ಕರೆದೊಯ್ದು ಬಿಟ್ಟಿದ್ದಾರೆ.



ಗಾಯಗೊಂಡ ಪದ್ಮಾ ಶಾಂತಕುಮಾರ್

ಕರ್ನಾಟಕದಿಂದ ಮಹಿಳೆಯರು ಸೇರಿ ನೂರಾರು ರೈತರು ರೈಲಿನ ಮೂಲಕ ಹೋಗುತ್ತಿದ್ದ ಸಂದರ್ಭದಲ್ಲಿ ಮಧ್ಯಪ್ರದೇಶದ ಭೋಪಾಲ್ ರೈಲ್ವೆ ನಿಲ್ದಾಣದಲ್ಲಿ ನೂರಾರು ಪೊಲೀಸರು ನಿದ್ರೆಯಲ್ಲಿದ್ದ ರೈತರನ್ನು ಬಂಧಿಸಲು ಮುಂದಾದರು. ನಾವು ವಿರೋಧ ವ್ಯಕ್ತಪಡಿಸಿದಾಗ ಪೊಲೀಸರು ಎಲ್ಲಾ ಭೋಗಿಗಳಿಗೂ ಬಂದು ಮಹಿಳೆಯರನ್ನು ಎಳೆದಾಡಿ ಬಂಧಿಸಿದ್ದಾರೆ. ಕೇಂದ್ರ ಸರ್ಕಾರದ ರೈತ ವಿರೋಧವನ್ನು ಖಂಡಿಸಿ, ಕರ್ನಾಟಕದ ರೈತರು ರೈಲ್ವೆ ನಿಲ್ದಾಣದಲ್ಲಿ ಪ್ರತಿಭಟನೆ ಮಾಡುವುದರ ಮೂಲಕ ರೈತ ವಿರೋಧಿ ನೀತಿಯನ್ನು ಖಂಡಿಸಿ, ಕೇಂದ್ರ ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ. ಬೆಳಗಾವಿ ಜಿಲ್ಲೆಯ ಗುರುಸಿದ್ದಪ್ಪ, ಧಾರವಾಡ ಜಿಲ್ಲೆಯ ಪರಶುರಾಮ್, ಚಾಮರಾಜನಗರ ಜಿಲ್ಲೆಯ ಪಟೇಲ್ ಶಿವಮೂರ್ತಿ, ಮೂಕಳ್ಳಿ ಮಾದೇವ ಸ್ವಾಮಿ, ಹಾಸನ ಜಿಲ್ಲೆಯ ಧರ್ಮರಾಜ್, ಮೈಸೂರು ಜಿಲ್ಲೆಯ ಬರಡನಪುರ ನಾಗರಾಜ್, ಮಹೇಶ್, ಉಡಿಗಾಲ ರೇವಣ್ಣ, ಕುರುಬೂರು ಸಿದ್ದೇಶ್, ಗುರುಸ್ವಾಮಿ, ಗೌರಿಶಂಕರ್,ಕಮಲಮ್ಮ, ಪ್ರೇಮ, ಮಮತಾ, ಶ್ವೇತಾ, ನಾಗವೇಣಿ, ಪ್ರದೀಪ್ ಕುರುಬೂರು, ಮಂಜೇಶ್ ಸೇರಿ ಹಲವು ರೈತ ಮಹಿಳೆಯರು ಹಾಗೂ ರೈತ ಮುಖಂಡರು ಬಂಧಿತರಾಗಿದ್ದಾರೆ.

ಕೇಂದ್ರ ಸರ್ಕಾರ ಒಂದು ವರ್ಷ ಕಾಲ ದೆಹಲಿಯಲ್ಲಿ ಚಳುವಳಿ ನಡೆಸಿದಾಗ ಪ್ರಧಾನಿ ಮೋದಿಯವರು ಮಧ್ಯ ಪ್ರವೇಶ ಮಾಡಿ ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ, ಸ್ವಾಮಿನಾಥನ್ ವರದಿ ಜಾರಿ ಮಾಡುವುದಾಗಿ ಭರವಸೆ ನೀಡಿದ್ದರು. ಕೇಂದ್ರ ಸರ್ಕಾರ ಇಲ್ಲಿವರೆಗೂ ಕೊಟ್ಟ ಭರವಸೆ ಈಡೇರಿಸಿಲ್ಲ. ಈ ಹಿನ್ನೆಲೆಯಲ್ಲಿ ಫೆ.13ರಂದು ದೆಹಲಿ ಚಲೋ ಹಮ್ಮಿಕೊಳ್ಳಲಾಗಿದೆ.

ಕಲೆ, ಸಂಸ್ಕೃತಿ, ಸಾಹಿತ್ಯದ ಕಡೆ ಯುವಪೀಳಿಗೆಗೆ ಲಕ್ಷ್ಯವೇ ಇಲ್ಲ

- ಚಾಮರಾಜನಗರ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಎಂ.ಆರ್.ಗಂಗಾಧರ್ ವಿಷಾದ
- 'ನವಭಾರತ ಜನನಿಯ ತನುಜಾತೆ', 'ಚಿಮಣಿ ಬೆಳಕಿನ ಬದುಕು' ಕೃತಿಗಳ ಲೋಕಾರ್ಪಣೆ

ಮೈಸೂರು, ಫೆ. 12– ಮೊಬೈಲ್ ಯುಗದಲ್ಲಿರುವ ಯುವಪೀಳಿಗೆ ಕಲೆ, ಸಂಸ್ಕೃತಿ, ಸಾಹಿತ್ಯದ ಕಡೆ ಗಮನಹರಿಸುತ್ತಿಲ್ಲ ಎಂದು ಚಾಮರಾಜನಗರ ವಿಶ್ವವಿದ್ಯಾನಿಲಯ ಕುಲಪತಿ ಪ್ರೊ.ಎಂ.ಆರ್.ಗಂಗಾಧರ್ ವಿಷಾದಿಸಿದರು.

ಜಿಲ್ಲಾ ಕಸಾಪ ಸಹಯೋಗದಲ್ಲಿ ಸ್ವಜನ್ಯ ಕಲಾ ವೇದಿಕೆ, ಮಾಧ್ಯಮರಂಗ ಫೌಂಡೇಷನ್ ವಿಜಯನಗರದ ಸಾಹಿತ್ಯ ಭವನದಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಎಸ್.ಶಿಶಿರಂಜನ್ ಅವರ ನವಭಾರತ ಜನನಿಯ ತನುಜಾತೆ–ಕವನ ಸಂಕಲನ ಹಾಗೂ ನಾಗೇಶ ತಳವಾರ ಅವರ ಚಿಮಣಿ ಬೆಳಕಿನ ಬದುಕು–ನಾಟಕ ಕೃತಿಗಳನ್ನು ಬಿಡುಗಡೆ ಮಾಡಿ ಮಾತನಾಡಿದರು.

ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನ, ಭಾವನಾತ್ಮಕ ಬುದ್ಧಿಮತ್ತೆ, ಸಂವಹನ ಕೌಶಲ್ಯಕ್ಕೆ ಸಾಹಿತ್ಯ, ನಾಟಕ ಅವಶ್ಯ. ಪಠ್ಯಕ್ರಮದಲ್ಲಿ ಕೂಡ ಇವನ್ನು ಸೇರಿಸಬೇಕು ಎಂದು ಶಿಫಾರಸ್ಸು ಮಾಡಿದ್ದೇವೆ. ಆದರೆ ಯುವಪೀಳಿಗೆ ಪುಸ್ತಕ ಓದುವುದನ್ನು, ನಾಟಕ ನೋಡುವುದನ್ನು ಕಡಿಮೆ ಮಾಡಿದ್ದಾರೆ ಎಂದರು.

ಸಂಶೋಧನೆಗಳು ಕೂಡ ಸರಿಯಾಗಿ ನಡೆಯುತ್ತಿಲ್ಲ. ಗೂಗಲ್ ನೋಡಿಕೊಂಡು ಕಟ್ ಅಂಡ್ ಪೇಸ್ಟ್ ಮಾಡುತ್ತಿದ್ದಾರೆ. ಇದು ತಪ್ಪಬೇಕು. ಕೃತಿಗಳನ್ನು ಓದುವುದರಿಂದ ನೆನಪಿನ ಶಕ್ತಿ ಕೂಡ ಹೆಚ್ಚುತ್ತದೆ ಎಂದು ಅವರು ಹೇಳಿದರು.

ನವಭಾರತ ಜನನಿಯ ತನುಜಾತೆ ಕುರಿತು ವಿಮರ್ಶಕ ಡಾ.ಎಚ್.ಎಸ್. ಸತ್ಯನಾರಾಯಣ ಮಾತನಾಡಿ, ಕನ್ನಡ ಪುಸ್ತಕಗಳನ್ನು ಬಹುಹಿಂದಿನಿಂದಲೂ ಒಂದು ಸಾವಿರ ಪ್ರತಿಗಳನ್ನು ಮಾತ್ರ ಮುದ್ರಿಸಲಾಗುತ್ತದೆ. ಈಗಂತೂ ಓದುಗರ ಸಂಖ್ಯೆ ಕಡಿಮೆಯಾಗಿದೆ. ಹೊಸ ಹೊಸ ನಾಟಕಕಾರರು, ಸಾಹಿತಿಗಳು ಬರಬೇಕು ಎಂದರು.


ಚಿಮಣಿ ಬೆಳಕಿನ ಬದುಕು ಕುರಿತು ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕಿ ಡಾ.ವಿಜಯಕುಮಾರಿ ಎಸ್. ಕರಿಕಲ್ ಮಾತನಾಡಿ, ಪ್ರಸ್ತುತ ದಿನಗಳಲ್ಲಿ ಓದುಗರು ಬೇರೆ ಬೇರೆ ಆಕರ್ಷಣೆಗೆ ಒಳಗಾಗಿದ್ದಾರೆ. ಟಿವಿ, ಇಂಟರ್ನೆಟ್, ವ್ಯಾಟ್ಸಾಪ್, ಇನ್ಸ್ಟಾಗ್ರಾಮ್– ಹೀಗೆ ಬೇರೆ ಬೇರೆ ಸಾಮಾಜಿಕ ಮಾಧ್ಯಮಗಳಲ್ಲಿ ತೊಡಗಿಸಿಕೊಂಡಿದ್ದಾರೆ ಎಂದರು.

ಮುಖ್ಯ ಅತಿಥಿಯಾಗಿದ್ದ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯ ಡಾ.ಎಸ್.ಬಿಎಂ.ಪ್ರಸನ್ನ ಮಾತನಾಡಿ, 2030ರ ವೇಳೆಗೆ ಮತ್ತೆ ಸಾಹಿತ್ಯ ಮತ್ತು ಕೃಷಿಯತ್ತ ಎಲ್ಲರೂ ಮುಖ ಮಾಡುವ ಪರಿಸ್ಥಿತಿ ನಿರ್ಮಾಣವಾಗುತ್ತದೆ ಎಂದರು.

ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ಚೀಲೂರು ಚಂದ್ರಶೇಖರ ಮಾತನಾಡಿದರು. ಸಿಂದಗಿ ಮಾಧ್ಯಮರಂಗ ಫೌಂಡೇಷನ್ ಉಪಾಧ್ಯಕ್ಷ ಪ್ರಕಾಶ ಏಳುಗುಡ್ಡ ಇದ್ದರು.

ಕೃತಿಕಾರರಾದ ಎಸ್.ಶಿಶಿರಂಜನ್, ನಾಗೇಶ ತಳವಾರ ಅವರು ಕೃತಿಗಳು ಹೇಗೆ ರಚನೆಯಾದವು ಕುರಿತು ಮಾತನಾಡಿ, ಕೃತಜ್ಞತೆ ಸಲ್ಲಿಸಿದರು.

ನಿವೇದಿತಾ ಪ್ರಾರ್ಥಿಸಿದರು. ಭವಾನಿ ಕಾರ್ಯಕ್ರಮ ನಿರೂಪಿಸಿದರು.



ಮೈಸೂರಿನ ಜಿಲ್ಲಾ ಸಾಹಿತ್ಯ ಭವನದಲ್ಲಿ ವಿವಿಧ ಕೃತಿಗಳನ್ನು ಚಾ.ನಗರ ವಿವಿ ಕುಲಪತಿ ಪ್ರೊ. ಗಂಗಾಧರ್ ಬಿಡುಗಡೆಗೊಳಿಸಿದರು.

ಮೈಸೂರು ಮಿತ್ರ ಮಂಗಳವಾರ 13 ಫೆಬ್ರವರಿ 2024

ಕಟ್ಟೆಹಳ್ಳಿ ಏತ ನೀರಾವರಿ ಯೋಜನೆಗೆ ಚಾಲನೆ

ತುಂಬಲಿದೆ ಕೆ.ಆರ್.ಪೇಟೆ ತಾಲೂಕಿನ 46 ಕೆರೆಗಳು, ರೈತರಿಗೆ ಅನುಕೂಲ

ಕೆ.ಆರ್.ಪೇಟೆ,ಫೆ.12– ತಾಲೂಕಿನ ಬೂಕನ ಕೆರೆ ಮತ್ತು ಶೀಳನೆರೆ ಹೋಬಳಿಯ ಕೆರೆ ಕಟ್ಟೆಗಳನ್ನು ಹೇಮಾವತಿ ನದಿ ನೀರಿನಿಂದ ತುಂಬಿಸುವ 265 ಕೋಟಿ ರೂ. ವೆಚ್ಚದ ಕಟ್ಟಹಳ್ಳಿ(ಐಚನಹಳ್ಳಿ) ಏತ ನೀರಾವರಿ ಯೋಜನೆಗೆ ಸಚಿವ ಎನ್.ಚೆಲುವರಾಯ ಸ್ವಾಮಿ ಚಾಲನೆ ನೀಡಿದರು.

ಕಟ್ಟಹಳ್ಳಿ ಬಳಿ ಹರಿಯುವ ಹೇಮಾವತಿ ನದಿಯ ಬಳಿ 265 ಕೋಟಿ ರೂ. ವೆಚ್ಚದಲ್ಲಿ 2 ಹಂತದಲ್ಲಿ 89 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯ ಪೈಕಿ ಮೊದಲನೆಯ ಹಂತ ದಲ್ಲಿ ಪೂರ್ಣವಾಗಿರುವ 46 ಕೆರೆಗಳಿಗೆ ನೀರು ತುಂಬಿಸುವ ಏತ ನೀರಾವರಿ ಯೋಜನೆ ಕಟ್ಟಹಳ್ಳಿಯ ಜಾಕ್‌ವೆಲ್‌ನ ಪಂಪ್‌ಹೌಸ್‌ನಲ್ಲಿ ಚಾಲನೆ ನೀಡಿದರು.


ಐಚನಹಳ್ಳಿ ಏತನೀರಾವರಿ ಯೋಜನೆಗೆ ಸಚಿವ ಚಲುವರಾಯಸ್ವಾಮಿ ಚಾಲನೆ ನೀಡಿದರು. ಶಾಸಕ ಹೆಚ್.ಟಿ.ಮಂಜು, ಕೆ.ಬಿ.ಚಂದ್ರಶೇಖರ್, ಬಿ.ಎಲ್.ದೇವರಾಜು ಚಿತ್ರದಲ್ಲಿದ್ದಾರೆ.

ಐಚನಹಳ್ಳಿ ಏತ ನೀರಾವರಿ ಯೋಜನೆಯ ಚಾಲನೆಯ ಸಂದರ್ಭದಲ್ಲಿ ಸಾರ್ವಜನಿಕರು, ರೈತ ಬಾಂಧವರು ಸೇರಿದಂತೆ ಶಾಸಕರು, ಚುನಾಯಿತ ಜನ ಪ್ರತಿನಿಧಿಗಳು ಉಪಸ್ಥಿತ ರಿದ್ದರು. ಬೂಕನಕೆರೆ ಸೇರಿದಂತೆ ಹಲವಾರು ಗ್ರಾಮಗಳ ಕೆರೆಗಳು ಈ ಯೋಜನೆಯ ಭಾಗ ದಲ್ಲಿದ್ದು ಅವುಗಳಿಗೂ ಸಹ ನೀರು ತುಂಬಿಸುವ ಪಟ್ಟಿಯಲ್ಲಿ ಸೇರಿಸಿಕೊಂಡು ಕೃಷಿಕರಿಗೆ ಸಹಾಯ ಮಾಡುವಂತೆ ಮನವಿ ಮಾಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು ಈ ಯೋಜನೆಯಲ್ಲಿ ಹೆಚ್ಚಿನ ಕೆರೆಗಳನ್ನು ಸೇರ್ಪಡೆ ಮಾಡಿದರೆ ಅಂದಾಜು ವೆಚ್ಚವು 310 ಕೋಟಿ ರೂ.ಗಳಿಗೂ ಹೆಚ್ಚಾಗಲಿದೆ. ಈ ಯೋಜನೆಯಿಂದ ಕಾಮಗಾರಿ ಕೈಗೊಂಡಿರುವ ಗುತ್ತಿಗೆದಾರರಿಗೆ ಹಿಂದಿನ ಸರ್ಕಾರ ದಿಂದ ಕೇವಲ 25 ಕೋಟಿ ರೂ. ಮಾತ್ರ ಪಾವತಿಸಲಾಗಿದೆ. ಅವರಿಗೆ 265 ಕೋಟಿ ರೂ.ಗಳಿಗೂ ಹೆಚ್ಚಿನ ಹಣ ಪಾವತಿಸಬೇಕಾಗುತ್ತದೆ ಎಂದರು. ಮಾಜಿ ಸಚಿವ ಡಾ. ನಾರಾಯಣಗೌಡ ಅವರ ಹೋರಾಟದ ಫಲವಾಗಿ ಈ ಯೋಜನೆ ಆರಂಭವಾಗಿ ಮೊದಲ ಹಂತವು ಸಂಪೂರ್ಣಗೊಂಡಿದ್ದು, ಪ್ರಸ್ತುತ ಸರ್ಕಾರದ ಪ್ರತಿನಿಧಿಯಾಗಿ ಸಚಿವನಾಗಿ ಉದ್ಘಾಟನೆ ಮಾಡಿದ್ದೇನೆ. ನಾರಾಯಣಗೌಡರ ದೂರದರ್ಶಿತ್ವದಿಂದಾಗಿ ಹಲವು ಅಭಿವೃದ್ಧಿ ಕಾಮಗಾರಿಗಳು ಚಾಲನೆಗೊಂಡಿವೆ ಎಂದು ಸಚಿವರು ಅಭಿಮಾನದಿಂದ ಹೇಳಿದರು.

ನಾಗಮಂಗಲ ಹಾಗೂ ಕೆ.ಆರ್.ಪೇಟೆ ತಾಲೂಕಿನಲ್ಲಿ ಮಳೆಯಾಶ್ರಿತ ಒಣ ಪ್ರದೇಶ ವಿದ್ದು, ಈ ಎರಡೂ ತಾಲೂಕುಗಳಿಗೆ ನೀರಾವರಿ ಯೋಜನೆಗಳು ಅವಶ್ಯಕವಾಗಿದೆ. ಬೂಕನಕೆರೆ ಹೋಬಳಿಯ 49 ಕೆರೆ ಕಟ್ಟೆಗಳನ್ನು ತುಂಬಿಸುವ ಈ ಏತ ನೀರಾವರಿ ಯೋಜನೆಯನ್ನು ಉದ್ಘಾಟನೆ ಮಾಡಲಾಗಿದೆ. ಈ ಹಿಂದಿನ ಬಿಜೆಪಿ ಸರ್ಕಾರವು ರಾಜ್ಯದಲ್ಲಿ ಕಟ್ಟಹಳ್ಳಿ ಏತನೀರಾವರಿ ಯೋಜನೆ ಸೇರಿದಂತೆ ಹಲವಾರು ನೀರಾವರಿ ಯೋಜನೆಗಳನ್ನು ಪ್ರಾರಂಭಿಸಿದೆ. ಅವುಗಳ ಪಾವತಿಗೆ ಅನುದಾನದ ಅವಶ್ಯಕತೆ ಇದೆ. ಇದನ್ನು ಸರಿದೂಗಿಸಿ ಯೋಜನೆಗಳನ್ನು ಪೂರ್ಣಗೊಳಿಸಲು ಸರ್ಕಾರವು ಪ್ರಾಮಾಣಿಕ ಪ್ರಯತ್ನ ಮಾಡಲಿದೆ ಎಂದು ಸಚಿವ ಎನ್.ಚೆಲುವರಾಯಸ್ವಾಮಿ ಹೇಳಿದರು.

ಕಾರ್ಯಕ್ರಮದಲ್ಲಿ ಶಾಸಕ ಹೆಚ್.ಟಿ. ಮಂಜು, ಮಾಜಿ ಶಾಸಕರಾದ ಕೆ.ಬಿ. ಚಂದ್ರಶೇಖರ್, ಬಿ.ಪ್ರಕಾಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹರಳಹಳ್ಳಿ ವಿಶ್ವನಾಥ್, ಬಿ.ನಾಗೇಂದ್ರಕುಮಾರ್, ಗಂಜಿಗೆರೆ ಗ್ರಾಮ ಪಂಚಾಯತಿ ಅಧ್ಯಕ್ಷ ಮುದುರೆಗೆ ಪರಮೇಶ್, ಅಮೃತ್ ನಿರ್ಮಾಣ್ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ವೆಂಕಟೇಶ್ವರ್ ರಾವ್, ಅಮೃತ್ ಸಂಸ್ಥೆಯ ಉಪಾಧ್ಯಕ್ಷ ರಾಮನಾಥನ್, ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯ ಅಧೀಕ್ಷಕ ಇಂಜಿನಿಯರ್ ವಿನಾಯಕ ಸೇರಿದಂತೆ ಹಲವರು ಭಾಗವಹಿಸಿದ್ದರು.

ಇಂದು ನಾಗಮಂಗಲ ಸುತ್ತಮುತ್ತ ವಿದ್ಯುತ್ ವ್ಯತ್ಯಯ

ನಾಗಮಂಗಲ, ಫೆ.12– ತಾಲೂಕಿನ ಕಸಲಗೆರೆ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣೆ ಕಾರ್ಯ ಹಮ್ಮಿಕೊಂಡಿರುವುದರಿಂದ ಫೆ.13ರಂದು ವಿದ್ಯುತ್ ವಿತರಣಾ ಕಸಲಗೆರೆ ಎನ್.ಜೇವೈ, ನಾಗನಹಳ್ಳಿ ಬಿಂಡೇನಹಳ್ಳಿ ಪಂಪ್‌ಸೆಟ್ ವ್ಯಾಪ್ತಿ ಹಾಗೂ ಮಾವಿನಕೆರೆ ಹಂಚಿಪುರ ಪಂಪ್ ಸೆಟ್ ವ್ಯಾಪ್ತಿಯ 11 ಕೆ.ವಿ ಮಾರ್ಗಗಳಿಗೆ ಒಳಪಡುವ ಭೀಮನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿ ಹಾಗೂ ದೇವಲಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಬೆಳಗ್ಗೆ 9 ರಿಂದ ಸಂಜೆ 6ರ ವರೆಗೆ ವಿದ್ಯುತ್ ಸರಬರಾಜು ಇರುವುದಿಲ್ಲ.

ಸಾರ್ವಜನಿಕರಿಂದ ದೂರು ಸ್ವೀಕಾರ ಸಭೆ ಮುಂದೂಡಿಕೆ

ಮಂಡ್ಯ,ಫೆ.12– ಕರ್ನಾಟಕ ಲೋಕಾಯುಕ್ತ ಮಂಡ್ಯ ಘಟಕದ ಪೊಲೀಸ್ ಅಧಿಕಾರಿಗಳ ಉಸ್ತುವಾರಿಯಲ್ಲಿ ಸಾರ್ವಜನಿಕರಿಂದ ದೂರು ಅರ್ಜಿ, ಅಹವಾಲು ಸ್ವೀಕಾರ ಸಭೆಯನ್ನು ಫೆ.14 ರಂದು ಮಂಡ್ಯ ನಗರ ಸಭೆಯ ಸಭಾಂಗಣದಲ್ಲಿ ಆಯೋಜಿಸಲಾಗಿದ್ದು, ಕಾರಣಾಂತರಗಳಿಂದ ಸಭೆಯನ್ನು ಫೆ.16ಕ್ಕೆ ಮುಂದೂಡಲಾಗಿದೆ ಎಂದು ಕರ್ನಾಟಕ ಲೋಕಾಯುಕ್ತ ಸೂಪರಿಟೆಂಡೆಂಟ್ ಅವರು ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಾಲಹಳ್ಳಿ ಕೊಲೆ ಪ್ರಕರಣ

ಕೆಆರ್‌ಎಸ್‌ನಲ್ಲಿ ರೌಡಿ ಶೀಟರ್‌ಗಳ ಪರೇಡ್

ಕಾನೂನು ಉಲ್ಲಂಘಿಸಿದರೆ ಕಠಿಣ ಕ್ರಮದ ಎಚ್ಚರಿಕೆ


ರೌಡಿ ಶೀಟರ್‌ಗಳಿಂದ ಮಾಹಿತಿ ಕಲೆಹಾಕುತ್ತಿರುವ ಕೆಆರ್‌ಎಸ್ ಪೊಲೀಸರು.

ಶ್ರೀರಂಗಪಟ್ಟಣ, ಫೆ12– ಪಾಲಹಳ್ಳಿ ಗ್ರಾಮದಲ್ಲಿ ನಡೆದ ರೌಡಿ ಶೀಟರ್ ಬರ್ಬರ ಹತ್ಯೆ ಹಾಗೂ ಮುಂಬರುವ ಲೋಕಸಭಾ ಚುನಾವಣಾ ಹಿನ್ನೆಲೆಯಲ್ಲಿ ತಾಲೂಕಿನ ಕೆಆರ್‌ಎಸ್ ಪೊಲೀಸ್ ಠಾಣೆಯ ಪೊಲೀಸರು ರೌಡಿ ಶೀಟರ್‌ಗಳ ಪರೇಡ್ ನಡೆಸಿದರು.

ಈ ವೇಳೆ ಸರ್ಕಲ್ ಇನ್ಸ್‌ಪೆಕ್ಟರ್ ಎ. ಮಲ್ಲೇಶ್ ಮಾತನಾಡಿ, ಠಾಣಾ ವ್ಯಾಪ್ತಿಯ ರೌಡಿಶೀಟರ್‌ಗಳು ಯಾವುದೇ ಕಾನೂನು ಬಾಹಿರ ಚಟುವಟಿಕೆಗಳಲ್ಲಿ ಭಾಗಿಯಾಗಬಾರದು ಹಾಗೂ ರೌಡಿಗಳು ಯಾರೂ ಕೂಡ ಸಹಚರರನ್ನು ಹುಟ್ಟು ಹಾಕುವುದಾಗಲಿ, ಯಾವುದೇ ರೌಡಿ ಶೀಟರ್‌ಗಳು ಗುಂಪುಗೂಡಿ ಓಡಾಡಬಾರದು. ನಿಯಮ ಉಲ್ಲಂಘಿಸಿ ನಡೆದುಕೊಳ್ಳುವವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮಜರುಗಿಸಲಾಗುವುದು ಎಂದು ಎಚ್ಚರಿಸಿದರು.

ಪೊಲೀಸ್ ಇಲಾಖೆ ರೌಡಿ ಶೀಟರ್‌ಗಳ ಸಂಪೂರ್ಣ ಚಲನವಲನಗಳನ್ನು ಗಮನಿಸುತ್ತಿದ್ದು ಯಾವುದೇ ಅಪರಾಧ ಕೃತ್ಯದಲ್ಲಿ ನೇರ ಹಾಗೂ ಪರೋಕ್ಷವಾಗಿ ಭಾಗವಹಿಸಿದರೆ ಗಡಿಪಾರಿನ ಜೊತೆಗೆ ಕಟ್ಟುನಿಟ್ಟಿನ ಕಾನೂನು ಕ್ರಮ ಕೈಗೊಳ್ಳುವುದಾಗಿ ರೌಡಿಗಳಿಗೆ ಖಡಕ್ ವಾರ್ನಿಂಗ್ ನೀಡಿದರು.

ಪರೇಡ್‌ನಲ್ಲಿ ಸುಮಾರು 30ಕ್ಕೂ ಹೆಚ್ಚು ರೌಡಿಶೀಟರ್‌ಗಳು ಭಾಗವಹಿಸಿದ್ದರು. ಎಲ್ಲರಿಂದಲೂ ಮಾಹಿತಿ ಸಂಗ್ರಹಿಸಿ ನಿಯಮ ಉಲ್ಲಂಘಿಸದಂತೆ ಸೂಚಿಸಲಾಯಿತು.

ಉಪಾಯದಿಂದ ಕರೆದೊಯ್ದು ಜೀವ ವಿಮಾ ಪ್ರತಿನಿಧಿ ಮೇಲೆ ಹಲ್ಲೆ

ನಾಗಮಂಗಲ, ಫೆ.12– ತನ್ನನ್ನು ಉಪಾಯದಿಂದ ಕರೆದೊಯ್ದು ಸಹೋದ್ಯೋಗಿಗಳು ಮತ್ತು ಅವರ ಜೊತೆಗಾರರು ಜೀವ ವಿಮಾ ಪ್ರತಿನಿಧಿ ಮೇಲೆ ಹಲ್ಲೆ ನಡೆಸಿದ್ದು, ಅವರಿಂದ ಆತ ತಪ್ಪಿಸಿಕೊಂಡು ಬಂದು ಪಾರಾದ ಘಟನೆ ಪಟ್ಟಣದಲ್ಲಿ ಸಂಭವಿಸಿದೆ.


ರವಿಕುಮಾರ್

ಬಿಂಡಿಗನವಿಲೆ ರಸ್ತೆಯಲ್ಲಿ ವಾಸವಾಗಿರುವ ಜೀವ ವಿಮಾ ಪ್ರತಿನಿಧಿ ರವಿಕುಮಾರ್ ಹಲ್ಲೆಗೊಳಗಾಗಿಪಾರಾದವರು. ರವಿಕುಮಾರ್ ಫೆ6ರಂದು ಸಂಜೆ ಮನೆಯಲ್ಲಿದ್ದ ಸಮಯದಲ್ಲಿ ಚಾಮಲಾಪುರ ಗ್ರಾಮದ ಮತ್ತೊಬ್ಬ ಪ್ರತಿನಿಧಿ ದೂರವಾಣಿ ಮಾಡಿ ನಿವೇಶನವೊಂದಿದ್ದು ನೀನು ಮಧ್ಯಸ್ಥಿಕೆ ವಹಿಸಿದರೇ ಸಾಕಷ್ಟು ಲಾಭ ಬರುತ್ತದೆ ಎಂದು ಬುಧವಾರ ಸಂಜೆ ತಮ್ಮ ಕಾರಿನಲ್ಲಿ ಕರೆದುಕೊಂಡು ಹೋಗಿದ್ದು ನಿವೇಶನವಿರುವ ಬಿಎಸ್‌ಎನ್‌ಎಲ್ ರಸ್ತೆಗೆ ಹೋಗಬೇಕಿದ್ದ ಕಾರು ಮೈಸೂರು ರಸ್ತೆಗೆ ತಿರುಗಿದ್ದನ್ನು ಕಂಡ ರವಿಕುಮಾರ್ ಅನುಮಾನದಿಂದ ಪ್ರಶ್ನಿಸಿದ್ದಾರೆ.

ಪಾರ್ಟಿ ಅಲ್ಲಿದ್ದಾರೆ ಎಂದು ಹೇಳಿ ನೇರವಾಗಿ ಮಲ್ಲೇನಹಳ್ಳಿ ಗ್ರಾಮದ ಮಹದೇ ಶ್ವರ ದೇವಸ್ಥಾನ ಬಳಿ ಕಾರು ನಿಲ್ಲಿಸಿದ್ದಾರೆ. ಅಲ್ಲಿಗೆ ಮೊದಲೇ ಬಂದಿದ್ದ ವಿಮಾ ಕಂಪನಿಯ ಅಭಿವೃದ್ಧಿ ಅಧಿಕಾರಿ ಏಕಾಏಕಿ ಹತ್ತಿರ ಬಂದು ನನ್ನ ಮನೆಯ ವಿಚಾರದಲ್ಲಿ ತಲೆಹಾಕುತ್ತಿಯಾ... ಎಂದು ಅವಾಚ್ಯ ಶಬ್ದಗಳಿಂದ ನಿಂದಿಸಿ ಜೊತೆಯಲ್ಲಿದ್ದ ಕೆಲವರ ಜೊತೆ ರವಿಯ ಮುಖ, ಭುಜ, ಬೆನ್ನಿನ ಮೇಲೆ ಹಲ್ಲೆ ಮಾಡುತ್ತಿದ್ದಂತೆ ಅಲ್ಲಿಂದ ತಪ್ಪಿಸಿಕೊಂಡು ಓಡಿದ್ದಾರೆ. ಅದೇ ಸಮಯದಲ್ಲಿ ಪಟ್ಟಣದ ಆದರ್ಶ ಗೌಡ ಮತ್ತು ಮಂಜುನಾಥ ಎಂಬುವರು ಬಂದು ನನ್ನನ್ನು ಬೈಕಿನಲ್ಲಿ ಕೂರಿಸಿಕೊಂಡು ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿದರು. ಚಿಕಿತ್ಸೆ ಪಡೆದು ಪಟ್ಟಣ ಠಾಣೆಯಲ್ಲಿ ದೂರು ನೀಡಿದ್ದೇನೆ ಎಂದು ತಿಳಿಸಿದ್ದಾರೆ. ಆರೋಪಿಗಳು ಕೊಲೆ ಮಾಡುತ್ತೇನೆಂದು ಬೆದರಿಕೆ ಹಾಕಿದ್ದಾರೆ. ಅವರ ಮೇಲೆ ಕ್ರಮ ತೆಗೆದುಕೊಳ್ಳಬೇಕೆಂದು ರವಿಕುಮಾರ್ ತಿಳಿಸಿದ್ದಾರೆ. ಪ್ರಕರಣ ಪಟ್ಟಣ ಠಾಣೆಯಲ್ಲಿ ದಾಖಲಾಗಿದೆ.

ಡೇರಿ ಚುನಾವಣಾಧಿಕಾರಿ ವಿರುದ್ಧ ಜೆಡಿಎಸ್ ಪ್ರತಿಭಟನೆ


ತಾಲೂಕು ಕಚೇರಿ ಎದುರು ಪ್ರತಿಭಟನೆ ನಡೆಸುತ್ತಿರುವ ಜೆಡಿಎಸ್ ಕಾರ್ಯಕರ್ತರು.

ಪಾಂಡವಪುರ, ಫೆ12– ಮೇಲುಕೋಟೆ ಡೇರಿಯ ಆಡಳಿತ ಮಂಡಳಿಯ ಫಲಿತಾಂಶ ಘೋಷಣೆ ಸಂಬಂಧಿಸಿದಂತೆ ಹೈಕೋರ್ಟ್ ಆದೇಶದ ಪ್ರತಿ ಸಿಗದಿದ್ದರೂ ಚುನಾವಣಾಧಿಕಾರಿ ಏಕಪಕ್ಷೀಯವಾಗಿ ನಿರ್ಧರಿಸಿ ಫಲಿತಾಂಶ ಘೋಷಣೆ ಮಾಡಲು ಮುಂದಾಗಿದ್ದಾರೆಎಂದು ಆರೋಪಿಸಿ ಮಾಜಿ ಸಚಿವ ಸಿ.ಎಸ್. ಪುಟ್ಟರಾಜು ನೇತೃತ್ವದಲ್ಲಿ ನೂರಾರು ಜೆಡಿಎಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿ, ತಹಶೀಲ್ದಾರ್‌ಗೆ ದೂರು ಸಲ್ಲಿಸಿದರು.

ಪಟ್ಟಣದ ಮಿನಿ ವಿಧಾನಸೌಧದ ಕಚೇರಿ ಮುಂದೆ ಜೆಡಿಎಸ್ ಕಾರ್ಯಕರ್ತರು ಚುನಾವಣಾಧಿಕಾರಿಯೂ ಆದ ಸಹಕಾರ ಸಂಘಗಳ ಉಪ ನಿಬಂಧಕರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಪುಟ್ಟರಾಜು ಮಾತನಾಡಿ, ಮೇಲುಕೋಟೆ ಹಾಲು ಉತ್ಪಾದಕರ ಸಂಘದ ಆಡಳಿತ ಮಂಡಳಿ ಚುನಾವಣೆಯಲ್ಲಿ ಕೆಲವರು ಅವರಿಗೆ ಬೇಕಾದ ಮತಪಟ್ಟಿಗಳನ್ನು ಸಿದ್ಧಪಡಿಸಿಕೊಂಡು ಚುನಾವಣೆಗೆ ಮುಂದಾಗಿದ್ದರು. ಇದರ ವಿರುದ್ಧ ಹೈಕೋರ್ಟ್ ಮೊರೆಹೋಗಿ ಮತಪಟ್ಟಿಗೆ ತಡೆಯಾಜ್ಞೆ ತಂದು ಮತದಾನದ ಹಕ್ಕು ಪಡೆದುಕೊಂಡು ಚುನಾವಣೆ ನಡೆಸಲಾಗಿತ್ತು ಎಂದರು.

ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತರು– 7 ಮತ್ತು ರೈತಸಂಘ–ಕಾಂಗ್ರೆಸ್ ಬೆಂಬಲಿತರು 5ರಲ್ಲಿ ಗೆಲುವು ಸಾಧಿಸಿದ್ದರು. ಇದರ ವಿರುದ್ಧ ಅವರು ಕೋರ್ಟ್ ಮೊರೆಹೋದ ಹಿನ್ನೆಲೆಯಲ್ಲಿ ಚುನಾವಣೆಯ ಫಲಿತಾಂಶವನ್ನು ಪ್ರಕಟಿಸದೆ ಕಾಯ್ದಿರಿಸಲಾಗಿದೆ. ಇದೀಗ ಕೋರ್ಟ್‌ನಲ್ಲಿ ಫಲಿತಾಂಶ ಘೋಷಿಸುವಂತೆ ಆದೇಶವಾಗಿದ್ದರೂ ಈವರೆಗೂ ಆದೇಶ ಪ್ರತಿ ಕೈಸೇರಿಲ್ಲ. ಅಷ್ಟರೊಳಗಾಗಿ ಸಹಕಾರ ಸಂಘಗಳ ಉಪನಿಬಂಧಕರು ಏಕಪಕ್ಷೀಯವಾಗಿ ನಿರ್ಧಾರ ಕೈಗೊಂಡು ಡೇರಿ ಆಡಳಿತ ಮಂಡಳಿಯ ಚುನಾವಣಾ ಫಲಿತಾಂಶವನ್ನು ಆತುರವಾಗಿ ಪ್ರಕಟಿಸಲು ಮುಂದಾಗಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಹೈಕೋರ್ಟ್ ಆದೇಶದ ವಿರುದ್ಧ ನಾವು ಹೈಕೋರ್ಟ್‌ನ ದ್ವಿ ಸದಸ್ಯ ನ್ಯಾಯಾಧೀಶರ ಪೀಠಕ್ಕೆ ಅಪೀಲು ಹೋಗುತ್ತಿದ್ದೇವೆ. ಅಲ್ಲಿ ಕೋರ್ಟ್ ತಡೆಯಾಜ್ಞೆ ಸಿಗಬಹುದೆಂದು ಚುನಾವಣಾಧಿಕಾರಿ ಆತುರದಿಂದಫಲಿತಾಂಶ ಪ್ರಕಟಣೆ ಮಾಡಲು ಮುಂದಾಗಿದ್ದಾರೆ ಎಂದು ಅವರು ಆಪಾದಿಸಿದರು.

ಡಾ.ಸರೋಜಿನಿ ಮಹಿಷಿ ವರದಿ ಜಾರಿಗೆ ಆಗ್ರಹಿಸಿ ಪ್ರತಿಭಟನೆ


ಡಾ.ಸರೋಜಿನಿ ಮಹಿಷಿ ಪರಿಷ್ಕೃತ ವರದಿಯನ್ನು ಯಥಾವತ್ತಾಗಿ ಜಾರಿಗೆ ತರುವಂತೆ ಆಗ್ರಹಿಸಿ ಮಂಡ್ಯದಲ್ಲಿ ಕದಂಬ ಸೈನ್ಯ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಮಂಡ್ಯ: ಡಾ.ಸರೋಜಿನಿ ಮಹಿಷಿ ಪರಿಷ್ಕೃತ ವರದಿಯನ್ನು ಯಥಾವತ್ತಾಗಿ ಕಾಯ್ದೆಯಾಗಿ ರೂಪಿಸಿ ವಿಧಾನಮಂಡಲದ ಅಧಿವೇಶನದಲ್ಲಿ ಅಂಗೀಕರಿಸಿ ಜಾರಿಗೊಳಿಸಬೇಕು ಎಂದು ಮಂಡ್ಯದಲ್ಲಿ ಕದಂಬ ಸೈನ್ಯ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ನಗರದ ಎಸ್.ಡಿ.ಜಯರಾಮ್ (ನಂದಾ) ವೃತ್ತದಲ್ಲಿ ಸೈನ್ಯದ ಕಾರ್ಯಕರ್ತರು ದೇಶ ಕಂಡ ಅಪ್ರತಿಮ ಚಕ್ರವರ್ತಿ, ಕನ್ನಡಿಗ ಇಮ್ಮಡಿ ಪುಲಕೇಶಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಪ್ರತಿಭಟನೆ ನಡೆಸಿದರು.

ಕನ್ನಡಿಗರ ಉದ್ಯೋಗದಾತೆ ಡಾ.ಸರೋಜಿನಿ ಮಹಿಷಿ ಪರಿಷ್ಕೃತ ವರದಿಯನ್ನು 2017ರಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮುಖ್ಯಮಂತ್ರಿಗಳಿಗೆ ಸಲ್ಲಿಸಿತು. ಆದರೆ ಇದುವರೆಗೂ ವರದಿಯನ್ನು ಕಾಯಿದೆಯಾಗಿ ಜಾರಿಗೆ ತರಲಿಲ್ಲ ಇದರಿಂದ ಕನ್ನಡಿಗರು ಉದ್ಯೋಗದಲ್ಲಿ ಸಾಕಷ್ಟು ವಂಚಿತರಾಗಿ ಸಂಕಷ್ಟದಲ್ಲಿದ್ದಾರೆ. ಮಹಿಷಿ ವರದಿಯನ್ನು ಕಾಯಿದೆಯಾಗಿ ಜಾರಿಗೆ ತಂದರೆ ಮಾತ್ರ ಕನ್ನಡಿಗರಿಗೆ ಉದ್ಯೋಗ ಲಭಿಸುತ್ತದೆ ಎಂದರು.

ಮಾಜಿ ಸಚಿವ ಎಂ.ಎಸ್.ಆತ್ಮಾನಂದ, ಅಂದಾನಿ ಸೋಮನಹಳ್ಳಿ, ಪುಟ್ಟಂಕಯ್ಯ, ಕದಂಬ ಸೈನ್ಯ ರಾಜ್ಯಾಧ್ಯಕ್ಷ ಬೇಕರಿ ರಮೇಶ್, ಡಾ.ದೇವನಹಳ್ಳಿ ದೇವರಾಜ್, ಎಸ್.ಶಿವ ಕುಮಾರ್, ಥಾಮಸ್ ಬೆಂಜಮಿನ್ ಇತರರಿದ್ದರು.

ನೆನೆಗುದಿಗೆ ಬಿದ್ದಿದ್ದ 72 ವಾಣಿಜ್ಯ ಮಳಿಗೆಗಳ ಬಹಿರಂಗ ಹರಾಜು

ತುರ್ತು ಸಭೆಯಲ್ಲಿ ತೀರ್ಮಾನ

ಕೆಆರ್.ನಗರ, ಫೆ12– ಕಳೆದ 3 ತಿಂಗಳ ಹಿಂದೆಯೇ ಅವಧಿ ಮುಗಿದಿದ್ದರೂ ಹರಾಜಾಗದೇ ನೆನೆಗುದಿಗೆ ಬಿದ್ದಿದ್ದ ಪಟ್ಟಣದ ಪುರಸಭೆಗೆ ಸೇರಿದ 72 ವಾಣಿಜ್ಯ ಮಳಿಗೆಗಳನ್ನು ಬಹಿರಂಗವಾಗಿ ಹರಾಜು ಮಾಡಲು ತುರ್ತು ಸಭೆಯಲ್ಲಿ ತೀರ್ಮಾನಿಸಲಾಯಿತು.



ಕೆ.ಆರ್.ನಗರ ಪುರಸಭೆಯಲ್ಲಿ ನಡೆದ ತುರ್ತು ಸಭೆಯಲ್ಲಿ ಭಾಗವಹಿಸಿದ್ದ ಸದಸ್ಯರು.

ವಾಣಿಜ್ಯ ಮಳಿಗೆಗಳ ಹರಾಜು ಸಂಬಂಧ ಸೋಮವಾರ ಬೆಳಗ್ಗೆ ಪುರಸಭೆ ಆಡಳಿತಾಧಿಕಾರಿ, ಹುಣಸೂರು ಎಸಿ ಮಹಮದ್ ಹ್ಯಾರಿಸ್ ಸುಮ್ಮೈರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಗೆ ಸಮಯಕ್ಕೆ ಸರಿಯಾಗಿ ಸದಸ್ಯರು ಬಾರದಿದ್ದರಿಂದ ಚುನಾವಣಾ ತರಬೇತಿ ತುರ್ತು ಸಭೆಗೆ ಆಡಳಿತಾಧಿಕಾರಿಗಳು ಬೆಂಗಳೂರಿಗೆ ತೆರಳಿದರು.

ಆನಂತರ ಮಧ್ಯಾಹ್ನ 1 ಗಂಟೆಗೆ ನಡೆದ ಸದಸ್ಯರು ಮತ್ತು ಆಡಳಿತಾಧಿಕಾರಿಗಳ ವರ್ಚುವಲ್ ಸಭೆಯಲ್ಲಿ ಮಳಿಗೆ ಹರಾಜು ಸಂಬಂಧ ಚರ್ಚೆ ನಡೆಸಿ ಸರ್ಕಾರದ ನಿಯಮಾನುಸಾರ ವಾಣಿಜ್ಯ ಮಳಿಗೆಗಳನ್ನು ಹರಾಜು ಮಾಡಲು ತ್ವರಿತ ಗಮನ ಹರಿಸಬೇಕೆಂದು ಮುಖ್ಯಾಧಿಕಾರಿ ಡಾ.ಜಯಣ್ಣ ಅವರಿಗೆ ಸೂಚಿಸಲಾಯಿತು.

ಸದಸ್ಯರಾದ ನಟರಾಜು, ತೋಂಟದಾರ್ಯ ಮಾತನಾಡಿ, ಮಳಿಗೆ ಹರಾಜು ಮಾಡುವ ಮುನ್ನ ಅವುಗಳಿಗೆ ಬೀಗ ಹಾಕಿ ಆನಂತರ ಮುಂದಿನ ಕ್ರಮ ಕೈಗೊಳ್ಳಬೇಕೆಂದಾಗ ಈ ವಿಚಾರದಲ್ಲಿ ಸರ್ಕಾರದ ನಿಯಮದ ಪ್ರಕಾರವೇ ನಡೆದುಕೊಳ್ಳುವುದಾಗಿ ಮಹಮದ್ ಹ್ಯಾರಿಸ್ ಸುಮ್ಮೈರ್ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಾಧಿಕಾರಿ ಡಾ.ಜಯಣ್ಣ, ನಾಳೆ 72 ವಾಣಿಜ್ಯ ಮಳಿಗೆಗಳಿಗೆ ಬೀಗ ಹಾಕಿ ಹರಾಜು ಪ್ರಕ್ರಿಯೆಗೆ ಚಾಲನೆ ನೀಡುವುದಾಗಿ ಮಾಹಿತಿ ನೀಡಿದರಲ್ಲದೆ, ಫೆ.13ರಿಂದ 27ರವರೆಗೆ ಮಳಿಗೆಗಳನ್ನು ಆನ್‌ಲೈನ್ ಹರಾಜಿನ ಮೂಲಕ ಪಡೆಯಲು ಬಯಸುವವರು ಮುಕ್ತವಾಗಿ ಅರ್ಜಿ ಸಲ್ಲಿಸಬಹುದು ಎಂದರು. ಸದಸ್ಯರಾದ ಸಂತೋಷ್ ಗೌಡ, ಸೈಯದ್ ಸಿದ್ದಿಕ್, ಅಶ್ವಿನಿ, ಶಂಕರ್ ಸ್ವಾಮಿ, ವೀಣಾ, ಕೆ.ಎಲ್. ಜಗದೀಶ್, ಶಂಕರ್, ವಹೀದಾ ಭಾನು, ಸರೋಜ, ಶಿವಕುಮಾರ್, ಶಾರದ, ಕಂದಾಯಾಧಿಕಾರಿ ರಮೇಶ್ ಮತ್ತಿತರರಿದ್ದರು.

ಹೊಸೂರುಂಡಿ ಮಠದಲ್ಲಿ ಶ್ರೀಗುರುಸಿದ್ದ ಸ್ವಾಮೀಜಿಗೆ ಶ್ರದ್ಧಾಂಜಲಿ


ಲಿಂಗೈಕ್ಯ ಶ್ರೀಗುರುಸಿದ್ದ ಸ್ವಾಮೀಜಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ತಿ.ನರಸೀಪುರ, ಫೆ.12– ಲಿಂಗೈಕ್ಯ ಶ್ರೀಗುರುಸಿದ್ದ ಸ್ವಾಮೀಜಿಗಳು ಸರಳ ಸಜ್ಜನಿಕೆ ವ್ಯಕ್ತಿಗಳಾಗಿದ್ದು, ಬಡವರ ಪರವಾದ ಸ್ವಾಮೀಜಿಗಳಾಗಿದ್ದರು. ಮಠಾಧಿಪತಿಯಾಗಿ ಸೇವೆ ಸಲ್ಲಿಸಿ ಲಿಂಗೈಕ್ಯರಾದ ಶ್ರೀಗಳ ಅಗಲಿಕೆ ತೀವ್ರ ನೋವುಂಟು ಮಾಡಿದೆ ಎಂದು ಹೊಸೂರುಂಡಿ ಮಠದ ಮಠಾಧ್ಯಕ್ಷ ರಾಜಶೇಖರ ಸ್ವಾಮೀಜಿ ತಿಳಿಸಿದರು.

ತಾಲೂಕಿನ ಪರಿಣಾಮಿಪುರದ ಬಿದರಿ ಚೌಕಿ ಮಠದ ಗುರು ಸಿದ್ದಸ್ವಾಮೀಜಿಗಳು ಲಿಂಗೈಕ್ಯರಾದ ಹಿನ್ನೆಲೆಯಲ್ಲಿ ಹೊಸೂರುಂಡಿ ಗ್ರಾಮದ ಶ್ರೀಗುರು ಮಲ್ಲೇಶ್ವರ ದಾಸೋಹ ಮಠದಲ್ಲಿ ತಾಲೂಕು ಶರಣ ಸಾಹಿತ್ಯ ಪರಿಷತ್ ವತಿಯಿಂದ ಆಯೋಜಿಸಿದ್ದ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಮಾತನಾಡಿ, ಅವರು ಮೈಸೂರು ಜಿಲ್ಲೆಯಲ್ಲಿ ಮೊದಲ ಸಂಸ್ಕೃತ ವಿದ್ವಾನರಾಗಿದ್ದ ಶ್ರೀಗಳು ಮೈಸೂರಿನ ಮಹಾರಾಜರ ಸಂಸ್ಥಾನದಲ್ಲಿ ವಿದ್ವಾಂಸರಾಗಿ ಸೇವೆ ಸಲ್ಲಿಸಿದ್ದರು ಎಂದು ಗುರುಸಿದ್ಧ ಸ್ವಾಮೀಜಿಗಳ ಸರಳತೆ ಕೊಂಡಾಡಿದರು.

ವಾಟಾಳು ಸೂರ್ಯ ಸಿಂಹಾಸನ ಮಠದ ಪೀಠಾಧ್ಯಕ್ಷ ಶ್ರೀಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಗುರುಸಿದ್ಧ ಸ್ವಾಮಿಗಳು ತುಮಕೂರಿನ ಸಿದ್ಧಗಂಗೆ ಶ್ರೀಶಿವಕುಮಾರಸ್ವಾಮಿಗಳ ಸ್ನೇಹಿತರಾಗಿದ್ದು, ತುಂಬಾ ಸರಳ ಜೀವನ ನಡೆಸುತ್ತಿದ್ದರು. ಸರಳ ವ್ಯಕ್ತಿತ್ವದ ಸ್ವಾಮೀಜಿಗಳು ತಮಗೆ ಸಿಕ್ಕಿದ್ದ ಸರ್ಕಾರಿ ಕೆಲಸ ತ್ಯಜಿಸಿ ಮಠಾಧೀಶರಾಗಿ ಸೇವೆ ಸಲ್ಲಿಸಿದ್ದನ್ನು ಸ್ಮರಿಸಿ ಗುಣಗಾನ ಮಾಡಿದರು.

ಇದೇ ವೇಳೆ ಶ್ರೀಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಮೌನಾಚರಣೆ ಮಾಡಲಾಯಿತು. ಸಭೆಯಲ್ಲಿ ಶಿವಕುಮಾರಸ್ವಾಮಿ, ವೀರಶೈವ ಮಹಾಸಭಾ ಅಧ್ಯಕ್ಷ ತೊಟ್ಟವಾಡಿ ಮಹದೇವಸ್ವಾಮಿ, ಹೋಟೆಲ್ ಕುಮಾರಪ್ಪ, ಜಿ.ಎಲ್.ಉಮೇಶ, ಪೂಜಿತ್ ಕುಮಾರ್, ಮಂಜು, ಆಡಿಟರ್ ಮಂಜುನಾಥ್, ಉಮೇಶ, ಮಹದೇವಪ್ಪ, ಶಿವಕುಮಾರ್, ಎಸ್.ಎಂ.ಆರ್.ಪ್ರಕಾಶ್, ಅಶೋಕ, ಕೇಬಲ್ ರಾಜಶೇಖರ್, ಕುಮಾರಸ್ವಾಮಿ, ಸೋಮಣ್ಣ ಮಾಸ್ಟರ್, ಪ್ರಭುಸ್ವಾಮಿ, ಶಿವಲೀಲಾ, ಮೂರ್ತಿ, ಪ್ರಭುಸ್ವಾಮಿ, ತೋಂಟೇಶ್, ವಕೀಲರಾದ ಜ್ಞಾನೇಂದ್ರಮೂರ್ತಿ, ಪರಮೇಶ್, ಮಹೇಶ್, ಮಹದೇವಸ್ವಾಮಿ, ಜಗದೀಶ್, ಶಾಂತರಾಜು, ಅಕ್ಕಿ ನಾಗಪ್ಪ, ಸುರೇಶ, ಸೋಮಶೇಖರ್, ನಾಗರಾಜು ಹಾಗೂ ಪ್ರಕಾಶ, ಶಿವಬಸಪ್ಪ, ಸುತ್ತಮುತ್ತಲ ಗ್ರಾಮಗಳ ಯಜಮಾನರು, ಮುಖಂಡರು ಭಾಗವಹಿಸಿದ್ದರು.

ಒಂದೇ ಬಾರಿಗೆ ಎಲ್ಲಾ ಕ್ಷೇತ್ರಗಳ ಬಿಜೆಪಿ–ಜೆಡಿಎಸ್ ಮೈತ್ರಿ ಅಭ್ಯರ್ಥಿಗಳ ಪಟ್ಟಿ ಬಿಡುಗಡೆ

ಪಾಂಡವಪುರ, ಫೆ12– ಮಂಡ್ಯ ಕ್ಷೇತ್ರದ ಅಭ್ಯರ್ಥಿ ಸೇರಿದಂತೆ ರಾಜ್ಯದ ಎಲ್ಲಾ ಕ್ಷೇತ್ರಗಳ ಬಿಜೆಪಿ–ಜೆಡಿಎಸ್ ಮೈತ್ರಿ ಅಭ್ಯರ್ಥಿಗಳ ಪಟ್ಟಿ ಒಂದೇ ಬಾರಿಗೆ ಬಿಡುಗಡೆಯಾಗಲಿದೆ. ಮಂಡ್ಯದಲ್ಲಿ ನಾನು ಆಕಾಂಕ್ಷಿತ ಅಭ್ಯರ್ಥಿಯಲ್ಲ ಎಂದು ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರ್ ಹೇಳಿದರು. ಪಟ್ಟಣದಲ್ಲಿ ಖಾಸಗಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.


ನಿಖಿಲ್‌ಕುಮಾರ್

ಜಿಲ್ಲೆಯ ಜನರು ನಮ್ಮ ಕುಟುಂಬದ ಮೇಲೆ ಸಾಕಷ್ಟು ಅಭಿಮಾನ ಹೊಂದಿದ್ದಾರೆ. ಅದರಿಂದ ನನ್ನನ್ನು ಲೋಕಸಭೆಗೆ ಸ್ಪರ್ಧಿಸುವಂತೆ ಒತ್ತಾಯಿಸುತ್ತಿದ್ದಾರೆ. ನಾನು ನಿನ್ನೆಯೇ ಸ್ಪಷ್ಟವಾಗಿ ಹೇಳಿದ್ದೇನೆ, ನಾನು ಚುನಾವಣೆಗೆ ಸ್ಪರ್ಧಿಸಲ್ಲ, ಈ ಭಾರಿ ಚುನಾವಣೆ ರಾಜಕೀಯದಿಂದ ದೂರ ಇದ್ದೇನೆ, ರಾಜ್ಯದ ಯಾವುದೇ ಕ್ಷೇತ್ರದಲ್ಲೂ ಚುನಾವಣೆಗೆ ಸ್ಪರ್ಧಿಸಲ್ಲ, ನಾನು ಒಂದು ವರ್ಷದ ಹಿಂದೆ ಹೇಳಿದ್ದು ಇದೇ ಮಾತು ಈಗ ಹೇಳುತ್ತಿರುವುದು ಇದೇ ಮಾತು ಎಂದು ಎಲ್ಲಾ ಗೊಂದಲಕ್ಕೂ ತೆರೆಎಳೆದರು.

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ನನಗೆ ಪಕ್ಷ ಜವಬ್ದಾರಿ ನೀಡಿದೆ. ಪಕ್ಷ ಸಂಘಟನೆ ವಿಚಾರವಾಗಿ ಎಲ್ಲಾ ಕ್ಷೇತ್ರಗಳಿಗೂ ಪ್ರವಾಸ ಮಾಡುತ್ತೇನೆ. ಮಂಡ್ಯದ ಎಲ್ಲಾ ಕ್ಷೇತ್ರಗಳಿಗೂ ಮುಂದಿನ ದಿನಗಳಲ್ಲಿ ಭೇಟಿಕೊಟ್ಟು ಸಂಘಟನೆ ಮಾಡುತ್ತೇನೆ ಜಿಲ್ಲೆಗೆ ಭೇಟಿಸಂಬಂಧ ಇನ್ನೂ ದಿನಾಂಕ ನಿಗಧಿಪಡಿಸಿಲ್ಲ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ದೇಶದಲ್ಲಿ ಮೋದಿಯನ್ನು ಮತ್ತೊಮ್ಮೆ ಪ್ರಧಾನ ಮಂತ್ರಿಗಳನ್ನಾಗಿ ಮಾಡಬೇಕೆನ್ನುವುದು ಎಲ್ಲರ ಆಸೆಯಾಗಿದೆ. ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ಸಹ ಮೋದಿಯವರನ್ನು ಒಪ್ಪಿ ನಾವು ಎನ್‌ಡಿಎ ಒಕ್ಕೂಟಕ್ಕೆ ಸೇರ್ಪಡೆಗೊಂಡಿದ್ದೇವೆ. ಮೈಸೂರಿಗೆ ಭೇಟಿ ಕೊಟ್ಟ ಕೇಂದ್ರದ ಗೃಹ ಸಚಿವರಾದ ಅಮಿತ್ ಶಾ ಅವರು ಮೈಸೂರಿನಲ್ಲಿ ಬಿಜೆಪಿ ಕೋರ್ ಕಮಿಟಿ ಸಭೆ ನಡೆಸಿ ಬಿಜೆಪಿ ಮುಖಂಡರಿಗೆ ಸ್ಪಷ್ಟ ಸಂದೇಶ ರವಾನಿಸಿದ್ದಾರೆ ಎಂದು ಕೇಳಿಬಂದಿದೆ. ನಮ್ಮಲ್ಲಿ ಯಾವುದೇ ಅಪಸ್ವರಗಳಿಲ್ಲ. ಮುಂದಿನ ದಿನಗಳಲ್ಲಿ ಎಲ್ಲವನ್ನು ಸರಿದೂಗಿಸಿಕೊಂಡು ಚುನಾವಣೆಗೆ ಹೋಗುತ್ತೇವೆ ಎಂದರು.

ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಮಾತನಾಡಿ, ಮಂಡ್ಯ ಲೋಕಸಭೆಗೆ ನಮ್ಮ ಪಕ್ಷದ ನಾಯಕರಾದ ಎಚ್.ಡಿ.ದೇವೇಗೌಡ, ನಿಖಿಲ್ ಕುಮಾರಸ್ವಾಮಿ ಅವರೇ ಸ್ಪರ್ಧೆ ಮಾಡಬೇಕು ಎನ್ನುವುದು ನಮ್ಮ ಎಲ್ಲಾ ನಾಯಕರ ಬೇಡಿಕೆಯಾಗಿದೆ. ಕಳೆದ ಚುನಾವಣೆಯಲ್ಲಿ ನಿಖಿಲ್ ಅವರಿಗೆ ಅನ್ಯಾಯವಾಗಿತ್ತು. ಅವರಿಗೆ ಈ ಚುನಾವಣೆಯಲ್ಲಿ ಅವಕಾಶ ಕೊಡಬೇಕು ಎನ್ನುವುದು ನಮ್ಮೆಲ್ಲರ ಒತ್ತಾಯವಾಗಿದೆ ಎಂದರು.

ಸಂದರ್ಭದಲ್ಲಿ ಮನ್‌ಮುಲ್ ಮಾಜಿ ಅಧ್ಯಕ್ಷ ರಾಮಚಂದ್ರು, ಜೆಡಿಎಸ್ ಯುವ ಮುಖಂಡ ಶಿವರಾಜ್ ಪುಟ್ಟರಾಜು ಸೇರಿದಂತೆ ಹಲವರು ಇದ್ದರು.

ಕೆಎಸ್‌ಎನ್ ಸ್ಮರಣೆ: ಕವಿಕಾವ್ಯ ಮೇಳಕ್ಕೆ ಕವನಗಳು, ಪ್ರಶಸ್ತಿಗೆ ಹೆಸರುಗಳ ಆಹ್ವಾನ

ಮಂಡ್ಯ: ಡಾ.ಜೀಶಂಪ ಸಾಹಿತ್ಯ ವೇದಿಕೆ, ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಫಿಲಂಸ್ ವತಿಯಿಂದ ಪ್ರೇಮಕವಿ ಕೆ.ಎಸ್.ನರಸಿಂಹಸ್ವಾಮಿ ಸ್ಮರಣಾರ್ಥ ಮಾರ್ಚ್ 3ರಂದು ಮಂಡ್ಯ ಜಿಲ್ಲೆಯ ಕೆ.ಆರ್.ಪೇಟೆ ಪಟ್ಟಣದಲ್ಲಿ ಕನ್ನಡ ಅಕ್ಷರ ಜಾತ್ರೆಯನ್ನು ಆಯೋಜಿಸಿದ್ದು, ಆಸಕ್ತರಿಂದ ಕವನಗಳನ್ನು ಹಾಗೂ ವಿವಿಧ ಪ್ರಶಸ್ತಿಗೆ ಸಾಧಕರ ಹೆಸರನ್ನು ಆಹ್ವಾನಿಸಲಾಗಿದೆ. ಆಸಕ್ತರು 25 ಸಾಲಿನ ಎರಡು ಕವನಗಳು, ಕಿರು ಪರಿಚಯ, ಫೋಟೋ, ಮೊಬೈಲ್ ಸಂಖ್ಯೆ, ವಿಳಾಸವನ್ನು ಮತ್ತು ಸಾಧಕರು ಸಾಧನೆಯ ವಿವರಗಳನ್ನು ಕಳುಹಿಸಬೇಕು. ವ್ಯಾಟ್ಸಪ್‌ನಲ್ಲಿ ಮೊದಲು ನೋಂದಣಿ ಮಾಡಿಕೊಂಡು, ನಂತರ ಅಂಚೆ ಮೂಲಕ ವಿವರವನ್ನು ಕಳುಹಿಸಬೇಕು. ಕವನಗಳು ಯಾವುದಾದರೂ ವಿಷಯವನ್ನು ಒಳಗೊಂಡಿರಬಹುದು. ಆಯ್ಕೆಯಾದ ಕವಿತೆಗಳನ್ನು ಪುಸ್ತಕ ರೂಪದಲ್ಲಿ ಹೊರತರಲಾಗುವುದು. ಐವತ್ತು ಮಂದಿ ಕವಿಗಳಿಗೆ ಕವಿಗೋಷ್ಠಿಯಲ್ಲಿ ಅವಕಾಶ ಕಲ್ಪಿಸಲಾಗುವುದು.

ನಾಳೆ ನಗರಸಭೆ ಬಜೆಟ್ ಪೂರ್ವಭಾವಿ ಸಭೆ

ಮಂಡ್ಯ: ನಗರಸಭೆಯ 2024–25ನೇ ಸಾಲಿನ ಆಯವ್ಯಯ (ಬಜೆಟ್)ದ ಬಗ್ಗೆ ಪೂರ್ವಭಾವಿ ಸಭೆಯನ್ನು ಫೆ.14 ರಂದು ನಗರಸಭಾ ಕಾರ್ಯಲಯದ ಅಮೃತ ಭವನ ಸಭಾಂಗಣದಲ್ಲಿ ಬೆಳಿಗ್ಗೆ 11 ಗಂಟೆಗೆ ಏರ್ಪಡಿಸಲಾಗಿದೆ.

ನಗರ ಸಭೆಯ ಚುನಾಯಿತ ಪ್ರತಿನಿಧಿಗಳು, ಮಾಜಿ ಅಧ್ಯಕ್ಷರು, ಮಾಜಿ ಉಪಾಧ್ಯಕ್ಷರು, ಸದಸ್ಯರುಗಳು, ನಗರದ ನೋಂದಾಯಿತ ಸಂಘ ಸಂಸ್ಥೆಗಳ ಪ್ರತಿನಿಧಿಗಳು, ವಾಣಿಜ್ಯ ಮತ್ತು ಕೈಗಾರಿಕಾ ಸಂಘಟನೆಗಳ ಪ್ರತಿನಿಧಿಗಳು, ಹಿರಿಯ ನಾಗರಿಕರು, ಸಮಾಜ ಸೇವಕರು ಸಭೆಯಲ್ಲಿ ಪಾಲ್ಗೊಂಡು ತಮ್ಮ ಸೂಕ್ತ ಸಲಹೆಗಳನ್ನು ನೀಡುವಂತೆ ಪ್ರಕಟಣೆ ಕೋರಿದೆ.

ಮೂರು ಸ್ಕ್ಯಾನಿಂಗ್ ಸೆಂಟರ್ ವಿರುದ್ಧ ದೂರು ದಾಖಲು

ಮಂಡ್ಯ,ಫೆ.12– ಜಿಲ್ಲೆಯಲ್ಲಿ ಇತ್ತೀಚೆಗೆ ನಡೆದ ಭ್ರೂಣ ಹತ್ಯೆ ಪ್ರಕರಣ ಕುರಿತಂತೆ ಸ್ಕ್ಯಾನಿಂಗ್ ಸೆಂಟರ್‌ಗಳನ್ನು ಪರಿಶೀಲಿಸಿದ ಸಂದರ್ಭದಲ್ಲಿ ಕೆ.ಆರ್.ಪೇಟೆ ತಾಲೂಕಿನಲ್ಲಿ 1, ನಾಗಮಂಗಲ ತಾಲೂಕಿನಲ್ಲಿ 2 ಸ್ಕ್ಯಾನಿಂಗ್ ಸೆಂಟರ್‌ಗಳಲ್ಲಿ ನಿಯಮ ಉಲ್ಲಂಘನೆ ಕಂಡುಬಂದಿದ್ದು, ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ್ ತಿಳಿಸಿದರು.


ಸೋಮವಾರ ನಡೆದ ಆರೋಗ್ಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾಧಿಕಾರಿ ಕುಮಾರ್ ಮಾತನಾಡುತ್ತಿರುವುದು.

ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಆರೋಗ್ಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಿಲ್ಲೆಯಲ್ಲಿ 55 ಸ್ಕ್ಯಾನಿಂಗ್ ಸೆಂಟರ್, 25 ಹಾಸ್ಪಿಟಲ್, 32 ಲ್ಯಾಬ್, 130 ಕ್ಲಿನಿಕ್‌ಗಳನ್ನು ಪರಿಶೀಲಿಸಿರುವ ಬಗ್ಗೆ ನಿಯೋಜಿಸಿರುವ ವೈದ್ಯರು, ಅಧಿಕಾರಿಗಳು ಇಲ್ಲಿ ಯಾವುದೇ ಹೆಣ್ಣು ಭ್ರೂಣ ಲಿಂಗ ಪತ್ತೆ ಅಥವಾ ಅನಧಿಕೃತ ಕೃತ್ಯ ನಡೆಯುತ್ತಿಲ್ಲ ಎಂಬ ದೃಢೀಕರಣ ಪತ್ರವನ್ನು ನೀಡಬೇಕು ಎಂದರು.

ಈಗಾಗಲೇ ಜಿಲ್ಲಾ, ತಾಲೂಕು ಹಾಗೂ ಗ್ರಾಮ ಮಟ್ಟದಲ್ಲಿ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿದೆ. ಅರಿವು ಕಾರ್ಯಕ್ರಮ ಇನ್ನೂ ಚುರುಕುಗೊಳ್ಳಬೇಕು. ಜಾಗೃತಿ ಕಾರ್ಯಕ್ರಮದಲ್ಲಿ ಸ್ಥಳೀಯ ಸಂಘ ಸಂಸ್ಥೆಗಳನ್ನು ಹೆಚ್ಚು ತೊಡಗಿಸಿಕೊಳ್ಳಬೇಕು. ಗ್ರಾಮ ಮತ್ತು ವಾರ್ಡ್ ಸಭೆಗಳಲ್ಲಿ ಒಬ್ಬರೂ ಆರೋಗ್ಯ ಇಲಾಖೆಯ ಅಧಿಕಾರಿಗಳನ್ನು ನಿಯೋಜಿಸಿ, ಸಭೆಯಲ್ಲಿ ಹೆಣ್ಣು ಭ್ರೂಣ ಹತ್ಯೆಯ ದುಷ್ಪರಿಣಾಮ ಕುರಿತು ಅರಿವು ಮೂಡಿಸಿ ಎಂದು ಸೂಚನೆ ನೀಡಿದರು.

ಡಿಎಚ್‌ಓ ಡಾ.ಮೋಹನ್ ಮಾತನಾಡಿ, ಜನವರಿ ಮಾಹೆಯಿಂದ ಇಲ್ಲಿಯವರೆಗೆ 12 ವಾರಕ್ಕೂ ಮೇಲ್ಪಟ್ಟು ಗರ್ಭಪಾತವಾಗಿರುವ ಪ್ರಕರಣಗಳ ಮಾಹಿತಿ ಪಡೆದು ಅವುಗಳನ್ನು ಪರಿಶೀಲಿಸಿ ಅದು ವೈದ್ಯಕೀಯ ಹಿನ್ನಲೆಯಲ್ಲಿ ವೈದ್ಯರ ಅಭಿಪ್ರಾಯದ ಮೇಲೆ ಆಗಿರುವ ಬಗ್ಗೆ ಮಾಹಿತಿ ಪಡೆಯಲಾಗಿದೆ ಎಂದು ಅವರು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ಬೆಟ್ಟಸ್ವಾಮಿ, ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ಸೋಮಶೇಖರ್, ಮಹಿಳಾ ಪರ ಹೋರಾಟಗಾರರಾದ ಸುನಂದಾ ಜಯರಾಂ, ದೇವಿ, ಸಿ.ಕುಮಾರಿ, ವಿಮೋಚನ ಸಂಸ್ಥೆಯ ಮುಖ್ಯಸ್ಥ ಜನಾರ್ದನ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಮಿತ್ರ ಮಂಗಳವಾರ 13 ಫೆಬ್ರವರಿ 2024



'ಮೈಸೂರು ಮಿತ್ರ' ಮತ್ತು 'ಸ್ಟಾರ್ ಆಫ್ ಮೈಸೂರು' ರೇಸಿಂಗ್ ಪ್ರತಿನಿಧಿ ಪಿ.ಜಿ.ಚಂದ್ರಶೇಖರ್ ಅವರಿಗೆ ಮೈಸೂರು ರೇಸ್ ಕ್ಲಬ್ ವತಿಯಿಂದ ಎಂಆರ್‌ಸಿ ಸ್ಟೀವರ್ಡ್ ಕೆ.ಎನ್.ಸುರೇಶ್ ಕುಮಾರ್ ಅವರಿಂದ ಟಿಪ್‌ಸ್ಟರ್ ಟ್ಯಾಲಿ ಟ್ರೋಫಿ ವಿತರಿಸಲಾಯಿತು. ಈ ವೇಳೆ ಎಂಆರ್‌ಸಿ ಛೇರ್‌ಮನ್ ಚಂದ್ರೇಗೌಡರು, ಸ್ಟೀವರ್ಡ್‌ಗಳು ಮತ್ತು ಕಮಿಟಿ ಸದಸ್ಯರು ಉಪಸ್ಥಿತರಿದ್ದರು.

ಶಿಲ್ಪಿ ಕಪ್–2024 ಕ್ರಿಕೆಟ್ ಪಂದ್ಯಾವಳಿಯಲ್ಲಿ ಎನ್‌ಐಇ ಚಾಂಪಿಯನ್



ಶಿಲ್ಪಿ ಕಪ್–2024 ಕ್ರಿಕೆಟ್ ಪಂದ್ಯಾವಳಿಯಲ್ಲಿ ಎನ್‌ಐಇ ಕಾಲೇಜು ತಂಡ ಚಾಂಪಿಯನ್ ಆಯಿತು. ರಾಷ್ಟ್ರೀಯ ಕ್ರಿಕೆಟ್ ಆಟಗಾರ ಎನ್.ಸಿ.ಅಯ್ಯಪ್ಪ, ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ ರಾಷ್ಟ್ರೀಯ ಉಪಾಧ್ಯಕ್ಷ ಎನ್.ಎಸ್.ಮುರುಳಿಧರಪ್ಪ, ಜಿಲ್ಲಾ ಅಧ್ಯಕ್ಷ ನಾಗರಾಜ್ ಭೈರಿ ಮತ್ತಿತರರಿದ್ದರು.

ಮೈಸೂರು, ಫೆ.12(ಎಂಕೆ)– ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ ವತಿಯಿಂದ ಆಯೋಜಿಸಿದ್ದ ಶಿಲ್ಪಿ ಕಪ್–2024 ಕ್ರಿಕೆಟ್ ಪಂದ್ಯಾವಳಿಯಲ್ಲಿ ಎನ್‌ಐಇ ಕಾಲೇಜು ತಂಡ ಚಾಂಪಿಯನ್ ಆಯಿತು.

ಮಾನಸಗಂಗೋತ್ರಿ ಎಸ್‌ಜೆಸಿಇ ಕ್ರಿಕೆಟ್ ಮೈದಾನಲ್ಲಿ ನಡೆದ ಮೂರು ದಿನಗಳ ಪಂದ್ಯಾವಳಿಯ ಫೈನಲ್ ಪಂದ್ಯದಲ್ಲಿ 5 ವಿಕೆಟ್ ಜಯದೊಂದಿಗೆ ಎನ್‌ಐಇ ಕಾಲೇಜು ತಂಡ ಶಿಲ್ಪಿ ಕಪ್ ತನ್ನದಾಗಿಸಿಕೊಂಡರೆ, ವಿದ್ಯಾವರ್ಧಕ ಇಂಜಿನಿಯರ್ ಕಾಲೇಜು ತಂಡ ರನ್ನರ್ ಅಪ್ ಆಯಿತು. ಪಂದ್ಯಶ್ರೇಷ್ಠ ಪ್ರಶಸ್ತಿಗೆ ಎನ್‌ಐಇ ಕಾಲೇಜು ತಂಡದ ಗೌರವ್ ಭಾಜನರಾದರೆ, ಅತ್ಯುತ್ತಮ ಬ್ಯಾಟ್ಸ್‌ಮನ್ ವಿದ್ಯಾವರ್ಧಕ ಕಾಲೇಜು ತಂಡ ರಿಥೇಶ್, ಅತ್ಯುತ್ತಮ ಬೌಲರ್ ಆಗಿ ಸಂಜೀತ್(ಎನ್‌ಐಇ) ಹೊರಹೊಮ್ಮಿದರು.

ವಿಜೇತ ಹಾಗೂ ರನ್ನರ್ ಅಪ್ ತಂಡಗಳಿಗೆ ಬಹುಮಾನ ವಿತರಿಸಿದ ರಾಷ್ಟ್ರೀಯ ಕ್ರಿಕೆಟ್ ಆಟಗಾರ ಎನ್.ಸಿ.ಅಯ್ಯಪ್ಪ, ಆಟಗಾರರನ್ನು ಅಭಿನಂದಿಸಿದರು. ಬಳಿಕ ಮಾತನಾಡಿ, ಶಿಲ್ಪಿ ಕಪ್ ಮೈಸೂರಿನ ಪ್ರತಿಷ್ಠಿತ ಟೆನಿಸ್ ಬಾಲ್ ಪಂದ್ಯಾವಳಿಯಾಗಿ ಜನಪ್ರಿಯವಾಗಿದೆ. ಮುಖ್ಯವಾಗಿ ಸಿವಿಲ್ ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಪ್ರತ್ಯೇಕವಾಗಿ ಆಯೋಜನೆ ಮಾಡುತ್ತಿರುವುದು ವಿಶೇಷ. ಇಂಜಿನಿಯರಿಂಗ್ ಗೆಳೆಯರಲ್ಲಿ ಸೌಹಾರ್ದವನ್ನು ಬೆಳೆಸಲು ಮತ್ತು ಶೈಕ್ಷಣಿಕ ಚಟುವಟಿಕೆಗಳಿಂದ ಬಿಡುವು ನೀಡಲು ಇದನ್ನು ವಿನ್ಯಾಸಗೊಳಿಸಲಾಗಿದೆ. 2011–2012ರಲ್ಲಿ ಪ್ರಾರಂಭವಾದಾಗಿನಿಂದ, ಪಂದ್ಯಾವಳಿ ತನ್ನ ಯಶಸ್ಸನ್ನು ಉಳಿಸಿಕೊಂಡಿದ್ದು, 9ನೇ ಆವೃತ್ತಿ ಶಿಲ್ಪಿ ಕಪ್ ಪಂದ್ಯಾವಳಿ ಯಶಸ್ವಿಯಾಗಿದೆ ಎಂದರು.

ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ ರಾಷ್ಟ್ರೀಯ ಉಪಾಧ್ಯಕ್ಷ ಎನ್.ಎಸ್.ಮುರುಳಿಧರಪ್ಪ, ಜಿಲ್ಲಾ ಅಧ್ಯಕ್ಷ ನಾಗರಾಜ್ ಭೈರಿ, ಜಂಟಿ ಕಾರ್ಯದರ್ಶಿ ವಾಸುದೇವನ್, ಶಿಲ್ಪಿ ಕಪ್ ಸಂಯೋಜಕರಾದ ದಿನೇಶ್, ಭಾರ್ಗವ್ ಶಿಂಧೆ, ಟಿ.ಎಸ್.ಗುರುದತ್, ಸಿ.ವಿಶ್ವನಾಥ್ ಮತ್ತು ಸಂಪತ್, ನಿರೂಪಕ ಪ್ರಣವ್ ಪ್ರಭಾಕರ್ ರಾವ್ ಮತ್ತಿತರರಿದ್ದರು.

ಫೆ. 21ರಿಂದ ಕನ್ನಡಿಗರ ತೆರಿಗೆ ಪಾಲು ನೀಡುವಂತೆ ಆಗ್ರಹಿಸಿ ಧರಣಿ ಸತ್ಯಾಗ್ರಹ

ಮೈಸೂರು, ಫೆ. 12– ಕನ್ನಡಿಗರಿಗೆ ಕೇಂದ್ರ ಸರ್ಕಾರದಿಂದ ಆಗುತ್ತಿರುವ ಘೋರ ಅನ್ಯಾಯವನ್ನು ಖಂಡಿಸಿ ಹಾಗೂ ತೆರಿಗೆಯಲ್ಲಿನ ನಮ್ಮ ಪಾಲನ್ನು ಕೂಡಲೇ ನೀಡುವಂತೆ ಆಗ್ರಹಿಸಿ, ಮೈಸೂರಿನ ಕನ್ನಡಪರ ಮನಸ್ಸುಗಳು ಫೆ. 21ರ ಬುಧವಾರ ಬೆಳಿಗ್ಗೆ 10 ಗಂಟೆಯಿಂದ ಫೆ. 23ರ ಶುಕ್ರವಾರ ಬೆಳಿಗ್ಗೆ 10 ಗಂಟೆಯವರೆಗೆ 48 ಗಂಟೆಗಳ ಶಾಂತಿಯುತ ಅಹೋರಾತ್ರಿ ಧರಣಿ ಸತ್ಯಾಗ್ರಹ ನಡೆಸಲು ನಿರ್ಧರಿಸಿವೆ ಎಂದು ಪತ್ರಕರ್ತ ಟಿ. ಗುರುರಾಜ್ ತಿಳಿಸಿದ್ದಾರೆ.

ನಾಡಿನ ಎಲ್ಲ ಜನಪರ ಸಂಘಟನೆಗಳಲ್ಲಿರುವ ಕನ್ನಡಪರ ಚೇತನಗಳೊಟ್ಟಿಗೆ ಸೇರಿ ಈ ಸತ್ಯಾಗ್ರಹವನ್ನು ನಡೆಸಲು ತೀರ್ಮಾನಿಸಲಾಗಿದೆ. ಈ ಪ್ರತಿಭಟನೆ, ಸತ್ಯಾಗ್ರಹ, ಧರಣಿಗೆ ಯಾರ ನೇತೃತ್ವವೂ ಇಲ್ಲ, ಯಾವ ಪಕ್ಷದ ಧ್ವಜವೂ ಇಲ್ಲ, ಯಾವ ಸಿದ್ಧಾಂತಗಳೂ ಇಲ್ಲ. ಇದು ಯಾವುದೇ ಸರ್ಕಾರದ ಪರವೂ ಅಲ್ಲ; ಯಾವುದೇ ಸರ್ಕಾರದ ವಿರೋಧವೂ ಅಲ್ಲ ಎಂದು ಅವರು ತಮ್ಮ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಸೋಮವಾರ ನಡೆದ ಪೂರ್ವಭಾವಿ ಸಭೆಯಲ್ಲಿ ಈ ಬಗ್ಗೆ ಒಮ್ಮತದ ನಿರ್ಣಯ ಕೈಗೊಳ್ಳಲಾಗಿದೆ. ಈ ಸತ್ಯಾಗ್ರಹದ ಬಗ್ಗೆ ಪೊಲೀಸ್ ಆಯುಕ್ತರಿಗೆ ಹಾಗೂ ನಗರ ಪಾಲಿಕೆ ಆಯುಕ್ತರಿಗೆ ಮಾಹಿತಿ ನೀಡಲೂ ಸಹ ತೀರ್ಮಾನಿಸಲಾಗಿದೆ.

ಇದೇ ವಿಚಾರದ ಮುಂದುವರೆದ ಸಾಧ್ಯತೆಗಳ ಕುರಿತು ಚರ್ಚಿಸುವ, ವಿಮರ್ಶಿಸುವ ಸಲುವಾಗಿ ಬುಧವಾರ (ಫೆ. 14) ಸಂಜೆ 4 ಗಂಟೆಗೆ ಜಲದರ್ಶಿನಿ ಅತಿಥಿಗೃಹದಲ್ಲಿ ಸಭೆ ಕರೆಯಲಾಗಿದೆ.

ನೆಲೆ–ಹಿನ್ನೆಲೆಯ ಗೋಪಾಲ್, ಹೋರಾಟಗಾರರಾದ ಉಗ್ರ ನರಸಿಂಹೇಗೌಡ, ಅಹಿಂದ ಶಿವರಾಂ, ಮೋಹನಕುಮಾರ್ ಗೌಡ, ಸವಿತಾ ಪ. ಮಲ್ಲೇಶ್, ಸಂತೋಷ್, ಸುರಭಿ, ಜಗದೀಶ್ ಸೂರ್ಯ, ಜಗನ್ನಾಥ್, ಜಿ.ಆರ್. ಮೋಹನ್‌ಕುಮಾರ್, ಹರೀಶ್ ಕುಮಾರ್, ಪತ್ರಕರ್ತ ಪುನೀತ್, ಹಿರಿಯ ರಂಗಕರ್ಮಿಗಳಾದ ಕೃಷ್ಣಪ್ರಸಾದ್ ಮಾಯಸಂದ್ರ, ರಾಮು ಮತ್ತಿತರರು ಸಭೆಯಲ್ಲಿ ಪಾಲ್ಗೊಂಡಿದ್ದರು.

ಪಾಕಿಸ್ತಾನ ಚುನಾವಣೆ: ರಾಷ್ಟ್ರವ್ಯಾಪಿ ಪ್ರತಿಭಟನೆಗೆ ಇಮ್ರಾನ್ ಖಾನ್ ಪಕ್ಷ ಕರೆ

ಇಸ್ಲಾಮಾಬಾದ್: ಪಾಕಿಸ್ತಾನ ಸಾರ್ವತ್ರಿಕ ಚುನಾವಣೆ ಫಲಿತಾಂಶ ಪ್ರಕಟವಾಗಿ ಮೂರು ದಿನ ಕಳೆದಿದ್ದರೂ ಸರ್ಕಾರ ರಚನೆ ಸಾಧ್ಯವಾಗಿಲ್ಲ. ಪಾಕಿಸ್ತಾನ್ ತೆಹ್ರೀಕ್–ಇ–ಇನ್ಸಾಫ್ (ಪಿಟಿಐ) ಅಧ್ಯಕ್ಷ ಬ್ಯಾರಿಸ್ಟರ್ ಗೋಹರ್ ಅಲಿಖಾನ್ ಅವರು ಭಾನುವಾರ ಚುನಾವಣಾಧಿಕಾರಿಗಳ (ಆರ್‌ಒ) ವಿರುದ್ಧ ರಾಷ್ಟ್ರವ್ಯಾಪಿ ಶಾಂತಿಯುತ ಪ್ರತಿಭಟನೆಗೆ ಕರೆ ನೀಡಿದ್ದಾರೆ ಎಂದು ಪಾಕಿಸ್ತಾನ ಮೂಲದ ದಿ ಎಕ್ಸ್‌ಪ್ರೆಸ್ ಟ್ರಿಬ್ಯೂನ್ ವರದಿ ಮಾಡಿದೆ.

ಫೆಬ್ರವರಿ 8 ರ ಚುನಾವಣೆಯ ನಂತರ 'ಗುಲಾಮಗಿರಿ ಸ್ವೀಕಾರಾರ್ಹವಲ್ಲ' ಎಂಬ ಪಾಕಿಸ್ತಾನದ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಅವರ ದೃಷ್ಟಿಯಲ್ಲಿ ಪಾಕಿಸ್ತಾನದ ಜನರು ಸಂಪೂರ್ಣ ವಿಶ್ವಾಸ ಹೊಂದಿದ್ದಾರೆ. ಮತ ಎಣಿಕೆ ದಿನದಂದು ಎದುರಿಸಿದ ಸವಾಲುಗಳ ಹೊರತಾಗಿಯೂ, ಜನರು ಪಿಟಿಐ ಪರವಾಗಿ ಸ್ಪಷ್ಟ ಮತ್ತು ಪಾರದರ್ಶಕ ಜನಾದೇಶವನ್ನು ಪ್ರದರ್ಶಿಸಿದ್ದಾರೆ ಎಂದು ಗೋಹರ್ ಅಲಿಖಾನ್ ಹೇಳಿದ್ದಾರೆ.

ಆರ್‌ಒಗಳು ಮತ್ತೊಮ್ಮೆ ತಮ್ಮ ಅಧಿಕಾರವನ್ನು ಕಸಿದುಕೊಳ್ಳಲು ಪ್ರಯತ್ನಿಸುತ್ತಿದ್ದಾರೆ ಎಂದು ಅವರು ಆರೋಪಿಸಿದ್ದು, ಚುನಾವಣಾ ಫಲಿತಾಂಶಗಳನ್ನು ತಿರುಚುವ ಮೂಲಕ ಪ್ರಜಾಪ್ರಭುತ್ವವನ್ನು ದುರ್ಬಲಗೊಳಿಸುವ ಪ್ರಯತ್ನಗಳನ್ನು ಖಂಡಿಸಿದರು. ಅಂತಹ ಯಾವುದೇ ಕ್ರಮವು ಪಾಕಿಸ್ತಾನಕ್ಕೆ ಹಾನಿಕರ ಮತ್ತು ಜನರಿಗೆ ಸ್ವೀಕಾರಾರ್ಹವಲ್ಲ, ತಮ್ಮ ಮತದಾನದ ಹಕ್ಕುಗಳ ಉಲ್ಲಂಘನೆಯನ್ನು ಯಾರೂ ಸಹಿಸುವುದಿಲ್ಲ ಎಂದು ಅಲಿಖಾನ್ ಎಚ್ಚರಿಸಿದ್ದಾರೆ.

ಜನಾದೇಶವನ್ನು ರಕ್ಷಿಸುವ ಮೂಲಭೂತ ಉದ್ದೇಶಕ್ಕಾಗಿ ಸಾಂವಿಧಾನಿಕ, ಪ್ರಜಾಪ್ರಭುತ್ವ ಮತ್ತು ರಾಜಕೀಯ ಹಕ್ಕುಗಳನ್ನು ಬಳಸಿಕೊಳ್ಳುವ ಪ್ರಾಮುಖ್ಯತೆಯನ್ನು ಅವರು ಎತ್ತಿ ತೋರಿಸಿದರು ಎಂದು ಎಕ್ಸ್‌ಪ್ರೆಸ್ ಟ್ರಿಬ್ಯೂನ್ ವರದಿ ಮಾಡಿದೆ.

ಕೇಂದ್ರ, ಪಂಜಾಬ್ ಮತ್ತು ಖೈಬರ್ ಪಖ್ತುಂಖ್ವಾದಲ್ಲಿ ಸ್ಪಷ್ಟ ಬಹುಮತಗಳಿಸುವುದು ಪಿಟಿಐನ ಸಾಂವಿಧಾನಿಕ ಮತ್ತು ಪ್ರಜಾಸತ್ತಾತ್ಮಕ ಹಕ್ಕು ಎಂದು ಪಿಟಿಐ ಅಧ್ಯಕ್ಷರು ಪ್ರತಿಪಾದಿಸಿದ್ದಾರೆ. ಜನಾದೇಶದ ಸಂಪೂರ್ಣ ಗೌರವವನ್ನು ಕಾಪಾಡುವುದು ಪಾಕಿಸ್ತಾನದ ಹಿತದೃಷ್ಟಿಯಿಂದ ಮತ್ತು ಎಲ್ಲಾ ಸಂದರ್ಭಗಳಲ್ಲಿಯೂ ಅದನ್ನು ಕಾಪಾಡಿಕೊಳ್ಳಬೇಕು ಎಂದು ಅವರು ಹೇಳಿದ್ದಾರೆ.

ಡಿಜಿಟಲ್ ಸಂವಹನದಲ್ಲಿ ಸುರಕ್ಷತೆಗೆ ಚಾಲನೆ

ಮೈಸೂರು, ಫೆ. 12– ಪ್ರಮುಖ ಜಾಗತಿಕ ಸಂವಹನಗಳು ಮತ್ತು ಕಾಲರ್ ಐಡಿ ಪ್ಲಾಟ್‌ಫಾರಂ ಆಗಿರುವ ಟ್ರೂ ಕಾಲರ್ ಈಗ ಕರ್ನಾಟಕ ಸರ್ಕಾರದ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಇಲಾಖೆ (ಡಿಇಐಟಿ) ಸಹಭಾಗಿತ್ವದಲ್ಲಿ ಸೈಬರ್ ಅಪರಾಧ, ಸುಳ್ಳು ಗುರುತು ಮತ್ತು ಮೋಸದ ಘಟನೆಯನ್ನು ತಡೆಯಲು ಜೊತೆಯಾಗಿದ್ದು, ಡಿಜಿಟಲ್ ಸಂವಹನದಲ್ಲಿ ಬಳಕೆದಾರರ ಸುರಕ್ಷತೆಯನ್ನು ಜೈವಿಕ ತಂತ್ರಜ್ಞಾನ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಉದ್ಘಾಟಿಸಿದರು.

ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಸಮ್ಮುಖದಲ್ಲಿ ಸುರಕ್ಷಿತ ಇಂಟರ್‌ನೆಟ್‌ಗೆ ಸಹಿ ಹಾಕಲಾಗಿದ್ದು, ನಾಗರಿಕರ ಸೈಬರ್ ಸುರಕ್ಷತೆ ಜಾಗೃತಿ ಮತ್ತು ಕೌಶಲಗಳನ್ನು ಸಬಲೀಕರಿಸುವ ಉದ್ದೇಶವನ್ನು ಈ ಕ್ರಮವು ಹೊಂದಿದೆ. ಈ ಸಹಭಾಗಿತ್ವದ ಭಾಗವಾಗಿ, ಜಾಗೃತಿ ಮೂಡಿಸಲು ಮತ್ತು ರಾಜ್ಯಾದ್ಯಂತ ನಾಗರಿಕರ ಸಾಮರ್ಥ್ಯವನ್ನು ರೂಪಿಸಲು ಟ್ರೂ ಕಾಲರ್ ಹಲವು ಕ್ರಮಗಳನ್ನು ಕೈಗೊಳ್ಳಲಿದೆ. ಈ ಮೂಲಕ ಇಂಟರ್ನೆಟ್ ಸುರಕ್ಷತೆಗೆ ಅನುವು ಮಾಡಲಿದೆ ಮತ್ತು ಫೋನ್ ಆಧರಿತ ಮೋಸಗಳು ಮತ್ತು ಸ್ಕ್ಯಾಮ್‌ಗಳು ಸೇರಿದಂತೆ ಆನ್‌ಲೈನ್ ಅಪಾಯಗಳಿಂದ ಬಳಕೆದಾರರನ್ನು ರಕ್ಷಿಸಲಿದೆ ಎಂದರು.

ಈ ಬಗ್ಗೆ ಮಾತನಾಡಿದ ಟ್ರೂ ಕಾಲರ್‌ನ ಭಾರತೀಯ ಮುಖ್ಯ ಉತ್ಪನ್ನ ಅಧಿಕಾರಿ ಮತ್ತು ವ್ಯವಸ್ಥಾಪಕ ನಿರ್ದೇಶಕ ರಿಶಿತ್ ಜುಂಝುನ್‌ವಾಲಾ "ಸಂವಹನದಲ್ಲಿ ಡಿಜಿಟಲ್ ಸುರಕ್ಷತೆಯನ್ನು ಸುಧಾರಿಸಲು ಕರ್ನಾಟಕ ಸರ್ಕಾರದ ಜೊತೆಗೆ ಸಹಭಾಗಿತ್ವ ಸಾಧಿಸಲು ನಮಗೆ ಹೆಮ್ಮೆಯಿದೆ ಎಂದರು.

ಎಂ.ಎನ್. ಪದಕಿ ನಿಧನ



ಮೈಸೂರು, ಫೆ. 12– ಮೈಸೂರಿನ ಹೆಸರಾಂತ ಉದ್ಯಮಿ ಎಂ.ಎನ್. ಪದಕಿ(84) ಅವರು ಇಂದು ರಾತ್ರಿ ಮೈಸೂರಿನ ಲಕ್ಷ್ಮೀಪುರಂನ ತಮ್ಮ ನಿವಾಸದಲ್ಲಿ ನಿಧನರಾದರು. ಮೃತರು ಪತ್ನಿ ಪರಿಮಳಾ ಪದಕಿ, ಪುತ್ರಿಯರಾದ ವೀಣಾ, ವೈಶಾಲಿ, ವಿದ್ಯಾ, ಅಳಿಯಂದಿರಾದ ಪ್ರಕಾಶ್, ಹನುಮಂತ್, ರಕ್ಷಿತಾ, ಮೊಮ್ಮಕ್ಕಳು ಹಾಗೂ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಇವರು ಶಾಂತಲಾ (ಈಗ ಮುಚ್ಚಿದೆ), ಡಿಆರ್‌ಸಿ ಚಿತ್ರಮಂದಿರಗಳ ಮಾಲೀಕರು ಆಗಿದ್ದರು. ಇವರ ಅಂತ್ಯಕ್ರಿಯೆ ಫೆ. 14 (ಬುಧವಾರ) ಮೈಸೂರಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. (ಮೊ: 9886245000, 9880474705)

ಚಂದ್ರು



ಮೈಸೂರು, ಫೆ. 12– ಮೈಸೂರಿನ ಒಂಟಿಕೊಪ್ಪಲು ನಿವಾಸಿ ಹಾಗೂ ಜಾವಾ ಫ್ಯಾಕ್ಟರಿ ಮಾಜಿ ನೌಕರ ಚಂದ್ರು(73) ಅವರು ಇಂದು ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರರು ಹಾಗೂ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ನಾಳೆ (ಮಂಗಳವಾರ) ಪೂರ್ವಾಹ್ನ 11.30ಕ್ಕೆ ಗೋಕುಲಂ ರುದ್ರಭೂಮಿಯಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಸಂಚಲನ ಮಕ್ಕಳ ನಾಟಕೋತ್ಸವ; ಜಾನಪದ ಉತ್ಸವಕ್ಕೆ ಚಾಲನೆ



ಮೈಸೂರು ನಗರದ ಕಿರುರಂಗಮಂದಿರದಲ್ಲಿ ಐದು ದಿನಗಳ 'ಸಂಚಲನ ಮಕ್ಕಳ ನಾಟಕೋತ್ಸವ–ಜಾನಪದ ಉತ್ಸವ'ಕ್ಕೆ ಚಾಲನೆ ದೊರಕಿತು.

ಮೈಸೂರು, ಫೆ.12(ಎಸ್‌ಪಿಎನ್)– ನಗರದ ಕಲಾಮಂದಿರ ಆವರಣದ ಕಿರುರಂಗ ಮಂದಿರದಲ್ಲಿ ಬೆಂಗಳೂರು ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ, ಬೆಂಗಳೂರು ಪ್ರವಾಸೋದ್ಯಮ ಇಲಾಖೆ, ಸಂಚಲನ ಮೈಸೂರು, ಡ್ರೀಮ್ ಬಜ್ಜ್ ಫೌಂಡೇಷನ್ ಸಹಯೋಗದೊಂದಿಗೆ ಸೋಮವಾರದಿಂದ (ಫೆ.12) ಫೆ.16ರವರೆಗೆ (5 ದಿನಗಳು) ಆಯೋಜಿಸಿರುವ 'ಸಂಚಲನ ಮಕ್ಕಳ ನಾಟಕೋತ್ಸವ–ಜಾನಪದ ಉತ್ಸವಕ್ಕೆ' ಚಾಲನೆ ದೊರಕಿತು.

ಈ ವೇಳೆ ಮಾತನಾಡಿದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮೈಸೂರು ವಿಭಾಗದ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನ ಸ್ವಾಮಿ, ಕನ್ನಡ ರಂಗಭೂಮಿ ಹಾಗೂ ಸಾಂಸ್ಕೃತಿಕ ಲೋಕ ಮಕ್ಕಳು ಮತ್ತು ಯುವಜನರನ್ನು ಸೆಳೆದುಕೊಳ್ಳುತ್ತಿದೆ. ಇದರಿಂದ ರಂಗಭೂಮಿ ಹೊಸ ಮುಖಗಳಿಂದ ಮತ್ತಷ್ಟು ಬೆಳೆಯಲು ಸಹಕಾರಿಯಾಗುತ್ತದೆ. ದೇಶದಲ್ಲಿ ಯುವಕರ ಸಂಖ್ಯೆ ಅಧಿಕವಾಗಿದ್ದು, ಅವರಲ್ಲಿ ಬಹಳಷ್ಟು ಮಂದಿ ರಂಗಭೂಮಿಯತ್ತ ತೊಡಗಿಸಲು ಮುಂದಾಗುತ್ತಿರುವ ಶುಭ ಸಂಕೇತ ಎಂದರು.

ನಂತರ ಮೈಸೂರು ವಿವಿ ಪತ್ರಿಕೋದ್ಯಮ ಮತ್ತು ಸಂವಹನ ವಿಭಾಗದ ಅಧ್ಯಕ್ಷೆ ಎಂ.ಎಸ್.ಸಪ್ನಾ ಮಾತನಾಡಿ, ಮಕ್ಕಳ ಸಮಗ್ರ ವ್ಯಕ್ತಿತ್ವ ವಿಕಸನಕ್ಕೆ ರಂಗಭೂಮಿಯ ಚಟುವಟಿಕೆಗಳು ಸಹಕಾರಿ. ಆದರೆ, ಪ್ರತಿಯೊಬ್ಬರಲ್ಲೂ ಒಂದಿಲ್ಲೊಂದು ಪ್ರತಿಭೆ ಇರುತ್ತದೆ. ಅವರಿಗೆ ಪ್ರೋತ್ಸಾಹ ಕೊಡುವ ಕೆಲಸವನ್ನು ಮಾಡಬೇಕಾಗಿದೆ. ಪ್ರಸ್ತುತ ಯುವಕರು ತಂತ್ರಜ್ಞಾನ ಬಳಕೆಯಲ್ಲಿ ನಿಪುಣರಿದ್ದಾರೆ.

ಪದವಿ ಪೂರೈಸಿದ ತಕ್ಷಣ ಶಿಕ್ಷಣ ದಕ್ಕಿದಂತೆ ಎಂದು ಭಾವಿಸುವುದು ಸುಳ್ಳು ಅದರಾಚೆಗೂ ಕಲಿಕೆ ಇದೆ. ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದು ಬೌದ್ಧಿಕ ವಿಕಸನಕ್ಕೆ ಸಹಕಾರಿ. ಈ ಹಿಂದೆ ತಂತ್ರಜ್ಞಾನ ಇಲ್ಲದ ಸಂದರ್ಭದಲ್ಲಿ ಸಂವಹನ ಕ್ಷೇತ್ರ ಸವಾಲಿನಿಂದ ಕೂಡಿತ್ತು. ಈಗ ಸಂವಹನ ಕ್ಷೇತ್ರದಲ್ಲಿ ಸಾಕಷ್ಟು ಬದಲಾವಣೆ ಆಗಿದೆ. ಆದರೆ, ಈಗಿನ ಪರಿಸ್ಥಿತಿಯಲ್ಲಿ ವಿದ್ಯಾರ್ಥಿಗಳಲ್ಲಿನ ಕೀಳರಿಮೆ ಹೋಗಲಾಡಿಸಲು ಸಮಾಜ ಹಾಗೂ ಪೋಷಕರ ಪ್ರೇರಣೆ ಬೇಕಾಗುತ್ತದೆ. ಮಕ್ಕಳನ್ನು ಕೇವಲ ತಂತ್ರಜ್ಞಾನಕ್ಕೆ ಸೀಮಿತಗೊಳಿಸಬಾರದು ಎಂದು ಸಲಹೆ ನೀಡಿದರು.

ಈ ವೇಳೆ ರಂಗಾಯಣದ ಉಪ ನಿರ್ದೇಶಕಿ ನಿರ್ಮಲಾ ಮಠಪತಿ, ಡ್ರೀಮ್ ಬಜ್ ಫೌಂಡೇಶನ್‌ನ ಸಂಯೋಜನಾಧಿಕಾರಿ ಎಂ.ಪಿ. ಪೂಜಾ ಹಾಗೂ ಸಂಚಲನ ಸಂಸ್ಥೆಯ ಅಧ್ಯಕ್ಷ ದೀಪಕ್ ಮೈಸೂರು ಪ್ರಾಸ್ತಾವಿಕ ನುಡಿಗಳನ್ನಾಡಿದರು. ಉತ್ಸವದ ಸಂಯೋಜಕ ತ್ಯಾಗರಾಜು ಪಾಲ್ಗೊಂಡಿದ್ದರು. ಆಯಾಮ ಅಕಾಡೆಮಿ ವಿದ್ಯಾರ್ಥಿಗಳಿಂದ ದೇಶಿವೈಭವ ಹಾಗೂ ಭಾರತೀಯ ವಿವಿಧ ಜನಪದ ನೃತ್ಯ ಕಾರ್ಯಕ್ರಮವನ್ನು ನಡೆಸಿಕೊಟ್ಟರು.

ಸಿಆರ್‌ಪಿಎಫ್ ನಿವೃತ್ತ ಎಎಸ್‌ಐ ಶ್ರೀಮತಿ ಕೆ.ಜಿ.ತಂಗಮ್ಮರಿಗೆ 'ಭಾರತ ಕೇಸರಿ–2024' ಪ್ರಶಸ್ತಿ



ನೃತ್ಯ ವಿದ್ಯಾಪೀಠದ ವತಿಯಿಂದ ಸಿಆರ್‌ಪಿಎಫ್ ನಿವೃತ್ತ ಎಎಸ್‌ಐ ಶ್ರೀಮತಿ ಕೆ.ಜಿ.ತಂಗಮ್ಮ ಅವರಿಗೆ 'ಭಾರತ ಕೇಸರಿ–2024' ಪ್ರಶಸ್ತಿ ನೀಡಿ ಗೌರವಿಸಲಾಯಿತು. ವಿದುಷಿ ಚಂದ್ರಮತಿ ಎ ರಾವ್ ಮತ್ತಿತರರಿದ್ದರು.

ಮೈಸೂರು, ಫೆ.12(ಎಂಕೆ)– ನೃತ್ಯ ವಿದ್ಯಾಪೀಠದ ವತಿಯಿಂದ ಸಿಆರ್‌ಪಿಎಫ್ (ಕೇಂದ್ರೀಯ ಮೀಸಲು ಪೊಲೀಸ್ ಪಡೆ) ನಿವೃತ್ತ ಎಎಸ್‌ಐ ಶ್ರೀಮತಿ ಕೆ.ಜಿ.ತಂಗಮ್ಮ ಅವರಿಗೆ 'ಭಾರತ ಕೇಸರಿ–2024' ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಮೈಸೂರು ಕಲಾಮಂದಿರದಲ್ಲಿ ಸೋಮವಾರ ನಡೆದ ನೃತ್ಯ ವಿದ್ಯಾಪೀಠದ ವಾರ್ಷಿಕ ಸಮಾರಂಭ, ನರ್ತನ ವೃಕ್ಷಾವಳಿ ಹಾಗೂ ಶ್ರೀ ರಾಮಾಯಣ ದರ್ಶನಂ ನೃತ್ಯ ರೂಪಕ ಕಾರ್ಯಕ್ರಮ ಉದ್ಘಾಟಿಸಿದ ವಿದುಷಿ ಚಂದ್ರಮತಿ ಎ ರಾವ್ ಪ್ರಶಸ್ತಿ ಪ್ರದಾನ ಮಾಡಿದರು.

ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಶ್ರೀಮತಿ ಕೆ.ಜಿ.ತಂಗಮ್ಮ, ಕೊಡಗು ಜಿಲ್ಲೆಯ ಮಹಿಳೆಯಾಗಿ ಸುಮಾರು 21 ವರ್ಷ ಕೇಂದ್ರೀಯ ಅರೆ ಸೇನಾಪಡೆಯಲ್ಲಿ ಸೇವೆ ಸಲ್ಲಿಸಿರುವ ನನ್ನನ್ನು ಗುರ್ತಿಸಿ ಅಭಿನಂದಿಸಿರುವುದಕ್ಕೆ ಧನ್ಯವಾದ ತಿಳಿಸುತ್ತೇನೆ. ಮೊದಲು ಕೊಡಗಿನಲ್ಲಿ ಮನೆಗೊಬ್ಬರಂತೆ ಸೇನೆಗೆ ಸೇರುತ್ತಿದ್ದರು. ಆದರೀಗ ಬೆರಳೆಣಿಕೆಯಷ್ಟಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಗಡಿಯಲ್ಲಿ ನಿಂತು ದೇಶ ಸೇವೆ ಮಾಡುವುದೇ ಅದೃಷ್ಟ, ಆದರೆ ಇತ್ತೀಚಿನ ದಿನಗಳಲ್ಲಿ ಸೇನೆ ಸೇರಬೇಕು ಎನ್ನುವವರ ಸಂಖ್ಯೆ ಅತೀ ವಿರಳವಾಗಿದೆ. ಪೋಷಕರು ಕೂಡ ತಮ್ಮ ಮಕ್ಕಳನ್ನು ಡಾಕ್ಟರ್, ಇಂಜಿನಿಯರ್ ಇನ್ನಿತರೆ ವೃತ್ತಿಗಳಿಗೆ ಕಳುಹಿಸಲು ಇಷ್ಟಪಡುತ್ತಿದ್ದಾರೆಯೇ ಹೊರತು ಸೇನೆಗೆ ಸೇರಿಸುತ್ತಿಲ್ಲ. ಸೇನೆಯಲ್ಲಿ ಕೆಲಸ ಮಾಡುವುದೇ ರೋಚಕ. ಪ್ರತೀ ಕ್ಷಣವೂ ಕೆಲಸದಲ್ಲೇ ಸಕ್ರಿಯವಾಗಿರುತ್ತೇವೆ ಎಂದು ಸೇನೆಯಲ್ಲಿನ ತಮ್ಮ ಸೇವೆಯನ್ನು ಸ್ಮರಿಸಿದರು.

ಬಳಿಕ ವಿದುಷಿ ಸಿ.ಎನ್.ಅನಿತಾ ನೇತೃತ್ವದಲ್ಲಿ ನರ್ತನ ವೃಕ್ಷಾವಳಿ ಹಾಗೂ ಶ್ರೀ ರಾಮಾಯಣ ದರ್ಶನಂ ಭರತನಾಟ್ಯ ನೃತ್ಯ ರೂಪಕ ಪ್ರಸ್ತುತಪಡಿಸಲಾಯಿತು. ಹೊಳೆನರಸೀಪುರ ಸ್ವರ್ಣ ಎಜುಕೇಷನಲ್ ಸಂಸ್ಥೆಯ ಶೋಭಾ ಬಾಲಕೃಷ್ಣ, ಮೈಸೂರಿನ ಎಲ್ ಅಂಡ್ ಟಿ ಟೆಕ್ನಾಲಜಿ ಸರ್ವಿಸ್ ಮ್ಯಾನೇಜರ್ ಜಿ.ಕೆ.ಕಮಲ, ಕೆ.ಜಿ.ಅಮಿತಾ ಮತ್ತಿತರರಿದ್ದರು.

ಸ್ವ ನಿಧಿಯಡಿ ಸಾಲಸೌಕರ್ಯ ಸದ್ವಿನಿಯೋಗಪಡಿಸಿಕೊಳ್ಳಿ

ಬೀದಿಬದಿ ವ್ಯಾಪಾರಿಗಳಿಗೆ ಶಾಸಕ ಶ್ರೀವತ್ಸ ಸಲಹೆ



ಬಿಜೆಪಿ ಮೈಸೂರು ನಗರ ಬಿಜೆಪಿ ಹಾಲು ಪ್ರಕೋಷ್ಠದ ವತಿಯಿಂದ ಆಯೋಜಿಸಿದ್ದ ಸ್ವ–ನಿಧಿ ಫಲಾನುಭವಿಗಳಿಗೆ ಶಾಸಕ ಟಿ.ಎಸ್.ಶ್ರೀವತ್ಸ ಜಾಗೃತಿ ಮೂಡಿಸಿದರು.

ಮೈಸೂರು, ಫೆ12(ಎಸ್‌ಪಿಎನ್)– ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಸ್ವನಿಧಿ ಯೋಜನೆಯಡಿಯಲ್ಲಿ ಜಾರಿಗೆ ತಂದಿರುವ ಸಾಲ ಸೌಲಭ್ಯವನ್ನು ಬೀದಿಬದಿ ವ್ಯಾಪಾರಿಗಳು ಸದುಪಯೋಗ ಪಡಿಸಿಕೊಳ್ಳುವಂತೆ ಶಾಸಕ ಟಿ. ಎಸ್.ಶ್ರೀವತ್ಸ ಸಲಹೆ ನೀಡಿದರು.

ಮೈಸೂರು ಇಟ್ಟಿಗೆಗೂಡಿನ ಕರಿಮಾರಿಯಮ್ಮ ಸಮುದಾಯ ಭವನದಲ್ಲಿ ಬಿಜೆಪಿ ಮೈಸೂರು ನಗರ ಬಿಜೆಪಿ ಹಾಲು ಪ್ರಕೋಷ್ಠದ ವತಿಯಿಂದ ಆಯೋಜಿಸಿದ್ದ ಸ್ವ–ನಿಧಿ ಫಲಾನುಭವಿಗಳಿಗೆ ಜಾಗೃತಿ ಮೂಡಿಸುವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಒಂದು ಕಾಲಕ್ಕೆ ರಸ್ತೆಬದಿ ವ್ಯಾಪಾರಿಗಳು ಹೆಚ್ಚಿನ ಬಡ್ಡಿದರದಲ್ಲಿ ಸಾಲ ಪಡೆದು ನಷ್ಟ ಅನುಭವಿಸುತ್ತಿದ್ದರು. ಇದನ್ನು ಮನಗಂಡ ಕೇಂದ್ರ ಸರ್ಕಾರ ಪ್ರಧಾನ ಮಂತ್ರಿ ಸ್ವನಿಧಿ ಯೋಜನೆ ಜಾರಿಗೊಳಿಸಿದ್ದು, ಇದರ ವ್ಯಾಪ್ತಿಗೆ ಇದೀಗ ಹಾಲು ವ್ಯಾಪಾರಿಗಳಿಗೂ ಸೇರಿಸಿದೆ. ಈ ಹಿನ್ನೆಲೆಯಲ್ಲಿ 42 ಹಾಲಿನ ವ್ಯಾಪಾರಿಗಳಿಗೆ ತಲಾ 10 ಸಾವಿರ ರೂ.ಗಳಂತೆ ಸಾಲ ಮಂಜೂರಾಗಿದ್ದು, ಇದರ ಸದುಪಯೋಗ ಪಡೆಯುವಂತೆ ಮನವಿ ಮಾಡಿದರು.

ಮೈಸೂರು ವಿವಿ ಸಿಂಡಿಕೇಟ್ ಸದಸ್ಯ ಗೋಕುಲ್ ಗೋವರ್ಧನ್ ಮಾತನಾಡಿ, ಪ್ರಧಾನ ಮಂತ್ರಿಗಳು ದುಡಿಯುವ ಕೈಗಳಿಗೆ ಸ್ವಾವಲಂಬಿಯಾಗಿ ಬದುಕಲು ಸ್ವ ನಿಧಿ ಅಂತಹ ಯೋಜನೆಗಳು ತಂದಿದ್ದಾರೆ. ಅದೇ ರೀತಿ ಇತ್ತೀಚೆಗೆ ವಿಶ್ವಕರ್ಮ ಯೋಜನೆಯಡಿ 18 ರೀತಿ ವೃತ್ತಿಗಳಲ್ಲಿ ತೊಡಗಿಸಿಕೊಂಡವರಿಗೆ ಒಂದು ಲಕ್ಷ ರೂ.ಗಳವರೆಗೆ ಸಾಲ ಸೌಲಭ್ಯಗಳನ್ನು ನೀಡಲಾಗುವುದು ಎಂದು ಸಂಚಾಲಕ ಗೋಕುಲ್ ಗೋವರ್ಧನ್ ಮಾಹಿತಿ ನೀಡಿದರು.

ಈ ವೇಳೆ ಮೈಸೂರು ನಗರ ಬಿಜೆಪಿ ಪ್ರಧಾನ ಕಾರ್ಯದರ್ಶಿ ಬಿ.ಎಂ.ರಘು, ಸ್ವ–ನಿಧಿ ಯೋಜನೆಯ ಸಹ ಸಂಚಾಲಕರಾದ ಎಸ್.ಕೆ.ದಿನೇಶ್, ಇಟ್ಟಿಗೆಗೂಡಿನ ಬಿಜೆಪಿ ಮುಖಂಡ ನವೀನ್, ಹೊಯ್ಸಳ, ಹರೀಶ್, ದಾಮೋದರ್, ಶೇಖರ್ ಬ್ಯಾಟರಿ, ವಿನಯ್, ಬಾಬು, ದರ್ಶನ್, ಲಕ್ಷ್ಮಣ್, ಕುಮಾರ್ ಹಾಗೂ ಮಹಿಳಾ ಮುಖಂಡರಾದ ಸುಗುಣ ಶೇಖರ್, ನಂದ ಸಿಂಗ್, ವಿಜಯಲಕ್ಷ್ಮೀ, ಕಲ್ಪನ ಉಪಸ್ಥಿತರಿದ್ದರು.

ಸೋರಿಯಾಸಿಸ್, ಇಸುಬು ಹುಳುಕಡ್ಡಿಗೆ ಚಿಕಿತ್ಸೆ



ಮೈಸೂರು: ಮೈಸೂರಿನ ಲಲಿತಾದ್ರಿಪುರ ರಸ್ತೆಯಲ್ಲಿರುವ ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆಯಲ್ಲಿ ಫೆ. 15 ರಿಂದ 22 ರವರೆಗೆ ಬೆಳಿಗ್ಗೆ 9 ರಿಂದ ಸಂಜೆ 4.30 ರವರೆಗೆ ಸೋರಿಯಾಸಿಸ್, ಇಸುಬು ಹುಳುಕಡ್ಡಿಗೆ ಚಿಕಿತ್ಸೆಗೆ ಆಯುರ್ವೇದ ಪಂಚಕರ್ಮ ಶಿಬಿರ ಹಮ್ಮಿಕೊಳ್ಳಲಾಗಿದೆ. ಮಾಹಿತಿಗೆ ಮೊ. 7907256203, ದೂ. 0821–254823 ಸಂಪರ್ಕಿಸಬಹುದು.

ಗೂಡ್ಸ್ ವಾಹನಕ್ಕೆ ಡಿಕ್ಕಿ: ಬೈಕ್ ಸವಾರ ಸಾವು

ಮೈಸೂರು, ಫೆ.12(ಎಂಕೆ)– ಗೂಡ್ಸ್ ವಾಹನಕ್ಕೆ ಹಿಂದಿನಿಂದ ಡಿಕ್ಕಿ ಹೊಡೆದು ಬೈಕ್ ಸವಾರ ಮೃತಪಟ್ಟಿರುವ ಘಟನೆ ಮೈಸೂರು–ನಂಜನಗೂಡು ರಸ್ತೆಯಲ್ಲಿ ನಡೆದಿದೆ.

ಮೈಸೂರಿನ ರಾಮಕೃಷ್ಣನಗರದ ನಿವಾಸಿ, ಕಟ್ಟಡ ಕಾರ್ಮಿಕ ಎಂ.ಮಹೇಶ್ ಮೃತಪಟ್ಟ ವ್ಯಕ್ತಿ. ಶನಿವಾರ ಕೆಲಸದ ನಿಮಿತ್ತ ದಡದಕಲ್ಲಹಳ್ಳಿಗೆ ಹೋಗಿ ವಾಪಸ್ ಬರುವ ವೇಳೆ ಮುಂದೆ ಹೋಗುತ್ತಿದ್ದ ಗೂಡ್ಸ್ ವಾಹನದ ಚಾಲಕ ವಾಹನವನ್ನು ತಕ್ಷಣವೇ ನಿಲ್ಲಿಸಿ ಮುಂದಿನ ಬಾಗಿಲನ್ನು ತೆರೆದಿದ್ದಾನೆ.

ಇದರಿಂದ ಗಾಬರಿಗೊಂಡು ನಿಯಂತ್ರಣ ಕಳೆದುಕೊಂಡ ಬೈಕ್ ಸವಾರ ಮಹೇಶ್, ಗೂಡ್ಸ್ ವಾಹನಕ್ಕೆ ಡಿಕ್ಕಿ ಹೊಡೆದು ಕೆಳಗೆ ಬಿದ್ದಿದ್ದಾರೆ. ಗಂಭೀರವಾಗಿ ಗಾಯಗೊಂಡಿದ್ದ ಮಹೇಶ್‌ನನ್ನು ಕೂಡಲೇ ಸಾರ್ವಜನಿಕರು ಆಸ್ಪತ್ರೆಗೆ ಕರೆದೊಯ್ದರಾದರೂ ಮಾರ್ಗ ಮಧ್ಯದಲ್ಲೇ ಮೃತಪಟ್ಟಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಸಂಬಂಧ ಮೈಸೂರು ದಕ್ಷಿಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಖದೀಮರ ಬಂಧನ; 26 ಲಕ್ಷ ಮೌಲ್ಯದ ಚಿನ್ನಾಭರಣ, ದ್ವಿಚಕ್ರ ವಾಹನ ವಶಕ್ಕೆ

ಮೈಸೂರು, ಫೆ.12(ಎಂಕೆ)– ಇಬ್ಬರು ಖದೀಮರನ್ನು ಬಂಧಿಸಿರುವ ಸಿಸಿಬಿ ಪೊಲೀಸರು, ಬಂಧಿತರಿಂದ 26 ಲಕ್ಷರೂ. ಮೌಲ್ಯದ 416 ಗ್ರಾಂ ಚಿನ್ನಾಭರಣ ಹಾಗೂ ದ್ವಿಚಕ್ರ ವಾಹನವನ್ನು ವಶಕ್ಕೆ ಪಡೆದಿದ್ದಾರೆ.

2023ರ ಡಿ.23 ರಂದು ವಿಜಯನಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಕಳವು ಪ್ರಕರಣ ಸಂಬಂಧ ತನಿಖೆ ಕೈಗೊಂಡ ಸಿಸಿಬಿ ಪೊಲೀಸರು, ಜ.17 ರಂದು ನಗರದ ಅಶೋಕ ರಸ್ತೆಯಲ್ಲಿ ಓರ್ವ ಆರೋಪಿಯನ್ನು ಬಂಧಿಸಿ, ಆತ ನೀಡಿದ ಮಾಹಿತಿ ಮೇರೆಗೆ ಫೆ.10 ರಂದು ಮಂಡಿಮೊಹಲ್ಲಾದಲ್ಲಿ ಇನ್ನೋರ್ವ ಆರೋಪಿಯನ್ನು ಬಂಧಿಸಿದ್ದಾರೆ.

ಬಂಧಿತ ಆರೋಪಿಗಳು ವಿಜಯನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ 1 ಮನೆಗಳ್ಳತನ ಮತ್ತು 1 ದ್ವಿಚಕ್ರ ವಾಹನ ಕಳವು ಪ್ರಕರಣ ಹಾಗೂ ಹಾವೇರಿ ಟೌನ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಮನೆಗಳ್ಳತನ ಪ್ರಕರಣಗಳಲ್ಲಿ ಭಾಗಿಯಾಗಿದ್ದಾರೆ ಎಂದು ವಿಚಾರಣೆ ವೇಳೆ ತಿಳಿದು ಬಂದಿದೆ ಬಂಧಿತರಿಂದ 26 ಲಕ್ಷರೂ. ಮೌಲ್ಯದ 416 ಗ್ರಾಂ ಚಿನ್ನಾಭರಣ ಹಾಗೂ 1 ಸುಜುಕಿ ಆಕ್ಸೆಸ್ ಸ್ಕೂಟರ್ ಅನ್ನು ವಶಕ್ಕೆ ಪಡೆಯಲಾಗಿದೆ

ಸಿಸಿಬಿ ಪೊಲೀಸ್ ಇನ್‌ಸ್ಪೆಕ್ಟರ್ ಎಂ. ಮೋಹನ್ ಕುಮಾರ್, ಪಿಎಸ್‌ಐಗಳಾದ ಮಾರುತಿ ಅಂತರಗಟ್ಟಿ, ಕಿರಣ್ ಹಂಪಿಹೊಳಿ, ಎಎಸ್‌ಐಗಳಾದ ಅಸ್ಗರ್ ಖಾನ್, ಜಗದೀಶ್, ಸಿಬ್ಬಂದಿಗಳಾದ ಸಲೀಂ ಪಾಷ, ರಾಮಸ್ವಾಮಿ, ಎಂ.ಆರ್. ಗಣೇಶ್, ಎ.ಉಮಾಮಹೇಶ್, ಲಕ್ಷ್ಮಿಕಾಂತ್, ಪ್ರಕಾಶ್, ಸುರೇಶ್, ಮೋಹನಾರಾಧ್ಯ, ಚಂದ್ರಶೇಖರ್, ಮಹೇಶ್, ನರಸಿಂಹರಾಜು, ಮಧುಸೂದನ್, ಶಿವಣ್ಣ ಗೋವಿಂದ, ಕೆಎಸ್.ರವಿ, ಮಹೇಶ್, ಮಮತ, ರಮ್ಯ ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದರು.

ಬೂತ್ ಚಲೋ ಅಭಿಯಾನ



ಮೈಸೂರು, ಫೆ.12– ವಾರ್ಡ್ ನಂ.51 ಮತ್ತು ವಾರ್ಡ್ ನಂ.65ರ ವ್ಯಾಪ್ತಿಯ ಬೆಮಲ್ ಬಡಾವಣೆಯಲ್ಲಿ ಬಿಜೆಪಿ ವತಿಯಿಂದ ಹಮ್ಮಿಕೊಂಡಿದ್ದ ಬೂತ್ ಚಲೋ ಅಭಿಯಾನದಲ್ಲಿ ಕಾರ್ಯಕರ್ತರು ಮನೆಮನೆಗೆ ತೆರಳಿ ಕೇಂದ್ರ ಸರ್ಕಾರದ ಯೋಜನೆಗಳ ಕರಪತ್ರ ವಿತರಿಸಿದರು. ಈ ವೇಳೆ ನಗರಪಾಲಿಕೆ ಮಾಜಿ ಸದಸ್ಯ ಬಿ.ವಿ. ಮಂಜುನಾಥ್, ಗೀತಶ್ರೀ, ನೈರುತ್ಯ ರೈಲ್ವೆ ಸಲಹಾ ಸಮಿತಿ ಸದಸ್ಯ ಶಿವರಾಜ್, ಮಂಡಲ ಉಪಾಧ್ಯಕ್ಷ ಎಂ.ಆರ್. ಬಾಲಕೃಷ್ಣ, ಮನೋಜ್, ನಗರ ಮಹಿಳಾ ಮೋರ್ಚಾ ಉಪಾಧ್ಯಕ್ಷೆ ಕಾವೇರಿ, ಯುವ ಮೋರ್ಚಾ ಕಾರ್ಯದರ್ಶಿ ನಿಶಾಂತ್, ವಾರ್ಡ್ ಅಧ್ಯಕ್ಷ ಮಂಜುನಾಥ್, ಜಯಂತಿ ಮುಂತಾದವರಿದ್ದರು.

'ಅಹ್ಲಾನ್ ಮೋದಿ' ಕಾರ್ಯಕ್ರಮಕ್ಕೆ 65,000ಕ್ಕೂ ಹೆಚ್ಚು ಜನರ ನೋಂದಣಿ



ಅಬುದಾಬಿ: ಅಬುದಾಬಿಯಲ್ಲಿ ನಾಳೆ ಆಯೋಜಿಸಲಾಗಿರುವ 'ಅಹ್ಲಾನ್ ಮೋದಿ' ಕಾರ್ಯಕ್ರಮಕ್ಕೆ ಅಭೂತಪೂರ್ವ ಪ್ರತಿಕ್ರಿಯೆ ಕಂಡುಬರುತ್ತಿದ್ದು, ಸುಮಾರು 65,000ಕ್ಕೂ ಹೆಚ್ಚು ಜನರ ನೋಂದಣಿಯನ್ನು ಸ್ವೀಕರಿಸಲಾಗಿದೆ.

ವಿಶಿಷ್ಟ ಸ್ವರೂಪದ ಕಾರ್ಯಕ್ರಮದ ಬಗ್ಗೆ ಅಹ್ಲಾನ್ ಮೋದಿ ಕಾರ್ಯಕ್ರಮದ ಸಂಘಟಕ ಹಾಗೂ ಇಂಡಿಯನ್ ಪೀಪಲ್ ಫೋರಂ ಅಧ್ಯಕ್ಷ ಜಿತೇಂದ್ರ ವೈದ್ಯ ಕುತೂಹಲ ವ್ಯಕ್ತಪಡಿಸಿದ್ದಾರೆ.

ಇದೊಂದು ವಿಶಿಷ್ಟ ಕಾರ್ಯಕ್ರಮವಾಗಿದೆ. ಏಕೆಂದರೆ ಯಾವುದೇ ಒಂದು ಸಂಘಟನೆ ಈ ಕಾರ್ಯಕ್ರಮವನ್ನು ಆಯೋಜಿಸಿಲ್ಲ. ಇಡೀ ಸಮುದಾಯವೇ ಕಾರ್ಯಕ್ರಮ ಆಯೋಜಿಸಿದ್ದು, ಪ್ರಧಾನಿ ಮೋದಿ ಹೆಸರು ಬರುತ್ತಿದ್ದಂತೆಯೇ ಹೆಚ್ಚಿನ ಸಂಖ್ಯೆಯ ಜನರು ಸೇರುವ ಸಾಧ್ಯತೆಯಿದೆ. ಇದು ಪ್ರಧಾನಿ ನರೇಂದ್ರ ಮೋದಿ ಅವರ ಮೇಲಿನ ಪ್ರೀತಿ ಎಂದು ವೈದ್ಯ ಎಎನ್‌ಐ ಸುದ್ದಿಸಂಸ್ಥೆಗೆ ಹೇಳಿದರು.

ಅಬುದಾಬಿಯಲ್ಲಿರುವ ಭಾರತೀಯ ಸಮುದಾಯ ಸಾಮೂಹಿಕ ಪ್ರಯತ್ನದಿಂದ ಕಾರ್ಯಕ್ರಮ ಆಯೋಜಿಸಿದ್ದು, ನೋಂದಣಿ ಸಂಖ್ಯೆ 65,000 ದಾಟಿದೆ. ಅಬುದಾಬಿಯಲ್ಲಿರುವ ಅನಿವಾಸಿ ಭಾರತೀಯರಿಂದ ಅಭೂತಪೂರ್ವ ಪ್ರತಿಕ್ರಿಯೆ ಕಂಡುಬಂದಿದೆ. ದೇಶದ ಜನಸಂಖ್ಯೆಯ ಶೇ.35 ರಷ್ಟು ಭಾರತೀಯರಿದ್ದಾರೆ ಎಂದು ಅವರು ತಿಳಿಸಿದರು.

700 ಸಾಂಸ್ಕೃತಿಕ ಕಲಾವಿದರಿಂದ ಭಾರತೀಯ ಕಲೆ, ವಿವಿಧತೆ ಪ್ರತಿಬಿಂಬಿಸುವ ಸಾಂಸ್ಕೃತಿಕ ಕಾರ್ಯಕ್ರಮಗಳು ಇರಲಿದ್ದು, 150ಕ್ಕೂ ಅಧಿಕ ಭಾರತೀಯ ಸಮುದಾಯದ ಗುಂಪುಗಳು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿವೆ. ಪ್ರಧಾನಿ ಮೋದಿ ಅನಿವಾಸಿ ಭಾರತೀಯರನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ನಂತರ ಯುಎಇ ಅಧ್ಯಕ್ಷ ಶೇಕ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಲಿದ್ದಾರೆ.

ಮೈಸೂರು ಮಿತ್ರ ಮಂಗಳವಾರ 13 ಫೆಬ್ರವರಿ 2024

ಬಿಜೆಪಿಯ ಅಭಿವೃದ್ಧಿ ಪ್ರಶ್ನೆಗಳ ಪತ್ರ ಹಾಸ್ಯಾಸ್ಪದ

ವಿಧಾನಪರಿಷತ್ ಮಾಜಿ ಸದಸ್ಯೆ ಶಾಂತೆಯಂಡ ವೀಣಾ ಅಚ್ಚಯ್ಯ ಅಸಮಾಧಾನ



ಮಡಿಕೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ವಿಧಾನಪರಿಷತ್ ಮಾಜಿ ಸದಸ್ಯೆ ಶಾಂತೆಯಂಡ ವೀಣಾ ಅಚ್ಚಯ್ಯ ಮಾತನಾಡಿದರು. ಕೊಲ್ಯದ ಗಿರೀಶ್, ಪ್ರಕಾಶ್ ಆಚಾರ್ಯ, ಮಂಡೀರ ಸದಾ ಮುದ್ದಪ್ಪ, ಹೊಟ್ಟೆಯಂಡ ಫ್ಯಾನ್ಸಿ ಪಾರ್ವತಿ ಬೆಳ್ಯಪ್ಪ ಇದ್ದರು.

ಸಂಸದ ಪ್ರತಾಪ್ ಸಿಂಹ ಕೊಡುಗೆ ಶೂನ್ಯ

ಕೊಡಗು ಜಿಲ್ಲೆಗೆ ಸಂಸದ ಪ್ರತಾಪ್ ಸಿಂಹ ಅವರ ಕೊಡುಗೆ ಶೂನ್ಯ ಎಂದು ಶಾಂತೆಯಂಡ ವೀಣಾ ಅಚ್ಚಯ್ಯ ಟೀಕಿಸಿದರು. ಕಳೆದ 10 ವರ್ಷಗಳಿಂದ ಸಮಸ್ಯೆಗಳಿದ್ದಾಗ ಜಿಲ್ಲೆಗೆ ಬಾರದ ಸಂಸದರು ಈಗ ಚುನಾವಣೆ ಹತ್ತಿರ ಕಾಣಿಸಿಕೊಳ್ಳುತ್ತಿದ್ದಾರೆ. ಜಿಲ್ಲೆಯಲ್ಲಿ ಪ್ರಾಕೃತಿಕ ವಿಕೋಪ ಸಂಭವಿಸಿದಾಗ ಕೇಂದ್ರ ಸರ್ಕಾರದ ವಿಶೇಷ ಯೋಜನೆಯಡಿ ಯಾವ ನೆರವನ್ನು ತಂದಿದ್ದಾರೆ? ಎಂದು ಪ್ರಶ್ನಿಸಿದರು. ಪ್ರಧಾನಮಂತ್ರಿಗಳ ಆಪ್ತ ಎಂದು ಬಿಂಬಿಸಿಕೊಳ್ಳುವ ಸಂಸದರಿಗೆ ತಮ್ಮ ಕ್ಷೇತ್ರದ ಬಗ್ಗೆ ಯಾವುದೇ ಕಾಳಜಿ ಇರಲ್ಲ. ಇದೀಗ ಲೋಕಸಭೆ ಚುನಾವಣೆ ಸಮೀಪಿಸುತ್ತಿದ್ದಂತೆ ಜಿಲ್ಲೆಗೆ ಭೇಟಿ ನೀಡುತ್ತಿದ್ದಾರೆ ಎಂದು ಆರೋಪಿಸಿದರು.

ಮಡಿಕೇರಿ, ಫೆ.12–ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದು ಕೇವಲ 8 ತಿಂಗಳಷ್ಟೇ ಆಗಿದ್ದು, ಇದನ್ನು ಅರಿಯದ ಬಿಜೆಪಿಯವರು ಜಿಲ್ಲೆಯ ಕಾಂಗ್ರೆಸ್ ಶಾಸಕರ ಕಚೇರಿಗೆ ಅಭಿವೃದ್ಧಿ ಕುರಿತು 15 ಪ್ರಶ್ನೆಗಳ ಪತ್ರ ನೀಡಿರುವುದು ಹಾಸ್ಯಾಸ್ಪದ ಎಂದು ವಿಧಾನಪರಿಷತ್ ಮಾಜಿ ಸದಸ್ಯೆ ಶಾಂತೆಯಂಡ ವೀಣಾ ಅಚ್ಚಯ್ಯ ಅಸಮಾಧಾನ ವ್ಯಕ್ತಪಡಿಸಿದರು.

ಕಳೆದ 25 ವರ್ಷಗಳಿಂದ ಕೊಡಗಿನಲ್ಲಿ ಆಡಳಿತದಲ್ಲಿದ್ದ ಬಿಜೆಪಿ ಶಾಸಕರು ಜಿಲ್ಲೆಗೆ ಏನು ಕೊಡುಗೆ ನೀಡಿದ್ದಾರೆ ಎಂದು ಮೊದಲು ಸಾಬೀತುಪಡಿಸಲಿ. ವಿರಾಜಪೇಟೆ ಶಾಸಕ ಎ.ಎಸ್.ಪೊನ್ನಣ್ಣ ಇಲ್ಲದ ವೇಳೆ ಅವರ ಗೃಹಕಚೇರಿಗೆ ಬಿಜೆಪಿಯವರು 15 ಪ್ರಶ್ನೆಗಳ ಪತ್ರ ನೀಡಿರುವುದು ಖಂಡನೀಯ. ಜಿಲ್ಲೆಯ ಇಬ್ಬರು ಕಾಂಗ್ರೆಸ್ ಶಾಸಕರು 8 ತಿಂಗಳಿನಿಂದ ಸಾರ್ವಜನಿಕರ ಕಷ್ಟಕ್ಕೆ ಸ್ಪಂದಿಸುತ್ತಿದ್ದಾರೆ. ಯಾವುದೇ ಅಭಿವೃದ್ಧಿ ಕಾರ್ಯಗಳಿಗೆ ಸಾಕಷ್ಟು ಸಮಯ ಬೇಕಾಗುತ್ತದೆ. ಆದರೆ, ಶಾಸಕರಿಲ್ಲದ ವೇಳೆ ಕಚೇರಿಗೆ ಹೋಗುವ ಅನಿವಾರ್ಯತೆ ಮತ್ತು ಶಾಸಕರ ಆಪ್ತ ಸಹಾಯಕರನ್ನು ಲೆಕ್ಕ ಕೇಳುವ ಅವಶ್ಯಕತೆ ಏನಿತ್ತು ಎಂದು ಸೋಮವಾರ ಸುದ್ದಿಗೋಷ್ಠಿಯಲ್ಲಿ ಪ್ರಶ್ನಿಸಿದರು.

ಹಿಂದೆ ಕಾಂಗ್ರೆಸ್ ಸರ್ಕಾರವಿದ್ದಾಗ ಜಿಲ್ಲೆಯಲ್ಲಿ ಕೆಲ ಅಭಿವೃದ್ಧಿ ಕಾರ್ಯಗಳಿಗೆ ಶಂಕುಸ್ಥಾಪನೆ ನೆರವೇರಿಸಲಾಗಿತ್ತು. ಈ ಕಾಮಗಾರಿಗಳನ್ನು ಪೂರ್ಣಗೊಳಿಸುವುದು ನಂತರ ಅಧಿಕಾರದಲ್ಲಿದ್ದ ಬಿಜೆಪಿ ಶಾಸಕರ ಹೊಣೆಯಾಗಿತ್ತು. ಆದರೆ, ಯಾವುದೇ ಜನಪರ ಅಭಿವೃದ್ಧಿ ಕಾರ್ಯಗಳನ್ನು ಮಾಡದೆ ಈಗಷ್ಟೇ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಶಾಸಕರನ್ನು ಪ್ರಶ್ನಿಸುವುದು ಎಷ್ಟು ಸರಿ? ಕಾಂಗ್ರೆಸ್ ಶಾಸಕರ ಕಾರ್ಯವೈಖರಿಯನ್ನು ಸಹಿಸಿಕೊಳ್ಳಲಾಗದೆ ದ್ವೇಷ ರಾಜಕಾರಣ ಮಾಡುವುದು ಸರಿಯಲ್ಲ ಎಂದರು.

ಜಿಲ್ಲೆಯಲ್ಲಿ ಬಿಜೆಪಿ ಶಾಸಕರಿದ್ದಾಗ ಕಾಂಗ್ರೆಸಿಗರು ಎಂದೂ ದ್ವೇಷ ರಾಜಕಾರಣ ಮಾಡಿಲ್ಲ. ಕೊಡಗಿನ ಜನರ ಸಮಸ್ಯೆಗಳನ್ನು ಅರಿತಿರುವ ಇಬ್ಬರೂ ಕಾಂಗ್ರೆಸ್ ಶಾಸಕರು, ಜನರಿಗೆ ಸ್ಪಂದಿಸುವ ಕೆಲಸ ಮಾಡುತ್ತಿದ್ದಾರೆ. ಪ್ರತಿಯೊಂದು ಸಂಕಷ್ಟದ ಸಂದರ್ಭದಲ್ಲೂ ಸಂತ್ರಸ್ತರ ಬಳಿಗೆ ತೆರಳಿ ಸಾಂತ್ವನ ಹೇಳುವ ದೊಡ್ಡ ಗುಣ ಹೊಂದಿದ್ದಾರೆ. ದಿನೇ ದಿನೆ ಶಾಸಕರಾದ ಎ.ಎಸ್.ಪೊನ್ನಣ್ಣ ಹಾಗೂ ಮಂತರ್‌ಗೌಡ ಅವರ ಜನಪ್ರಿಯತೆ ಹೆಚ್ಚಾಗುತ್ತಿದೆ. ಇದನ್ನು ಬಿಜೆಪಿಯವರಿಗೆ ಅರಗಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ. ಮುಂದಿನ ದಿನಗಳಲ್ಲಿ ಕಾಂಗ್ರೆಸ್‌ನ ಶಾಸಕದ್ವಯರಿಂದ ಜಿಲ್ಲೆ ಅಭಿವೃದ್ಧಿಯ ಪಥದತ್ತ ಸಾಗಲಿದೆ ಎಂದು ಹೇಳಿದರು.

ಜನಪ್ರತಿನಿಧಿಗಳು ಜನರೊಂದಿಗೆ ಉತ್ತಮ ಬಾಂಧವ್ಯ ಹೊಂದುವ ಗುಣ ಅಳವಡಿಸಿಕೊಳ್ಳಬೇಕು. ಧರ್ಮದ ಆಧಾರದಲ್ಲಿ ಯಾರೂ ರಾಜಕೀಯ ಮಾಡಬಾರದು. ನಾವು ಹಿಂದೂಗಳೇ, ರಾಮ ಮಂದಿರ ಕೇವಲ ಬಿಜೆಪಿಗರ ಕೊಡುಗೆಯಲ್ಲ. ಎಲ್ಲರ ಶ್ರಮದಿಂದ ನಿರ್ಮಾಣವಾಗಿದೆ ಎಂದು ತಿಳಿಸಿದರು.

ಜನ ನಮ್ಮೊಂದಿಗಿದ್ದಾರೆ: ರಾಜ್ಯದ ಮತದಾರರು ಬಿಜೆಪಿಯ ಸುಳ್ಳುಗಳಿಗೆ ಮಾರು ಹೋಗುವುದಿಲ್ಲ. ಜನಸಾಮಾನ್ಯರ ಪರವಾಗಿರುವ ಕಾಂಗ್ರೆಸ್ ಸರ್ಕಾರ ಐದು ಗ್ಯಾರಂಟಿಗಳನ್ನು ಪೂರೈಸುವ ಮೂಲಕ ಮತ್ತಷ್ಟು ಜನಪ್ರಿಯತೆಯನ್ನು ಗಳಿಸಿದೆ. ಮುಂಬರುವ ಲೋಕಸಭಾ ಚುನಾವಣೆಯಲ್ಲೂ ರಾಜ್ಯದ ಜನರು ಕಾಂಗ್ರೆಸ್ ಕೈಹಿಡಿಯಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಸಿದ್ದರಾಮಯ್ಯ ವಿರೋಧ ಪಕ್ಷದ ಸ್ಥಾನದಲ್ಲಿದ್ದಾಗ ಪ್ರಾಕೃತಿಕ ವಿಕೋಪ ಹಾನಿ ವೀಕ್ಷಿಸಲು ಜಿಲ್ಲೆಗೆ ಭೇಟಿ ನೀಡಿದ ಸಂದರ್ಭ ಬಿಜೆಪಿಗರು ಅವಮಾನಿಸಿದ್ದರು. ಆದರೆ, ಇಂದು ಜನರ ಆಶೀರ್ವಾದದಿಂದ ಮುಖ್ಯಮಂತ್ರಿಯಾಗಿ ಜಿಲ್ಲೆಗೆ ಆಗಮಿಸಿ ಸನ್ಮಾನ ಮತ್ತು ಗೌರವಕ್ಕೆ ಪಾತ್ರರಾಗಿದ್ದಾರೆ. ಬಿಜೆಪಿ ಮೊದಲು ತನ್ನ ನಡೆಯನ್ನು ಸರಿಪಡಿಸಿಕೊಳ್ಳಲಿ ಎಂದರು.

ಸುದ್ದಿಗೋಷ್ಠಿಯಲ್ಲಿ ಕೊಡಗು ಜಿಲ್ಲಾ ಕಾಂಗ್ರೆಸ್ ಸಮಿತಿಯ ಪ್ರಧಾನ ಕಾರ್ಯದರ್ಶಿ ಕೊಲ್ಯದ ಗಿರೀಶ್, ಮಡಿಕೇರಿ ನಗರ ಕಾಂಗ್ರೆಸ್ ಉಪಾಧ್ಯಕ್ಷರಾದ ಪ್ರಕಾಶ್ ಆಚಾರ್ಯ, ಮಂಡೀರ ಸದಾ ಮುದ್ದಪ್ಪ ಹಾಗೂ ನಗರ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಹೊಟ್ಟೆಯಂಡ ಫ್ಯಾನ್ಸಿ ಪಾರ್ವತಿ ಬೆಳ್ಯಪ್ಪ ಉಪಸ್ಥಿತರಿದ್ದರು.

ಸ್ವಪಕ್ಷದಿಂದಲೇ ಆಡಳಿತ ವೈಖರಿ ವಿರುದ್ಧ ಅಸಮಾಧಾನ

ನಗರಸಭೆ ವಿಶೇಷ ಸಭೆಗೆ ಬಿಜೆಪಿ ಸದಸ್ಯರ ಗೈರು



ಮಡಿಕೇರಿಯ ನಗರಸಭೆ ಕಾರ್ಯಾಲಯ.

ಮಡಿಕೇರಿ, ಫೆ.12–ನಗರಸಭೆ ಅಧ್ಯಕ್ಷೆ ಅನಿತಾ ಪೂವಯ್ಯ ಅಧ್ಯಕ್ಷತೆಯಲ್ಲಿ ಸೋಮವಾರ ಕರೆದಿದ್ದ ವಿಶೇಷ ಸಭೆಗೆ ಆಡಳಿತ ಪಕ್ಷ ಬಿಜೆಪಿಯ ಸದಸ್ಯರು ಗೈರು ಹಾಜರಾಗುವ ಮೂಲಕ ಆಡಳಿತ ವೈಖರಿ ವಿರುದ್ಧ ಬಹಿರಂಗವಾಗಿ ಅಸಮಾಧಾನ ವ್ಯಕ್ತಪಡಿಸಿದರು.


ಬಿಜೆಪಿಯ 16 ಸದಸ್ಯರಲ್ಲಿ 13 ಸದಸ್ಯರು ಗೈರಾಗುವುದರೊಂದಿಗೆ ರಾಜಕೀಯ ಚರ್ಚೆಗೆ ಗ್ರಾಸವಾಗಿದೆ. ಸೋಮವಾರ ಮಧ್ಯಾಹ್ನ 3.30ಕ್ಕೆ ಸಭೆ ನಿಗದಿಯಾಗಿತ್ತು. ಆದರೆ, ಯಾವ ಸದಸ್ಯರು ಕೂಡ ಸಭಾಂಗಣಕ್ಕೆ ಆಗಮಿಸಿರಲಿಲ್ಲ. ಈ ಕುರಿತು ಕೆಲ ಬಿಜೆಪಿ ಸದಸ್ಯರನ್ನು ಪ್ರಶ್ನಿಸಿದಾಗ ಪೌರಾಯುಕ್ತರನ್ನು ವರ್ಗಾವಣೆ ಮಾಡಬೇಕೆಂದು ಹಿಂದಿನ ಸಭೆಗಳಲ್ಲಿ ನಿರ್ಣಯವಾಗಿದೆ. ಆದರೆ, ವರ್ಗಾವಣೆ ಬಗ್ಗೆ ಕಾಳಜಿ ತೋರುತ್ತಿಲ್ಲ. ಅದೇ ಪೌರಾಯುಕ್ತರ ಉಪಸ್ಥಿತಿಯಲ್ಲಿ ಸಭೆ ನಡೆಸುವುದು ಎಷ್ಟು ಸರಿ? ಅಲ್ಲದೆ, ಇತ್ತೀಚೆಗೆ ನಡೆದ ಜಿಲ್ಲಾ ಬಿಜೆಪಿಯ ನೂತನ ಪದಾಧಿಕಾರಿಗಳ ಆಯ್ಕೆ ವಿಚಾರದಲ್ಲೂ ನಮಗೆ ಅಸಮಾಧಾನವಿದೆ. ಆದ್ದರಿಂದ ಉಪಾಧ್ಯಕ್ಷರಾದಿಯಾಗಿ ನಾವೆಲ್ಲರು ಸಭೆಯನ್ನು ಬಹಿಷ್ಕರಿಸಿದ್ದೇವೆ ಎನ್ನುವ ಪ್ರತಿಕ್ರಿಯೆ ಕೇಳಿ ಬಂತು.

ಪೌರಾಯುಕ್ತರ ವರ್ಗಾವಣೆಯಾಗಲಿ: ಪೌರಾಯುಕ್ತರನ್ನು ವರ್ಗಾವಣೆ ಮಾಡಬೇಕೆಂದು ಈಗಾಗಲೇ ಹಿಂದಿನ ಸಭೆಯಲ್ಲಿ ನಿರ್ಣಯವಾಗಿದೆ. ಪೌರಾಯುಕ್ತರ ಕಾರ್ಯವೈಖರಿ ಸರಿ ಇಲ್ಲ ಎಂದ ಮೇಲೆ ಅವರ ಉಪಸ್ಥಿತಿಯಲ್ಲಿ ವಿಶೇಷ ಸಭೆ ನಡೆಸುವುದು ಎಷ್ಟು ಸರಿ? ಇದಕ್ಕೆ ನಮ್ಮ ಆಕ್ಷೇಪವಿದೆ. ಆದ್ದರಿಂದ ಸಭೆಗೆ ಹಾಜರಾಗಿಲ್ಲ ಎಂದು ವಿರೋಧ ಪಕ್ಷದ ಎಸ್‌ಡಿಪಿಐ ಸದಸ್ಯ ಎಂ.ಕೆ.ಮನ್ಸೂರ್ ಅಲಿ ತಿಳಿಸಿದರು.

ಸಭೆ ಮುಂದೂಡಿಕೆ: ಈ ಬೆಳವಣಿಗೆಗಳ ಬಗ್ಗೆ ಪ್ರತಿಕ್ರಿಯೆ ನೀಡಿದ ನಗರಸಭೆ ಅಧ್ಯಕ್ಷೆ ಅನಿತಾ ಪೂವಯ್ಯ, ನಾನೇ ಸಭೆಯನ್ನು ಕಾರಣಾಂತರಗಳಿಂದ ಮುಂದೂಡಿದ್ದೇನೆ. ಇಂದಿನ ಸಭೆ ಮಧ್ಯಾಹ್ನ 3.30ಕ್ಕೆ ನಡೆಯಬೇಕಾಗಿತ್ತು. ನಾನು ಇದಕ್ಕೂ ಮೊದಲೇ ಸಭೆಯನ್ನು ಮುಂದೂಡಿ ನೋಟಿಸ್ ಬೋರ್ಡ್‌ನಲ್ಲಿ ಹಾಕಿದ್ದೇನೆ ಎಂದರು.

ಸಭೆ ಮುಂದೂಡಿರುವುದು ಅಥವಾ ನೋಟಿಸ್ ಬೋರ್ಡ್‌ನಲ್ಲಿ ಹಾಕಿರುವುದು ನಮ್ಮ ಗಮನಕ್ಕೆ ಬಂದಿಲ್ಲ ಎಂದು ಕೆಲ ಸದಸ್ಯರು ತಿಳಿಸಿದರು. ಒಟ್ಟಿನಲ್ಲಿ ಸ್ವತಃ ಆಡಳಿತ ಪಕ್ಷದ ಸದಸ್ಯರೇ ಆಯ್ಕೆ ಮಾಡಿದ ಅಧ್ಯಕ್ಷರು ಕರೆದ ವಿಶೇಷ ಸಭೆಗೆ ಗೈರಾಗುವ ಮೂಲಕ ರಾಜಕೀಯ ಚರ್ಚೆಗೆ ಗ್ರಾಸವಾಗಿದ್ದಾರೆ. ಜಿಲ್ಲಾ ಬಿಜೆಪಿಯ ನೂತನ ಪದಾಧಿಕಾರಿಗಳ ಆಯ್ಕೆಯ ನಂತರದ ಬೆಳವಣಿಗೆ ಪಕ್ಷದ ಮುಖಂಡರಿಗೆ ನುಂಗಲಾರದ ಬಿಸಿ ತುಪ್ಪವಾಗಿ ಪರಿಣಮಿಸಿದೆ ಎನ್ನುವ ಅಭಿಪ್ರಾಯ ಕೇಳಿ ಬಂದಿದೆ.

ಪೊನ್ನಂಪೇಟೆಯಲ್ಲಿ ಅರಣ್ಯ ವಿದ್ಯಾರ್ಥಿಗಳ ಪ್ರತಿಭಟನೆ



ಪೊನ್ನಂಪೇಟೆಯ ಬಸವೇಶ್ವರ ದೇವಸ್ಥಾನ ಎದುರು ಅರಣ್ಯ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಸೋಮವಾರ ನಾಟಕ ಪ್ರದರ್ಶನ ಮೂಲಕ ಪ್ರತಿಭಟನೆ ನಡೆಸಿದರು.

ಗೋಣಿಕೊಪ್ಪ, ಫೆ.12–ಅರಣ್ಯ ಇಲಾಖೆ ಹುದ್ದೆಗಳ ನೇರ ನೇಮಕಾತಿಯಲ್ಲಿ ಅರಣ್ಯ ಶಾಸ್ತ್ರ ಪದವೀಧರರಿಗೆ ಶೇ.100ರಷ್ಟು ಅವಕಾಶ ನೀಡಬೇಕು ಎಂದು ಒತ್ತಾಯಿಸಿ ಪೊನ್ನಂಪೇಟೆ ಅರಣ್ಯ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಸೋಮವಾರ ಪ್ರತಿಭಟನೆ ನಡೆಸಿದರು.

ಅರಣ್ಯ ಮಹಾವಿದ್ಯಾಲಯದಿಂದ ಮೆರವಣಿಗೆ ಮೂಲಕ ಆಗಮಿಸಿದ ವಿದ್ಯಾರ್ಥಿಗಳು ಪೊನ್ನಂಪೇಟೆ ಪಟ್ಟಣದ ಬಸವೇಶ್ವರ ದೇವಸ್ಥಾನ ಎದುರು ಅರ್ಧ ಗಂಟೆಗೂ ಹೆಚ್ಚು ಕಾಲ ಪ್ರತಿಭಟನೆ ನಡೆಸಿದರು.

ನಾಟಕ ಪ್ರದರ್ಶನ: ಸಿಇಟಿಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗೆ ಮಾತ್ರ ಅರಣ್ಯ ಶಾಸ್ತ್ರ ಪ್ರವೇಶ ಪಡೆಯಲು ಸಾಧ್ಯ. ಅರಣ್ಯ ಶಾಸ್ತ್ರದಿಂದ ಪರಿಸರ ರಕ್ಷಣೆ, ಕೃಷಿ, ವನ್ಯ ಜೀವಿಗಳ ಬಗ್ಗೆ ಸಂರಕ್ಷಣೆಯೊಂದಿಗೆ ಹುದ್ದೆಗೆ ನೇಮಕವಾಗಲು ಸಾಧ್ಯ ಎಂದು ವಿದ್ಯಾರ್ಥಿಗಳು ನಾಟಕ ಪ್ರದರ್ಶನ ಮೂಲಕ ಪ್ರತಿಭಟನೆ ನಡೆಸಿದರು.

ಅರಣ್ಯ ಶಿಕ್ಷಣ ಪಡೆದ ವಿದ್ಯಾರ್ಥಿಗಳು ಸರ್ಕಾರದ ತಾತ್ಸಾರಕ್ಕೆ ಬಲಿಯಾಗುತ್ತಿದ್ದಾರೆ. ಅರಣ್ಯ ಹುದ್ದೆ ಖಾತ್ರಿ ಎಂದು ನಂಬಿ ಶಿಕ್ಷಣ ಪಡೆದ ವಿದ್ಯಾರ್ಥಿಗಳು ಸರ್ಕಾರದ ಮೀಸಲಾತಿ ಕಡಿತದ ಆಘಾತಕ್ಕೆ ಒಳಗಾಗಿದ್ದಾರೆ. ನೇರ ನೇಮಕಾತಿಯಲ್ಲಿ ಬೇರೆ ವಿಷಯದ ಪದವೀಧರರಿಗೆ ಶೇ.50ರಷ್ಟು ಮೀಸಲಾತಿ ನೀಡಿರುವುದು ಅರಣ್ಯಶಾಸ್ತ್ರ ವಿದ್ಯಾರ್ಥಿಗಳಿಗೆ ಆತಂಕ ಎದುರಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅರಣ್ಯ ವಿಜ್ಞಾನ, ಪ್ರಾತ್ಯಕ್ಷಿಕೆ ಮೂಲಕ ಅರಣ್ಯ ಸಂರಕ್ಷಣೆಗೆ ಒತ್ತು ನೀಡಿ ಅರಣ್ಯ ಶಾಸ್ತ್ರ ಬಿಎಸ್ಸಿ ಪದವಿ ಪಡೆದ ನಮ್ಮನ್ನು ನೇಮಕಾತಿಯಲ್ಲಿ ಸರ್ಕಾರ ಕಡೆಗಣಿಸುತ್ತಿದೆ. ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ವಲಯ ಅರಣ್ಯ ಅಧಿಕಾರಿ ಮತ್ತು ಉಪ ವಲಯ ಅರಣ್ಯಾಧಿಕಾರಿ ಹುದ್ದೆಗಳ ನೇಮಕಕ್ಕೆ ಅರಣ್ಯಶಾಸ್ತ್ರ ಬಿಎಸ್ಸಿ ಪದವೀಧರರನ್ನೇ ಪರಿಗಣಿಸಬೇಕು ಎಂದು ಒತ್ತಾಯಿಸಿದರು.

ನಂತರ ತಹಶೀಲ್ದಾರ್ ರಾಮಚಂದ್ರ ಅವರಿಗೆ ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ನೂರಾರು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಮಧ್ಯವರ್ತಿಗಳ ದೂರವಿಡಿ: ಶಾಸಕ ಮಂಥರ್‌ಗೌಡ



ಗುಡ್ಡೆಹೊಸೂರಿನ ಸಮುದಾಯ ಭವನದಲ್ಲಿ ನಡೆದ ಫಲಾನುಭವಿಗಳ ಅರಣ್ಯ ಹಕ್ಕು ಪತ್ರ ವಿತರಣೆ ಕಾರ್ಯಕ್ರಮದಲ್ಲಿ ಶಾಸಕ ಡಾ.ಮಂಥರ್‌ಗೌಡ ಮಾತನಾಡಿದರು.

ಕುಶಾಲನಗರ, ಫೆ.12–ಜನರು ಮಧ್ಯವರ್ತಿಗಳ ಮೊರೆ ಹೋಗದೆ ನೇರವಾಗಿ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳನ್ನು ಸಂಪರ್ಕಿಸಿ ತಮ್ಮ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕು ಎಂದು ಶಾಸಕ ಡಾ.ಮಂಥರ್‌ಗೌಡ ಹೇಳಿದರು.

ಗುಡ್ಡೆಹೊಸೂರಿನ ಸಮುದಾಯ ಭವನದಲ್ಲಿ ಫಲಾನುಭವಿಗಳಿಗೆ ಅರಣ್ಯ ಹಕ್ಕುಪತ್ರ ವಿತರಿಸಿ ಮಾತನಾಡಿದ ಅವರು, ಗ್ರಾಮಾಂತರ ಜನರ ಸಮಸ್ಯೆ ಪರಿಹರಿಸುವ ನಿಟ್ಟಿನಲ್ಲಿ ಸದ್ಯದಲ್ಲೇ ಜನಸಂಪರ್ಕ ಸಭೆ ಏರ್ಪಡಿಸಲಾಗುವುದು. ಸಮಸ್ಯೆಗಳಿಗೆ ಸ್ಪಂದಿಸಿ ಪರಿಹಾರ ಕಂಡುಹಿಡಿಯಲಾಗುವುದು ಎಂದರು.

ಅರಣ್ಯ, ಕಂದಾಯ ಇಲಾಖೆ, ಗ್ರಾಮ ಪಂಚಾಯಿತಿ ವತಿಯಿಂದ ಸಭೆ ನಡೆಸಿ, ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹರಿಸಲಾಗುವುದು. ಗ್ರಾಮದ ಸುಮಾರು 126 ಜನರಿಗೆ ಹಕ್ಕುಪತ್ರ ವಿತರಿಸಲಾಗಿದೆ. ಉಳಿದ 30 ಫಲಾನುಭವಿಗಳ ಅರ್ಜಿಗಳ ಪರಿಶೀಲಿಸಿ, ಸವಲತ್ತು ವಿತರಿಸಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಗುಡ್ಡೆಹೊಸೂರು ಗ್ರಾಪಂ ಅಧ್ಯಕ್ಷೆ ರುಕ್ಮಿಣಿ, ಉಪಾಧ್ಯಕ್ಷ ಪಟ್ಟು ಮಾದಪ್ಪ, ಪಿಡಿಓ ಎಂ.ಆರ್.ಸುಮೇಶ್, ಕಾರ್ಯದರ್ಶಿ ಕುಮಾರಸ್ವಾಮಿ, ಅರಣ್ಯ ಹಕ್ಕು ಸಮಿತಿ ಅಧ್ಯಕ್ಷೆ ಅನಿತಾ ಜಾನಪ್ಪ, ಉಪತಹಸೀಲ್ದಾರ್ ಮಧುಸೂದನ್, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಸಿದ್ದೇಗೌಡ, ವಲಯ ಅರಣ್ಯಾಧಿಕಾರಿಗಳು ಮುಖಂಡರು, ಗ್ರಾಪಂ ಸದಸ್ಯರು ಇದ್ದರು.

ಇಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

ಮಡಿಕೇರಿ: ಮೂರ್ನಾಡು ಎಂಯುಎಸ್‌ಎಸ್ ವಿದ್ಯುತ್ ಉಪಕೇಂದ್ರದಲ್ಲಿ ಸಿಟಿ ಬದಲಾವಣೆ ಕಾರ್ಯ ಹಮ್ಮಿಕೊಂಡಿರುವ ಹಿನ್ನೆಲೆಯಲ್ಲಿ ಫೆ.13ರಂದು ಬೆಳಗ್ಗೆ 10ರಿಂದ ಸಂಜೆ 5 ಗಂಟೆವರೆಗೆ ವಿವಿಧೆಡೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ.

ವಿದ್ಯುತ್ ಉಪಕೇಂದ್ರ ವ್ಯಾಪ್ತಿಯ ಪಾರಾಣೆ, ನಾಪೋಕ್ಲು, ಹೊದ್ದೂರು, ಮರಗೋಡು, ಮೂರ್ನಾಡು, ಹಾಕತ್ತೂರು, ಕಾಂತೂರು, ಹೊದವಾಡ, ಚೆಯ್ಯಂಡಾಣೆ, ಕಕ್ಕಬೆ, ನೆಲಜಿ, ಪಾಲೂರು, ಯವಕಪಾಡಿ, ಬೇತು ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೊರಗುತ್ತಿಗೆ ನೌಕರರಿಂದ ಮನವಿ ಸಲ್ಲಿಕೆ



ಹಾಸ್ಟೆಲ್‌ಗಳ ಹೊರಗುತ್ತಿಗೆ ನೌಕರರಿಗೆ ವೇತನ ನೀಡುವಂತೆ ಒತ್ತಾಯಿಸಿ ನೌಕರರು ಚಾಮರಾಜನಗರದಲ್ಲಿ ಜಿಪಂ ಸಹಾಯಕ ನಿರ್ದೇಶಕ ರಾಜೇಂದ್ರಪ್ರಸಾದ್ ಅವರಿಗೆ ಮನವಿ ಸಲ್ಲಿಸಿದರು.

ಚಾಮರಾಜನಗರ, ಫೆ.12–ತಾಲೂಕು ಹಾಗೂ ಜಿಲ್ಲಾ ಮಟ್ಟದ ಹಾಸ್ಟೆಲ್‌ಗಳ ಹೊರಗುತ್ತಿಗೆ ನೌಕರರಿಗೆ ವೇತನ ಕೊಡಿಸುವಂತೆ ಒತ್ತಾಯಿಸಿ ನೌಕರರು ನಗರದ ಜಿಲ್ಲಾಡಳಿತ ಭವನದ ಮುಂಭಾಗದಲ್ಲಿ ಜಿಪಂ ಸಹಾಯಕ ನಿರ್ದೇಶಕ ರಾಜೇಂದ್ರಪ್ರಸಾದ್ ಅವರಿಗೆ ಮನವಿ ಸಲ್ಲಿಸಿದರು.

ಹಾಸ್ಟೆಲ್‌ಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನಮಗೆ ಕಳೆದ 3 ತಿಂಗಳಿಂದ ವೇತನ ನೀಡಿಲ್ಲ. ಈ ಸಂಬಂಧ ಮೇಲಧಿಕಾರಿಗಳ ಗಮನಕ್ಕೆ ತಂದರೆ ನಿಮ್ಮನ್ನು ಕೆಲಸದಿಂದ ವಜಾಗೊಳಿಸುತ್ತೇವೆ ಎಂದು ಹೆದರಿಸುತ್ತಿದ್ದಾರೆ. ಇಲಾಖೆಯ ಉಪನಿರ್ದೇಶಕರು ಹಾಗೂ ಕಾಂತಿ ಏಜೆನ್ಸಿಯ ಇಬ್ಬರು ಶಾಮೀಲಾಗಿ ಕಾರ್ಮಿಕ ಇಲಾಖೆಯ ನಿಯಮದ ಪ್ರಕಾರ ವೇತನ ನೀಡುತ್ತಿಲ್ಲ ಎಂದು ಮನವಿಯಲ್ಲಿ ದೂರಿದ್ದಾರೆ.

ಹೊರಗುತ್ತಿಗೆ ನೌಕರರಿಗೆ 9800, 10,300, 10,400, 10,500, 10,600, 11,000, 11,200, 11,300 ರೂ. ಈ ರೀತಿ ವೇತನ ನೀಡುತ್ತಿದ್ದಾರೆ. ಆದರೆ, ಕಳೆದ 3 ತಿಂಗಳಿಂದ ವೇತನ ನೀಡಿಲ್ಲ. ಕಾಂತಿ ಏಜೆನ್ಸಿಯವರು ಕಾರ್ಮಿಕರಿಗೆ ಇಎಸ್‌ಐ, ಪಿಎಫ್, ಹಣವನ್ನು ಕಡಿತಗೊಳಿಸಿರುತ್ತಾರೆ. ಆದರೆ, ಇಎಸ್‌ಐ, ಪಿಎಫ್ ಕಾರ್ಡ್ ಹಾಗೂ ಪ್ರಮಾಣಪತ್ರ ನೀಡಿಲ್ಲ ಎಂದು ಆರೋಪಿಸಿದ್ದಾರೆ.

ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಧಿಕಾರಿಗಳು ಹಾಗೂ ತಾಲೂಕು ಮತ್ತು ಜಿಲ್ಲಾ ಸಮಾಜ ಕಲ್ಯಾಣ ಇಲಾಖಾಧಿಕಾರಿಗಳ ಗಮನಕ್ಕೂ ತಂದಿದ್ದರು ಯಾವುದೇ ಪ್ರಯೋಜನವಾಗಿಲ್ಲ. 2–3 ಜಿಲ್ಲೆಗಳಲ್ಲಿ ಕಾಂತಿ ಏಜೆನ್ಸಿಯವರನ್ನು ಕಪ್ಪುಪಟ್ಟಿಗೆ ಸೇರಿಸಿದ್ದರೂ ಅವರಿಗೆ ಏಜೆನ್ಸಿ ನೀಡಲಾಗಿದೆ. ಹೀಗಾಗಿ ಪರಿಶೀಲಿಸಿ ನಮಗೆ ಬಾಕಿ ವೇತನ ಕೊಡಿಸಬೇಕು ಮನವಿಯಲ್ಲಿ ನೌಕರರು ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿ ಸೋಮಸುಂದರ್, ನಾಗೇಶ್, ನಟರಾಜು, ಪಿ.ಮಂಜುನಾಥ್, ಕುಮಾರ್, ಕಿರಣ್ ಜೆ.ಪ್ರಜ್ವಲ್, ಸುರೇಶ್, ಸಂತೋಷ್, ಕೆ.ರತ್ನಬಾಯಿ, ಶಶಿಕಲಾ, ನಿರ್ಮಲಾ, ನಂಜಮಣಿ, ಛಾಯದೇವಿ, ಮಂಜುಳ ಇತರರು ಹಾಜರಿದ್ದರು.

ರೈತರ ಬಂಧನ ಖಂಡಿಸಿ ಪ್ರತಿಭಟನೆ



ಮಧ್ಯಪ್ರದೇಶದಲ್ಲಿ ಕರ್ನಾಟಕದ ರೈತರನ್ನು ಬಂಧಿಸಲಾಗಿದೆ ಎಂದು ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಹಾಗೂ ಕಬ್ಬು ಬೆಳೆಗಾರರ ಸಂಘದ ಕಾರ್ಯಕರ್ತರು ಚಾ.ನಗರದಲ್ಲಿ ಪ್ರತಿಭಟನೆ ನಡೆಸಿದರು.

ಚಾಮರಾಜನಗರ: ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಸಂಯುಕ್ತ ಕಿಸಾನ್ ಮೋರ್ಚಾ ಕರೆಕೊಟ್ಟಿದ್ದ ದೆಹಲಿ ಚಲೋ ಪ್ರತಿಭಟನೆಗೆ ತೆರಳುತ್ತಿದ್ದ ರಾಜ್ಯದ ರೈತನ್ನು ಮಧ್ಯಪ್ರದೇಶದಲ್ಲಿ ಬಂಧಿಸಿರುವುದು ಖಂಡನೀಯ ಎಂದು ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಹಾಗೂ ಕಬ್ಬು ಬೆಳೆಗಾರರ ಸಂಘದ ಕಾರ್ಯಕರ್ತರು ನಗರದಲ್ಲಿ ಸೋಮವಾರ ಪ್ರತಿಭಟನೆ ನಡೆಸಿದರು.

ನಗರದ ಶ್ರೀ ಚಾಮರಾಜೇಶ್ವರ ಉದ್ಯಾನವ ಮುಂಭಾಗದಲ್ಲಿ ರೈತ ಸಂಘದ ತಾಲೂಕು ಅಧ್ಯಕ್ಷ ಸತೀಶ್, ಕಾರ್ಯದರ್ಶಿ ಸುಂದರಪ್ಪ ನೇತೃತ್ವದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು, ಅಲ್ಲಿಂದ ಮೆರವಣಿಗೆ ಹೊರಟು ಭುವನೇಶ್ವರಿ ವೃತ್ತಕ್ಕೆ ತೆರಳಿ ಅಲ್ಲಿನ ರಾಷ್ಟ್ರೀಯ ಹೆದ್ದಾರಿ ತಡೆದು ಕೆಲಕಾಲ ಪ್ರತಿಭಟನೆ ನಡೆಸಿದರು.

ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಸಂಯುಕ್ತ ಕಿಸಾನ್ ಮೋರ್ಚಾ ಮಂಗಳವಾರ ಕರೆಕೊಟ್ಟಿದ್ದ ದೆಹಲಿ ಚಲೋ ಪ್ರತಿಭಟನೆಗೆ ತೆರಳುತ್ತಿದ್ದ ರಾಜ್ಯದ ನೂರಾರು ರೈತನ್ನು ಮಧ್ಯಪ್ರದೇಶದ ಭೋಪಾಲ್‌ನ ರೈಲು ನಿಲ್ದಾಣದಲ್ಲಿ ರಾತ್ರಿ ಪೊಲೀಸರು ಬಂಧಿಸಿರುವುದು ಅತ್ಯಂತ ಖಂಡನೀಯ. ರೈತರ ಹೋರಾಟವನ್ನು ಸರ್ಕಾರ ಪೊಲೀಸರನ್ನು ಬಳಸಿಕೊಂಡು ಹತ್ತಿಕ್ಕುವ ಕೆಲಸ ಮಾಡುತ್ತಿದೆ. ಕೂಡಲೇ ಬಂಧಿಸಿರುವ ರಾಜ್ಯದ ರೈತರನ್ನು ಬಿಡುಗಡೆ ಮಾಡಬೇಕು. ಇಲ್ಲದಿದ್ದರೆ ಜೈಲ್ ಭರೋ ಚಳವಳಿ ಹಮ್ಮಿಕೊಳ್ಳುವುದಾಗಿ ಪ್ರತಿಭಟನಾಕಾರರು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಸಂಘದ ಗುರುಪ್ರಸಾದ್ ಉಡಿಗಾಲ, ವಿಜಿ ಬಡಗಲಪುರ, ಬಾಬು ಕಾಗಲವಾಡಿ, ಮಾದೇಶ್, ವೆಂಕಟೇಶ್, ಪ್ರಕಾಶ್, ಕೃಷ್ಣಪ್ಪ, ಮಹೇಂದ್ರ ಇತರರು ಭಾಗವಹಿಸಿದ್ದರು.

ಬಜೆಟ್‌ನಲ್ಲಿ ಎಸ್‌ಸಿ, ಎಸ್‌ಟಿಗೆ ಒತ್ತು ನೀಡಿ

ದಲಿತ ಸಂಘರ್ಷ ಸಮಿತಿ ಜಿಲ್ಲಾ ಶಾಖೆಯಿಂದ ಜಿಲ್ಲಾಧಿಕಾರಿ ಶಿಲ್ಪನಾಗ್ ಅವರಿಗೆ ಮನವಿ ಸಲ್ಲಿಕೆ



ಬಜೆಟ್‌ನಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಜನರ ಸರ್ವಾಂಗೀಣ ಪ್ರಗತಿಗೆ ಒತ್ತು ನೀಡಬೇಕು ಎಂದು ದಲಿತ ಸಂಘರ್ಷ ಸಮಿತಿ ಜಿಲ್ಲಾ ಶಾಖೆ ವತಿಯಿಂದ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.


ಚಾಮರಾಜನಗರ, ಫೆ.12–ಬಜೆಟ್‌ನಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಜನರ ಸರ್ವಾಂಗೀಣ ಪ್ರಗತಿಗೆ ಒತ್ತು ನೀಡಬೇಕೆಂದು ದಲಿತ ಸಂಘರ್ಷ ಸಮಿತಿ ಜಿಲ್ಲಾ ಶಾಖೆ ವತಿಯಿಂದ ಜಿಲ್ಲಾಧಿಕಾರಿ ಶಿಲ್ಪನಾಗ್ ಅವರಿಗೆ ಮನವಿ ಸಲ್ಲಿಸಲಾಯಿತು.

ಎಲ್ಲಾ ಉನ್ನತ ಸಂಸ್ಥೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದವರಿಗೆ ಮೀಸಲಾತಿ ನೀಡಬೇಕು. ಎಸ್‌ಸಿ, ಎಸ್‌ಟಿ ಹಾಸ್ಟೆಲ್‌ಗಳಿಗೆ ಪೀಠೋಪಕರಣಗಳು ಸಮರ್ಪಕವಾಗಿ ಪೂರೈಕೆಯಾಗಬೇಕು. ನಿರಂತರವಾಗಿ ಕಲಿಕೆ ನಡೆಯಬೇಕು. ಹಾಸ್ಟೆಲ್‌ಗೆ ಅರ್ಜಿ ಸಲ್ಲಿಸುವ ಎಲ್ಲಾ ಎಸ್‌ಸಿ, ಎಸ್‌ಟಿ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಬೇಕು. ರಾಜ್ಯದಲ್ಲಿ ನಾಗರಿಕ ಹಕ್ಕುಗಳ ರಕ್ಷಣೆ ಮತ್ತು ದೌರ್ಜನ್ಯ ತಡೆ ಕಾಯ್ದೆ ಅನುಷ್ಠಾನ ಸಮರ್ಪಕವಾಗಿ ಆಗುತ್ತಿಲ್ಲ. ಅಪರಾಧ ಪತ್ತೆ ಮತ್ತು ವಿಚಾರಣೆಗೆ ಪ್ರತ್ಯೇಕ ಸಮಿತಿ ಸ್ಥಾಪಿಸಬೇಕು. ಪ್ರತಿ ಗ್ರಾಮದಲ್ಲಿ ದಲಿತರಿಗೆ ಸ್ಮಶಾನಕ್ಕೆ ಜಾಗ ನೀಡಬೇಕು. ಎಸ್‌ಸಿ, ಎಸ್‌ಟಿ ನಿಗದಿಪಡಿಸಿರುವ 2.50 ಲಕ್ಷ ರೂ. ಅನ್ನು 10 ಲಕ್ಷ ರೂ.ಗೆ ಏರಿಸಬೇಕು ಎಂದು ಆಗ್ರಹಿಸಿದರು.

ಅರ್ಚಕ ಮತ್ತು ಪೌರಕಾರ್ಮಿಕ ವೃತ್ತಿಯನ್ನು ಸಾರ್ವತ್ರಿಕಗೊಳಿಸಬೇಕು. ಈ ಎರಡು ವೃತ್ತಿಗಳಲ್ಲಿ ಮೀಸಲಾತಿ ಅನುಷ್ಠಾನ ಜಾರಿಗೊಳಿಸಬೇಕು. ಹಂಗಾಮಿ ಪೌರಕಾರ್ಮಿಕರನ್ನು ಕಾಯಂಗೊಳಿಸಬೇಕು. ಸರ್ಕಾರ 2020ರಲ್ಲಿ ಜಾರಿಗೊಳಿಸಿರುವ ರೈತಾಪಿ ಜನವಿರೋಧಿ ಭೂಸುಧಾರಣಾ, ಎಪಿಎಂಸಿ ತಿದ್ದುಪಡಿ ಕಾಯ್ದೆ ಹಾಗೂ ವಿದ್ಯುತ್ ಖಾಸಗೀಕರಣ ಮಸೂದೆಯನ್ನು ರದ್ದುಗೊಳಿಸಬೇಕು ಎಂದು ಒತ್ತಾಯಿಸಿದರು.

ದಸಂಸ ಜಿಲ್ಲಾ ಸಂಘಟನಾ ಸಂಚಾಲಕರಾದ ಕಂದಹಳ್ಳಿ ನಾರಾಯಣ, ಮಂಜುಳಾ, ದಲಿತ ಮಹಿಳಾ ಒಕ್ಕೂಟದ ಕಿನಕಹಳ್ಳಿ ಶಾಂತಮ್ಮ, ಕೊಮಾರನಪುರ ಕೆಂಪರಾಜು, ಕಂದಹಳ್ಳಿ ಸೋಮಣ್ಣ, ಕೆಸ್ತೂರು ಬಸವರಾಜು, ಕುದೇರು ನಾಗರಾಜು, ಕಿನಕಹಳ್ಳಿ ಕೆಂಪಮ್ಮ, ಮಹದೇವಿ, ಮಂಗಳಾ, ಕಟ್ನವಾಡಿ ಗೀತಾ, ಅಂಬಳೆ ಪ್ರಕಾಶ್, ಶ್ರೀನಿವಾಸ್ ಹಾಜರಿದ್ದರು.

ಕಾರ್ಯದರ್ಶಿ ರಘು ಅಧಿಕಾರ ಸ್ವೀಕಾರ



ಹನೂರು: ತಾಲೂಕಿನ ಮಲೆಮಹದೇಶ್ವರ ಸ್ವಾಮಿ ಅಭಿವೃದ್ಧಿ ಪ್ರಾಧಿಕಾರದ ನೂತನ ಕಾರ್ಯದರ್ಶಿ ಎ.ಈ.ರಘು ಸೋಮವಾರ ಅಧಿಕಾರ ಸ್ವೀಕರಿಸಿದರು.

ಇದೇ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭಗವಂತನ ಸೇವೆ ಮಾಡಲು ಒಂದು ಅವಕಾಶ ದೊರಕಿದೆ. ಮಲೆ ಮಹದೇಶ್ವರಸ್ವಾಮಿ ಪ್ರಾಧಿಕಾರದ ಎಲ್ಲಾ ನೌಕರರೊಂದಿಗೆ ಪ್ರಾಧಿಕಾರವನ್ನು ಮತ್ತಷ್ಟು ಅಭಿವೃದ್ಧಿಗೊಳಿಸಲಾಗುವುದು ಎಂದು ತಿಳಿಸಿದರು.

ಮಹದೇಶ್ವರಬೆಟ್ಟದ ಅರಣ್ಯ ಪ್ರದೇಶದ ವನ್ಯಜೀವಿಗಳ ರಕ್ಷಣೆಯ ದೃಷ್ಟಿಯಿಂದ ಬೆಟ್ಟದಲ್ಲಿ ಪ್ಲಾಸ್ಟಿಕ್ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸುವ ಜೊತೆಗೆ ಭಕ್ತರಲ್ಲಿ ಅರಿವು ಮೂಡಿಸಲಾಗುವುದು. ಜೊತೆಗೆ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಲಾಗುವುದು. ಭಕ್ತರಿಗೆ ಅಗತ್ಯ ಮೂಲಸೌಲಭ್ಯ ಕಲ್ಪಿಸಲು ಶ್ರಮಿಸಲಾಗುವುದು ಎಂದರು.

ಕೇಂದ್ರದ ಯೋಜನೆಗಳನ್ನು ಮನೆಮನೆಗೆ ತಲುಪಿಸಿ



ಗುಂಡ್ಲುಪೇಟೆಯಲ್ಲಿ ಬಿಜೆಪಿ ನೂತನ ಮಂಡಲಾಧ್ಯಕ್ಷ ಸಿ.ಮಹದೇವಪ್ರಸಾದ್ ಅವರಿಗೆ ನಿರ್ಗಮಿತ ಅಧ್ಯಕ್ಷ ದೊಡ್ಡಹುಂಡಿ ಜಗದೀಶ್ ಅಧಿಕಾರ ಹಸ್ತಾಂತರಿಸಿದರು. ಮಾಜಿ ಶಾಸಕ ನಿರಂಜನಕುಮಾರ್, ಸೋಮಶೇಖರ್, ನಾರಾಯಣಪ್ರಸಾದ್ ಇದ್ದರು.

ಗುಂಡ್ಲುಪೇಟೆ, ಫೆ.12–ಪಕ್ಷದ ಕಾರ್ಯಕರ್ತರು ಕೇಂದ್ರ ಸರ್ಕಾರದ ಜನಪರ ಯೋಜನೆಗಳನ್ನು ಮನೆ ಮನೆಗಳಿಗೆ ತಲುಪಿಸಬೇಕು ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನಕುಮಾರ್ ಹೇಳಿದರು.

ಪಟ್ಟಣದ ಸಿಎಂಎಸ್ ಕಲಾಮಂದಿರದಲ್ಲಿ ಆಯೋಜಿಸಿದ್ದ ಬಿಜೆಪಿ ಮಂಡಲಾಧ್ಯಕ್ಷರ ಪದಗ್ರಹಣ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ಕೇವಲ ಗ್ಯಾರಂಟಿಗಳ ಭರವಸೆ ನೀಡಿ ಅಧಿಕಾರಕ್ಕೆ ಬಂದ ಕಾಂಗ್ರೆಸ್‌ನ ಯೋಜನೆಗಳು ಅಸಮರ್ಪಕವಾಗಿವೆ. ಬಹಳಷ್ಟು ಜನರಿಗೆ ಇನ್ನೂ ವಿವಿಧ ಯೋಜನೆಗಳ ಲಾಭ ದೊರಕಿಲ್ಲ. ಆದರೆ, ನರೇಂದ್ರ ಮೋದಿಯವರು ಬಡ ಹಾಗೂ ಶ್ರೀಸಾಮಾನ್ಯರಿಗೆ ಉಪಯೋಗವಾಗುವ ಕಾರ್ಯಕ್ರಮ ಕೈಗೊಂಡಿದ್ದಾರೆ ಎಂದು ತಿಳಿಸಿದರು.

ನೂತನ ಮಂಡಲಾಧ್ಯಕ್ಷರ ನೇಮಕ: ಇದೇ ವೇಳೆ ಬಿಜೆಪಿ ನೂತನ ಮಂಡಲಾಧ್ಯಕ್ಷರಾಗಿ ಚನ್ನಂಜಯ್ಯಮಹುಂಡಿ ಸಿ.ಮಹದೇವಪ್ರಸಾದ್ ನೇಮಕ ಮಾಡಲಾಯಿತು. ನಿರ್ಗಮಿತ ಮಂಡಲಾಧ್ಯಕ್ಷ ದೊಡ್ಡಹುಂಡಿ ಜಗದೀಶ್ ಅಧಿಕಾರ ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಉಪಾಧ್ಯಕ್ಷ ಹಿರೀಕಾಟಿ ಸೋಮಶೇಖರ್, ಬಗರ್‌ಹುಕುಂ ಸಮಿತಿಯ ಮಾಜಿ ಉಪಾಧ್ಯಕ್ಷ ನಿಟ್ರೆ ನಾಗರಾಜಪ್ಪ, ಪುರಸಭೆ ಮಾಜಿ ಅಧ್ಯಕ್ಷ ಎಲ್.ಸುರೇಶ್, ಪಿಕಾರ್ಡ್ ಬ್ಯಾಂಕ್ ಮಾಜಿ ಅಧ್ಯಕ್ಷರಾದ ಎನ್.ಮಲ್ಲೇಶ್, ಎಸ್.ಎಂ.ಮಲ್ಲಿಕಾರ್ಜುನ, ಹೊರೆಯಾಲ ಕೃಷ್ಣ ಹಲವರು ಇದ್ದರು.

ನ್ಯಾಯಯುತ ಬೆಲೆ ನೀಡುವಂತೆ ಒತ್ತಾಯಿಸಿ ಡಿಸಿ ಕಚೇರಿ ಎದುರು ಸತ್ಯಾಗ್ರಹ



ಚಾಮರಾಜನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಕೆಲ್ಲಂಬಳ್ಳಿ ಪು.ಶ್ರೀನಿವಾಸನಾಯಕ ಮಾತನಾಡಿದರು.

ಚಾಮರಾಜನಗರ, ಫೆ.12–ತಾಲೂಕಿನ ಕೆಲ್ಲಂಬಳ್ಳಿ ಮತ್ತು ಬದನಗುಪ್ಪೆ ಕೈಗಾರಿಕಾ ಪ್ರದೇಶದ ಭೂಸ್ವಾಧೀನ ರೈತರಿಗೆ ನ್ಯಾಯಯುತ ಹಾಗೂ ವೈಜ್ಞಾನಿಕ ದರ ನಿಗದಿಗೊಳಿಸದಿದ್ದರೆ ರೈತರ ಸಂಘದಿಂದ ಆಮರಣಾಂತ ಉಪವಾಸ ಸತ್ಯಾಗ್ರಹ ನಡೆಸುವುದಾಗಿ ಸಂಘದ ಪು.ಶ್ರೀನಿವಾಸ ನಾಯಕ ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ರೈತರ ಸಂಕಷ್ಟವನ್ನು ಹತ್ತಿರದ ಬಲ್ಲವರು. ಅವರ ಹಿಂದಿನ ಅವಧಿಯಲ್ಲಿ ಈ ಭಾಗದಲ್ಲಿ ಕೈಗಾರಿಕಾ ಪ್ರದೇಶಾಭಿವೃದ್ಧಿಗಾಗಿ ರೈತರ ಜಮೀನುಗಳಿಗೆ ಎಸ್‌ಆರ್ ದರ ಹೆಚ್ಚು ಕೊಡಿಸಿದ್ದಾರೆ. ರೈತರ ಜಮೀನುಗಳಿಗೆ ಎಕರೆ 20 ಲಕ್ಷ ರೂ. ನೀಡಿದ್ದಾರೆ. ಈಗ ರಾಜ್ಯ ಸರ್ಕಾರ 2ನೇ ಹಂತದ ಭೂಸ್ವಾಧೀನಕ್ಕೆ ರೈತರ ಸಭೆ ನಡೆಸಿ, ರೈತರ ಅಭಿಪ್ರಾಯ ಸಂಗ್ರಹಿಸಲಾಗಿದೆ ಎಂದು ಸುದ್ದಿಗೋಷ್ಠಿಯಲ್ಲಿ ಹೇಳಿದರು.

ಜಿಲ್ಲಾಡಳಿತ ಹಾಗೂ ಕೆಐಎಡಿಬಿ 43 ಲಕ್ಷ ರೂ. ನಿಗದಿ ಮಾಡಿರುವುದು ವೈಜ್ಞಾನಿಕ ಹಾಗೂ ರೈತ ವಿರೋಧಿ ನಡೆಯಾಗಿದೆ. ಯಾವುದೇ ಕಾರಣಕ್ಕೂ ರೈತರು ಸರ್ಕಾರ ನಿಗದಿ ಪಡಿಸಿರುವ ಎಕರೆಗೆ 43 ಲಕ್ಷ ರೂ.ಗೆ ಜಮೀನು ನೀಡುವುದಿಲ್ಲ. ಎಕರೆ 1.25 ಕೋಟಿ ರೂ. ನೀಡಬೇಕು. ರಾಜ್ಯ ಪತ್ರದಲ್ಲಿ ನೋಟಿಫಿಕೇಷನ್ ಮಾಡಿ, ರೈತರ ಬ್ಯಾಂಕ್ ಖಾತೆಗಳಿಗೆ ಹಣ ಜಮಾ ಮಾಡಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಗ್ರಾಪಂ ಸದಸ್ಯ ಕೆಲ್ಲಂಬಳ್ಳಿ ಸೋಮಶೇಖರ್, ಕಲ್ಲಹಳ್ಳಿ ಗುರುಸಿದ್ದಯ್ಯ, ಕೆಲ್ಲಂಬಳ್ಳಿ ರಾಜೇಶ್ ಇದ್ದರು.



ಮೈಸೂರಿನ ನಟನಾ ರಂಗಶಾಲೆಯಲ್ಲಿ ಆಯೋಜಿಸಿದ್ದ ಸುವರ್ಣ ಕರ್ನಾಟಕ ಅಭಿಯಾನದಲ್ಲಿ ರಂಗಭೂಮಿಯಲ್ಲಿನ ಅನುಪಮ ಸೇವೆಗಾಗಿ ರಂಗಕರ್ಮಿ ರಾಜಶೇಖರ ಕದಂಬ ಅವರಿಗೆ ಸುವರ್ಣ ಕರ್ನಾಟಕ ಪ್ರಶಸ್ತಿ ನೀಡಿ ಗೌರವಿಸಲಾಯಿತು. ನಟ ಮಂಡ್ಯ ರಮೇಶ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಮಲ್ಲಿಕಾರ್ಜುನ ಸ್ವಾಮಿ, ರಂಗ ನಿರ್ದೇಶಕ ಸಿ.ಬಸವಲಿಂಗಯ್ಯ, ಡಾ.ಶ್ರೀಪಾದಭಟ್ ಇದ್ದಾರೆ.

ಒಂದನೇ ಪುಟದಿಂದ

ಮಧ್ಯಮ ವರ್ಗಕ್ಕೇರಿರುವುದು 'ಗ್ಯಾರಂಟಿ'

ದಾಖಲೆಯಾಗಿದೆ. ಖಾತರಿ ಯೋಜನೆಗಳ ಮೂಲಕ ಜನರ ಜೀವನದಲ್ಲಿ ಪರೋಕ್ಷವಾಗಿ ಗಮನಾರ್ಹ ಬದಲಾವಣೆಗಳಾಗಿವೆ, ರಾಜ್ಯದಲ್ಲಿ ಬರಗಾಲವಿದ್ದರೂ ಕಳೆದ ವರ್ಷಕ್ಕಿಂತ ಈ ವರ್ಷ ರೈತರ ಆತ್ಮಹತ್ಯೆ ಪ್ರಮಾಣ ಕಡಿಮೆಯಾಗಿದೆ ಎಂದಿದ್ದಾರೆ.

ರಾಜ್ಯಪಾಲರ ಮೂಲಕ ಗ್ಯಾರಂಟಿ ಯೋಜನೆಗಳನ್ನು ಎಳೆ ಎಳೆಯಾಗಿ ಬಿಡಿಸಿಟ್ಟಿರುವ ಸರ್ಕಾರ ಕೇಂದ್ರವನ್ನು ಪರೋಕ್ಷವಾಗಿ ತರಾಟೆಗೆ ತೆಗೆದುಕೊಂಡಿದೆ. ಮುಂದುವರೆದು ಮಾತನಾಡಿದ ರಾಜ್ಯಪಾಲರು, ಕರ್ನಾಟಕವು ರಾಷ್ಟ್ರದಲ್ಲಿಯೇ ಒಂದು ಮಾದರಿ ರಾಜ್ಯ, ಇಲ್ಲಿ ಜಾರಿಗೆ ತರುವ ಹಲವು ಪ್ರಗತಿಪರ ಯೋಜನೆಗಳು ವಿವಿಧ ರಾಜ್ಯಗಳಿಗೆ ಮಾದರಿಯಾಗಿವೆ ಎಂದು ತಿಳಿಸಿದ್ದಾರೆ. ಸರ್ಕಾರ ತಂದಿರುವ ಪಂಚ ಯೋಜನೆಗಳು ಕರ್ನಾಟಕದ ಸಮಸ್ತ ಜನತೆಯ ಪಾಲಿಗೆ ಸಂತೃಪ್ತಿಯ ಮತ್ತು ನೆಮ್ಮದಿಯ ನಾಳೆಗಳನ್ನು ತರುವ ಉದ್ದೇಶ ಹೊಂದಿವೆ. ನಮ್ಮ ನೀತಿಗಳಲ್ಲಿ ಹೊಸತನವನ್ನು ಅಳವಡಿಸಿಕೊಳ್ಳಲಾಗಿದೆ.

ಜನ ಕೇಂದ್ರಿತವು ಹಾಗೂ ಅಭಿವೃದ್ಧಿ ಪರವೂ ಆದ ನನ್ನ ಸರ್ಕಾರವು ರಚನೆಯಾಗಿ ಕೇವಲ ಎಂಟು ತಿಂಗಳಲ್ಲಿಯೇ ಗಮನಾರ್ಹವಾದ ಸಾಧನೆ ಮಾಡಿದೆ. ಯೋಜನೆಗಳು ಒಂದು ಜಾತಿ, ಪ್ರದೇಶಕ್ಕೆ ಇಲ್ಲವೇ ಧರ್ಮಕ್ಕೆ ಸೀಮಿತವಾಗದೆ, ನಾಡಿನಲ್ಲಿರುವ ಎಲ್ಲ ರೀತಿಯ ಅರ್ಹ ಜನರಿಗೆ ಮಧ್ಯವರ್ತಿಗಳ ಹಸ್ತಕ್ಷೇಪವಿಲ್ಲದೆ ನೇರವಾಗಿ ತಲುಪುತ್ತಿವೆ.

ಶಕ್ತಿ ಯೋಜನೆಯಿಂದ ರಾಜ್ಯದ 3.5 ಕೋಟಿ ಮಹಿಳೆಯರು ಜಾತಿ–ಧರ್ಮ ಭೇದವಿಲ್ಲದೆ 150 ಕೋಟಿಗೂ ಹೆಚ್ಚು ಟ್ರಿಪ್‌ಗಳಲ್ಲಿ ಪ್ರಯಾಣಿಸಿದ್ದಾರೆ.

ಅನ್ನಭಾಗ್ಯ ಯೋಜನೆಯಡಿ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯನ್ವಯ ವಿತರಿಸಲಾಗುವ ಐದು ಕೆಜಿ ಅಕ್ಕಿ ಜೊತೆಗೆ ರಾಜ್ಯ ಸರ್ಕಾರ ಐದು ಕೆಜಿ ಅಕ್ಕಿ ಬದಲಾಗಿ ಪ್ರತಿ ಕೆಜಿಗೆ 34 ರಂತೆ ಐದು ಕೆಜಿ ಅಕ್ಕಿಯ ಹಣವನ್ನು ಫಲಾನುಭವಿ ಖಾತೆಗೆ ವರ್ಗಾಯಿಸಲಾಗಿದೆ. ಕಳೆದ ಏಳು ತಿಂಗಳಲ್ಲಿ 4,595 ಕೋಟಿ ರೂ. ಅರ್ಹ ಫಲಾನುಭವಿಗಳಿಗೆ ಹಣ ವರ್ಗಾವಣೆ ಮಾಡಿ ಅವರ ಆರ್ಥಿಕ ಸ್ಥಿತಿಯನ್ನು ಮೇಲಕ್ಕೆತ್ತಲಾಗಿದೆ. ಇನ್ನು, ಗೃಹಜ್ಯೋತಿ ಯೋಜನೆಯಡಿ 1.60 ಕೋಟಿ ಗ್ರಾಹಕರಿಗೆ ಪ್ರತಿ ತಿಂಗಳು 200 ಯೂನಿಟ್ ವಿದ್ಯುತ್ ಉಚಿತವಾಗಿ ನೀಡಲಾಗುತ್ತಿದೆ.

ಗೃಹಲಕ್ಷ್ಮೀ ಯೋಜನೆಯಡಿ 1.17 ಕೋಟಿ ಮಹಿಳೆಯರಿಗೆ ಮಾಸಿಕ 2,000 ರೂ.ನಂತೆ ಅವರ ಖಾತೆಗಳಿಗೆ 11,037 ಕೋಟಿ ರೂ. ವರ್ಗಾಯಿಸಲಾಗಿದೆ.

ಗ್ಯಾರಂಟಿ ಯೋಜನೆಗಳಿಂದ ಜನರ ಕೈಸೇರಿದ ಹಣ ಆರ್ಥಿಕತೆಗೆ ಹೊಸ ಉತ್ತೇಜನ ನೀಡಿದೆ, ಒಂದೆಡೆ ರಾಜ್ಯಕ್ಕೆ ದೇಶೀಯ ಮತ್ತು ವಿದೇಶೀಯ ಹೂಡಿಕೆ ದೊಡ್ಡ ಪ್ರಮಾಣದಲ್ಲಿ ಹರಿದುಬರುತ್ತಿದೆ. ಜನರ ಕೊಳ್ಳುವ ಶಕ್ತಿ ಹೆಚ್ಚಾಗಿರುವುದರಿಂದ ಸರ್ಕಾರಕ್ಕೆ ತೆರಿಗೆ ಸಂಗ್ರಹದಲ್ಲೂ ಹೆಚ್ಚಳವಾಗಿದೆ ಎಂದಿದ್ದಾರೆ.

ಕೇಂದ್ರದ ವಿಳಂಬ ಧೋರಣೆ

ಗ್ಯಾರಂಟಿ ಇರಲಿ, ಬರ ಪರಿಹಾರವೇ ಇರಲಿ ಇವುಗಳನ್ನು ಜನರ ಹಕ್ಕುಗಳು ಎಂದು ಭಾವಿಸಿ ಕಾರ್ಯನಿರ್ವಹಿಸುತ್ತಿದೆ. ತಾಲೂಕು ಮಟ್ಟದಲ್ಲಿ ಕುಡಿಯುವ ನೀರು ಹಾಗೂ ಮೇವು ನಿರ್ವಹಣೆಗೆ, ಬರ ಪರಿಹಾರ ಕ್ರಮಗಳ ಮೇಲ್ವಿಚಾರಣೆಗಾಗಿ ಶಾಸಕರ ನೇತೃತ್ವದಲ್ಲಿ ಸಮಿತಿಗಳನ್ನು ರಚಿಸಲಾಗಿದೆ. ಇನ್ನು ನಮ್ಮ ಭಾಷೆ ಮತ್ತು ಸಂಸ್ಕೃತಿಯ ಮೇಲೆ ಯಾವುದೇ ಆಕ್ರಮಣವನ್ನು ನಾವು ಸಹಿಸುವುದಿಲ್ಲ, ಯಾವುದೇ ಬೆಲೆ ತೆತ್ತಾದರೂ ನಮ್ಮ ಮಾತೃ ಭಾಷೆ, ಬಸವಣ್ಣ, ಕುವೆಂಪು ಮುಂತಾದವರು ಪ್ರತಿಪಾದಿಸಿದ ಕರ್ನಾಟಕದ ಸಂಸ್ಕೃತಿಯನ್ನು ಉಳಿಸಿ, ಬೆಳೆಸಲು ನನ್ನ ಸರ್ಕಾರ ಬದ್ಧವಾಗಿದೆ ಎಂದರು. ಜನರ ಅನುಕೂಲಕ್ಕಾಗಿ ನಾಮಫಲಕಗಳ ಶೇಕಡ 60ರಷ್ಟು ಭಾಗವು ಕನ್ನಡದಲ್ಲಿಯೇ ಇರಬೇಕೆಂದು ತೀರ್ಮಾನಿಸಿ ಕಾನೂನು ರೂಪಿಸಿ ಅನುಷ್ಠಾನಕ್ಕೆ ಕ್ರಮಕೈಗೊಳ್ಳಲಾಗಿದೆ ಎಂದರು. ಸರ್ಕಾರಿ ಶಾಲಾ–ಕಾಲೇಜುಗಳಿಗೆ ಉಚಿತ ಕುಡಿಯುವ ನೀರು ಹಾಗೂ ವಿದ್ಯುತ್ ಸೌಲಭ್ಯ ಒದಗಿಲಾಗಿದೆ ಎಂದು ವಿವರಿಸಿದ್ದಾರೆ.

ಉಪ್ಪು, ಹುಳಿ, ಖಾರ ಏನಿಲ್ಲ

ಬೇಕಾಬಿಟ್ಟಿಯಾಗಿ ಅಧಿಕಾರ ಹಂಚಿಕೆ ಮಾಡಿ ಖಜಾನೆಗೆ ನಷ್ಟ ಉಂಟು ಮಾಡಿದ ಉದಾಹರಣೆ ಇಲ್ಲ, ಕ್ಯಾಬಿನೆಟ್ ದರ್ಜೆ ನೀಡುವುದಕ್ಕೂ ಒಂದು ಲೆಕ್ಕ ಬೇಡವೇ, ಉಪಮುಖ್ಯಮಂತ್ರಿ ಅವರ ಆರೋಗ್ಯ ತಪಾಸಣೆ ಮಾಡುವ ವೈದ್ಯರಿಗೂ ಕ್ಯಾಬಿನೆಟ್ ದರ್ಜೆ, ಕಲೆಕ್ಷನ್ ಮಾಡಿಕೊಡುವ ಅಸಾಮಿಗೂ ಕ್ಯಾಬಿನೆಟ್ ದರ್ಜೆ, ಕರ್ನಾಟಕ ಹಣಕಾಸು ಸಂಸ್ಥೆ ಅಧ್ಯಕ್ಷರನ್ನಾಗಿ ಶಾಸಕರನ್ನು ನೇಮಕ ಮಾಡುತ್ತಿರುವುದು ಸರಿಯೇ ಎಂದು ಸರ್ಕಾರವನ್ನು ಪ್ರಶ್ನಿಸಿದರು. ಬರಕ್ಕೆ ತುತ್ತಾದ ರೈತರಿಗೆ ಪರಿಹಾರ ಕೊಡಲು ಇವರಲ್ಲಿ ಹಣವಿಲ್ಲ, ಸಂಪುಟ ದರ್ಜೆ ಭಾಗ್ಯಕ್ಕೆ ಕೋಟ್ಯಾಂತರ ರೂಪಾಯಿ ಖರ್ಚು ಮಾಡಲು ಹಣ ಇದೆ. ಗ್ಯಾರಂಟಿಗಳ ಬಗ್ಗೆ ಪ್ರತಿದಿನವೂ ಮಾಧ್ಯಮಗಳಲ್ಲಿ ನುಡಿದಂತೆ ನಡೆದಿದ್ದೇವೆ ಎಂದು ಹೇಳುತ್ತಿದ್ದಾರೆ, ಜನರಿಗೆ ಸರಿಯಾಗಿ ತಲುಪದ ಗ್ಯಾರಂಟಿಗಳ ಬಗ್ಗೆ ರಾಜ್ಯಪಾಲರಿಂದ ಸುಳ್ಳು ಭಾಷಣ ಮಾಡಿಸಿದ್ದಾರೆ. ಹದಿನೈದು ಬಜೆಟ್ ಮಂಡನೆ ಮಾಡಿದ ಸಿದ್ದರಾಮಯ್ಯ, ಎರಡನೇ ಬಾರಿಗೆ ಮುಖ್ಯಮಂತ್ರಿ ಆದವರು ರಾಜ್ಯಪಾಲರಿಂದ ಮಾಡಿಸುವ ಭಾಷಣವೇ ಇದು, ಇದು ಅತ್ಯಂತ ಕಳಪೆ ಭಾಷಣ.

ಈಗಾಗಲೇ ಜಾರಿ ಮಾಡಿರುವ ಗ್ಯಾರಂಟಿಗಳು ಏನಾಗಿವೆ, ಬೆಂಗಳೂರಿನ ಭಾಗವೇ ಆಗಿರುವ ದೇವನಹಳ್ಳಿಯಲ್ಲಿ ಶಾಲಾ ಮಕ್ಕಳಿಗೆ ಬಸ್ ಇಲ್ಲ, ಮಕ್ಕಳು ಶಾಲೆಗೆ ದಿನವೂ ನಡೆದುಕೊಂಡು ಹೋಗುವ ಪರಿಸ್ಥಿತಿ ಇದೆ, ಉದ್ಯೋಗ ಕೊಡುತ್ತೇವೆ ಎಂದು ಜಾಹೀರಾತು ಕೊಡುತ್ತಲೇ ಇದ್ದಾರೆ, ಅಷ್ಟು ಜನ ನೇಮಕ, ಇಷ್ಟು ಜನ ನೇಮಕಕ್ಕೆ ಪ್ರಸ್ತಾವನೆ ಸಲ್ಲಿಸುತ್ತೇವೆ ಎನ್ನುತ್ತಿದ್ದಾರೆ, ಬರೀ ಪ್ರಸ್ತಾವನೆ ಸಲ್ಲಿಸುವುದರಲ್ಲಿಯೇ ಸರ್ಕಾರ ಕಾಲಹರಣ ಮಾಡುತ್ತಿದೆ. ರಾಜ್ಯಪಾಲರ ಭಾಷಣದಲ್ಲಿ ಕಾಂತರಾಜ್ ವರದಿಯ ಸದ್ದೇ ಇಲ್ಲ, ವರದಿ ಸ್ವೀಕಾರ ಮಾಡಿ ಜಾರಿ ಮಾಡುತ್ತೇನೆ ಎಂದು ಚಿತ್ರದುರ್ಗದಲ್ಲಿ ಅಬ್ಬರ ಮಾಡಿದ್ದರಲ್ಲ, ಜಯಪ್ರಕಾಶ್ ಹೆಗ್ಡೆ ಅವರಿಂದ ವರದಿಯಲ್ಲಿ ಏನು ಬರೆಸುತ್ತಿದ್ದೀರಾ ಎಂದು ಪ್ರಶ್ನಿಸಿದ್ದಾರೆ.

ರಾಜ್ಯಪಾಲರಿಂದ ಸರ್ಕಾರ ಹೇಳಿಸಿದೆ

ಸರ್ಕಾರ ಪರಿಹಾರವನ್ನು ಒಂದೇ ಸಲಕ್ಕೆ ರೈತರ ಖಾತೆಗೆ ಹಾಕಿತ್ತು, ಈ ಸರ್ಕಾರ ಕಂತು ಕಂತಾಗಿ ನೀಡುವುದು ತಪ್ಪು, 25 ಸಾವಿರ ರೂ. ಪರಿಹಾರ ಕೇಳಲಾಗಿದೆ, ಆ ವಿಷಯವನ್ನು ಪ್ರಸ್ತಾಪಿಸಿಲ್ಲ, ಕೇವಲ ಕೇಂದ್ರ ಸರ್ಕಾರದ ಮೇಲೆ ಗೂಬೆ ಕೂರಿಸಲಾಗಿದೆ. ಶಾಲಾ ಮಕ್ಕಳಿಗೆ ಚಿಕ್ಕಿ ಮಿಠಾಯಿ ಕೊಟ್ಟು ಅವರ ಕೈಯಲ್ಲೇ ಶೌಚಾಲಯ ತೊಳೆಸಲಾಗುತ್ತಿದೆ, ಶಿವಮೊಗ್ಗ ವಿಮಾನ ನಿಲ್ದಾಣ ಬಿ.ಎಸ್.ಯಡಿ ಯೂರಪ್ಪ ಮುಖ್ಯಮಂತ್ರಿಯಾಗಿದ್ದಾಗ ಆಗಿತ್ತು, ಮೆಟ್ರೊ ರೈಲು ಯೋಜನೆ ಕೇಂದ್ರ ಸರ್ಕಾರದಿಂದ ಆಗಿದೆ, ಜಲಜೀವನ್ ಮಿಷನ್ ಕೂಡ ಕೇಂದ್ರದ ಕೊಡುಗೆ, ಆದರೂ ಅವೆಲ್ಲ ತಮ್ಮದೇ ಎಂದು ಹೇಳಿಕೊಂಡಿದ್ದಾರೆ. ರಾಜ್ಯದಲ್ಲಿ ಧರ್ಮ ವೈಷಮ್ಯ ಹೆಚ್ಚಿದ್ದು, ಭಯೋತ್ಪಾದನಾ ಚಟುವಟಿಕೆ ಅಧಿಕ ವಾಗಿದೆ, ಸರ್ಕಾರ ಕಾನೂನು ಸುವ್ಯವಸ್ಥೆ ಯನ್ನೇ ಕಾಪಾಡಿಲ್ಲ, ಆದರೂ ಸರ್ವ ಜನಾಂಗದ ಶಾಂತಿಯ ತೋಟ ಎಂದಿದ್ದಾರೆ.

ಕನ್ನಡದ ಉಳಿವು ಹೆಸರಿನಲ್ಲಿ ಹೋರಾಟ ಗಾರರನ್ನು ಜೈಲಿಗೆ ಹಾಕಿದ್ದಾರೆ, ಎಸ್‌ಸಿ–ಎಸ್ಪಿ, ಟಿಎಸ್ಪಿ ಹಣವನ್ನು ದಲಿತರಿಗೆ ಬಳಸದೆ ಬೇರೆ ಯೋಜನೆಗಳಿಗೆ ಬಳಸಿದ್ದಾರೆ, ಕಾಂಗ್ರೆಸ್ ಸರ್ಕಾರದಿಂದ ಒಂದೇ ಒಂದು ಕಾಮಗಾರಿ ನಡೆದಿಲ್ಲ ಎಂಬುದಾಗಿ ಶಾಸಕರೇ ಹೇಳಿದ್ದಾರೆ, 40 ಪರ್ಸೆಂಟ್ ಕಮಿಶನ್ ಸರ್ಕಾರ ಎಂದು ಗುತ್ತಿಗೆದಾರರು ಆರೋಪಿಸಿದ್ದಾರೆ ಎಂದರು. ಬರಗಾಲವಿದ್ದರೂ ಕಳೆದ ವರ್ಷಕ್ಕಿಂತ ಆತ್ಮಹತ್ಯೆ ಕಡಿಮೆಯಾಗಿದೆ ಎಂದು ಹೋಲಿಸಿಕೊಂಡಿದ್ದಾರೆ, ಇವರ ಸರ್ಕಾರದ ಸಚಿವ ಶಿವಾನಂದ ಪಾಟೀಲ್, ಪರಿಹಾರ ಪಡೆಯಲೆಂದೇ ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಾರೆ ಎಂದು ಕೀಳಾಗಿ ಮಾತಾಡಿದ್ದರು, ಆತ್ಮಹತ್ಯೆ ಹೆಚ್ಚಿದ್ದರೂ ಅದನ್ನು ಮುಚ್ಚಿಟ್ಟು ರಾಜ್ಯಪಾಲರ ಭಾಷಣದಲ್ಲಿ ಸುಳ್ಳು ಹೇಳಿಸಿದ್ದಾರೆ. ಸರ್ಕಾರ ಹಿಂದೂ–ಮುಸ್ಲಿಂ ನಡುವೆ ದ್ವೇಷ ಬಿತ್ತುವ ಕೆಲಸ ಮಾಡಿದೆ, ಮುಸ್ಲಿಮರಿಗೆ ಒಂದು ಸಾವಿರ ಕೋಟಿ ರೂ. ನೀಡುವ ಸರ್ಕಾರ, ಪರಿಹಾರ ಕೇಳಿದರೆ ಕೇಂದ್ರ ಸರ್ಕಾರದ ಮೇಲೆ ಆರೋಪ ಮಾಡುತ್ತದೆ ಎಂದರು. ಗ್ಯಾರಂಟಿಗಾಗಿ ಖಜಾನೆ ಖಾಲಿ ಮಾಡಿದ ಸರ್ಕಾರ, ಶಾಸಕರಿಗೆ ಅನುದಾನ ನೀಡದೆ ಸತಾಯಿಸುತ್ತಿದೆ, ಯಾವ ಯೋಜನೆಗೂ ಹಣ ನೀಡದೆ ಗ್ಯಾರಂಟಿಗೆ ಮಾತ್ರ ಹಣ ಕೊಟ್ಟಿರುವುದೇ ಆರ್ಥಿಕ ಅಸಮಾನತೆ, ದಲಿತರ ಹಣವನ್ನು ಗ್ಯಾರಂಟಿಗಾಗಿ ಬಳಕೆ ಮಾಡಿರುವುದೇ ಆರ್ಥಿಕ ಅಸಮಾನತೆ, ಪ್ರಧಾನಿ ನರೇಂದ್ರ ಮೋದಿ ಸರ್ಕಾರದಿಂದ ಕಳೆದ ಐದು ವರ್ಷಗಳಲ್ಲಿ 13.5 ಕೋಟಿ ಜನರು ಬಡತನದಿಂದ ಹೊರಬಂದಿದ್ದಾರೆ, ಇಂತಹ ಒಂದೂ ಕೆಲಸವನ್ನು ಕಾಂಗ್ರೆಸ್ ಮಾಡಿಲ್ಲ ಎಂದರು.

ಕಿಟಕಿ ಗಾಜು ಒಡೆದು ನಗದು ಕಳವು

ತಿಳಿಸಿದಾಗ ಮನೆಯವರಿಗೆ ಬ್ಯಾಗ್ ಕಳುವಾಗಿರುವುದು ತಿಳಿಯಿತು. ಬ್ಯಾಗ್‌ನಲ್ಲಿದ್ದ ಪ್ರಮುಖ ದಾಖಲೆಗಳನ್ನು ಅಲ್ಲೇ ಬಿಟ್ಟು ಖದೀಮ ಕೇವಲ 4000 ರೂ. ನಗದು ತೆಗೆದುಕೊಂಡು ಹೋಗಿರುವುದು ತಿಳಿಯಿತು. ತಮಗೆ ಅತ್ಯಗತ್ಯವಾಗಿ ಬೇಕಾಗಿದ್ದ ದಾಖಲೆಗಳೊಂದಿಗೆ ಬ್ಯಾಗ್ ಸಿಕ್ಕಿದ ಸಮಾಧಾನದಲ್ಲಿ ವಿನೋದ್‌ಕುಮಾರ್, ಅಂದು ರಾತ್ರಿಯಾಗಿದ್ದ ಕಾರಣ ಸೆಕ್ಯುರಿಟಿ ಗಾರ್ಡ್‌ರಿಂದ ಬ್ಯಾಗ್ ಪಡೆದುಕೊಂಡು ಪೊಲೀಸ್ ಠಾಣೆಗೆ ದೂರು ನೀಡದೇ ಮನೆಗೆ ಹಿಂದಿರುಗಿದರು.

ಈ ಸಂಬಂಧ 'ಮೈಸೂರು ಮಿತ್ರ'ನಿಗೆ ಮಾಹಿತಿ ನೀಡಿದ ವಿನೋದ್‌ಕುಮಾರ್ ಅವರ ಪುತ್ರ ಚಿರಂತ್, ಹಾಡು ಹಗಲೇ ಜನಸಂದಣಿ, ವಾಹನ ದಟ್ಟಣೆ ಇರುವ ಧನ್ವಂತರಿ ರಸ್ತೆಯಲ್ಲಿ ಈ ಘಟನೆ ನಡೆದಿರುವ ಬಗ್ಗೆ ಆತಂಕ ವ್ಯಕ್ತಪಡಿಸಿದರಲ್ಲದೇ, ಸಾರ್ವಜನಿಕರು ಎಚ್ಚರಿಕೆಯಿಂದಿರಬೇಕೆಂದೂ ಸಲಹೆ ನೀಡಿದರು. ಘಟನೆ ಬಗ್ಗೆ ಸಂಬಂಧಪಟ್ಟ ಪೊಲೀಸ್ ಠಾಣೆಗೆ ದೂರು ನೀಡುವುದಾಗಿಯೂ ತಿಳಿಸಿದರು.

ಬುಡಕಟ್ಟು ಯುವ ವಿನಿಮಯ ಕಾರ್ಯಕ್ರಮದ ಸಮಾರೋಪ

● ಅಧಿಕ ಯುವ ಶಕ್ತಿ ಹೊಂದಿರುವ ಭಾರತದತ್ತ ವಿಶ್ವದ ಚಿತ್ತ! ● ನೆಹರು ಯುವಕೇಂದ್ರದ ಪ್ರಾದೇಶಿಕ ನಿರ್ದೇಶಕ ಎಂ.ಎನ್.ನಟರಾಜ್ ಅಭಿಮತ

ಮೈಸೂರು,ಫೆ.12(ಎಂಟಿವೈ)– ದೇಶದ ಜನಸಂಖ್ಯೆಯಲ್ಲಿ 45 ಕೋಟಿ ಯುವ ಜನರೇ ಇರುವುದರಿಂದ ವಿಶ್ವದ ಗಮನ ಭಾರತದ ಮೇಲಿದೆ ಎಂದು ನೆಹರು ಯುವ ಕೇಂದ್ರದ ಪ್ರಾದೇಶಿಕ ನಿರ್ದೇಶಕ ಎಂ.ಎನ್.ನಟರಾಜ್ ಅಭಿಪ್ರಾಯಪಟ್ಟಿದ್ದಾರೆ.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ಯುವಜನ ವ್ಯವಹಾರ ಹಾಗೂ ಕ್ರೀಡಾ ಸಚಿವಾಲಯ, ನೆಹರು ಯುವ ಕೇಂದ್ರ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಸಿಆರ್‌ಪಿಎಫ್, ಐಟಿಬಿಪಿ, ಬಿಎಸ್‌ಎಫ್ ಹಾಗೂ ಎಸ್‌ಎಸ್‌ಬಿ ಸಹಯೋಗದಲ್ಲಿ ಸೋಮವಾರ ಆಯೋಜಿಸಿದ್ದ '15ನೇ ಬುಡಕಟ್ಟು ಯುವ ವಿನಿಮಯ ಕಾರ್ಯಕ್ರಮ'ದ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ದೇಶಕ್ಕೆ ಸ್ವಾತಂತ್ರ್ಯ ಬಂದಾಗ 33 ಕೋಟಿ ಜನಸಂಖ್ಯೆ ಇತ್ತು. ಸ್ವಾತಂತ್ರ್ಯ ಬಂದು 75 ವರ್ಷದಲ್ಲಿ ದೇಶದ ಜನಸಂಖ್ಯೆ 140 ಕೋಟಿ ಆಗಿದೆ. ವಿಶ್ವದಲ್ಲಿ ಚೀನಾ ಅತೀ ಹೆಚ್ಚು ಜನಸಂಖ್ಯೆ ಹೊಂದಿರುವ ರಾಷ್ಟ್ರ ಎನಿಸಿದೆ. ಎರಡನೇ ಸ್ಥಾನದಲ್ಲಿರುವ ಭಾರತ ಎಲ್ಲರ ಗಮನ ಸೆಳೆದಿದೆ. 2014ರಲ್ಲಿ ಕೇಂದ್ರ ಸರ್ಕಾರ ಜಾರಿಗೆ ತಂದ ಯುವ ನೀತಿಯಲ್ಲಿ 15ರಿಂದ 29 ವರ್ಷದೊಳಗಿನ ಜನರನ್ನು ಯುವ ಜನರೆಂದು ಘೋಷಿಸಲಾಗಿದೆ. ಈ ನಿಯಮಾನುಸಾರ ದೇಶದಲ್ಲಿ 45 ಕೋಟಿಗೂ ಹೆಚ್ಚಿನ ಯುವಜನರೇ



ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ಸೋಮವಾರ ನಡೆದ '15ನೇ ಬುಡಕಟ್ಟು ಯುವ ವಿನಿಮಯ ಕಾರ್ಯಕ್ರಮ'ದ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡಿರುವ ವಿವಿಧ ರಾಜ್ಯಗಳಿಂದ ಆಗಮಿಸಿದ್ದ ಬುಡಕಟ್ಟು ಸಮುದಾಯದ ಯುವ ಜನರು

ದೇಶದಲ್ಲಿದ್ದು, ಅತ್ಯುತ್ತಮ ಮಾನವ ಸಂಪನ್ಮೂಲ ಹೊಂದಿರುವ ಭಾರತದತ್ತ ವಿಶ್ವದ ಅನೇಕ ರಾಷ್ಟ್ರಗಳು ಗಮನ ಹರಿಸಿವೆ ಎಂದು ವಿವರಿಸಿದರು.

ನಕ್ಸಲ್ ಪೀಡಿತ ರಾಜ್ಯಗಳಾದ ಜಾರ್ಖಂಡ್, ಒರಿಸ್ಸಾ, ಬಿಹಾರ, ಮಧ್ಯಪ್ರದೇಶದಿಂದ ಬುಡಕಟ್ಟು ಸಮುದಾಯಕ್ಕೆ ಸೇರಿರುವ ತಲಾ 100 ಮಂದಿ ಯುವಕ–ಯುವತಿಯರು ಬುಡಕಟ್ಟು ಯುವ ವಿನಿಮಯ ಕಾರ್ಯಕ್ರಮಕ್ಕೆ ಮೈಸೂರಿಗೆ ಆಗಮಿಸಿದ್ದು, 6ದಿನ ಸ್ಥಳೀಯ ಕಲೆ, ಸಂಸ್ಕೃತಿ ಬಗ್ಗೆ ಮನವರಿಕೆ ಮಾಡಿಕೊಡಲಾಗಿದೆ. ಅಲ್ಲದೆ, ಸ್ಥಳೀಯ ಪ್ರವಾಸಿ ತಾಣ, ಇನ್ಫೋಸಿಸ್ ಸೇರಿದಂತೆ ಇನ್ನಿತರೆಡೆ ಕರೆದೊಯ್ದು ಮಾಹಿತಿ ನೀಡಲಾಗಿದೆ. 15ನೇ ಬುಡಕಟ್ಟು ಯುವ ವಿನಿಮಯ ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿದೆ ಎಂದು ತಿಳಿಸಿದರು.

ಡೀಡ್ ಸಂಸ್ಥೆಯ ಯೋಜನಾ ನಿರ್ದೇಶಕ ಡಾ.ಎಸ್.ಶ್ರೀಕಾಂತ್ ಮಾತನಾಡಿ, ಬುಡಕಟ್ಟು ಸಮುದಾಯದ ಮಕ್ಕಳು ಶಿಕ್ಷಣ ಪಡೆದು, ಸಮಾಜದ ಮುಖ್ಯವಾಹಿನಿಗೆ ಬರಬೇಕು. ಶಿಕ್ಷಣ ಪಡೆಯುವ ಮೂಲಕ ಸಾಧನೆ ಮಾಡಬೇಕು. ದೇಶದ ಪ್ರಗತಿಯಲ್ಲಿ ಯುವಜನರ ಪಾತ್ರ ಬಹುಮುಖ್ಯ. ಈ ಹಿನ್ನೆಲೆಯಲ್ಲಿ ಬುಡಕಟ್ಟು ಸಮುದಾಯ ಯುವ ಜನತೆ ದುಶ್ಚಟಗಳಿಗೆ ದಾಸರಾಗಬಾರದು.

> **"** ಬುಡಕಟ್ಟು ಯುವ ವಿನಿಮಯ ಕಾರ್ಯಕ್ರಮ ಪ್ರಾತಿನಿಧಿಕ ಕೌಶಲ್ಯ ಬಿಂಬಿಸುವ ಕಾರ್ಯಕ್ರಮವಾಗಿ ಹೊರಹೊಮ್ಮಿದೆ. ದೇಶದ ವಿವಿಧ ರಾಜ್ಯಗಳಿಂದ ಆಗಮಿಸಿರುವ ಬುಡಕಟ್ಟು ಸಮುದಾಯದ ಯುವಕ–ಯುವತಿಯರು ಪರಸ್ಪರ ಸೌಹಾರ್ದತೆಯಿಂದ, ಸಹೋದರತೆಯಿಂದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಏಕತೆಯ ಸಂದೇಶ ರವಾನಿಸಿದ್ದಾರೆ ಎಂದು ಅಭಿಪ್ರಾಯಪಟ್ಟರು.
>
> – **ಮಂಜುಳಾ**, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಉಪ ನಿರ್ದೇಶಕಿ

ಕುಡಿತ, ಧೂಮಪಾನ, ಕೆಟ್ಟ ಪದ ಬಳಕೆ ಸೇರಿದಂತೆ ದುರಾಭ್ಯಾಸ ಮೈಗೂಡಿಸಿಕೊಳ್ಳಬಾರದು. ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಉಪನಿರ್ದೇಶಕ ಭಾಸ್ಕರ್ ನಾಯಕ್, ನೆಹರು ಯುವ ಕೇಂದ್ರದ ಅಧಿಕಾರಿ ಅಭಿಷೇಕ್ ಚಾವರೆ, ಉಪನ್ಯಾಸಕರಾದ ಡಾ.ನಿಂಗರಾಜು, ಡಾ.ಮಧು, ವಿರಾಜಪೇಟೆಯ ಯುವ ಸಂಘಗಳ ಒಕ್ಕೂಟದ ಅಧ್ಯಕ್ಷೆ ಶೀಲಾ ಬೋಪಣ್ಣ ಹಾಗೂ ಇನ್ನಿತರರು ಉಪಸ್ಥಿತರಿದ್ದರು. ಇದೇ ವೇಳೆ ವಿನಿಮಯ ಕಾರ್ಯಕ್ರಮದಲ್ಲಿ ಪಾಲ್ಗೊಂಡು ವಿವಿಧ ಚಟುವಟಿಕೆಗಳಲ್ಲಿ ಉತ್ತಮ ಪ್ರದರ್ಶನ ನೀಡಿದ ತಂಡ ಹಾಗೂ ವೈಯಕ್ತಿಕ ಉತ್ತಮ ಪ್ರದರ್ಶನ ನೀಡಿದವರಿಗೆ ಬಹುಮಾನ, ಭಾಗವಹಿಸಿದ ಎಲ್ಲರಿಗೂ ಪ್ರಮಾಣ ಪತ್ರ ವಿತರಿಸಲಾಯಿತು.

ಶಿವಯೋಗಿ ಸಿದ್ದರಾಮೇಶ್ವರರ ಆದರ್ಶ ಅಳವಡಿಸಿಕೊಳ್ಳಬೇಕು



ಮೈಸೂರಿನ ಕಲಾಮಂದಿರದ ಕಿರು ರಂಗಮಂದಿರದಲ್ಲಿ ಸೋಮವಾರ ಆಯೋಜಿಸಿದ್ದ ಶ್ರೀ ಶಿವಯೋಗಿ ಸಿದ್ದರಾಮೇಶ್ವರ ಜಯಂತಿ ಉತ್ಸವವನ್ನು ಜಿಲ್ಲಾಧಿಕಾರಿ ಡಾ. ಕೆ.ವಿ. ರಾಜೇಂದ್ರ ಉದ್ಘಾಟಿಸಿದರು. ಮೈಸೂರು ವಿವಿ ಪ್ರಾಚ್ಯ ವಿದ್ಯಾ ಸಂಶೋಧನಾಲಯದ ನಿವೃತ್ತ ನಿರ್ದೇಶಕ ಪ್ರೊ. ಎಸ್. ಶಿವರಾಜಪ್ಪ, ಜಿಲ್ಲಾ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್ ಹಾಗೂ ಇತರರನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರು, ಫೆ. 12(ಆರ್‌ಕೆ)– ಶ್ರೀ ಶಿವಯೋಗಿ ಸಿದ್ದರಾಮೇಶ್ವರ, ಬಸವಣ್ಣರಂತಹ ಶರಣ ಮಹಾತ್ಮರ ಆದರ್ಶಗಳನ್ನು ಎಲ್ಲರೂ ಅಳವಡಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಡಾ. ಕೆ.ವಿ. ರಾಜೇಂದ್ರ ಇಂದಿಲ್ಲಿ ತಿಳಿಸಿದ್ದಾರೆ.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಮೈಸೂರಿನ ಕಲಾಮಂದಿರದ ಕಿರು ರಂಗಮಂದಿರದಲ್ಲಿ ಆಯೋಜಿಸಲಾಗಿದ್ದ ಶ್ರೀ ಶಿವಯೋಗಿ ಸಿದ್ದರಾಮೇಶ್ವರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸಮಾಜಕ್ಕೆ ಕೊಡುಗೆ ನೀಡಿದ ಮಹಾತ್ಮರ ಸ್ಮರಣೆ ಕೇವಲ ಜಯಂತಿಗೆ ಸೀಮಿತವಾಗದೇ, ನಮ್ಮ ಜೀವನದಲ್ಲಿ ಅವರ ತತ್ವಾದರ್ಶಗಳನ್ನು ಅಳವಡಿಸಿಕೊಳ್ಳುವಂತಾಗಬೇಕು ಎಂದರು.

ಸಮಾಜದ ಅಂಕು–ಡೊಂಕುಗಳನ್ನು ತಿದ್ದಿ, ಸುಶಿಕ್ಷಿತ ಸಮುದಾಯಕ್ಕೆ ಶ್ರೀ ಶಿವಯೋಗಿ ಸಿದ್ದರಾಮೇಶ್ವರರು ಉತ್ತಮ ಸಂದೇಶ ಸಾರಿದ್ದಾರೆ. ಬೋವಿ ಜನಾಂಗದವರು ತಮ್ಮ ಕೆಲಸಕ್ಕಷ್ಟೇ ಸೀಮಿತವಾಗಿರದೆ ಶಿಕ್ಷಣ ಪಡೆದು ಉತ್ತಮ ಸ್ಥಾನದಲ್ಲಿದ್ದು, ಸಮಸಮಾಜ ಕಟ್ಟುವಲ್ಲಿ ನಿರತರಾಗಿರುವುದು ಶ್ಲಾಘನೀಯ ಎಂದರು.

ಜ್ಞಾನಕ್ಕೆ, ಶಿಕ್ಷಣಕ್ಕೆ ಜಾಗೃತಿಗೆ ಒತ್ತು ನೀಡಿದ್ದ ಬಸವಣ್ಣ ಅವರ ಸಮಕಾಲೀನರಾದ ಶ್ರೀ ಶಿವಯೋಗಿ ಸಿದ್ದರಾಮೇಶ್ವರರು, ಅಸ್ಪೃಶ್ಯತೆ, ಅಸಮಾನತೆ ಹೋಗಲಾಡಿಸಿ ಸಹಬಾಳ್ವೆಯ ತತ್ವ ಸಿದ್ಧಾಂತಗಳನ್ನು ಸಾರಿದ್ದರು. ಅವರ ಆದರ್ಶಗಳನ್ನು ಪಾಲಿಸಿದಾಗ ಮಾತ್ರ ನಾವು ಅವರಿಗೆ ಗೌರವ ಸಲ್ಲಿಸಿದಂತಾಗುತ್ತದೆ ಎಂದು ಜಿಲ್ಲಾಧಿಕಾರಿಗಳು ನುಡಿದರು.

ಮೈಸೂರು ವಿಶ್ವವಿದ್ಯಾನಿಲಯದ ಪ್ರಾಚ್ಯ ವಸ್ತು ಸಂಶೋಧನಾಲಯದ ನಿವೃತ್ತ ನಿರ್ದೇಶಕ ಪ್ರೊ. ಎಸ್. ಶಿವರಾಜಪ್ಪ, ಶ್ರೀ ಶಿವಯೋಗಿ ಸಿದ್ದರಾಮೇಶ್ವರರ ಕುರಿತು ಉಪನ್ಯಾಸ ನೀಡಿದರು. ಶ್ರೀ ಶಿವಯೋಗಿ ಸಿದ್ದರಾಮೇಶ್ವರ ಬೋವಿ ಸಮಾಜದ ಹಿತರಕ್ಷಣಾ ಸಮಿತಿ ಅಧ್ಯಕ್ಷ ನಾಗರಾಜು ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು ಮಾತನಾಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವಿಭಾಗೀಯ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ, ಜಿಲ್ಲಾ ಪಂಚಾಯ್ತಿ ಉಪಕಾರ್ಯದರ್ಶಿ ಸವಿತಾ, ಪಾಲಿಕೆ ಉಪ ಆಯುಕ್ತ ಸೋಮಶೇಖರ್, ಜಿಲ್ಲಾ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ಬೋವಿ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಜಿ.ವಿ. ಸೀತಾರಾಂ, ಪಿ.ಎ. ಚಿನ್ನಸ್ವಾಮಿ, ಗೊಂಡಯ್ಯ ಸೇರಿದಂತೆ ಹಲವು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಶ್ರೀರಾಮನಿಗೆ ಅವಹೇಳನ: ಮಂಗಳೂರಿನ ಸಂತ ಜೆರೋಸಾ ಶಾಲಾ ಶಿಕ್ಷಕಿ ಅಮಾನತು

ಮಂಗಳೂರು: ಶ್ರೀರಾಮನಿಗೆ ಅವಹೇಳನ ಮಾಡಿದ ಆರೋಪ ಸಂಬಂಧ ಸಂತ ಜೆರೋಸಾ ಶಾಲೆಯ ಶಿಕ್ಷಕಿ ಸಿಸ್ಟರ್ ಪ್ರಭಾ ಅವರನ್ನು ಆಡಳಿತ ಮಂಡಳಿ ಅಮಾನತು ಮಾಡಿದೆ.

ಹಿಂದೂಗಳ ಅಸ್ಮಿತೆ ಶ್ರೀರಾಮನ ಅವಹೇಳನ ಖಂಡಿಸಿ ಬಿಜೆಪಿ ಶಾಸಕ ವೇದವ್ಯಾಸ್ ಕಾಮತ್ ನೇತೃತ್ವದಲ್ಲಿ ಇಂದು ಪೋಷಕರು ಶಾಲೆಗೆ ಮುತ್ತಿಗೆ ಹಾಕಲು ಯತ್ನಿಸಿದರು. ಈ ವೇಳೆ ಸ್ಥಳಕ್ಕಾಗಮಿಸಿದ ಆಡಳಿತ ಮಂಡಳಿ ಸದಸ್ಯರು, ತನಿಖೆ ಪೂರ್ಣಗೊಳ್ಳುವವರೆಗೂ ಶಿಕ್ಷಕಿಯನ್ನು ಅಮಾನತು ಮಾಡಿದ್ದಾಗಿ ತಿಳಿಸಿದ್ದಾರೆ.

ಶಾಲೆಯ ಏಳನೇ ತರಗತಿ ಶಿಕ್ಷಕಿ ಪ್ರಭಾ ವಿರುದ್ಧ ಧರ್ಮ ನಿಂದನೆಯ ಕಿಚ್ಚು ಜೋರಾಗಿದ್ದು, ಶಾಲೆಯ ಮುಂಭಾಗ ನೂರಾರು ಸಂಖ್ಯೆಯಲ್ಲಿ ಪೋಷಕರು, ಹಿಂದೂ ಕಾರ್ಯಕರ್ತರು ಜಮಾವಣೆಗೊಂಡಿದ್ದರು. ಪೋಷಕರೊಂದಿಗೆ ಶಾಸಕ ವೇದವ್ಯಾಸ್ ಕಾಮತ್ ಕೂಡ ಆಗಮಿಸಿದ್ದು, ಶಾಲೆಗೆ ಮುತ್ತಿಗೆ ಹಾಕಲು ಯತ್ನಿಸಿದರು. ಆದರೆ ಈ ವೇಳೆ ಪೊಲೀಸರು ಶಾಲೆ ಗೇಟ್ ಮುಂಭಾಗ ಶಾಸಕ ಹಾಗೂ ಪೋಷಕರನ್ನು ತಡೆದರು.

ಆಡಳಿತ ಮಂಡಳಿಯ ಸದಸ್ಯರು ಅಧಿಕೃತವಾಗಿ ಲಿಖಿತವಾಗಿ ಶಾಲೆಯ ಲೆಟರ್‌ಹೆಡ್‌ನಲ್ಲಿ ಶಿಕ್ಷಕಿಯನ್ನು ಅಮಾನತು ಮಾಡಿರುವ ಬಗ್ಗೆ ಸ್ಪಷ್ಟನೆ ನೀಡಿದರು. ಮುಂದೆ ಶಿಕ್ಷಣ ಇಲಾಖೆ ಪ್ರಕರಣದ ಆಂತರಿಕ ತನಿಖೆ ನಡೆಸಲಿದೆ. ಶಿಕ್ಷಣ ಇಲಾಖೆ ತನಿಖಾ ವರದಿ ಆಧಾರದ ಮೇಲೆ ಪೊಲೀಸರು ಕಾನೂನು ಕ್ರಮ ಕೈಗೊಳ್ಳಲಿದ್ದಾರೆ.

ಫೆಬ್ರವರಿ 8ರಂದು 'Work is worship' ವಿಷಯವಾಗಿ ಪಾಠ ಮಾಡಿದ್ದ ಶಿಕ್ಷಕಿ ಸಿಸ್ಟರ್ ಪ್ರಭಾ ಅಯೋಧ್ಯೆ ರಾಮ ಮಂದಿರ ಹಾಗೂ ಪ್ರಭು ಶ್ರೀರಾಮನ ಬಗ್ಗೆ ಅವಹೇಳನ ಮಾಡಿದ್ದಾರೆ ಎಂದು ವಿದ್ಯಾರ್ಥಿಗಳು ತಮ್ಮ ಪೋಷಕರ ಬಳಿ ಹೇಳಿಕೊಂಡಿದ್ದರು. ನಂತರ ಪೋಷಕರು ಮತ್ತು ಹಿಂದೂ ಕಾರ್ಯಕರ್ತರು ಶಿಕ್ಷಕಿ ವಿರುದ್ಧ ಆಕ್ರೋಶ ಹೊರಹಾಕಿದ್ದರು.



ಮೈಸೂರು ತಾಲೂಕಿನ ಜಯಪುರ ಹೋಬಳಿಯ ದೊಡ್ಡಹುಂಡಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಸಮಾಜ ಸೇವಕರಾದ ಎಸ್.ಶ್ರೀಕಾಂತ್ ಅವರು ಪೀಠೋಪಕರಣಗಳನ್ನು ಹಸ್ತಾಂತರಿಸಿದರು. 8 ಡೆಸ್ಕ್, 8 ಟೇಬಲ್, 4 ದೊಡ್ಡ ರೌಂಡ್ ಟೇಬಲ್ ಮತ್ತು 20 ಚೇರ್‌ಗಳನ್ನು ಉಚಿತವಾಗಿ ಶಾಲೆಗೆ ಕೊಡುಗೆ ನೀಡಿದರು. ಸಾವಿರ ಲೀಟರ್ ಸಾಮರ್ಥ್ಯದ ಕುಡಿಯುವ ನೀರಿನ ಸಿಂಟೆಕ್ಸ್ ಟ್ಯಾಂಕ್, ಅಂಗನವಾಡಿ ಕೇಂದ್ರಕ್ಕೆ ಮಕ್ಕಳಿಗೆ ಕೂರಲು ಬೆಂಚು ಮತ್ತು ಟೇಬಲ್‌ಗಳನ್ನು ನೀಡುವುದಾಗಿ ಭರವಸೆ ನೀಡಿದರು. ಇದೇ ವೇಳೆ ಶಾಲಾಭಿವೃದ್ಧಿ ಸಮಿತಿಯ ವತಿಯಿಂದ ಶ್ರೀಕಾಂತ್ ಅವರನ್ನು ಅಭಿನಂದಿಸಲಾಯಿತು. ಕಾರ್ಯಕ್ರಮದಲ್ಲಿ ಧನಗಹಳ್ಳಿ ಗ್ರಾಮ ಪಂಚಾಯಿತಿ ಪಿಡಿಓ ನರಹರಿ, ಮುಖ್ಯಶಿಕ್ಷಕಿ ಸರಳಾದೇವಿ, ಶಾಲಾಭಿವೃದ್ಧಿ ಸಮಿತಿ ಉಪಾಧ್ಯಕ್ಷ ರಮೇಶ್, ಗ್ರಾಮ ಪಂಚಾಯಿತಿ ಸದಸ್ಯ ನಾಗಣ್ಣ, ಮುಖಂಡರಾದ ನಿಂಗರಾಜು, ಕೃಷ್ಣಮೂರ್ತಿ, ಕೆಂಚ ನಾಗೇಂದ್ರ ಮತ್ತು ಶಿಕ್ಷಕರು ಭಾಗವಹಿಸಿದ್ದರು.

ಕತಾರ್‌ನಲ್ಲಿ ಬೇಹುಗಾರಿಕೆ ಆರೋಪದ ಮೇಲೆ ಮರಣ ದಂಡನೆಗೊಳಗಾಗಿದ್ದ 8 ಭಾರತೀಯ ನೌಕಾಪಡೆ ಯೋಧರ ಬಿಡುಗಡೆ

ನವದೆಹಲಿ: ಜಲಾಂತರ್ಗಾಮಿ ಕಾರ್ಯಕ್ರಮದ ಬೇಹುಗಾರಿಕೆ ಆರೋಪದ ಮೇಲೆ ಮರಣದಂಡನೆ ಶಿಕ್ಷೆಗೆ ಗುರಿಯಾದ ಭಾರತೀಯ ನೌಕಾಪಡೆಯ ಎಂಟು ಯೋಧರನ್ನು ಸೋಮವಾರ ಕತಾರ್ ಬಿಡುಗಡೆ ಮಾಡಿದೆ. ಅವರಿಗೆ ವಿಧಿಸಲಾಗಿದ್ದ ಮರಣದಂಡನೆ ಶಿಕ್ಷೆಯನ್ನು ಇತ್ತೀಚೆಗೆ ನ್ಯಾಯಾಲಯವು ತೆರವುಗೊಳಿಸಿತ್ತು.

ಇಸ್ರೇಲ್ ಪರವಾಗಿ ಅವರು ಬೇಹುಗಾರಿಕೆ ಮಾಡುತ್ತಿದ್ದರು ಎಂಬ ಆರೋಪದಡಿ ಕಳೆದ ಅಕ್ಟೋಬರ್‌ನಲ್ಲಿ ಕತಾರ್ ನ್ಯಾಯಾಲಯವು ಮರಣ ದಂಡನೆ ಶಿಕ್ಷೆ ವಿಧಿಸಿತ್ತು ಎಂದು ಮೂಲಗಳು ತಿಳಿಸಿವೆ. ಆದರೆ, ಅವರ ಮೇಲಿನ ಆರೋಪಗಳನ್ನು ಭಾರತ ಮತ್ತು ಕತಾರ್ ಖಚಿತಪಡಿಸಿಲ್ಲ.

ಕತಾರ್‌ನಲ್ಲಿ ಬೇಹುಗಾರಿಕೆ ಆರೋಪದ ಮೇಲೆ ಮರಣದಂಡನೆ ಶಿಕ್ಷೆಗೊಳಗಾಗಿ ಜೈಲಿನಲ್ಲಿದ್ದ ಎಂಟು ಭಾರತೀಯ ನೌಕಾಪಡೆ ಯೋಧರನ್ನು ಬಿಡುಗಡೆ ಮಾಡಲಾಗಿದೆ. ಅವರಲ್ಲಿ ಏಳು ಮಂದಿ ಈ ಮಧ್ಯಪ್ರಾಚ್ಯ ದೇಶದಲ್ಲಿ 18 ತಿಂಗಳ ಜೈಲು ವಾಸದ ನಂತರ ಈಗಾಗಲೇ ಭಾರತಕ್ಕೆ ಮರಳಿದ್ದಾರೆ. ಇದು ಭಾರತದ ರಾಜತಾಂತ್ರಿಕ ಜಾಣ್ಮೆ, ಕತಾರ್ ಜೊತೆಗೆ ಪ್ರಧಾನಿ ನರೇಂದ್ರ ಮೋದಿ ಹೊಂದಿರುವ ಸೌಹಾರ್ದ ಸಂಬಂಧಕ್ಕೆ ದೊರೆತ ಜಯವಾಗಿದೆ.

ದಹ್ರಾ ಗ್ಲೋಬಲ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ ಎಂಟು ಭಾರತೀಯ ಪ್ರಜೆಗಳ ಬಿಡುಗಡೆಯನ್ನು ಭಾರತ ಸರ್ಕಾರ ಸ್ವಾಗತಿಸುತ್ತದೆ. ಅವರಲ್ಲಿ ಎಂಟು ಮಂದಿಯಲ್ಲಿ ಏಳು ಮಂದಿ ಭಾರತಕ್ಕೆ ಮರಳಿದ್ದಾರೆ. ಕತಾರ್ ರಾಜ್ಯದ ಅಮೀರ್ ಅವರ ನಿರ್ಧಾರವನ್ನು ನಾವು ಪ್ರಶಂಸಿಸುತ್ತೇವೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

ಭಾರತಕ್ಕೆ ವಾಪಸ್ ಆಗಲು 18 ತಿಂಗಳು ಕಾಯಬೇಕಾಯಿತು. ನಾವು ಪ್ರಧಾನಿಗೆ ಅತ್ಯಂತ ಆಭಾರಿಯಾಗಿದ್ದೇವೆ. ಅವರಿಗೆ ಕತಾರ್ ಜೊತೆ ಉತ್ತಮ ಬಾಂಧವ್ಯವಿದ್ದು, ಅವರು ವೈಯಕ್ತಿಕವಾಗಿ ಮಧ್ಯಪ್ರವೇಶ ಮಾಡದೇ ಇದ್ದಿದ್ದರೆ ನಮ್ಮ ಬಿಡುಗಡೆ ಸಾಧ್ಯವಾಗುತ್ತಿರಲಿಲ್ಲ ಎಂದು ಭಾರತಕ್ಕೆ ಹಿಂದಿರುಗಿದ ನೌಕಾಪಡೆಯ ಮಾಜಿ ಅಧಿಕಾರಿ ಹೇಳಿದ್ದಾರೆ.

ಭೋಪಾಲ್‌ನಲ್ಲಿ ದೆಹಲಿ ಚಲೋಗೆ ತೆರಳುತ್ತಿದ್ದ

ರಾಜ್ಯದ ರೈತರ ಬಂಧನ ಖಂಡಿಸಿ ಮೈಸೂರಲ್ಲಿ ಪ್ರತಿಭಟನೆ

ಮೈಸೂರು,ಫೆ.12(ಎಂಟಿವೈ)– ದೆಹಲಿ ಚಲೋದಲ್ಲಿ ಪಾಲ್ಗೊಳ್ಳಲು ಪ್ರಯಾಣಿಸುತ್ತಿದ್ದ ರಾಜ್ಯದ 250 ರೈತರನ್ನು ಮಧ್ಯಪ್ರದೇಶದಲ್ಲಿ ಬಂಧಿಸಿರುವುದನ್ನು ಖಂಡಿಸಿ, ಮೈಸೂರಲ್ಲಿ ರೈತ ಸಂಘಟನೆಗಳ ಒಕ್ಕೂಟ ಮತ್ತು ಕಬ್ಬು ಬೆಳೆಗಾರರ ಸಂಘದ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಮೈಸೂರಿನ ಗನ್‌ಹೌಸ್ ಸಮೀಪ ಮೈಸೂರು–ನಂಜನಗೂಡು ಮುಖ್ಯ ರಸ್ತೆಯಲ್ಲಿ ರಸ್ತೆ ತಡೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರಲ್ಲದೆ, ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ಹೆದ್ದಾರಿಯಲ್ಲಿ ಜಮಾವಣೆಗೊಂಡ ರೈತರು, ವಾಹನ ಸಂಚಾರ ತಡೆದು ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆಯಿಂದಾಗಿ ವಾಹನಗಳ ಸಂಚಾರಕ್ಕೆ ಅಡಚಣೆಯುಂಟಾಯಿತು. ರೈತರು ರಸ್ತೆಯಲ್ಲಿಯೇ ಕುಳಿತಿದ್ದರಿಂದ ವಾಹನಗಳು ಸಾಲುಗಟ್ಟಿ ನಿಂತಿದ್ದವು. ಬಳಿಕ ಪೊಲೀಸರು ವಾಹನ ಸಂಚಾರಕ್ಕೆ ಪರ್ಯಾಯ ಮಾರ್ಗದ ವ್ಯವಸ್ಥೆ ಮಾಡಿಕೊಟ್ಟರು. ನಂತರ ರೈತರು ರಸ್ತೆ ಬದಿ ಪ್ರತಿಭಟನೆ ಮುಂದುವರೆಸಿದ್ದರಿಂದ ವಾಹನ ಸಂಚಾರ ಸುಗಮವಾಯಿತು.



ದೆಹಲಿ ಚಲೋದಲ್ಲಿ ಪಾಲ್ಗೊಳ್ಳಲು ತೆರಳುತ್ತಿದ್ದ ರಾಜ್ಯದ ರೈತರನ್ನು ಮಧ್ಯಪ್ರದೇಶದಲ್ಲಿ ಬಂಧಿಸಿರುವುದನ್ನು ಖಂಡಿಸಿ ಮೈಸೂರಿನ ಗನ್‌ಹೌಸ್ ಬಳಿ ಸೋಮವಾರ ರೈತ ಸಂಘಟನೆಗಳ ಒಕ್ಕೂಟ ಮತ್ತು ಕಬ್ಬು ಬೆಳೆಗಾರರ ಸಂಘದ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಕೇಂದ್ರ ಸರ್ಕಾರದ ರೈತ ವಿರೋಧಿ ನೀತಿ ಖಂಡಿಸಿ ಸಂಯುಕ್ತ ಕಿಸಾನ್ ಮೋರ್ಚಾದಿಂದ ಫೆ.13ರಂದು ದೆಹಲಿ ಚಲೋದಲ್ಲಿ ಪಾಲ್ಗೊಳ್ಳಲು ರಾಜ್ಯದಿಂದ ತೆರಳಿದ್ದ 250 ರೈತರನ್ನು ಮಧ್ಯಪ್ರದೇಶದಲ್ಲಿ ಬಂಧಿಸಿರುವುದು ಖಂಡನೀಯ. ರೈತ ವಿರೋಧಿ ಕೇಂದ್ರ ಸರ್ಕಾರಕ್ಕೆ ಬುದ್ಧಿ ಕಲಿಸಬೇಕಾಗುತ್ತದೆ. ರೈತರು ಸಾಲ ಮನ್ನಾ ಮಾಡುವಂತೆ ಒತ್ತಾಯಿಸುವುದು ತಪ್ಪೇ, ಕೃಷಿ ಉತ್ಪನ್ನಗಳಿಗೆ ಬೆಂಬಲ ಬೆಲೆ ನೀಡುವಂತೆ ಕೇಳುವುದು ಅಪರಾಧವೇ? ಎಂದು ಕಿಡಿಕಾರಿದರು.

ಕಬ್ಬು ಬೆಳೆಗಾರರ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಅತ್ತಹಳ್ಳಿ ದೇವರಾಜ್ ಮಾತನಾಡಿ, ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕಿಸಾನ್ ಮೋರ್ಚಾದಿಂದ ದೆಹಲಿಯಲ್ಲಿ ಫೆ.13ರಂದು ಪ್ರತಿಭಟನಾ ಸಮಾವೇಶ ಏರ್ಪಡಿಸಲಾಗಿದೆ. ಮೈಸೂರು ಭಾಗದ 150 ರೈತರು ಸೇರಿ ರಾಜ್ಯದಿಂದ 500ಕ್ಕೂ ಹೆಚ್ಚು ರೈತರು ತೆರಳಿದ್ದರು. ಅವರಲ್ಲಿ ಮಹಿಳೆಯರೂ ಸೇರಿದಂತೆ 250ಕ್ಕೂ ಹೆಚ್ಚು ಮಂದಿ ರೈಲಿನಲ್ಲಿ ತೆರಳುತ್ತಿದ್ದಾಗ ಮಧ್ಯಪ್ರದೇಶ ಪೊಲೀಸರು ಬಂಧಿಸಿದ್ದಾರೆ. ಕೆಲವರ ಮೇಲೆ ಹಲ್ಲೆ ನಡೆಸಲಾಗಿದೆ ಎಂದು ಆರೋಪಿಸಿದರು.

ಮೈಸೂರು ಭಾಗದ ರೈತರನ್ನು ಭೋಪಾಲ್ ರೈಲು ನಿಲ್ದಾಣದಿಂದಲೇ ಕರೆದೊಯ್ದು ಸಮುದಾಯ ಭವನಗಳಲ್ಲಿ ಅಕ್ರಮವಾಗಿ ಕೂಡಿಹಾಕಲಾಗಿದೆ. ಅಕ್ರಮವಾಗಿ ಬಂಧಿಸಿರುವ ರೈತರನ್ನು ಕೂಡಲೇ ಬಿಡುಗಡೆ ಮಾಡಬೇಕು. ಅವರನ್ನು ಹೋರಾಟದ ಸ್ಥಳಕ್ಕೆ ಸುರಕ್ಷಿತವಾಗಿ ತಲುಪಿಸಬೇಕು. ಇಲ್ಲದಿದ್ದರೆ ನಿತ್ಯವೂ ವಿಭಿನ್ನ ಹೋರಾಟ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಕಬ್ಬು ಬೆಳೆಗಾರರ ಸಂಘದ ಮುಖಂಡರಾದ ಸಾತಗಳ್ಳಿ ಬಸವರಾಜ್, ಕಿರಗಸೂರು ಶಂಕರ್, ಕಾಟೂರು ಮಹದೇವಸ್ವಾಮಿ, ನೀಲಕಂಠಪ್ಪ ಮಾರ್ಬಳ್ಳಿ, ಮಹದೇವಪ್ಪ ಹೀರನಂದಿ, ನಾಗೇಶ್ ವರಕೋಡು, ಗಿರೀಶ್, ಶ್ರೀಕಂಠ, ಮಹೇಶ್, ಅರವಿಂದ ಹಾಗೂ ಇನ್ನಿತರು ಪಾಲ್ಗೊಂಡಿದ್ದರು.



ಭಾನುವಾರ ಮೈಸೂರಿನಲ್ಲಿ ನಡೆದ ಬಿಜೆಪಿ ಕಾರ್ಯಕಾರಿಣಿ ಸಭೆಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ನೆನಪಿನ ಕಾಣಿಕೆ ನೀಡಿ, ಆತ್ಮೀಯವಾಗಿ ಗೌರವಿಸಿದರು. ಈ ವೇಳೆ ಸಂಸದ ಪ್ರತಾಪ್ ಸಿಂಹ, ನಗರಾಧ್ಯಕ್ಷ ಎಲ್.ನಾಗೇಂದ್ರ, ಗ್ರಾಮಾಂತರ ಅಧ್ಯಕ್ಷ ಎಲ್.ಆರ್.ಮಹದೇವ ಸ್ವಾಮಿ, ಗುಂಡ್ಲುಪೇಟೆ ಮಾಜಿ ಶಾಸಕ ಸಿ.ಎಸ್.ನಿರಂಜನ್‌ಕುಮಾರ್ ಉಪಸ್ಥಿತರಿದ್ದರು.

ತಹಸೀಲ್ದಾರ್ ಕುಂಞ ಅಹಮದ್ ವಿರುದ್ಧ ಮಾಡಿರುವುದು ಸುಳ್ಳು ಆರೋಪ

ರೈತ ಮುಖಂಡ ಸಣ್ಣೇಗೌಡ ಪ್ರತಿಕ್ರಿಯೆ



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸೋಮವಾರ ಮಂಡ್ಯ ಜಿಲ್ಲೆ ಪಾಂಡವಪುರ ತಾಲೂಕಿನ ಸಂಗಾಪುರ ಗ್ರಾಮದ ರೈತ ಮುಖಂಡ ಸಣ್ಣೇಗೌಡ ಮಾತನಾಡಿದರು.

ಮೈಸೂರು,ಫೆ12(ಎಂಟಿವೈ)– ಮಂಡ್ಯದಲ್ಲಿ ಈ ಹಿಂದೆ ಕಾರ್ಯನಿರ್ವಹಿಸಿದ್ದ ತಹಶೀಲ್ದಾರ್ ಕುಂಞ ಅಹಮ್ಮದ್ ಪ್ರಾಮಾಣಿಕರು. ಅವರ ವಿರುದ್ಧ ಕೆಲವರು ಸುಳ್ಳು ಆರೋಪ ಮಾಡಿದ್ದಾರೆ ಎಂದು ಮಂಡ್ಯ ಜಿಲ್ಲೆ ಪಾಂಡವಪುರ ತಾಲೂಕಿನ ಸಂಗಾಪುರ ಗ್ರಾಮದ ರೈತ ಮುಖಂಡ ಸಣ್ಣೇಗೌಡ ತಿಳಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾಮಾಜಿಕ ಕಾರ್ಯಕರ್ತ ಎಂದು ಹೇಳಿಕೊಳ್ಳುವ ಮಂಡ್ಯದ ಕೆ.ಆರ್. ರವೀಂದ್ರ, ದುರುದ್ದೇಶಪೂರಿತವಾಗಿ ಈ ಹಿಂದೆ ಮಂಡ್ಯದಲ್ಲಿ ತಹಸೀಲ್ದಾರ್ ಆಗಿ ಕಾರ್ಯನಿರ್ವಹಿಸಿದ್ದ ಕುಂಞ ಅಹಮ್ಮದ್ ವಿರುದ್ಧ ಆರೋಪ ಮಾಡಿದ್ದಾರೆ. ಇವರ ವಿರುದ್ಧ ಮಂಡ್ಯ ಪಶ್ಚಿಮ ಠಾಣೆಯಲ್ಲಿ ಎರಡು ಎಫ್‌ಐಆರ್ ದಾಖಲಾಗಿವೆ. ಅಲ್ಲದೆ, ಇವರು, ಸತೀಶ್ ಎಂಬುವವರೊಂದಿಗೆ ಸೇರಿ ಮಂಡ್ಯ ತಾಲೂಕು ಕಚೇರಿ ಎದುರು ಕ್ಯಾಂಟಿನ್ ತೆರೆಯಲು ತಹಸೀಲ್ದಾರ್ ಬಳಿ ಜಾಗ ಕೇಳಿದ್ದರು. ಅದಕ್ಕೆ ನಿರಾಕರಿಸಿದ ಹಿನ್ನೆಲೆಯಲ್ಲಿ ಈಗ ಆಧಾರ ರಹಿತ ಆರೋಪ ಮಾಡಿದ್ದಾರೆ ಎಂದು ದೂರಿದರು. ಜೊತೆಗೆ ಅವರು ಹೊಸಹಳ್ಳಿ ಸರ್ಕಾರಿ ಜಾಗ ಸರ್ವೆ ನಂ.26ರಲ್ಲಿ ನಕಲಿ ದಾಖಲೆ ಸೃಷ್ಟಿಸಿಕೊಂಡು ಖಾತೆ ಮಾಡಿಸಿಕೊಳ್ಳಲು ಮುಂದಾಗಿದ್ದರು. ಈ ವೇಳೆ ಉಪವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ನಡೆದ ಪ್ರಕರಣದಲ್ಲಿ ತಹಶೀಲ್ದಾರ್ ಕುಂಞ ಅಹಮ್ಮದ್ ನೀಡಿದ ವರದಿ ಮೇರೆಗೆ ಅವರ ಪ್ರಯತ್ನ ವಿಫಲವಾಗಿತ್ತು. ಈ ಹಿನ್ನೆಲೆಯಲ್ಲಿ ತಹಶೀಲ್ದಾರರ ವಿರುದ್ಧ ಸುಳ್ಳು ಆರೋಪ ಮಾಡುತ್ತಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಸಂಗಾಪುರ ಗ್ರಾಮದ ಮುಖಂಡರಾದ ಮಂಜುನಾಥ್, ಕೆ.ಎಸ್. ಜವರೇಗೌಡ, ಬೆಟ್ಟೇಗೌಡ ತಿಪ್ಪಾಪುರ, ಜವರೇಗೌಡ ಹೊನ್ನಮಾಡು ಇದ್ದರು.

ಸಹೋದ್ಯೋಗಿ ಅಂತ್ಯಸಂಸ್ಕಾರಕ್ಕೆ ತೆರಳಿದ ರೈಲ್ವೆ ಸಿಬ್ಬಂದಿ; ಚಾಲಕರಿಲ್ಲದೆ ಮುಂಬೈನಲ್ಲಿ 147 ರೈಲು ಸಂಚಾರ ಸ್ಥಗಿತ!



ಮುಂಬೈ: ಇದೊಂದು ವಿಲಕ್ಷಣ ಪ್ರಸಂಗ, ಸೆಂಟ್ರಲ್ ರೈಲ್ವೆಯ ಮುಂಬೈ ವಿಭಾಗದಲ್ಲಿ ಶನಿವಾರ 88 ಲೋಕಲ್ ಟ್ರೈನ್ ಸೇರಿದಂತೆ ಬರೋಬ್ಬರಿ 147 ರೈಲುಗಳ ಸಂಚಾರ ಸ್ಥಗಿತಗೊಳಿಸಿದ ಘಟನೆ ನಡೆದಿದೆ. ರೈಲು ಚಾಲಕರ ಕೊರತೆಯಿಂದಾಗಿ ಪ್ರಮುಖ ಮಾರ್ಗಗಳಲ್ಲಿ ಸಂಚರಿಸುವ 100ಕ್ಕೂ ಹೆಚ್ಚು ಸ್ಥಳೀಯ ರೈಲುಗಳನ್ನು ರದ್ದುಗೊಳಿಸಲಾಯಿತು. ಕಾರಣ ಶುಕ್ರವಾರ ಬೆಳಗ್ಗೆ ಸ್ಯಾಂಡ್ ಹರ್ಸ್ಟ್ ರಸ್ತೆ ಮತ್ತು ಛತ್ರಪತಿ ಶಿವಾಜಿ ಮಹಾರಾಜ್ ಟರ್ಮಿನಲ್ ನಿಲ್ದಾಣದ ನಡುವಿನ ಅಪಘಾತದಲ್ಲಿ ಸಾವನ್ನಪ್ಪಿದ ತಮ್ಮ ಸಹೋದ್ಯೋಗಿ ಮುರಳೀಧರ ಶರ್ಮಾ ಅವರ ಅಂತ್ಯಕ್ರಿಯೆಯಲ್ಲಿ ಚಾಲಕರು ಭಾಗವಹಿಸಿದ್ದರಿಂದ ಈ ಪ್ರಸಂಗ ಎದುರಾಗಿದೆ.

ರೈಲ್ವೆ ಸಿಬ್ಬಂದಿ, ಚಾಲಕರು ಸಹೋದ್ಯೋಗಿಯ ನಿಧನಕ್ಕೆ ಶೋಕ ವ್ಯಕ್ತಪಡಿಸಿ ಮಧ್ಯಾಹ್ನ 12 ಗಂಟೆಗೆ ನಿಗದಿಯಾಗಿದ್ದ ಅಂತ್ಯಕ್ರಿಯೆಯಲ್ಲಿ ಭಾಗವಹಿಸಿದ್ದರು. ಆದರೆ ಮೃತ ಮುರಳೀಧರ ಶರ್ಮಾ ಅವರ ಹತ್ತಿರದ ಸಂಬಂಧಿಕರು ಸಮಯಕ್ಕೆ ಸರಿಯಾಗಿ ತಲುಪಲು ಸಾಧ್ಯವಾಗದ ಕಾರಣ ಸಂಜೆ 5ರವರೆಗೂ ಅಂತ್ಯ ಸಂಸ್ಕಾರ ನಡೆಯಲಿಲ್ಲ.

ಹೀಗಾಗಿ ರೈಲು ಸಂಚಾರವನ್ನು ಅನಿವಾರ್ಯವಾಗಿ ರದ್ದು ಮಾಡಬೇಕಾಯ್ತು. ಭಾನುವಾರ ಬೆಳಗ್ಗೆ ಎಂದಿನಂತೆ ಎಲ್ಲರೂ ಕರ್ತವ್ಯದಲ್ಲಿ ಭಾಗಿಯಾದರು. ರೈಲು ಸಂಚಾರ ಎಂದಿನಂತೆ ಸಹಜ ಸ್ಥಿತಿಗೆ ಮರಳಿತು.



ನಿರಂತರ ಕಾವೇರಿ ಕ್ರಿಯಾ ಸಮಿತಿ ಧರಣಿ ಸತ್ಯಾಗ್ರಹದ 98ನೇ ದಿನವಾದ ಸೋಮವಾರ ತಮಿಳುನಾಡಿಗೆ ನೀರು ಬಿಡುತ್ತಿರುವುದನ್ನು ವಿರೋಧಿಸಿ ಸಮಿತಿ ಅಧ್ಯಕ್ಷ ಎಸ್.ಜಯಪ್ರಕಾಶ್ (ಜೆಪಿ) ನೇತೃತ್ವದಲ್ಲಿ ಸಾರ್ವಜನಿಕರಿಂದ ಸಹಿ ಸಂಗ್ರಹ ಮಾಡಲಾಯಿತು. ಈ ವೇಳೆ ಮುಖಂಡರಾದ ತೇಜೇಶ್ ಲೋಕೇಶ್‌ಗೌಡ, ಕೃಷ್ಣಪ್ಪ ಸಿಎಚ್, ಶಿವಕುಮಾರ್ ಸಿಂಧುವಳ್ಳಿ, ಮಹದೇವಸ್ವಾಮಿ, ವರಕೋಡು ಕೃಷ್ಣೇಗೌಡ, ಶಿವಲಿಂಗಯ್ಯ, ಪುಷ್ಪಾವತಿ, ಮಂಜುಳಾ, ಪಿ.ಹನುಮಂತೇಗೌಡ, ಶಿವ ನಾಯ್ಕರ್, ಕೆ.ಎಲ್.ಪ್ರಭಾಕರ್, ನರಸಿಂಹೇಗೌಡ, ನೇಹಾ, ಕೃಷ್ಣ, ಶುಭಶ್ರೀ, ನಂದೀಶ್, ಕೆ.ಮಂಜುಳಾ, ಪುಟ್ಟೇಗೌಡ ಬೋಗಾದಿ, ಮಂಜುಳಾ, ಕೃಷ್ಣಪ್ಪ, ಪ್ರಭಾಕರ ಇನ್ನಿತರರು ಉಪಸ್ಥಿತರಿದ್ದರು.



ಜಯಪುರ ಹೋಬಳಿ ರೈತ ಸಂಪರ್ಕ ಕೇಂದ್ರದಲ್ಲಿ ದೊಡ್ಡಕಾನ್ಯದ ರೈತ ಈಶ್ವರ್ ಭಟ್, ವಸಂತ ಅವರಿಗೆ ಸಹಾಯಧನ ಅಡಿಯಲ್ಲಿ ಕೃಷಿ ಅಧಿಕಾರಿ ಕುಮಾರ್ ಪವರ್ ಟಿಲ್ಲರ್ ವಿತರಿಸಿದರು.

ಅಲ್ಪಾವಧಿ ತರಬೇತಿಗೆ ಅರ್ಜಿ ಆಹ್ವಾನ

ಮೈಸೂರು.ಫೆ.12– ಆಹಾರ ತಯಾರಿಕಾ ವಿಭಾಗಗಳಲ್ಲಿ ಉಚಿತವಾಗಿ ಒಂದು ತಿಂಗಳ ಅಲ್ಪಾವಧಿ ತರಬೇತಿಯನ್ನು ಪ್ರಾರಂಭಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೈಸೂರಿನ ಇಂದಿರಾನಗರದ ದಸರಾ ವಸ್ತುಪ್ರದರ್ಶನ ಆವರಣದಲ್ಲಿರುವ ಫುಡ್ ಕ್ರಾಫ್ಟ್ ಇನ್ಸ್ಟಿಟ್ಯೂಟ್ ದೂ.ಸಂ: 6362018821, 0821–2445388 ಸಂಪರ್ಕಿಸಬಹುದೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವರ್ಷದೊಳಗೆ ಹಳೇ ಹುಂಡುವಾಡಿ ಯೋಜನೆ ಪೂರ್ಣ

ಮೊದಲ ಹಂತದಲ್ಲಿ 150 ಎಂಎಲ್‌ಡಿ ಕಾವೇರಿ ಕುಡಿಯುವ ನೀರು ಪೂರೈಕೆ; ಕಾಮಗಾರಿ ಪರಿಶೀಲಿಸಿದ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಅಧ್ಯಕ್ಷ ವಿನಯ್ ಕುಲಕರ್ಣಿ

ಮೈಸೂರು, ಫೆ. 12(ಆರ್‌ಕೆ)– ಮೈಸೂರು ನಗರ ಮತ್ತು ಸುತ್ತಲಿನ 92 ಗ್ರಾಮಗಳಿಗೆ ಕುಡಿಯುವ ನೀರು ಪೂರೈಸುವ ಉದ್ದೇಶದಿಂದ ಕೈಗೊಂಡಿರುವ ಹಳೇ ಹುಂಡುವಾಡಿ ಯೋಜನೆಯ ಕಾಮಗಾರಿಯನ್ನು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಅಧ್ಯಕ್ಷ ವಿನಯ್ ಕುಲಕರ್ಣಿ ಶನಿವಾರ ಪರಿಶೀಲಿಸಿದರು.

ಮಂಡಳಿ ಅಧಿಕಾರಿಗಳು, ಇಂಜಿನಿಯರ್‌ಗಳೊಂದಿಗೆ ಪರಿಶೀಲನೆ ನಡೆಸಿದ ಅವರು, ಒಂದು ವರ್ಷದೊಳಗಾಗಿ ಕಾಮಗಾರಿ ಪೂರ್ಣಗೊಳ್ಳಲಿದ್ದು, ಮೊದಲ ಹಂತದಲ್ಲಿ 150 ಎಂಎಲ್‌ಡಿ ಕಾವೇರಿ ಕುಡಿಯುವ ನೀರು ಪೂರೈಸಲಾಗುವುದು ಎಂಬ ಮಾಹಿತಿ ಪಡೆದರು.

2021ರಲ್ಲಿ ಕೆಆರ್‌ಎಸ್ ಜಲಾಶಯದ ಹಿನ್ನೀರಿನ ಹಳೇ ಹುಂಡುವಾಡಿಯಿಂದ ಮೈಸೂರು ನಗರ ಮತ್ತು ಸುತ್ತಲಿನ ಚಾಮುಂಡೇಶ್ವರಿ ಕ್ಷೇತ್ರದ ಗ್ರಾಮಗಳಿಗೆ ಕಾವೇರಿ ನೀರು ಪೂರೈಸುವ ಉದ್ದೇಶದಿಂದ ಮಹತ್ವಾಕಾಂಕ್ಷಿ ಯೋಜನೆ ಆರಂಭವಾಗಿತ್ತು. ಇದೀಗ ಟೆಂಡರ್ ಮಾಡಿದ್ದ ಸಿವಿಲ್ ಕಾಮಗಾರಿ ಮುಕ್ತಾಯ ಹಂತಕ್ಕೆ ಬಂದಿದ್ದು, ಶೀಘ್ರ 66 ಕೆವಿ ಸಾಮರ್ಥ್ಯದ ಎಕ್ಸ್‌ಪ್ರೆಸ್ ಪವರ್ ಲೈನ್ ಅಳವಡಿಸಲು ಟೆಂಡರ್ ಕರೆಯುತ್ತೇವೆ ಎಂದು ಮಂಡಳಿ ಅಧಿಕಾರಿಗಳು ಮಾಹಿತಿ ನೀಡಿದರು.

ಈ ಯೋಜನೆಯಿಂದಾಗಿ ಮಹಾನಗರ ಪಾಲಿಕೆ, ಮುಡಾ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕೆಹೆಚ್‌ಬಿ ವ್ಯಾಪ್ತಿಯ ಜನರಿಗೆ ಕಾವೇರಿ ನೀರು ಪೂರೈಸಬಹುದಾಗಿದೆ. ಕೆಆರ್‌ಎಸ್ ಜಲಾಶಯದಲ್ಲಿ ನೀರಿನ ಮಟ್ಟ ಕುಸಿದರೂ ಈ ಯೋಜನೆಯಿಂದ ನೀರು ಸರಬರಾಜಿಗೆ ತೊಂದರೆಯಾಗುವುದಿಲ್ಲ ಎಂದು ಅಧ್ಯಕ್ಷ ವಿನಯ್ ಕುಲಕರ್ಣಿಗೆ ಅಧಿಕಾರಿಗಳು ತಿಳಿಸಿದರು.

ನೀರು ಶುದ್ಧೀಕರಣ ಘಟಕಗಳು, ಪೈಪ್‌ಲೈನ್ ಅಳವಡಿಕೆ, ನಾಲಾ ಮಾರ್ಗಗಳನ್ನು ವೀಕ್ಷಿಸಿದ ಕುಲಕರ್ಣಿ, ಪ್ರಗತಿ ಪರಿಶೀಲನಾ ಸಭೆ ನಡೆಸಿ, ಬೇರೆಡೆ ಈ ಮಾದರಿಯ ಯೋಜನೆ ಅಳವಡಿಸಿರುವ ಹಾಗೂ ಅದರ ಪ್ರಯೋಜನ ಕುರಿತಂತೆ ಅಧಿಕಾರಿಗಳಿಂದ ಮಾಹಿತಿ ಕಲೆಹಾಕಿದರು.

ಜಾಕ್‌ವೆಲ್, ಪಂಪ್‌ಹೌಸ್‌ಗಳು, ಸ್ಪಿಲ್ಲಿಂಗ್ ಬೇಸಿನ್ ಮತ್ತು ಕೆಆರ್‌ಎಸ್ ಹಿನ್ನೀರಿನ ಡ್ರಾಫ್ಟ್ ಚಾನಲ್ ಕಾಮಗಾರಿ, ಮೇಗಳಾಪುರ ಬಳಿ ನಿರ್ಮಾಣವಾಗುತ್ತಿರುವ 150 ಎಂಎಲ್‌ಡಿ ವಾಟರ್ ಟ್ರೀಟ್‌ಮೆಂಟ್ ಪ್ಲಾಂಟ್ ಕಾಮಗಾರಿಯನ್ನೂ ಕುಲಕರ್ಣಿ ವೀಕ್ಷಿಸಿದರು.

ಮೊದಲ ಹಂತದಲ್ಲಿ ಕೆಆರ್‌ಎಸ್ ಹಿನ್ನೀರಿನಿಂದ 150 ಎಂಎಲ್‌ಡಿ ನೀರನ್ನು ದಕ್ಷಿಣ ಜಾಕ್‌ವೆಲ್‌ನಿಂದ ಸುಮಾರು 4 ಕಿ.ಮೀ. ದೂರದ ಬೀಚನಕುಪ್ಪೆ ಟ್ರೀಟ್‌ಮೆಂಟ್ ಪ್ಲಾಂಟ್‌ಗೆ ಪಂಪ್ ಮಾಡಿ, ಮೈಸೂರಿನ ವಿಜಯನಗರದಲ್ಲಿರುವ ಮಾಸ್ಟರ್ ಬ್ಯಾಲೆನ್ಸಿಂಗ್ ಜಲ ಸಂಗ್ರಹಾಗಾರಕ್ಕೆ ಕಳುಹಿಸಲಾಗುವುದು. ಅಲ್ಲಿಂದ ಜಲಸಂಗ್ರಹಾಗಾರಕ್ಕೆ ಪಂಪ್ ಮಾಡಿ ನಗರ ಮತ್ತು ಸುತ್ತಲಿನ ಗ್ರಾಮಗಳಿಗೆ ನೀರು ಪೂರೈಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದರು.




ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಅಧ್ಯಕ್ಷ ವಿನಯ್ ಕುಲಕರ್ಣಿ ಶನಿವಾರ ಹಳೇ ಹುಂಡುವಾಡಿ ಯೋಜನೆಯ ಕಾಮಗಾರಿ ಪರಿಶೀಲಿಸಿದರು (ಎಡಚಿತ್ರ). ಕಾಮಗಾರಿ ಪ್ರಗತಿಯಲ್ಲಿರುವುದನ್ನು ಬಲಚಿತ್ರದಲ್ಲಿ ಕಾಣಬಹುದು.



ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಅಧ್ಯಕ್ಷ ಅಶೋಕ್ ಹಾರನಹಳ್ಳಿ, ರಾಜ್ಯ ಸಂಘಟನಾ ಕಾರ್ಯದರ್ಶಿ ಕಾರ್ತಿಕ್ ಬಾಪಟ್ ಅವರು ಮೈಸೂರಿಗೆ ಭೇಟಿ ನೀಡಿದ ವೇಳೆ ರಾಜ್ಯ ಉಪಾಧ್ಯಕ್ಷ ನಂ.ಶ್ರೀಕಂಠಕುಮಾರ್, ಸಮಿತಿ ಸದಸ್ಯರಾದ ವೆಂಕಟೇಶ್, ಶಂಕರ ನಾರಾಯಣ, ವಿಪ್ರ ಮಹಿಳಾ ಸಂಗಮದ ಅಧ್ಯಕ್ಷೆ ಡಾ.ಲಕ್ಷ್ಮಿ ದೇವಿ, ಜಯಶ್ರೀ, ಮೂಗೂರು ಕರ್ನಾಟಕ ಬ್ರಾಹ್ಮಣ ಸಂಘದ ಅಧ್ಯಕ್ಷ ವಿಶ್ವನಾಥಯ್ಯ, ವಿವೇಕಾನಂದನಗರ ಬ್ರಾಹ್ಮಣ ಸಂಘದ ಅಧ್ಯಕ್ಷ ಜಯರಾಂ, ನಿರಂಜನ್, ಆರ್‌ಬಿಐ ಬ್ರಾಹ್ಮಣ ಸಂಘದ ಅಧ್ಯಕ್ಷ ದಿನೇಶ್, ಹೆಬ್ಬಾಳು ಬ್ರಾಹ್ಮಣ ಸಂಘದ ಅಧ್ಯಕ್ಷ ಮಂಜುನಾಥ್, ಸುನಿಲ್‌ಕುಮಾರ್, ಮೇಟಗಳ್ಳಿ ಗಾಯತ್ರಿ ವಿಪ್ರ ಸಂಘದ ಅಧ್ಯಕ್ಷ ಭಾಸ್ಕರ್, ಸತ್ಯನಾರಾಯಣ, ಕುಮಾರ್, ನರಸಿಂಹರಾಜ ವಿಪ್ರ ಸಂಘದ ಕಾರ್ಯದರ್ಶಿ ಚಂದ್ರಶೇಖರ್, ಪ್ರಸನ್ನ ಅಭಿನಂದಿಸಿದರು.

ಬಿಎಸ್‌ಎನ್‌ಎಲ್ ಲ್ಯಾಂಡ್‌ಲೈನ್, ಬ್ರಾಡ್‌ಬ್ಯಾಂಡ್ ಗ್ರಾಹಕರು ಫೈಬರ್ ತಂತ್ರಜ್ಞಾನಕ್ಕೆ ಅಪ್‌ಗ್ರೇಡ್

BSNL Connecting India Faster

ಮೈಸೂರು.ಫೆ.12– ಬಿಎಸ್‌ಎನ್‌ಎಲ್ ಟೆಲಿಕಾಂ ಮೈಸೂರು, ಚಾಮರಾಜನಗರ, ಕೊಡಗು ಮತ್ತು ಮಂಡ್ಯ ಜಿಲ್ಲೆಗಳ ಲ್ಯಾಂಡ್‌ಲೈನ್ ಮತ್ತು ಬ್ರಾಡ್‌ಬ್ಯಾಂಡ್ ಗ್ರಾಹಕರಿಗೆ ಅನಿಯಮಿತ ಬ್ಯಾಂಡ್‌ವಿಡ್ತ್ ಮತ್ತು ಅತ್ಯಾಧುನಿಕ ತಂತ್ರಜ್ಞಾನವನ್ನು ಹೊಂದಿರುವ ಫೈಬರ್ ತಂತ್ರಜ್ಞಾನಕ್ಕೆ (ಎಫ್‌ಟಿಟಿಹೆಚ್) ಅಪ್‌ಗ್ರೇಡ್ ಆಗಲು ಆಕರ್ಷಕ ಯೋಜನೆಯನ್ನು ಪರಿಚಯಿಸಿದೆ.

ಇದು ಹೈಸ್ಪೀಡ್ ಇಂಟರ್ನೆಟ್, ವಿಷಯ ವಿತರಣೆ ಮತ್ತು ಧ್ವನಿ ದೂರವಾಣಿ ಸೇವೆಯನ್ನು ಒದಗಿಸುತ್ತದೆ. ಅಸ್ತಿತ್ವದಲ್ಲಿರುವ ಸಾಂಪ್ರದಾಯಿಕ ತಾಮ್ರದ ಜಾಲವನ್ನು ಆಪ್ಟಿಕಲ್ ಫೈಬರ್ ನೆಟ್ವರ್ಕ್ ಪ್ಯಾನ್ ಇಂಡಿಯಾದಿಂದ ಬದಲಾಯಿಸಲಾಗುತ್ತಿದ್ದು, ಈ ಫೈಬರೀಕರಣದ ಭಾಗವಾಗಿ, ಬಿಎಸ್‌ಎನ್‌ಎಲ್ ತನ್ನ ಲ್ಯಾಂಡ್‌ಲೈನ್ ಮತ್ತು ಬ್ರಾಡ್‌ಬ್ಯಾಂಡ್ ಬಳಕೆದಾರರಿಗೆ ತಮ್ಮ ಲ್ಯಾಂಡ್‌ಲೈನ್ ಸಂಖ್ಯೆಯನ್ನು ಬದಲಾಯಿಸದೆಯೇ ಭಾರತ್ ಫೈಬರ್ (ಎಫ್‌ಟಿಟಿಹೆಚ್)ಗೆ ಅಪ್‌ಗ್ರೇಡ್ ಮಾಡಲು ಅವಕಾಶ ನೀಡುತ್ತಿದೆ. ಸಾಂಪ್ರದಾಯಿಕ ಲ್ಯಾಂಡ್‌ಲೈನ್ ಎಕ್ಸ್ಚೇಂಜ್‌ಗಳ ಫೈಬರೀಕರಣದ ಸಂದರ್ಭದಲ್ಲಿ, ಎಲ್ಲಾ ಲ್ಯಾಂಡ್‌ಲೈನ್ ಸಂಪರ್ಕಗಳನ್ನು ಭಾರತ್ ಫೈಬರ್ (ಎಫ್‌ಟಿಟಿಎಚ್)ಗೆ ಅಪ್‌ಗ್ರೇಡ್ ಮಾಡಲು ಪ್ರಸ್ತಾಪಿಸಲಾಗಿದೆ.

ಈ ಉನ್ನತೀಕರಣಕ್ಕಾಗಿ, ಬಿಎಸ್‌ಎನ್‌ಎಲ್ ಮೈಸೂರು, ಚಾಮರಾಜನಗರ, ಕೊಡಗು ಮತ್ತು ಮಂಡ್ಯ ಜಿಲ್ಲೆಗಳಾದ್ಯಂತ ಆಕರ್ಷಕ ಮತ್ತು ಕೈಗೆಟಕುವ ದರದ ಯೋಜನೆಗಳನ್ನು ನೀಡುತ್ತಿದೆ.

ಅದರಲ್ಲಿ, ಅದೇ ದೂರವಾಣಿ ಸಂಖ್ಯೆಯನ್ನು ಉಳಿಸಿಕೊಳ್ಳಬಹುದು. ಎಫ್‌ಟಿಟಿಎಚ್ ವೈಫೈ ಮೋಡೆಮ್ (ರೂ. 2500 ರಿಂದ ರೂ. 3500 ಮೌಲ್ಯದ) ಅನ್ನು ಸಂಪೂರ್ಣವಾಗಿ ಉಚಿತವಾಗಿ ಸ್ಥಾಪಿಸಲಾಗುವುದು. ಅನಿಯಮಿತ ಉಚಿತ ಕರೆಗಳು ಮತ್ತು ಇಂಟರ್ನೆಟ್. ತಿಂಗಳಿಗೆ ರೂ.299 (ನಗರ) ಮತ್ತು ರೂ.249 (ಗ್ರಾಮೀಣ) ದಿಂದ ಪ್ರಾರಂಭವಾಗುವ ಅತ್ಯಂತ ಕೈಗೆಟಕುವ ಯೋಜನೆಗಳು. ಒಟಿಟಿ ಪ್ಯಾಕ್‌ಗಳೊಂದಿಗೆ ಲೋಡ್ ಮಾಡಲಾದ ಮನರಂಜನೆ (ಡಿಸ್ನಿ ಹಾಟ್‌ಸ್ಟಾರ್, ಜೀ5, ಸೋನಿಲೈವ್ ಮತ್ತು ಇನ್ನಷ್ಟು) ರೂ.666 ಮತ್ತು ಹೆಚ್ಚಿನದು. ಯಾವುದೇ ಹೆಚ್ಚುವರಿ ಠೇವಣಿಗಳ ಅಗತ್ಯವಿಲ್ಲ, ಪ್ರಸ್ತುತ ಸಂಬಂಧಿತ ಠೇವಣಿಗಳನ್ನು ಮುಂದಕ್ಕೆ ಸಾಗಿಸಲಾಗುತ್ತದೆ. ಮೈಬಿಎಸ್‌ಎನ್‌ಎಲ್ ಅಪ್ಲಿಕೇಶನ್, 1800–4444 ವಾಟ್ಸ್‌ಅಪ್ ಚಾಟ್ ಬಾಕ್ಸ್, 'ಎಲ್ಲದಕ್ಕೂ ಒಂದೇ ಪರಿಹಾರ' ಎಂಬ ಯೋಜನೆಗಳನ್ನು ನೀಡುತ್ತಿದೆ.

ಎಲ್ಲಾ ನಾಲ್ಕು ಜಿಲ್ಲೆಗಳು ಒಟ್ಟು 10800 ಲ್ಯಾಂಡ್‌ಲೈನ್ ಮತ್ತು ಬ್ರಾಡ್‌ಬ್ಯಾಂಡ್ ಗ್ರಾಹಕರನ್ನು ಹೊಂದಿರುವ ಮೈಸೂರು ಬ್ಯುಸಿನೆಸ್ ಏರಿಯಾ– ಬಿಎಸ್‌ಎನ್‌ಎಲ್ ಅನ್ನು ರೂಪಿಸುತ್ತವೆ, ಅದರಲ್ಲಿ ಈಗಾಗಲೇ ಸುಮಾರು 1100 ಗ್ರಾಹಕರು ಎಫ್‌ಟಿ ಟಿಎಚ್‌ಗೆ ಅಪ್‌ಗ್ರೇಡ್ ಮಾಡಿದ್ದಾರೆ. ಎಫ್‌ಟಿಟಿಎಚ್‌ಗೆ ಅಪ್‌ಗ್ರೇಡ್ ಮಾಡಲು ಲ್ಯಾಂಡ್‌ಲೈನ್ ಮತ್ತು ಬ್ರಾಡ್‌ಬ್ಯಾಂಡ್ ಗ್ರಾಹಕರಲ್ಲಿ ಬಿಎಸ್‌ಎನ್‌ಎಲ್ ಮನವಿ ಮಾಡಿದೆ.

ರಾಜ್ಯದಲ್ಲಿ ದಿನೇದಿನೆ ತಾಪಮಾನ ಹೆಚ್ಚಳ

ಜನರಲ್ಲಿ ಹೆಚ್ಚುತ್ತಿದೆ ಅಲರ್ಜಿ, ವಿಟಮಿನ್ ಡಿ ಕೊರತೆ ಸಮಸ್ಯೆ!



ಬೆಂಗಳೂರು: ಮೈ ಮೇಲೆ ಬಿಸಿಲು ಬಿದ್ದರೆ, ರೋಗಗಳು ದೂರಾಗುತ್ತವೆ ಎಂದು ಹೇಳಲಾಗುತ್ತದೆ. ಆದರೀಗ ಇತ್ತೀಚಿನ ದಿನಗಳಲ್ಲಿನ ಅತಿಯಾದ ತಾಪಮಾನ ಜನರಲ್ಲಿ ಆರೋಗ್ಯ ಸಮಸ್ಯೆಗಳನ್ನು ಉಂಟು ಮಾಡುತ್ತಿದ್ದು, ಇದು ಕಳವಳವನ್ನು ಸೃಷ್ಟಿಸಿದೆ.

ತಾಪಮಾನ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಜನರಲ್ಲಿ ಅಲರ್ಜಿ ಹಾಗೂ ವಿಟಮಿನ್ ಡಿ ಕೊರತೆ ಸಮಸ್ಯೆಗಳು ಹೆಚ್ಚಾಗುತ್ತಿದೆ. ಈ ಹಿನ್ನೆಲೆಯಲ್ಲಿ ಸೂರ್ಯನ ಕಿರಣಗಳಿಗೆ 5–10 ನಿಮಿಷಗಳಿಗಿಂತ ಹೆಚ್ಚು ಒಡ್ಡಿಕೊಳ್ಳದಂತೆ, ಸನ್ ಸ್ಕ್ರೀನ್‌ಗಳ ಬಳಸುವಂತೆ ಸಲಹೆ ನೀಡಲಾಗುತ್ತಿದೆ ಎಂದು ಚರ್ಮರೋಗ ತಜ್ಞ ವೈದ್ಯ ಡಾ.ಅನಘಾ ಸುಮಂತ್ ಹೇಳಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಸಾಕಷ್ಟು ಮಂದಿ ವಿಟಮಿನ್ ಡಿ ಕೊರತೆಯಿಂದ ಬಳಲುತ್ತಿದ್ದಾರೆ. ಶೇ.95ರಷ್ಟು ಜನರು ಈ ಸಮಸ್ಯೆಯಿಂದ ಬಳಲುತ್ತಿದ್ದಾರೆ. ಹೀಗಾಗಿ ಬೆಳಗ್ಗೆ 8 ಗಂಟೆಗೂ ಮೊದಲು ಮಧ್ಯಾಹ್ನ 3.30ರಿಂದ 5 ಗಂಟೆಯ ನಡುವೆ ಬಿಸಿಲಿಗೆ ಮೈಯೊಡ್ಡುವಂತೆ ಸಲಹೆ ನೀಡಲಾಗುತ್ತಿದೆ. ಈ ಸಮಯದಲ್ಲಿ ಸೂರ್ಯನ ಕಿರಣಗಳು ತೀವ್ರವಾಗಿರುವುದಿಲ್ಲ ಎಂದು ದಯಾನಂದ ಸಾಗರ್ ವಿಶ್ವವಿದ್ಯಾಲಯದ ಮೂಳೆ ತಜ್ಞ ಮತ್ತು ಪ್ರಾಧ್ಯಾಪಕ ಡಾ.ಸಿಕೆ ಅವಿನಾಶ್ ಹೇಳಿದ್ದಾರೆ.

ತಾಪಮಾನ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಜನರು ಚರ್ಮದ ಸಮಸ್ಯೆ, ದದ್ದುಗಳು, ಕಿರಿಕಿರಿ, ಪಿಗ್ಮೆಂಟೇಶನ್ ಹಾಗೂ ಅಲರ್ಜಿ ಸಮಸ್ಯೆಯಿಂದ ಬಳಲುತ್ತಿದ್ದಾರೆ. ಮಕ್ಕಳ ಕೂಡ ಸಮಸ್ಯೆ ಎದುರಿಸುತ್ತಿದ್ದಾರೆ. ಹೀಗಾಗಿ ಪ್ರತಿ 6 ತಿಂಗಳಿಗೊಮ್ಮೆ ನಿಯಮಿತವಾಗಿ ಚರ್ಮ ಹಾಗೂ ವಿಟಮಿನ್ ಪರೀಕ್ಷೆಗಳನ್ನು ಮಾಡಿಸಿಕೊಳ್ಳುವಂತೆ ಸಲಹೆ ನೀಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಬೇಸಿಗೆಯಲ್ಲಿ ಸನ್ ಸ್ಕ್ರೀನ್ (SPF 30 ಮತ್ತು UV-A ಮತ್ತು UV-B ಕಿರಣಗಳಿಂದ ರಕ್ಷಿಸುವ ಸಾಮರ್ಥ್ಯ ಇರುವ ಕ್ರೀಮ್‌ಗಳನ್ನು ಬಳಕೆ ಮಾಡಬೇಕು. ಇದು ಸನ್ ಬರ್ನ್ ಆಗದಂತೆ ನೋಡಿಕೊಳ್ಳಲಿದ್ದು, ಚರ್ಮಕ್ಕೆ ರಕ್ಷಣೆಯನ್ನೂ ನೀಡುತ್ತದೆ. ಚರ್ಮಕ್ಕಾಗುವ ಹಾನಿಯು ಕ್ಯಾನ್ಸರ್‌ಗೂ ಕಾರಣವಾಗಲಿದೆ. ಹೀಗಾಗಿ ಬೆಳಗ್ಗೆ 10ರಿಂದ ಸಂಜೆ 4ರವರೆಗೆ ಬಿಸಿಲಿಗೆ ಒಡ್ಡಿಕೊಳ್ಳದಂತೆ ಸಲಹೆ ನೀಡಲಾಗುತ್ತಿದೆ ಎಂದು ಸ್ಪರ್ಶ ಆಸ್ಪತ್ರೆಯ ಆಂಕೊಲಾಜಿಸ್ಟ್ ಡಾ.ನಾರಾಯಣ ಸುಬ್ರಮಣ್ಯಂ ಹೇಳಿದ್ದಾರೆ.

ನಾಳೆಯಿಂದ ಅಕ್ಯೂಪ್ರೆಶರ್, ಸುಜೋಕ್, ಅಕ್ಯೂಡಿಜಿಟಲ್ ಫಿಶಿಯೋಥೆರಪಿ ಚಿಕಿತ್ಸಾ ಶಿಬಿರ

ಮೈಸೂರು,ಫೆ.12–ಮೈಸೂರು ಜಿಲ್ಲಾ ಪ್ರಾಕೃತಿಕ ಚಿಕಿತ್ಸಾ ಪರಿಷತ್ ಮತ್ತು ಶ್ರೀ ಆರ್ಯವೈಶ್ಯ ಬಾಲಕ ಭಕ್ತ ಮಂಡಳಿ ಸಂಯುಕ್ತಾಶ್ರಯದಲ್ಲಿ ಫೆ.14ರಿಂದ 21 ದಿನಗಳ ಕಾಲ ಅಕ್ಯೂಪ್ರೆಶರ್, ಸುಜೋಕ್, ಅಕ್ಯೂಡಿಜಿಟಲ್ ಫಿಶಿಯೋಥೆರಪಿ ಚಿಕಿತ್ಸಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಶಿಬಿರದಲ್ಲಿ ಬಿಪಿ, ಶುಗರ್, ಬೊಜ್ಜು ನಿವಾರಣೆ, ಗ್ಯಾಸ್ಟ್ರಿಕ್, ಅಸಿಡಿಟಿ, ಅಸ್ತಮಾ, ಅಜೀರ್ಣತೆ, ಅಲರ್ಜಿ ಇನ್ನಿತರೆ ರೋಗಗಳಿಗೆ ಚಿಕಿತ್ಸೆ ನೀಡಲಾಗುವುದು. ಶಿಬಿರವು ಕೊತ್ವಾಲರಾಮಯ್ಯ ರಸ್ತೆಯಲ್ಲಿರುವ ಶ್ರೀ ಆರ್ಯವೈಶ್ಯ ಬಾಲಕ ಭಕ್ತ ಮಂಡಳಿ ಶ್ರೀರಾಮಮಂದಿರದಲ್ಲಿ ಬೆಳಗ್ಗೆ 10.30 ರಿಂದ 6.30 ರವರೆಗೆ ನಡೆಯಲಿದೆ. ಹೆಚ್ಚಿನ ಮಾಹಿತಿಗೆ ಮೊ. 9845182716, 7892798768 ಸಂಪರ್ಕಿಸಬಹುದು.

ಇಂದಿನಿಂದ ಪಿಸಿಓಡಿ ತೊಂದರೆಗೆ ಚಿಕಿತ್ಸಾ ಶಿಬಿರ

ಮೈಸೂರು, ಫೆ. 12–ಮೈಸೂರಿನ ಲಲಿತಾದ್ರಿಪುರ ರಸ್ತೆಯಲ್ಲಿರುವ ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆಯಲ್ಲಿ ಫೆ.13ರಿಂದ 20ರವರೆಗೆ ಬೆಳಗ್ಗೆ 9ರಿಂದ ಸಂಜೆ 4.30 ರವರೆಗೆ ಪಿಸಿಓಡಿ ತೊಂದರೆಗೆ ಚಿಕಿತ್ಸಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ. 8970322532, ದೂ. 0821–2548231 ಸಂಪರ್ಕಿಸಬಹುದು.

ಯುವಕರ ಹೋರಾಟದಿಂದಲೇ ಸಮಾಜದಲ್ಲಿ ಪರಿವರ್ತನೆ ಸಾಧ್ಯ

● ಮಾಜಿ ಸಚಿವ ಹೆಚ್.ಎಂ.ರೇವಣ್ಣ ಅಭಿಮತ ● ಜನಪರ ಸಾಹಿತ್ಯ ಪರಿಷತ್ ವತಿಯಿಂದ ವಿವೇಕರತ್ನ ಪ್ರಶಸ್ತಿ ಪ್ರದಾನ



ಮಂಡ್ಯದ ಕರ್ನಾಟಕ ಸಂಘದಲ್ಲಿ ಜನಪರ ಸಾಹಿತ್ಯ ಪರಿಷತ್ತಿನ ವತಿಯಿಂದ ನಡೆದ ಯುವ ದಿನಾಚರಣೆಯಲ್ಲಿ ಸಾಧಕರಿಗೆ ವಿವೇಕ ರತ್ನ ಪ್ರಶಸ್ತಿ ಪ್ರದಾನ ಮಾಡಲಾಯಿತು. ಮಾಜಿ ಸಚಿವ ಹೆಚ್.ಎಂ.ರೇವಣ್ಣ, ಸಾಹಿತಿ ಟಿ.ಸತೀಶ್ ಜವರೇಗೌಡ, ಡಾ.ಎಸ್.ದತ್ತೇಶ್‌ಕುಮಾರ್, ಡಾ.ಎಂ.ಮಹೇಶ್ ಚಿಕ್ಕಲೂರು ಉಪಸ್ಥಿತರಿದ್ದರು.

ಮಂಡ್ಯ: ಯುವಜನರಲ್ಲಿ ಹೋರಾಟದ ಕೆಚ್ಚು ಹೆಚ್ಚಿರುತ್ತದೆ. ಇಂತಹ ಯುವ ಜನರಿಂದಲೇ ಹೋರಾಟದಿಂದ ಸಮಾಜದಲ್ಲಿ ಪರಿವರ್ತನೆ ಸಾಧ್ಯ ಎಂದು ಮಾಜಿ ಸಚಿವ ಹೆಚ್.ಎಂ.ರೇವಣ್ಣ ಅಭಿಪ್ರಾಯಪಟ್ಟರು.

ಜನಪರ ಸಾಹಿತ್ಯ ಪರಿಷತ್ತಿನ ವತಿಯಿಂದ ನಗರದ ಕರ್ನಾಟಕ ಸಂಘದ ಕೆವಿಎಸ್ ಸಭಾಂಗಣದಲ್ಲಿ ನಡೆದ ರಾಷ್ಟ್ರೀಯ ಯುವ ದಿನಾಚರಣೆ, ವಿವೇಕ ರತ್ನ ಪ್ರಶಸ್ತಿ ಪ್ರದಾನ ಹಾಗೂ ಅಭಿನಂದನಾ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು ಯುವಜನರ ಹೋರಾಟಗಳಿಂದ ಸಮಾಜದಲ್ಲಿ ಅನೇಕ ಬದಲಾವಣೆಗಳಾಗಿವೆ ಎಂದು ನುಡಿದರು.

ಭಾರತದ ಇಡೀ ರಾಜಕೀಯ ಚಿತ್ರಣ ಬದಲಿಸಿದ ಜಯಪ್ರಕಾಶ್ ನಾರಾಯಣ್, ಗಾಂಧೀಜೀಯವರು, ಸ್ವಾಮಿ ವಿವೇಕಾನಂದರು ಯುವಜನರ ಮೂಲಕ ಹೋರಾಟದಲ್ಲಿ ಯಶಸ್ವಿಯಾದವರು. ಅಷ್ಟೇತಕ್ಕೆ ಸರ್ಕಾರಗಳು ಉರುಳಿಬಿದ್ದಿರುವ ಇತಿಹಾಸವಿದೆ. ಯುವಶಕ್ತಿ ದೇಶದ ಮುಖ್ಯ ಶಕ್ತಿ ಎಂದರು.

ನಾವು ದೊಡ್ಡವರಾಗುತ್ತ ಹೋದಂತೆ ರಾಜೀಯಾಗುವ ಗುಣವಿರುತ್ತದೆ. ಹಾಗೇ ಸಂಕಟಗಳು ಹೆಚ್ಚಿರುತ್ತವೆ. ಆದರೆ ಯುವ ಜನರಲ್ಲಿ ಹೋರಾಟಗಳಿಗೆ ಸ್ಪಂದಿಸುವ ಮನೋಭಾವವಿರುತ್ತದೆ. ಇಂತಹ ಯುವ ಜನರ ಶಕ್ತಿಯನ್ನು ಸರಿಯಾದ ರೀತಿಯಲ್ಲಿ ಸರ್ಕಾರ ಬಳಕೆ ಮಾಡಿಕೊಳ್ಳಲು ಚಿಂತನೆ ನಡೆಸಬೇಕು ಎಂದು ಸಲಹೆ ನೀಡಿದರು.

ಇಡೀ ಭಾರತದಲ್ಲಿ ಕನ್ನಡ ಭಾಷೆ ಮತ್ತು ಸಂಸ್ಕೃತಿ ಉತ್ಕೃಷ್ಟವಾಗಿದೆ. ಜೈನ ಸಂಸ್ಕೃತಿ, ಬಸವ ಸಂಸ್ಕೃತಿ, ದಲಿತ ಸಾಹಿತ್ಯವನ್ನೊಳಗೊಂಡಿದೆ. ಇಂತಹ ಭಾಷೆಯನ್ನು ಮಾತನಾಡಲು ಹಿಂಜರಿಯಬಾರದು. ಕುವೆಂಪು ಹೇಳಿದಂತೆ 'ಎಲ್ಲಾದರೂ ಇರು ಎಂತಾದರೂ ಇರು ಎಂದೆಂದಿಗೂ ಕನ್ನಡ'ವಾಗಿರಬೇಕು ಎಂದು ಕರೆ ನೀಡಿದರು.

ಜಿಲ್ಲಾ ಯುವ ಬರಹಗಾರರ ಬಳಗದ ಅಧ್ಯಕ್ಷ ಟಿ.ಸತೀಶ್ ಜವರೇಗೌಡ ಮಾತನಾಡಿ, ಕನ್ನಡ ಚಟುವಟಿಕೆಗಳನ್ನು ನಿರ್ವಹಿಸಲು ಎಷ್ಟೇ ಸಂಘಟನೆಗಳಿದ್ದರೂ ಸಾಲದು. ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿ, ಜನಪದ ಪ್ರಚಾರ ಮಾಡುವ ದಿಕ್ಕಿನಲ್ಲಿ, ಮತ್ತಷ್ಟು ಗಟ್ಟಿಯಾಗಿ ಕಟ್ಟುವ ನಿಟ್ಟಿನಲ್ಲಿ ಸಂಘಟನೆಗಳು ಕೆಲಸ ಮಾಡುವ ಜರೂರತ್ತಿದೆ ಎಂದರು.

ಕೊಳ್ಳೇಗಾಲದ ಮಾನಸ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಡಾ.ಎಸ್. ದತ್ತೇಶ್ ಕುಮಾರ್ ಪ್ರಶಸ್ತಿ ಪ್ರದಾನ ಮಾಡಿದರು. ಅಹಲ್ಯಾಭಾಯಿ ಹೋಳ್ಕರ್ ಮಹಿಳಾ ಪತ್ತಿನ ಸಹಕಾರ ಸಂಘದ ಅಧ್ಯಕ್ಷೆ ಕೆ.ಆರ್. ಪ್ರಭಾವತಿ ಪ್ರಭಾವತಿ ಪ್ರತಿಭಾ ಪುರಸ್ಕಾರ ವಿತರಣೆ ಮಾಡಿದರು.

ವಿವಿಧ ಕ್ಷೇತ್ರದ ಸಾಧಕರಾದ ಡಾ.ಎಸ್. ಶಿವರಾಜಪ್ಪ (ಸಾಹಿತ್ಯ), ಅಂಶಿ ಪ್ರಸನ್ನ ಕುಮಾರ್ (ಮಾಧ್ಯಮ), ಎಂ.ಮಹದೇವಸ್ವಾಮಿ, ಡಾ.ಡಿ.ಕೆ.ರವಿಶಂಕರ್ (ವಿಜ್ಞಾನ), ಡಾ.ಆರ್.ನಾಗಭೂಷಣ್ (ಉನ್ನತ ಶಿಕ್ಷಣ), ಗುರು ಬಸಪ್ಪ (ಆರಕ್ಷಕ), ಎನ್.ದೊಡ್ಡಯ್ಯ, ಆರ್.ನಾಗರಾಜು, ಮತ್ತು ಪಿ.ವೈ.ಶಾರದಾ (ಸಂಘಟನೆ), ಎಂ.ಸಿ.ಬೋರೇಗೌಡ, ಇ. ಕಂದವೇಲು ಮತ್ತು ಎ.ದೇವಮ್ಮಣಿ, ಡಿ.ಪಿ. ಚಿಕ್ಕಣ್ಣ (ಸಾಹಿತ್ಯ) ಅವರಿಗೆ ವಿವೇಕ ರತ್ನ ಪ್ರಶಸ್ತಿ ಪ್ರದಾನ ಮಾಡಲಾಯಿತು. ಕಾರ್ಯಕ್ರಮದ ನಡುವೆ ಮಿಮಿಕ್ರಿ ಗೋಪಿ ಅವರಿಂದ ಹಾಸ್ಯ ಕಾರಂಜಿ ನಡೆಯಿತು.

ಕೋಟೆಯಲ್ಲಿ ಶಾಸಕ ಅನಿಲ್ ಚಿಕ್ಕಮಾದು ಹುಟ್ಟುಹಬ್ಬ ಆಚರಣೆ

ಕಾಂಗ್ರೆಸ್ ಮುಖಂಡರಿಂದ ರೋಗಿಗಳಿಗೆ ಹಣ್ಣು ಹಂಪಲು ವಿತರಣೆ



ಶಾಸಕ ಅನಿಲ್ ಚಿಕ್ಕಮಾದು ಅವರ ಹುಟ್ಟುಹಬ್ಬದ ಅಂಗವಾಗಿ ರೋಗಿಗಳಿಗೆ ಹಣ್ಣು ಹಂಪಲು ವಿತರಿಸುತ್ತಿರುವುದು.

ಹೆಚ್.ಡಿ.ಕೋಟೆ, ಫೆ.12– ಕರ್ನಾಟಕ ರಾಜ್ಯ ಅರಣ್ಯ ವಸತಿ ಮತ್ತು ವಿಹಾರ ಧಾಮಗಳ ಅಧ್ಯಕ್ಷ ಹಾಗೂ ಶಾಸಕ ಅನಿಲ್ ಚಿಕ್ಕಮಾದು ಅವರ 35ನೇ ವರ್ಷದ ಹುಟ್ಟುಹಬ್ಬವನ್ನು ಪಟ್ಟಣದ ಸಾರ್ವಜನಿಕ ಆಸ್ಪತ್ರೆ ರೋಗಿಗಳಿಗೆ ಹಣ್ಣು ಹಂಪಲು ವಿತರಿಸುವ ಮೂಲಕ ಸರಳವಾಗಿ ಆಚರಿಸಲಾಯಿತು ಎಂದು ಜಯ ಕರ್ನಾಟಕ ಸಂಘಟನೆ ರಾಜ್ಯ ಉಪಾಧ್ಯಕ್ಷ ಸತೀಶ್‌ಗೌಡ ತಿಳಿಸಿದರು.

ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು, ಶಾಸಕ ಅನಿಲ್ ಅಭಿಮಾನಿಗಳೊಂದಿಗೆ ರೋಗಿಗಳಿಗೆ ಹಣ್ಣು ಹಂಪಲು ವಿತರಿಸಿ ಮಾತನಾಡಿದ ಅವರು, ಶಾಸಕ ಅನಿಲ್ ಚಿಕ್ಕಮಾದು ಅವರ 35ನೇ ಹುಟ್ಟುಹಬ್ಬವನ್ನು ಈ ಬಾರಿ ವಿಜೃಂಭಣೆಯಿಂದ ಆಚರಿಸಲು ಸಿದ್ಧತೆ ಮಾಡಿಕೊಳ್ಳಲಾಗಿತ್ತು. ಆದರೆ ಶಾಸಕ ಅನಿಲ್ ಚಿಕ್ಕಮಾದು ಅವರು ನನ್ನ ಹುಟ್ಟುಹಬ್ಬವನ್ನು ವಿಜೃಂಭಣೆಯಿಂದ ಆಚರಿಸಿ ದುಂದುವೆಚ್ಚ ಮಾಡಬೇಡಿ. ಅದೇ ಹಣವನ್ನು ರೋಗಿಗಳಿಗೆ ಹಣ್ಣು ಹಂಪಲು ಹಾಗೂ ಬಡ ಮಕ್ಕಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ವಿನಿಯೋಗಿಸಿ ಎಂದು ತಿಳಿಸಿದ ಮೇರೆಗೆ ರೋಗಿಗಳಿಗೆ ಹಣ್ಣು ಹಂಪಲು ವಿತರಿಸಲಾಗಿದೆ ಎಂದರು.

ಪ್ರತಿ ವರ್ಷ ವಿವಿಧ ಸೇವಾ ಕಾರ್ಯಗಳ ಮೂಲಕ ಶಾಸಕ ಅನಿಲ್ ಚಿಕ್ಕಮಾದು ಅವರ ಹುಟ್ಟುಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತಿತ್ತು. ಆದರೆ ಈ ಬಾರಿ ರೋಗಿಗಳಿಗೆ ಹಣ್ಣು ಹಂಪಲು ಹಾಗೂ ಬಡವರಿಗೆ ಸಹಾಯ ಮಾಡುವ ಮೂಲಕ ಸರಳವಾಗಿ ಆಚರಣೆ ಮಾಡಿದ್ದೇವೆ ಎಂದರು.

ಇದೇ ವೇಳೆ ಮೈಸೂರು ವಿವಿ ಸಿಂಡಿಕೇಟ್ ಸದಸ್ಯ ಕ್ಯಾತನಹಳ್ಳಿ ನಾಗರಾಜ್ ಮಾತನಾಡಿದರು. ಈ ವೇಳೆ ತಾಲೂಕು ಆರೋಗ್ಯಾಧಿಕಾರಿ ಡಾ.ರವಿಕುಮಾರ್, ಜಿಪಂ ಮಾಜಿ ಸದಸ್ಯ ಹೆಚ್.ಸಿ.ಮಂಜುನಾಥ್, ಡಿಸಿಸಿ ಸದಸ್ಯ ಪರಶಿವಮೂರ್ತಿ, ರಾಜ್ಯ ಪ್ರಧಾನ ಕಾರ್ಯದರ್ಶಿ ಬೈಪಾಸ್ ಮಂಜು, ಮುಖಂಡರಾದ ನಾಗನಹಳ್ಳಿ ಪ್ರದೀಪ್, ಕುಲುಮೆ ರಾಜು, ಸೋಮೇಶ್, ಬೆಟ್ಟನಾಯಕ, ಶಫಿ, ಶಿವರಾಜು, ಸಿದ್ದನಾಯಕ, ರಾಜನಾಯಕ, ಏಜಾಜ್ ಪಾಷ, ಶಂಭುಲಿಂಗನಾಯಕ, ರವಿ, ಶಿವಪ್ಪ ಕೋಟೆ, ಗಣೇಶ್ ಆಚಾರ್, ಬಿ.ಪಿ. ಭಾಸ್ಕರ್, ಕೆಂಡಗಣ್ಣೇಗೌಡ, ನಟರಾಜು, ಹೊಂಡಾ ನಯಾಜ್, ಶಿವಮಲ್ಲು, ಮರಿದೇವಯ್ಯ, ಗಿರೀಶ್, ಸಣ್ಣಸ್ವಾಮಿ, ಪುಟ್ಟೇಗೌಡ, ಪ್ರಸನ್ನ ಕುಮಾರ್, ಮಹೇಶ್ ನಾಯಕ, ಧನಂಜಯ್ಯ, ಮಂಜು, ಬಿ.ಪಿ. ಸಿದ್ದನಾಯಕ, ಮರಿಸ್ವಾಮಿ, ಕೃಷ್ಣಮೂರ್ತಿ, ದಿನೇಶ್, ಸಿದ್ದರಾಮು, ಹೇಮಂತ್, ಬೀರೇಶ್, ನಿಂಗನಾಯಕ, ವನಸಿರಿ ಶಂಕರ್, ಉಮೇಶ್, ಶಂಭುಕುಮಾರ, ನಾಗರಾಜು, ಶಿವರಾಜು, ಬಸವರಾಜು ಸೇರಿದಂತೆ ಇನ್ನಿತರರಿದ್ದರು.

> ಹೆಚ್.ಡಿ.ಕೋಟೆ ವಿಧಾನಸಭಾ ಕ್ಷೇತ್ರದಲ್ಲಿ ಅನಿಲ್ ಚಿಕ್ಕಮಾದು ಸತತ 2ನೇ ಬಾರಿಗೆ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಅಲ್ಲದೇ ಇತ್ತೀಚೆಗೆ ರಾಜ್ಯ ಸರ್ಕಾರ ಶಾಸಕ ಅನಿಲ್ ಚಿಕ್ಕಮಾದು ಅವರ ಅಭಿವೃದ್ಧಿ ಕಾರ್ಯ ಗುರ್ತಿಸಿ ಕರ್ನಾಟಕ ರಾಜ್ಯ ಅರಣ್ಯ ವಸತಿ ಮತ್ತು ವಿಹಾರ ಧಾಮಗಳ ಅಧ್ಯಕ್ಷರಾಗಿ ನೇಮಕ ಮಾಡಿದೆ. ಶಾಸಕರ 35ನೇ ಹುಟ್ಟುಹಬ್ಬವನ್ನು ಸಾವಿರಾರು ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳ ಸಮ್ಮುಖದಲ್ಲಿ ಅದ್ದೂರಿಯಾಗಿ ಆಚರಿಸಲು ಸಿದ್ಧತೆ ಮಾಡಿಕೊಳ್ಳಲಾಗಿತ್ತು. ಆದರೆ ಶಾಸಕರ ಸೂಚನೆ ಮೇರೆಗೆ ಸರಳವಾಗಿ ಆಚರಿಸಿದ್ದೇವೆ.
>
> – ಸತೀಶ್‌ಗೌಡ, ಜಯ ಕರ್ನಾಟಕ ಸಂಘಟನೆ ರಾಜ್ಯ ಉಪಾಧ್ಯಕ್ಷ.

ಮೈಸೂರು ಚಿತ್ರಮಂದಿರಗಳಲ್ಲಿ



ಪದ್ಮ ಚಿತ್ರಮಂದಿರ	(ದೂ: 2521923)
ಈಗಲ್ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಕಾಟೇರ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ತೇರಿ ಬತೂನ್ ಮೇ ಐಸಾ ಉಲ್ಝಾ ಜಿಯಾ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಜಸ್ಟ್ ಪಾಸ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಒಂದು ಸರಳ ಪ್ರೇಮಕಥೆ (ಕ)	4 ಪ್ರದರ್ಶನಗಳು
ರಾಜಕಮಲ್	
ಲಾಲ್ ಸಲಾಂ (ತ)	4 ಪ್ರದರ್ಶನಗಳು
ಸಂಗಂ	
ಉಪಾಧ್ಯಕ್ಷ (ಕ)	4 ಪ್ರದರ್ಶನಗಳು
ಲಿಡೋ	
ಅಲೆಕ್ಸ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಈಗಲ್ (ತೆ)	4 ಪ್ರದರ್ಶನಗಳು
ಪ್ರಭಾ	
ಪ್ರಣಯಂ (ಕ)	4 ಪ್ರದರ್ಶನಗಳು

ಹಲ್ಲರೆಯಲ್ಲಿ ಸಂವಿಧಾನ ಜಾಗೃತಿ ಜಾಥಾಕ್ಕೆ ಸ್ವಾಗತ



ಹಲ್ಲರೆಯಲ್ಲಿ ಸಂವಿಧಾನ ಜಾಗೃತಿ ಜಾಥಾವನ್ನು ಸ್ವಾಗತಿಸಲಾಯಿತು.

ಮಲ್ಲುಂಡಿ, ಫೆ.12– ಇಲ್ಲಿಗೆ ಸಮೀಪದ ಹಲ್ಲರೆ ಗ್ರಾಮಕ್ಕೆ ಆಗಮಿಸಿದ ಸಂವಿಧಾನ ಜಾಗೃತಿ ಜಾಥಾವನ್ನು ಗ್ರಾಮ ಪಂಚಾಯಿತಿ ವತಿಯಿಂದ ಸ್ವಾಗತಿಸಲಾಯಿತು. ಇದೇ ವೇಳೆ ಅಧ್ಯಕ್ಷೆ ದೇವಮ್ಮ ಜಾಥಾಕ್ಕೆ ಪುಷ್ಪಾರ್ಚನೆ ಮಾಡಿದರು.

ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಭೀಮ್ ವಡ್ಡರ್ ಮಾತನಾಡಿ, ಸಂವಿಧಾನದ ಮಹತ್ವ, ಮೌಲ್ಯದ ಬಗ್ಗೆ ಜನರಿಗೆ ಅರಿವು ಮೂಡಿಸಲು ಇಂತಹ ಕಾರ್ಯಕ್ರಮ ಸಹಕಾರಿಯಾಗಿದೆ. ಡಾ.ಅಂಬೇಡ್ಕರ್ ರಚಿಸಿರುವ ಸಂವಿಧಾನ ವಿಶ್ವದಲ್ಲೇ ಶ್ರೇಷ್ಠ ಸಂವಿಧಾನವಾಗಿದೆ. ಪ್ರತಿಯೊಬ್ಬರೂ ಸಂವಿಧಾನ ಅರಿಯಬೇಕಿದೆ. ಅಂಬೇಡ್ಕರ್ ದೇಶಕ್ಕೆ ಪವಿತ್ರವಾದ ಸಂವಿಧಾನ ರಚಿಸಿ ಕೊಟ್ಟಿದ್ದಾರೆ. ಸರ್ವರಿಗೂ ಸಮಾನತೆ, ಸಹಬಾಳ್ವೆ ಕಲ್ಪಿಸಿದ್ದಾರೆ. ಅದರಂತೆ ಎಲ್ಲರೂ ಸಮಾನತೆಯಿಂದ ಬಾಳಬೇಕು ಎಂದರು.

ಇಓ ರಾಜೇಶ್, ಗ್ರಾಪಂ ಮಾಜಿ ಅಧ್ಯಕ್ಷ ಮಹದೇವಸ್ವಾಮಿ, ಸದಸ್ಯರಾದ ಲಕ್ಷ್ಮಿ, ಪಾಪ, ಸೋಮೇಶ್, ಮುಖಂಡ ಅಬ್ದುಲ್ ರಜಾಕ್, ಸಿದ್ದನಾಯಕ, ಪಿಡಿಓ ನಿರ್ಮಾಲ, ಕಾರ್ಯದರ್ಶಿ ಮೂರ್ತಿ ಸೇರಿದಂತೆ ಅಂಗನವಾಡಿ, ಆಶಾ ಕಾರ್ಯಕರ್ತೆಯರು ಹಾಜರಿದ್ದರು.

ಇಂದಿಗೂ ಸಂವಿಧಾನದ ಆಶಯಗಳು ಈಡೇರಿಲ್ಲ

ಚಿಂತಕ ಮೋದೂರು ಮಹೇಶಾರಾಧ್ಯ ವಿಷಾದ



ಹುಣಸೂರಲ್ಲಿ ನಡೆದ ಕಾರ್ಯಕ್ರಮದಲ್ಲಿ ಚಿಂತಕ ಮೋದೂರು ಮಹೇಶಾರಾಧ್ಯ ಮಾತನಾಡಿದರು.

ಹುಣಸೂರು, ಫೆ.12– ಇಂದಿಗೂ ಸಂವಿಧಾನದ ಆಶಯಗಳು ಈಡೇರಿಲ್ಲ ಎಂದು ಚಿಂತಕ ಮೋದೂರು ಮಹೇಶಾರಾಧ್ಯ ವಿಷಾದ ವ್ಯಕ್ತಪಡಿಸಿದರು.

ನಗರದ ಮುನೇಶ್ವರ ಕಾವಲು ಮೈದಾನದಲ್ಲಿ ಆಯೋಜಿಸಿದ್ದ ಸಂವಿಧಾನದ ಜಾಗೃತಿ ಜಾಥಾ ಕಾರ್ಯಕ್ರಮದ ಪ್ರಧಾನ ಭಾಷಣಕಾರರಾಗಿ ಮಾತನಾಡಿದ ಅವರು, ಹಲವು ದೇಶಗಳ ಸಂವಿಧಾನವನ್ನು ಸಮಗ್ರವಾಗಿ ಅಧ್ಯಯನ ಮಾಡಿ ಭಾರತ ದೇಶಕ್ಕೆ ಶ್ರೇಷ್ಠವಾದ ಸಂವಿಧಾನವನ್ನು ಡಾ.ಬಿ.ಆರ್. ಅಂಬೇಡ್ಕರ್ ನೀಡಿದ್ದಾರೆ. ಸಂವಿಧಾನ ಅಂಗೀಕಾರವಾಗಿ 75 ವರ್ಷವಾದರೂ ಅವುಗಳ ಆಶಯ ಇಂದಿಗೂ ಈಡೇರದಿರುವುದು ವಿಪರ್ಯಾಸ ಎಂದರು.

ಸಂವಿಧಾನದ ಆಶಯಗಳಾದ ಶಾಂತಿ, ಸಮಾನತೆ, ಸಹೋದರತ್ವ, ಸಹಬಾಳ್ವೆ, ನ್ಯಾಯ ಮುಂತಾದವುಗಳನ್ನು ಸಂವಿಧಾನ ಪೀಠಿಕೆಯಲ್ಲಿ ಅಳವಡಿಸಿರುವುದರಿಂದ ದೇಶದ ಪ್ರಜೆಗಳಲ್ಲಿ ಆತ್ಮವಿಶ್ವಾಸ ಮೂಡಿಸಲು ಹಾಗೂ ಪರಸ್ಪರ ಗೌರವಿಸಲು ಸಹಕಾರಿಯಾಗಿದೆ. ಅಂಬೇಡ್ಕರ್‌ರಂತಹ ಮಹನೀಯರ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದ ಅವರು, ರಾಜ್ಯ ಸರ್ಕಾರ ರಾಜ್ಯಾದ್ಯಂತ ಸಂವಿಧಾನದ ಬಗ್ಗೆ ಜಾಗೃತಿ ಮೂಡಿಸಲು ಜಾಥಾ ಆಯೋಜಿಸಿರುವುದು ಶ್ಲಾಘನೀಯ ಎಂದರು.

ನಗರಸಭೆ ಪೌರಾಯುಕ್ತೆ ಶರ್ಮಿಳಾ ಸಂವಿಧಾನ ಜಾಗೃತಿ ಜಾಥಾವನ್ನು ಬರಮಾಡಿಕೊಂಡರು. ಟಿಎಪಿಸಿಎಂಎಸ್ ಅಧ್ಯಕ್ಷ ಬಸವಲಿಂಗಯ್ಯ ಮಾತನಾಡಿದರು. ಇದಕ್ಕೂ ಮುನ್ನ ನಗರಕ್ಕೆ ಆಗಮಿಸಿದ ಸಂವಿಧಾನ ಜಾಗೃತಿ ಜಾಥಾವನ್ನು ಮಕ್ಕಳು ಮೆರವಣಿಗೆಯಲ್ಲಿ ಮುನೇಶ್ವರ ಕಾವಲು ಮೈದಾನಕ್ಕೆ ಕರೆತಂದರು.

ಈ ವೇಳೆ ನಗರಸಭಾ ಸದಸ್ಯ ಸತೀಶ್ ಕುಮಾರ್, ಕೃಷ್ಣರಾಜಗುಪ್ತ, ವಿವೇಕ್, ರಮೇಶ್, ಮುಖಂಡರಾದ ನಿಂಗರಾಜ ಮಲ್ಲಾಡಿ, ಬಸವಲಿಂಗಯ್ಯ, ಬಸವರಾಜು, ಕುಮಾರ, ಕೃಷ್ಣಯ್ಯ, ಕಾಂತರಾಜು, ಅಪ್ಪಣ್ಣ, ಜೆ.ಮಹದೇವ್, ಗಜೇಂದ್ರ, ಬಿಇಓ ರೇವಣ್ಣ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಸುಜೇಂದ್ರ ಕುಮಾರ್, ಸಮಾಜ ಕಲ್ಯಾಣ ಅಧಿಕಾರಿ ಸಿದ್ದರಾಜು, ನೋಡಲ್ ಅಧಿಕಾರಿ ಗಣಪತಿ ಜಕಾತಿ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಗೋವಿಂದೇಗೌಡ, ದೈಹಿಕ ಶಿಕ್ಷಣ ಸಮನ್ವಯ ಅಧಿಕಾರಿ ಲೋಕೇಶ್, ನಗರಸಭೆ ಮತ್ತು ಸಮಾಜ ಕಲ್ಯಾಣ ಇಲಾಖೆ ಸಿಬ್ಬಂದಿ ವರ್ಗ ವಿವಿಧ ಶಾಲೆಗಳ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಹಾಜರಿದ್ದರು. ಕಿರಿಜಾಜಿ ಗಜೇಂದ್ರ ವಸಂತ, ಹೊನ್ನೇನಹಳ್ಳಿ ಸಿಂಗೇಶ್ ಮುಂತಾದ ಕಲಾವಿದರು ಅಂಬೇಡ್ಕರ್ ಕ್ರಾಂತಿ ಗೀತೆಗಳು ಹಾಡಿದರು.

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಉಪಾಧ್ಯಕ್ಷ (ಕ): ಬೆ.10.10ಕ್ಕೆ, ಮ.1.10ಕ್ಕೆ, ಈಗಲ್ (ತೆ): ಸಂ.4.05ಕ್ಕೆ, ರಾ.7.10ಕ್ಕೆ, ರಾ.10.15ಕ್ಕೆ.
ಸ್ಕ್ರೀನ್ 2	ಪ್ರಣಯಂ (ಕ): ಬೆ.10.30ಕ್ಕೆ, ಜಸ್ಟ್ ಪಾಸ್ (ಕ): ಮ.1.20ಕ್ಕೆ, ಫೈಟರ್ (ಹಿಂ): ಸಂ.4ಕ್ಕೆ, ಪ್ರೇಮಲು (ಮ): ರಾ.7.15ಕ್ಕೆ, ಅನ್ವೆಶಿಪಿನ್ ಕಂಡೆತುಂ (ಮ): ರಾ.10.15ಕ್ಕೆ.
ಸ್ಕ್ರೀನ್ 3	ತೇರಿ ಬತೂನ್ ಮೇ ಐಸಾ ಉಲ್ಝಾ ಜಿಯಾ (ಹಿಂ): ಬೆ.10.40ಕ್ಕೆ, ರಾ.7.15ಕ್ಕೆ, ರಾ.9.55ಕ್ಕೆ, ಲವ್ವರ್ (ತ): ಮ.1.20ಕ್ಕೆ, ಉಪಾಧ್ಯಕ್ಷ (ಕ): ಸಂ.4.10ಕ್ಕೆ.
ಸ್ಕ್ರೀನ್ 4	ಒಂದು ಸರಳ ಪ್ರೇಮಕಥೆ (ಕ): ಬೆ.10.10ಕ್ಕೆ, ರಾ.7.10ಕ್ಕೆ, ಲಾಲ್ ಸಲಾಂ (ತ): ಮ.1.10ಕ್ಕೆ, ಸಂ.4.10ಕ್ಕೆ, ಯಾತ್ರಾ 2 (ತೆ): ರಾ.10ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ತೇರಿ ಬತೂನ್ ಮೇ ಐಸಾ ಉಲ್ಝಾ ಜಿಯಾ (ಹಿಂ): ಬೆ.9.20ಕ್ಕೆ, ಮ.12.30ಕ್ಕೆ, ಮ.3.40ಕ್ಕೆ, ಸಂ.6.50ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಲಾಲ್ ಸಲಾಂ (ತ): ಬೆ.9.40ಕ್ಕೆ, ಸಂ.4.05ಕ್ಕೆ, ಉಪಾಧ್ಯಕ್ಷ (ಕ): ಮ.12.50ಕ್ಕೆ, ರಾ.7.15ಕ್ಕೆ, ಈಗಲ್ (ತೆ): ರಾ.10.30ಕ್ಕೆ.
ಸ್ಕ್ರೀನ್ 3	ಒಂದು ಸರಳ ಪ್ರೇಮಕಥೆ (ಕ): ಬೆ.11.15ಕ್ಕೆ, ಈಗಲ್ (ತೆ): ಮ.2.25ಕ್ಕೆ, ಲವ್ವರ್ (ತ): ಸಂ.6.25ಕ್ಕೆ, ಲಾಲ್ ಸಲಾಂ (ತ): ರಾ.9.30ಕ್ಕೆ.
ಸ್ಕ್ರೀನ್ 4	ಫೈಟರ್ (ಹಿಂ): ಮ.12.05ಕ್ಕೆ, ಉಪಾಧ್ಯಕ್ಷ (ಕ): ಮ.3.35ಕ್ಕೆ, ಒಂದು ಸರಳ ಪ್ರೇಮಕಥೆ (ಕ): ಸಂ.6.50ಕ್ಕೆ, ಅನ್ವೆಶಿಪಿನ್ ಕಂಡೆತುಂ (ಮ): ರಾ.10ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಪಾರ್ಕಿಂಗ್ (ಕ): ಬೆ.10.35ಕ್ಕೆ, ಸಪ್ತ ಸಾಗರದಾಚೆ ಎಲ್ಲೋ 2 (ಕ): ಮ.1.10ಕ್ಕೆ, ಬ್ಯಾಡ್ ಮ್ಯಾನರ್ಸ್ (ಕ): ಸಂ.4ಕ್ಕೆ, ಅರ್ಧಂಬರ್ಧ ಪ್ರೇಮಕಥೆ (ಕ): ಸಂ.6.35ಕ್ಕೆ, ಅನ್ನಪೂರ್ಣಿ (ತ): ರಾ.9.15ಕ್ಕೆ.
ಸ್ಕ್ರೀನ್ 2	ಅನಿಮಲ್ (ಹಿಂ): ಬೆ.10ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ಮ.1.45ಕ್ಕೆ.
ಸ್ಕ್ರೀನ್ 3	ಸ್ಯಾಮ್ ಬಹದ್ದೂರ್ (ಹಿಂ): ಬೆ.10.10ಕ್ಕೆ, ಸಂ.4.50ಕ್ಕೆ, ಅನಿಮಲ್ (ಹಿಂ): ಮ.1.05ಕ್ಕೆ, ರಾ.7.45ಕ್ಕೆ
ಸ್ಕ್ರೀನ್ 4	ಸಪ್ತ ಸಾಗರದಾಚೆ ಎಲ್ಲೋ 2 (ಕ): ಬೆ.10.45ಕ್ಕೆ, ಅನಿಮಲ್ (ಹಿಂ): ಮ.2.40ಕ್ಕೆ, ನೆಪೋಲಿಯನ್ (ಇಂ): ಸಂ.6.25ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್

ಮೊ.ನಂ: 8951357139

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಫೈಟರ್ (2ಡಿ & 3ಡಿ)(ಹಿಂ): ಬೆ.11.15ಕ್ಕೆ, ಸಂ.6.50ಕ್ಕೆ, ರಾ.10.15ಕ್ಕೆ, ತೇರಿ ಬತೂನ್ ಮೇ ಐಸಾ ಉಲ್ಝಾ ಜಿಯಾ (ಹಿಂ): ಬೆ.9.50ಕ್ಕೆ, ಮ.1ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಉಪಾಧ್ಯಕ್ಷ (ಕ): ಬೆ.11.50ಕ್ಕೆ, ಮ.3ಕ್ಕೆ, ಸಂ.6.20ಕ್ಕೆ, ಅನ್ವೆಶಿಪಿನ್ ಕಂಡೆತುಂ (ಮ): ರಾ.9.30ಕ್ಕೆ, ಜಸ್ಟ್ ಪಾಸ್ (ಕ): ಸಂ.4.10ಕ್ಕೆ, ಒಂದು ಸರಳ ಪ್ರೇಮಕಥೆ (ಕ): ಮ.2.55ಕ್ಕೆ, ರಾ.10.25ಕ್ಕೆ, ಲವ್ವರ್ (ತ): ಮ.12.15ಕ್ಕೆ, ಸಂ.6.40ಕ್ಕೆ, ಈಗಲ್ (ತೆ): ಮ.3.20ಕ್ಕೆ, ರಾ.9.45ಕ್ಕೆ, ಲಾಲ್ ಸಲಾಂ (ತ): ಬೆ.11.40ಕ್ಕೆ, ರಾ.7.05ಕ್ಕೆ, ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಬೆಟ್ಟದಪುರದಲ್ಲಿ ಜಾನುವಾರು ಜಾತ್ರೆಗೆ ಚಾಲನೆ



ಬೆಟ್ಟದಪುರದಲ್ಲಿ ಜಾನುವಾರು ಜಾತ್ರೆಗೆ ತಹಸೀಲ್ದಾರ್ ಕುಂ.ಇ ಅಹಮ್ಮದ್ ಚಾಲನೆ ನೀಡಿದರು.

ಬೆಟ್ಟದಪುರ, ಫೆ.12– ಜಾನುವಾರು ರೈತರ ಜೀವನಾಡಿ. ಅವುಗಳನ್ನು ಆದಾಯದ ಮೂಲಗಳನ್ನಾಗಿ ಪಾಲನೆ ಮಾಡದೇ ಅವುಗಳ ಸಂರಕ್ಷಣೆ ಮಾಡಬೇಕಿದೆ ಎಂದು ತಹಸೀಲ್ದಾರ್ ಕುಂ.ಇ ಅಹಮ್ಮದ್ ತಿಳಿಸಿದರು.

ಗ್ರಾಮದ ಹೊರವಲಯದಲ್ಲಿರುವ ಬಸವೇಶ್ವರ ದೇವಾಲಯದ ಆವರಣದಲ್ಲಿ ಸೋಮವಾರ ಜಾನುವಾರು ಜಾತ್ರೆಗೆ ಚಾಲನೆ ನೀಡಿ ಮಾತನಾಡಿದ ಅವರು, ಹಿಂದಿನಿಂದಲೂ ಗ್ರಾಮದಲ್ಲಿ ನಡೆದುಕೊಂಡು ಬಂದ ಆಚರಣೆ ಮುಂದುವರಿಸುತ್ತಿದ್ದೇವೆ. ಕಳೆದ 3 ವರ್ಷಗಳಿಂದ ಜಾನುವಾರು ಜಾತ್ರೆ ನಡೆದಿರಲಿಲ್ಲ. ಈ ಬಾರಿ ತಾಲೂಕು ಆಡಳಿತ ಜಾನುವಾರುಗಳ ಜಾತ್ರೆಗೆ ಬೇಕಾದ ಎಲ್ಲಾ ಮೂಲ ಸೌಕರ್ಯಗಳನ್ನು ಒದಗಿಸಿದೆ. ಅಲ್ಲದೇ ಜಾನುವಾರುಗಳ ಅನುಕೂಲಕ್ಕಾಗಿ ಪಶು ವೈದ್ಯಾಧಿಕಾರಿಗಳನ್ನು ನೇಮಕ ಮಾಡಿ ಹಾಗೂ ಚಿಕಿತ್ಸಾ ಶಿಬಿರವನ್ನು ಆಯೋಜಿಸಿದೆ. ಜಾತ್ರೆಯಲ್ಲಿ 2 ರಿಂದ 5 ಸಾವಿರ ಜೊತೆ ರಾಸುಗಳು ಭಾಗವಹಿಸಬಹುದೆಂದು ನಿರೀಕ್ಷಿಸಲಾಗಿದೆ. ಅದಕ್ಕನುಗುಣವಾಗಿ ಜಾತ್ರೆ ನಡೆಯಲು ಎಲ್ಲಾ ರಿತಿಯ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ ಎಂದರು.

ಗ್ರಾಪಂ ಅಧ್ಯಕ್ಷ ಅಯ್ಯರ್ ಗಿರೀಶ್ ಮಾತನಾಡಿ, ವರ್ಷವಿಡಿ ಜಮೀನಿನಲ್ಲಿ ದುಡಿಯುವ ಜಾನುವಾರುಗಳನ್ನು ಜಾತ್ರೆಗೆ ಕರೆ ತರುವುದು ರೈತರಿಗೆ ಹುಮ್ಮಸ್ಸಿನ ವಿಚಾರ. ರಾಸುಗಳನ್ನು ಅಲಂಕರಿಸಿ, ನಾಲ್ಕರಿಂದ ಐದು ದಿನಗಳ ಕಾಲ ಜಾತ್ರೆ ಮಾಳದಲ್ಲಿ ತಂಗಿ ಅವುಗಳ ಆರೈಕೆ ಮಾಡುವುದೆಂದರೆ ರೈತರಿಗೆ ಎಲ್ಲಿಲ್ಲದ ಪ್ರೀತಿ. ಅದೇ ರೀತಿ ಮುಂದಿನ ಬಾರಿ ರೈತರು ಕೃಷಿ ಚಟುವಟಿಕೆಗಳಲ್ಲೂ ಪಾಲ್ಗೊಳ್ಳಲು ಹೆಚ್ಚು ಉತ್ಸಾಹ ಬರುತ್ತದೆ ಎಂದರು.

ಈ ವೇಳೆ ಉಪ ತಹಸೀಲ್ದಾರ್ ಶಶಿಧರ್, ಕಂದಾಯ ನಿರೀಕ್ಷಕ ಅಜ್ಮಲ್ ಶರೀಫ್, ಗ್ರಾಮ ಲೆಕ್ಕಿಗ ಗುರು ನಾಯಕ್, ಶ್ರೀನಿವಾಸ್, ಚೈತ್ರಾ, ವೀಕ್ಷಿತಾ, ಪಿಡಿಓ ಮಂಜುನಾಥ್, ಸಿಬ್ಬಂದಿ ಪಾಂಡು ಸೇರಿದಂತೆ ರೈತರು ಉಪಸ್ಥಿತರಿದ್ದರು.

ಕಳಪೆ ಕಾಮಗಾರಿ ಪ್ರಶ್ನಿಸಿದ ಗ್ರಾಪಂ ಉಪಾಧ್ಯಕ್ಷೆ ಮೇಲೆ

ಅಧ್ಯಕ್ಷೆ ಪತಿಯೂ ಆದ ಹಾಲಿ ಸದಸ್ಯನಿಂದ ಹಲ್ಲೆ ಆರೋಪ

ಹುಣಸೂರು, ಫೆ.12– ಗ್ರಾಪಂ ಕಟ್ಟಡದ ಕಳಪೆ ಕಾಮಗಾರಿ ಪ್ರಶ್ನಿಸಿದ ಗ್ರಾಪಂ ಉಪಾಧ್ಯಕ್ಷೆ ಮೇಲೆ ಅಧ್ಯಕ್ಷೆ ಪತಿಯೂ ಆದ ಹಾಲಿ ಸದಸ್ಯ ಹಲ್ಲೆ ನಡೆಸಿರುವ ಘಟನೆ ತಾಲೂಕಿನ ಗಾವಡಗೆರೆ ಹೋಬಳಿ ಜಾಬಗೆರೆ ಗ್ರಾಮ ಪಂಚಾಯಿತಿಯಲ್ಲಿ ನಡೆದಿದೆ.

ತಾಲೂಕಿನ ಶಂಕರೇಗೌಡನಕೊಪ್ಪಲು ನಿವಾಸಿ ನಾಗರಾಜು ಅವರ ಪತ್ನಿ, ಉಪಾಧ್ಯಕ್ಷೆ ಜಯಮ್ಮ ಹಲ್ಲೆಗೊಳಗಾದವರಾಗಿದ್ದು, ಅಧ್ಯಕ್ಷೆ ಮಂಜುಳಮ್ಮ ಅವರ ಪತಿಯೂ ಆದ ಹಾಲಿ ಸದಸ್ಯ ತಮ್ಮನಾಯಕ ಹಲ್ಲೆ ನಡೆಸಿದವರು.

ವಿವರ: ಜಾಬಗೆರೆ ಗ್ರಾಪಂ ಕಟ್ಟಡದ ಮೊದಲ ಅಂತಸ್ತಿನ ಕಾಮಗಾರಿ ನಡೆಯುತ್ತಿದ್ದು, ಸೋಮವಾರ ಮಧ್ಯಾಹ್ನ 1.30ರಲ್ಲಿ ಉಪಾಧ್ಯಕ್ಷೆ ಜಯಮ್ಮ ಅವರು ಗ್ರಾಪಂಗೆ ತೆರಳಿ ಪರಿಶೀಲನೆ ನಡೆಸಿ ಕಾಮಗಾರಿ ಕಳಪೆಯಿಂದ ಕೂಡಿದೆ. ತಕ್ಷಣ ಕೆಲಸ ನಿಲ್ಲಿಸಿ. ಇಲ್ಲದಿದ್ದರೇ ನಿಮ್ಮ ಮೇಲೆ ಕ್ರಮ ಕೈಗೊಳ್ಳಲಾಗುವುದು ಎಂದು ಪಿಡಿಓ ಮೀನಾಕ್ಷಮ್ಮ ಅವರಿಗೆ ತಿಳಿಸಿದ್ದಾರೆ. ಈ ವೇಳೆ ಕಚೇರಿಯಲ್ಲೇ ಕುಳಿತ್ತಿದ್ದ ಗ್ರಾಪಂ ಅಧ್ಯಕ್ಷೆ ಮಂಜುಳಮ್ಮ ಅವರ ಪತಿಯೂ ಆದ ಹಾಲಿ ಸದಸ್ಯ ತಿಮ್ಮನಾಯಕ ಜಯಮ್ಮ ಅವರ ಮಾತಿಗೆ ವಿರೋಧ ವ್ಯಕ್ತಪಡಿಸಿ ಇದನ್ನೆಲ್ಲಾ ಕೇಳಲು ನೀನ್ಯಾರು. ಇಲ್ಲಿ ನಿಮ್ಮದೇ ದರ್ಬಾರ್ ಆಗಿದೆ. ಗ್ರಾಪಂಗೆ ನನ್ನ ಪತ್ನಿಯೇ ಅಧ್ಯಕ್ಷೆ. ನಮ್ಮದೇ ಅಧಿಕಾರ. ಉಪಾಧ್ಯಕ್ಷರಿಗೆ ಯಾವುದೇ ಅಧಿಕಾರ ಇಲ್ಲ ಎಂದು ಅವಾಚ್ಯ ಶಬ್ದಗಳಿಂದ ನಿಂದಿಸಿ ಎಳೆದಾಡಿ ಹಲ್ಲೆ ನಡೆಸಿ ಕೆಳಕ್ಕೆ ತಳ್ಳಿದ್ದಾರೆ. ಕೆಳಕ್ಕೆ ಬಿದ್ದ ರಭಸಕ್ಕೆ ಉಪಾಧ್ಯಕ್ಷೆ ಜಯಮ್ಮ ಅವರ ಎಡ ಭುಜದ ಮೂಳೆ ಮುರಿದಿದೆ. ಪರಿಣಾಮ ತೀವ್ರ ನೋವಿನಿಂದ ಒದ್ದಾಡುತ್ತಿದ್ದ ಜಯಮ್ಮಳನ್ನು ಪುತ್ರ ನಾಗೇಂದ್ರ ನಾಯಕ ಹುಣಸೂರಿನ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಿದ್ದಾರೆ.ಈ ಸಂಬಂಧ ಹುಣಸೂರು ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆಸ್ಪತ್ರೆಗೆ ಭೇಟಿ ನೀಡಿದ ಪೊಲಿಸರು ಜಯಮ್ಮ ಅವರಿಂದ ಮಾಹಿತಿ ಪಡೆದು ಮುಂದಿನ ಕ್ರಮ ಕೈಗೊಂಡಿದ್ದಾರೆ.



ಸರಗೂರು ಪೊಲೀಸ್ ಠಾಣೆ ನೂತನ ಎಸ್‌ಐ ಆಗಿ ಅಧಿಕಾರ ಸ್ವೀಕರಿಸಿದ ಮಧು ಅವರನ್ನು ಠಾಣೆ ಸಿಬ್ಬಂದಿ ಅಭಿನಂದಿಸಿದರು. ಈ ವೇಳೆ ಸಿಬ್ಬಂದಿಗಳಾದ ನಾಗನಾಯಕ, ಇಮ್ರಾನ್ ಅಹಮದ್, ಶೋಭ, ಮಹದೇವಮ್ಮ, ಶಿವರಾಜು, ದೇವರಾಜು, ಆನಂದ್, ರಾಕೇಶ್ ಇನ್ನಿತರರಿದ್ದರು.

ರಾಜಶೇಖರ್ ನಿಧನ



ಬೆಟ್ಟದಪುರ, ಫೆ.12– ಗ್ರಾಮದ ನಿವಾಸಿ ರಾಜಶೇಖರ್(67) ಸೋಮವಾರ ಮಧ್ಯಾಹ್ನ ನಿಧನರಾದರು. ಮೃತರು ಪತ್ನಿ ರತ್ನಮ್ಮ, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮಂಗಳವಾರ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮುಜೀಬ್



ಸರಗೂರು, ಫೆ.12– ಪಟ್ಟಣದ ಸ್ವಾಗತ್ ಟೈಲರ್ ಮಾಲೀಕ ಹಾಗೂ ಕಾಂಗ್ರೆಸ್ ಮುಖಂಡ ಮುಜೀಬ್(58) ಭಾನುವಾರ ರಾತ್ರಿ ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಪಟ್ಟಣದ ಖಬರಸ್ತಾನ್‌ದಲ್ಲಿ ಸೋಮವಾರ ಸಂಜೆ ಅಂತ್ಯಕ್ರಿಯೆ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಬ್ಯಾಂಕ್ ಗೋವಿಂದರಾಜು



ಭೇರ್ಯ, ಫೆ.12– ಮೂಲತಃ ಕೆ.ಆರ್.ನಗರ ತಾಲೂಕಿನ ಮಿರ್ಲೆ ಗ್ರಾಮದ ನಿವಾಸಿ, ಮೈಸೂರಿನ ಹಿನಕಲ್‌ನಲ್ಲಿ ನೆಲೆಸಿದ್ದ ಬ್ಯಾಂಕ್ ಗೋವಿಂದರಾಜು (73) ಭಾನುವಾರ ರಾತ್ರಿ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಹಿನಕಲ್ ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಶಾರದಮ್ಮ



ತಿ.ನರಸೀಪುರ ಫೆ.12– ತಾಲೂಕಿನ ಉಕ್ಕಲಗೆರೆ ಗ್ರಾಪಂ ಮಾಜಿ ಸದಸ್ಯರೂ ಆದ ರಾಜು ಅವರ ಪತ್ನಿ ಅಂಗನವಾಡಿ ಶಿಕ್ಷಕಿ ಶಾರದಮ್ಮ (45) ಭಾನುವಾರ ರಾತ್ರಿ ನಿಧನರಾದರು. ಮೃತರು ಓರ್ವ ಪುತ್ರ ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸ್ವಗ್ರಾಮ ಉಕ್ಕಲಗೆರೆ ಗ್ರಾಮದಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ನಾಳೆ ವಿದ್ಯುತ್ ವ್ಯತ್ಯಯ

ಹಿರೀಕ್ಯಾತನಹಳ್ಳಿ, ಫೆ.12– ಗಾವಡಗೆರೆ, ಹೊಸೂರು ಗೇಟ್‌ನ 66/11 ಕೆವಿ ವಿದ್ಯುತ್ ಉಪ ಕೇಂದ್ರಗಳಲ್ಲಿ ತ್ರೈಮಾಸಿಕ ಕಾರ್ಯ ಹಮ್ಮಿಕೊಂಡಿರುವುದರಿಂದ ಫೆ.14ರಂದು ಬೆಳಗ್ಗೆ 10ರಿಂದ ಸಂಜೆ 6 ಗಂಟೆವರೆಗೆ ಗಾವಡಗೆರೆ, ಶಿರೇನಹಳ್ಳಿ, ಜಾಬಗೆರೆ, ಹಿರೀಕ್ಯಾತನಹಳ್ಳಿ, ತೊಂಡಾಳು, ಬಿಳಿಗೆರೆ, ಮೈಲಾಂಬೂರು, ಚಿಟ್ಟಕ್ಯಾತನಹಳ್ಳಿ, ಹೆಜ್ಜೊಡ್ಲು, ಶಂಕರೇಗೌಡನಕೊಪ್ಪಲು, ಲಕ್ಕನಕೊಪ್ಪಲು, ಉಂಡವಾಡಿ, ಮುಳ್ಳೂರು, ಕಂತೇಗೌಡನಕೊಪ್ಪಲು, ಹೊಸೂರ್ ಗೇಟ್, ಆಜಾದ್ ನಗರ, ಚಿಕ್ಕ ಹುಣಸೂರು, ಗೋವಿಂದನಹಳ್ಳಿ, ಉಮ್ಮತ್ತೂರು, ಪಾಲ, ಪೆಂಜಹಳ್ಳಿ, ಗುರುಪುರ, ಪಕ್ಷಿರಾಜಪುರ, ಟಿಬೆಟ್ ಕ್ಯಾಂಪ್, ಬಲ್ಲೇನಹಳ್ಳಿ, ಚೌಡಿಕಟ್ಟೆ, ವೀರನಹೊಸಹಳ್ಳಿ, ಸಿದ್ದಲಿಂಗಪುರ, ವಾರಂಚಿ, ಕೂಡ್ಲೂರು, ಬೀರನಹಳ್ಳಿ, ತಟ್ಟೆಕೆರೆ ಸೇರಿದಂತೆ ಸುತ್ತಮುತ್ತಲ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಪ್ರಕಟಣೆ ತಿಳಿಸಿದೆ.

ತಿ.ನರಸೀಪುರದಲ್ಲಿ ಸಂವಿಧಾನ ಜಾಗೃತಿ ಜಾಥಾಕ್ಕೆ ಅದ್ದೂರಿ ಸ್ವಾಗತ

• ಅಂಬೇಡ್ಕರ್ ಸ್ತಬ್ಧಚಿತ್ರಕ್ಕೆ ಪುಷ್ಪಾರ್ಚನೆ • ಜಾಥಾದಲ್ಲಿ ವಿವಿಧ ಇಲಾಖೆ ಅಧಿಕಾರಿಗಳು ಭಾಗಿ



ತಿ.ನರಸೀಪುರಕ್ಕೆ ಆಗಮಿಸಿದ ಸಂವಿಧಾನ ಜಾಗೃತಿ ಜಾಥಾವನ್ನು ಸ್ವಾಗತಿಸಲಾಯಿತು.

ತಿ.ನರಸೀಪುರ, ಫೆ12– ಭಾರತದ ಸಂವಿಧಾನ ಅಂಗೀಕಾರಗೊಂಡು 75 ವರ್ಷ ಪೂರ್ಣಗೊಂಡ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ಸಂವಿಧಾನದ ಮಹತ್ವದ ಬಗ್ಗೆ ಜಾಗೃತಿ ಮೂಡಿಸಲು ಕೈಗೊಂಡಿರುವ ಸಂವಿಧಾನ ಜಾಗೃತಿ ಜಾಥಾ ಸ್ತಬ್ಧಚಿತ್ರ ಸೋಮವಾರ ಪಟ್ಟಣ ಪ್ರವೇಶಿಸಿತು.

ನಂಜನಗೂಡು ರಸ್ತೆಯ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯದ ಎದುರು ತಹಸೀಲ್ದಾರ್ ಟಿ.ಜೆ.ಸುರೇಶ್ ಆಚಾರ್, ಇಓ ಕೃಷ್ಣ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಭೀಮರಾಯ ವಡ್ಡರ, ತಾಪಂ ಕಾರ್ಯ ನಿರ್ವಹಣಾಧಿಕಾರಿ ಸಿ.ಕೃಷ್ಣ, ಪುರಸಭೆ ಮುಖ್ಯಾಧಿಕಾರಿ ವಸಂತಕುಮಾರಿ ಸೇರಿದಂತೆ ಇನ್ನಿತರರು ಡಾ.ಬಿ.ಆರ್.ಅಂಬೇಡ್ಕರ್ ಸ್ತಬ್ಧಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಜಾಥಾಕ್ಕೆ ಅದ್ದೂರಿ ಸ್ವಾಗತ ಕೋರಿದರು. ಬಳಿಕ ಜಾಥಾ ಪಟ್ಟಣದ ಮಿನಿ ವಿಧಾನಸೌಧಕ್ಕೆ ಆಗಮಿಸಿತು. ಈ ವೇಳೆ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಸಂವಿಧಾನ ಪೀಠಿಕೆ ಬೋಧಿಸಲಾಯಿತು.

ಜಾಥಾದಲ್ಲಿ ಮಹಿಳೆಯರು ಪೂರ್ಣಕುಂಭದೊಂದಿಗೆ ಸಾಗಿದರೇ, ಡೊಳ್ಳು ಕುಣಿತ, ಬೊಂಬೆಯಾಟ, ವಾದ್ಯಮೇಳ ಇದ್ದವು. ಶಾಲಾ ಮಕ್ಕಳು ಡಾ.ಬಿ.ಆರ್. ಅಂಬೇಡ್ಕರ್ ಸಹಿತ ವಿವಿಧ ನಾಯಕರ ವೇಷ ಭೂಷಣ ಧರಿಸಿ ಗಮನ ಸೆಳೆದರು. ವಿವಿಧ ಶಾಲಾ ಮಕ್ಕಳು, ಆಶಾ, ಅಂಗನವಾಡಿ ಕಾರ್ಯಕರ್ತರು, ಪೌರ ಕಾರ್ಮಿಕರು, ವಿವಿಧ ಇಲಾಖೆ ಅಧಿಕಾರಿಗಳು, ಜನಪ್ರತಿನಿಧಿಗಳು ಹೆಜ್ಜೆ ಹಾಕಿದರು. ಶಾಲಾ ಮಕ್ಕಳ ವೇಷಭೂಷಣ ಜಾಥಾಕ್ಕೆ ಮೆರಗು ನೀಡಿತು. ವಿವಿಧ ಸಂಘಟನೆಗಳ ಪ್ರಮುಖರು, ಗ್ರಾಮಸ್ಥರು ಜಾಥಾದಲ್ಲಿ ಭಾಗಿಯಾದರು. ಪ್ರಮುಖ ಬೀದಿಗಳಲ್ಲಿ ಜಾಥಾ ಸಂಚರಿಸಿ ಅರಿವು ಮೂಡಿಸಿತು. ಜಾಗೃತಿ ಜಾಥಾ ಪಟ್ಟಣ ಪ್ರವೇಶಿಸುವ ಹಿನ್ನೆಲೆಯಲ್ಲಿ ಪಟ್ಟಣವನ್ನು ತಳಿರು ತೋರಣಗಳಿಂದ ಸಿಂಗರಿಸಲಾಗಿತ್ತು. ಇಡೀ ಪಟ್ಟಣದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.


ವೇದಿಕೆ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಅರಗು ಮತ್ತು ಬಣ್ಣ ಇಲಾಖೆ ಜನರಲ್ ಮ್ಯಾನೇಜರ್ ಹರಕುಮಾರ್ ಸಮಾನತೆ, ಮಾನವತಾವಾದ, ಸಮಾಜವಾದ ಹಾಗೂ ನಿರಪೇಕ್ಷೆಗಳಂತಹ ಮೌಲ್ಯಗಳನ್ನು ಸಂವಿಧಾನ ಜನರಿಗೆ ಕೊಡುಗೆ ನೀಡಿದೆ. ಅಂಬೇಡ್ಕರ್ ಕೋಟ್ಯಾಂತರ ಭಾರತೀಯರನ್ನು ಒಂದು ವ್ಯವಸ್ಥೆಯಲ್ಲಿ ತರುವ ಮೂಲಕ ಅತ್ಯುತ್ತಮ ಪ್ರಜಾತಂತ್ರ ರೂಪಿಸಲು ಸಂವಿಧಾನವನ್ನು ಕಾಣಿಕೆ ನೀಡಿದ್ದಾರೆ. ಸಂವಿಧಾನದಲ್ಲಿ ಜಾತಿ, ಧರ್ಮ, ಭಾಷೆ, ಸಂಸ್ಕೃತಿ ಗೌರವಿಸುವ ಜೊತೆಗೆ ಅನ್ಯರಿಗೆ ನೋವಾಗದಂತೆ ಸರ್ವರಿಗೂ ಧರ್ಮ, ಜಾತಿ, ಆಚಾರ, ವಿಚಾರಗಳನ್ನು ಆಚರಣೆ ಮಾಡಲು ಭಾರತದ ಸಾರ್ವಭೌಮತ್ವ ಎತ್ತಿ ಹಿಡಿದಿದೆ ಎಂದರು.

ನಂತರ ಸಂವಿಧಾನ ಜಾಗೃತಿ ಜಾಥಾ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಕರೋಹಟ್ಟಿ ಗ್ರಾಮಕ್ಕೆ ತೆರಳಿತು. ಶಾಲಾ ವಿದ್ಯಾರ್ಥಿಗಳು, ಇಲಾಖಾಧಿಕಾರಿಗಳು ಹಾಗೂ ವಿವಿಧ ಸಂಘಟನೆಗಳ ಸದಸ್ಯರು ಜಾಥಾದೊಂದಿಗೆ ಮೆರವಣಿಗೆಯಲ್ಲಿ ತೆರಳಿ ಕೊಳ್ಳೇಗಾಲ ಮುಖ್ಯ ರಸ್ತೆ ಬಳಿ ಬೀಳ್ಕೊಟ್ಟರು.

ಈ ವೇಳೆ ಹೇಮಂತ್ ರಾಜ್, ಬಿಇಓ ಶೋಭಾ, ಕೃಷಿ ಇಲಾಖೆ ಸಹಾಯಕ ನಿರ್ದೇಶಕಿ ಸುಹಾಸಿನಿ, ಅಂಬೇಡ್ಕರ್ ಅಭಿವೃದ್ಧಿ ಸಂಘದ ಅಧ್ಯಕ್ಷ ಮಹದೇವಯ್ಯ, ಬಾಬು ಜಗಜೀವನ್ ಸಂಘದ ಅಧ್ಯಕ್ಷ ಪುಟ್ಟಯ್ಯ, ತಾಪಂ ಮಾಜಿ ಉಪಾಧ್ಯಕ್ಷ ಬಿ.ಮರಯ್ಯ, ವಿಚಾರವಾದಿ ಕೆ.ಎನ್.ಪ್ರಭುಸ್ವಾಮಿ. ಆಲಗೂಡು ಶಿವಕುಮಾರ್, ಬಿಎಸ್‌ಪಿ ಜಿಲ್ಲಾಧ್ಯಕ್ಷ ಪುಟ್ಟಸ್ವಾಮಿ, ಪುರಸಭಾ ಸದಸ್ಯರಾದ ತುಂಬಲ ಪ್ರಕಾಶ್, ಮಂಜುನಾಥ್, ಮೂಗೂರು ಸಿದ್ದರಾಜು, ಕುಕ್ಕೂರು ಪ್ರಸನ್ನ, ಮನ್ಸೂರ್ ಅಲಿ, ಹೆಚ್.ಡಿ. ಮಾದಪ್ಪ, ನಂಜುಂಡಯ್ಯ, ಸೋಮಯ್ಯ, ಪುಟ್ಟಮಲ್ಲಯ್ಯ, ಮಹದೇವಯ್ಯ,ಸೋಸಲೆ ರಾಜಶೇಖರ್,ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಎಂ.ವಿ.ಶಿವಶಂಕರ್ ಮೂರ್ತಿ, ಉಪನ್ಯಾಸಕ ಮೂಗೂರು ಕುಮಾರಸ್ವಾಮಿ ಮತ್ತಿತರರಿದ್ದರು.

ಅಧಿಕಾರಿಗಳಲ್ಲಿ ಬದ್ಧತೆ, ದಕ್ಷತೆ ಕೊರತೆ; ನಲುಗಿದ ಮೈಸೂರು

ಸ್ವಚ್ಛತೆ, ಸಂಚಾರ ವ್ಯವಸ್ಥೆ ಹೀಗೆ ಎಲ್ಲವೂ ಮಾತಿಗೆ ಸೀಮಿತ



ಸಂಗ್ರಹ ಚಿತ್ರ

"ಅಧಿಕಾರಿಗಳು ಬದ್ಧತೆಯಿಂದ ಜವಾಬ್ದಾರಿ ನಿರ್ವಹಿಸಿದರೆ ಸುಧಾರಣೆ ಅಸಾಧ್ಯವಲ್ಲ. ಮನಸ್ಸು ಮಾಡಿದರೆ ಕೆಲವೇ ದಿನದಲ್ಲಿ ಮೈಸೂರಿನ ಚಿತ್ರಣವನ್ನೇ ಬದಲಿಸಬಹುದು. ಕಾಟಾಚಾರಕ್ಕೆ ಆದೇಶ, ನಿರ್ಣಯ ಮಾಡಿದರೆ ಏನೂ ಪ್ರಯೋಜನವಾಗುವುದಿಲ್ಲ. ಅನುಷ್ಠಾನ ಹಾಗೂ ಸಮರ್ಪಕ ನಿರ್ವಹಣೆಯಿಂದ ಮಾತ್ರ ಯಾವುದೇ ನಿರ್ಣಯ ಸಾಕಾರಗೊಳ್ಳಲು ಸಾಧ್ಯ. ಈ ಬಗ್ಗೆ ನಮ್ಮ ಅಧಿಕಾರಿಗಳು ಗಂಭೀರ ಚಿಂತನೆ ನಡೆಸಿ, ಸಾರ್ವಜನಿಕರ ಸಹಕಾರದೊಂದಿಗೆ ಸುಂದರ ಮೈಸೂರನ್ನು ಉಳಿಸಿಕೊಳ್ಳಬೇಕು.
– ರಾಮಪ್ರಸಾದ್, ಹಿರಿಯ ನಾಗರಿಕರು




ಸಂಗ್ರಹ ಚಿತ್ರ

ಮೈಸೂರು, ಫೆ.12(ಎಸ್‌ಬಿಡಿ)– ಮೈಸೂರಿನಲ್ಲಿ ಅಧಿಕಾರಿಗಳು ಕೈಗೊಳ್ಳುವ ಯಾವುದೇ ನಿರ್ಣಯಗಳು ನಿರ್ದಿಷ್ಟವೂ ಅಲ್ಲ, ಅವು ಸಮರ್ಪಕವಾಗಿ ಜಾರಿಯಾಗುವುದೂ ಇಲ್ಲ ಎಂಬುದಕ್ಕೆ ಹಲವು ನಿದರ್ಶನಗಳು ಕಂಡುಬರುತ್ತಿವೆ.

ಜನ ಜೀವನಕ್ಕೆ ತೊಂದರೆಯಾಗದಂತೆ ಕ್ರಮ ವಹಿಸುವುದು ತೆರಿಗೆ ಹಣದಲ್ಲಿ ವೇತನ ಪಡೆಯುತ್ತಿರುವ ಅಧಿಕಾರಿಗಳ ಪ್ರಮುಖ ಜವಾಬ್ದಾರಿ. ಆದರೆ ಅಧಿಕಾರಿಗಳು ಜನರ ಹಿತ ಕಾಯುವಲ್ಲಿ ನಿರ್ಲಕ್ಷ್ಯ ತಳೆದಿದ್ದಾರೆ. ತಾವೇ ಕೈಗೊಂಡ ನಿರ್ಣಯಗಳನ್ನು ಸಮರ್ಪಕವಾಗಿ ಜಾರಿಗೊಳಿಸಿ, ನಿರ್ವಹಣೆ ಮಾಡುವಲ್ಲಿ ವಿಫಲರಾಗಿದ್ದಾರೆ. ಇದರಿಂದ ಅಧಿಕಾರಿಗಳ ಯಾವುದೇ ಸೂಚನೆಗಳಿಗೆ ಕಿಂಚಿತ್ತೂ ಕಿಮ್ಮತ್ತಿಲ್ಲ ಎನ್ನುವಂತಾಗಿದೆ. ಕೇಳಿದ್ದನ್ನೇ ಕೇಳಿ ಜನ, ಸುಧಾರಣೆಯಾಗದ ವ್ಯವಸ್ಥೆ ಬಗ್ಗೆ ಬೇಸರಗೊಂಡಿದ್ದಾರೆ.

ನಗರದ ಸ್ವಚ್ಛತೆ, ಸೌಂದರ್ಯ, ರಸ್ತೆ ಸುರಕ್ಷತೆ, ಪರಿಸರ ಸಂರಕ್ಷಣೆ ದೃಷ್ಟಿಯಿಂದ ಮೈಸೂರು ನಗರ ಪಾಲಿಕೆ ಹಾಗೂ ಪೊಲೀಸ್ ಇಲಾಖೆ ಕೆಲವು ನಿರ್ಣಯಗಳನ್ನು ಘೋಷಿಸಿದ್ದವು. ಇದರಿಂದ ನಗರದಲ್ಲಿ ಏನಾದರೂ ಸುಧಾರಣೆ ಕಾಣಬಹುದೆಂಬ ನಿರೀಕ್ಷೆ ಸಾರ್ವಜನಿಕರಲ್ಲಿ ಗಟ್ಟಿಯಾಗಿತ್ತು. ಆದರೆ ಅಧಿಕಾರಿಗಳ ಎಚ್ಚರಿಕೆ ಮಾತುಗಳೆಲ್ಲಾ ಅಷ್ಟಕ್ಕೇ ಸೀಮಿತ, ಅದಕ್ಕೆ ಮೀರಿದ ಬದಲಾವಣೆ ನಿರೀಕ್ಷಿಸಲಾಗದು ಎಂಬ ವಾಸ್ತವ ಮನವರಿಕೆಯಾದ ಮೇಲೆ ವ್ಯವಸ್ಥೆಯನ್ನು ಶಪಿಸಿ, ಮೌನಕ್ಕೆ ಜಾರಿದ್ದಾರೆ.

ಫುಟ್‌ಪಾತ್ ತೆರವು: ಫುಟ್‌ಪಾತ್ ಒತ್ತುವರಿ ಹಾಗೂ ಅತಿಕ್ರಮಣ ತೆರವುಗೊಳಿಸಿ, ಪಾದಚಾರಿಗಳ ಸುಗಮ ಸಂಚಾರಕ್ಕೆ ಮುಕ್ತಗೊಳಿಸುವುದಾಗಿ ಅದೆಷ್ಟು ಬಾರಿ ಭರವಸೆ ನೀಡಿದ್ದಾರೋ ಲೆಕ್ಕಕ್ಕಿಲ್ಲ. ಸದ್ಯದಲ್ಲೇ ಕಾರ್ಯಾಚರಣೆ ಆರಂಭಿಸುತ್ತೇವೆ, ಪಾದಚಾರಿಗಳಿಗೆ ತೊಂದರೆ ಮಾಡುವವರ ವಿರುದ್ಧ ಕಾನೂನು ಕ್ರಮ ವಹಿಸಲಾಗುವುದು ಎಂದು ಖಡಕ್ ಎಚ್ಚರಿಕೆ ನೀಡಲಾಗಿತ್ತು. ಆದರೆ ಈವರೆಗೂ ಈ ನಿಟ್ಟಿನಲ್ಲಿ ಯಾವುದೇ ಕ್ರಮಗಳನ್ನು ಕೈಗೊಂಡಿಲ್ಲ. ಪರಿಣಾಮ ಫುಟ್‌ಪಾತ್‌ಗಳಲ್ಲಿ ತಳ್ಳುಗಾಡಿ ಇತರೆ ವಾಹನಗಳ ಸಂಖ್ಯೆ ದಿನೇ ದಿನೆ ಹೆಚ್ಚುತ್ತಲೇ ಇದೆ. ಕೆಲವೆಡೆ ಫುಟ್‌ಪಾತ್ ವಾಹನ ನಿಲುಗಡೆ ಸ್ಥಳವಾಗಿ ಪರಿವರ್ತನೆಯಾಗಿದೆ.

ಸಂಪೂರ್ಣ ಸ್ವಚ್ಛತೆ ಭರವಸೆ: ಪ್ರವಾಸಿ ಕೇಂದ್ರವಾಗಿರುವ ಮೈಸೂರಿನಲ್ಲಿ ಸ್ವಚ್ಛತೆ ಕಾಯ್ದುಕೊಳ್ಳುವುದು ಬಹಳ ಮುಖ್ಯ. ಆದರೆ ಸ್ವಚ್ಛತೆ ನಿರ್ವಹಣೆ ಕೆಲ ಪ್ರದೇಶಕ್ಕೆ ಪಾತ್ರ ಸೀಮಿತವಾದಂತಿದೆ. ಸ್ವಚ್ಛತೆಗೆ ಕಟ್ಟು ನಿಟ್ಟಿನ ಕ್ರಮ ಕೈಗೊಳ್ಳಲಾಗುವುದು. ಅನೈರ್ಮಲ್ಯಕ್ಕೆ ಕಾರಣರಾದವರಿಗೆ ದಂಡ ವಿಧಿಸಲಾಗುವುದು. ಅಂತಹವರಿಗೆ ಜೈಲು ಶಿಕ್ಷೆಗೂ ಅವಕಾಶಗಳಿವೆ ಎಂದು ಬೊಗಳೆ ಬಿಟ್ಟಿದ್ದರು. ಆದರೆ ನಗರದ ಸ್ವಚ್ಛತೆ ನಿರ್ವಹಣೆಯಲ್ಲಿ ಅಧಿಕಾರಿ ವರ್ಗ ಉಡಾಫೆಯಿಂದ ನಡೆದುಕೊಳ್ಳುತ್ತಿದೆ. ಸ್ವಚ್ಛತೆ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಯಾವುದೇ ಗಂಭೀರ ಪ್ರಯತ್ನ ನಡೆದಿಲ್ಲ.

ಪ್ಲಾಸ್ಟಿಕ್ ಬಳಕೆಗೆ ಕಡಿವಾಣ: ಪರಿಸರಕ್ಕೆ ಮಾರಕವಾಗುವ ಪ್ಲಾಸ್ಟಿಕ್ ನಿಯಂತ್ರಿಸುವಲ್ಲಿ ಅಧಿಕಾರಿಗಳು ಸೋತಿದ್ದಾರೆ. ಏಕ ಬಳಕೆ ಪ್ಲಾಸ್ಟಿಕ್ ಮೇಲೆ ಸಮರ ಸಾರಿದ್ದೇವೆ. ಇನ್ನು ಮುಂದೆ ಯಾವುದೇ ಕಾರಣಕ್ಕೂ ಪ್ಲಾಸ್ಟಿಕ್ ಮಾರಾಟ ಹಾಗೂ ಬಳಕೆಗೆ ಅವಕಾಶ ಕೊಡುವುದಿಲ್ಲ ಎಂದು ವ್ಯಾಪಾರಿಗಳಿಗೆ ಎಚ್ಚರಿಕೆ ನೀಡಿದರು, ಜನತೆಗೆ ಅಭಯ ನೀಡಿದರು. ಪ್ರಮುಖ ವಾಣಿಜ್ಯ ರಸ್ತೆಗಳ ಮಳಿಗೆಗಳ ಮೇಲೆ ದಾಳಿ ನಡೆಸಿ, ಟನ್ ಗಟ್ಟಲೆ ಪ್ಲಾಸ್ಟಿಕ್ ವಶಪಡಿಸಿಕೊಂಡು ದಂಡ ವಸೂಲಿ ಮಾಡಿದರು. ಆದರೆ ಪ್ಲಾಸ್ಟಿಕ್ ಮಾರಾಟ ಹಾಗೂ ಬಳಕೆ ಸ್ವಲ್ಪ ಮಟ್ಟಿಗೂ ಕಡಿಮೆಯಾಗಿಲ್ಲ. ಬದಲಾಗಿ ದಿನೇ ದಿನೆ ಪ್ಲಾಸ್ಟಿಕ್ ಸಮಸ್ಯೆ ಬಿಗಡಾಯಿಸುತ್ತಿದೆ. ಅಧಿಕಾರಿಗಳ ಎಚ್ಚರಿಕೆಗೆ ಕಿಮ್ಮತ್ತು ನೀಡದ ವ್ಯಾಪಾರಿಗಳು, ಹೆಚ್ಚು ಹೆಚ್ಚು ಪ್ಲಾಸ್ಟಿಕ್ ಮಾರಾಟದಿಂದ ಲಾಭ ಗಳಿಸುತ್ತಿದ್ದಾರೆ. ಪರಿಶೀಲನೆ ಹಾಗೂ ಜುಜುಬಿ ದಂಡ ಸಂಗ್ರಹ ಮೀರಿ ಮತ್ತಾವುದೇ ಪರಿಣಾಮಕಾರಿ ಕ್ರಮಕ್ಕೆ ಅಧಿಕಾರಿಗಳು ತಲೆಕೆಡಿಸಿಕೊಂಡಿಲ್ಲ.

ಎಂಜಿ ರಸ್ತೆ ಮುಕ್ತವಾಗಲಿಲ್ಲ: ಸದಾ ವಾಹನ ಸಂಚಾರ ಹಾಗೂ ಜನರಿಂದ ಗಿಜಿಗುಡುವ ಮಹಾತ್ಮ ಗಾಂಧಿ(ಎಂಜಿ) ರಸ್ತೆಯ ಸ್ಥಿತಿಯೂ ಇದಕ್ಕೆ ಹೊರತಾಗಿಲ್ಲ. ಇಲ್ಲಿನ ತರಕಾರಿ ಮಾರುಕಟ್ಟೆ ಬಳಿ ಯಾವುದೇ ವಾಹನ ನಿಲುಗಡೆಯನ್ನು ಸಂಪೂರ್ಣವಾಗಿ ನಿರ್ಬಂಧಿಸುತ್ತೇವೆ. ಇನ್ನು ಮುಂದೆ ಈ ರಸ್ತೆಯಲ್ಲಿ ಸುಗಮ ಸಂಚಾರಕ್ಕೆ ಯಾವುದೇ ಅಡ್ಡಿಯಾಗುವುದಿಲ್ಲ ಎಂದು ಪೊಲೀಸರು ಭರವಸೆ ನೀಡಿದ್ದರು. ಆದರೆ ಇಲ್ಲಿ ಅಡ್ಡಾದಿಡ್ಡಿ ವಾಹನ ನಿಲುಗಡೆ ತಪ್ಪಿಲ್ಲ. ರಸ್ತೆಯ ಕಿರಿದಾದ ಜಾಗದಲ್ಲಿ ಸಂಚರಿಸುವ ವಾಹನಗಳು ಹಾಗೂ ನಿಲ್ಲಿಸಿರುವ ವಾಹನಗಳ ನಡುವೆ ಜನ ಜೀವ ಬಿಗಿಹಿಡಿದುಕೊಂಡು ಆತಂಕದಲ್ಲೇ ಓಡಾಡುವ ದುಸ್ಥಿತಿ ಬದಲಾಗಿಲ್ಲ. ವಾಹನ ಸಂಚಾರ ಸುಗಮವಾಗಿಲ್ಲ, ಬದಲಾಗಿ ಮತ್ತಷ್ಟು ದುಸ್ತರವಾಗಿದೆ.

ಹೆಲ್ಮೆಟ್ ಕಡ್ಡಾಯವಾಗಲಿಲ್ಲ: ದ್ವಿಚಕ್ರ ವಾಹನ ಸವಾರರು ಜೀವ ರಕ್ಷಕ ಹೆಲ್ಮೆಟ್ ಧರಿಸಬೇಕು. ಇಲ್ಲವಾದರೆ ಕಠಿಣ ಕ್ರಮ ಕೈಗೊಳ್ಳುತ್ತೇವೆ ಎಂಬ ಖಡಕ್ ಎಚ್ಚರಿಕೆ ಹುಸಿಯಾಗಿದೆ. ಬಹುತೇಕ ಸವಾರರು ಹೆಲ್ಮೆಟ್ ಧರಿಸುವುದನ್ನೇ ಮರೆತಿದ್ದಾರೆ. ಬಳಸಿದ ವಾಹನಗಳ ವ್ಯಾಪಾರಿಗಳು ರಸ್ತೆ ಬದಿಯಲ್ಲೇ ಸಾಲಾಗಿ ವಾಹನಗಳನ್ನು ನಿಲ್ಲಿಸದಂತೆ ಬ್ರೇಕ್ ಹಾಕುವಲ್ಲೂ ಪೊಲೀಸರು ವಿಫಲರಾಗಿದ್ದಾರೆ. ರಸ್ತೆ ಬದಿಗೆ ಕಟ್ಟಡ ತ್ಯಾಜ್ಯ ಸುರಿಯುವುದನ್ನು ನಿಲ್ಲಿಸಲು ಪಾಲಿಕೆ ಅಧಿಕಾರಿಗಳಿಂದ ಸಾಧ್ಯವಾಗಿಲ್ಲ. ಹೀಗೆ ವಿಚಾರದಲ್ಲಿ ಅಧಿಕಾರಿಗಳ ಹಾಗೂ ಪೊಲೀಸರು ಹೊರಡಿಸಿದ್ದ ಕಟ್ಟಾದೇಶಗಳು ಫಲಪ್ರದವಾಗಿಲ್ಲ. ದಿನ ಕಳೆದಂತೆ ಎಲ್ಲವೂ ಹುಸಿ ಎಚ್ಚರಿಕೆಯಷ್ಟೇ ಎಂಬುದು ಸಾಬೀತಾಗುತ್ತಿದೆ.

ಮೈಸೂರಲ್ಲಿ ಎಲ್ಲವೂ ಅವ್ಯವಸ್ಥೆ: ಅಧಿಕಾರಿಗಳ ಈ ನಿರ್ಲಕ್ಷ್ಯತೆ ಹಾಗೂ ಬೇಜವಬ್ದಾರಿಯಿಂದಾಗಿ ಮೈಸೂರು ಒಂದು ರೀತಿಯ ಅವ್ಯವಸ್ಥಿತ ನಗರಿಯಾಗಿ ಪರಿವರ್ತನೆಯಾಗುತ್ತಿದೆ. ಯಾವುದೇ ಎಚ್ಚರಿಕೆಯನ್ನೂ ಗಂಭೀರವಾಗಿ ಪರಿಗಣಿಸುವ ಪರಿಸ್ಥಿತಿ ಇಲ್ಲವಾಗಿದೆ. ರಾಜಾರೋಷವಾಗಿ ಕಾನೂನು, ನಿಯಮ ಧಿಕ್ಕರಿಸುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಮುಖ್ಯ ಮಂತ್ರಿಗಳ ತವರು ಮೈಸೂರಿನಲ್ಲಿ ಕಾನೂನು ಸುವ್ಯವಸ್ಥೆಯಿಂದ ಹಿಡಿದು ನಾಗರಿಕ ಸೌಕರ್ಯದವರೆಗೂ ಎಲ್ಲವೂ ಅಸ್ತವ್ಯಸ್ಥ ಎಂಬ ಅಪಹಾಸ್ಯಕ್ಕೆ ದಾರಿಯಾದಂತಾಗಿದೆ.

ನೀರಿನ ಸಂಪಿಗೆ ಬಿದ್ದು ಐದು ವರ್ಷದ ಬಾಲಕ ಸಾವು



ಮೈಸೂರು, ಫೆ.12(ಎಂಕೆ)– ಐದು ವರ್ಷದ ಬಾಲಕ ನೀರಿನ ಸಂಪ್‌ಗೆ ಬಿದ್ದು ಸಾವನ್ನಪ್ಪಿರುವ ಘಟನೆ ನಂಜನಗೂಡು ತಾಲೂಕಿನ ಅಹಲ್ಯಾ ಗ್ರಾಮದಲ್ಲಿ ಸೋಮವಾರ ರಾತ್ರಿ ಸಂಭವಿಸಿದೆ. ಇಲ್ಲಿನ ನಿವಾಸಿ ಬೀರಪ್ಪ ಹಾಗೂ ಶಶಿಕಲಾ ದಂಪತಿಯ ಪುತ್ರ ಮಿಥಿನ್(5) ನೀರಿನ ಸಂಪ್‌ಗೆ ಬಿದ್ದು ಸಾವನ್ನಪ್ಪಿದ ಬಾಲಕ. ಸೋಮವಾರ ರಾತ್ರಿ ಸುಮಾರು 9 ಗಂಟೆ ವೇಳೆ ಮನೆಯ ಹಿಂದಿರುವ ನೀರಿನ ಸಂಪ್ ಮೇಲೆ ಎಂದಿನಂತೆ ಸೈಕಲ್ ನಿಲ್ಲಿಸಲು ಹೋದಾಗ ಕತ್ತಲೆಯಲ್ಲಿ ಕಾಣದೆ ಮುಚ್ಚಳ ತೆರೆದಿದ್ದ ನೀರಿನ ಸಂಪ್‌ನಲ್ಲಿ ಬಿದ್ದು ಸಾವನ್ನಪ್ಪಿದ್ದಾನೆ ಎಂದು ಆತನ ಸಂಬಂಧಿಕರು 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ. ಮನೆ ಹಿಂದೆ ಸಂಪ್ ಇದ್ದು, ಯಾರೋ ಸಂಪ್ ಮುಚ್ಚಳ ತೆರೆದಿದ್ದಾರೆ. ಸೈಕಲ್ ನಿಲ್ಲಿಸಲು ಹೋದ ವೇಳೆ ಕರೆಂಟ್ ಹೋದಾಗ ಕತ್ತಲೆಯಲ್ಲಿ ಕಾಣದೆ ಬಾಲಕ ನೀರಿಗೆ ಬಿದ್ದಿದ್ದಾನೆ. ವಿಷಯ ತಿಳಿದ ಕೂಡಲೇ ಪ್ರಜ್ಞಾಹೀನ ಸ್ಥಿತಿಯಲ್ಲಿದ್ದ ಬಾಲಕನನ್ನು ಮೈಸೂರಿನ ಸುಯೋಗ್ ಆಸ್ಪತ್ರೆಗೆ ಕರೆದುಕೊಂಡರು ಬಂದರೂ ಬಾಲಕನನ್ನು ಪರಿಶೀಲಿಸಿದ ವೈದ್ಯರು ಬಾಲಕ ಈಗಾಗಲೇ ಮೃತ ಪಟ್ಟಿದ್ದಾನೆಂದು ತಿಳಿಸಿದರು ಎಂದು ಮಾಹಿತಿ ನೀಡಿದ್ದಾರೆ. ಈ ಸಂಬಂಧ ಯಾವುದೇ ಪ್ರಕರಣ ದಾಖಲಾಗಿಲ್ಲ.

ಇಂದು ಮೈಸೂರಿಗೆ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ಪಿ.ಎಸ್.ದಿನೇಶ್‌ಕುಮಾರ್

- ವರ್ಚುವಲ್ ಮೂಲಕ ಹುಣಸೂರು, ಪಿರಿಯಾಪಟ್ಟಣ ನ್ಯಾಯಾಧೀಶರ ವಸತಿ ಗೃಹ ಉದ್ಘಾಟನೆ
- ಮಳಲವಾಡಿ ನ್ಯಾಯಾಲಯಗಳ ಸಮುಚ್ಚಯದಲ್ಲಿ ಹೆಚ್ಚುವರಿ ಲಿಫ್ಟ್‌ಗಳ ಸೇವೆಗೆ ಚಾಲನೆ



ಮೈಸೂರು, ಫೆ.12(ಎಸ್‌ಬಿಡಿ)– ಹುಣಸೂರು ಮತ್ತು ಪಿರಿಯಾಪಟ್ಟಣದ ನ್ಯಾಯಾಧೀಶರ ವಸತಿ ಗೃಹಗಳನ್ನು ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ಪಿ.ಎಸ್.ದಿನೇಶ್ ಕುಮಾರ್ ಅವರು ಮೈಸೂರು ಜಿಲ್ಲಾ ನ್ಯಾಯಾಲಯಗಳ ಆವರಣದಲ್ಲಿ ಮಂಗಳವಾರ ಸಂಜೆ 6ಕ್ಕೆ ವರ್ಚುವಲ್ ಮೂಲಕ ಉದ್ಘಾಟಿಸಲಿದ್ದಾರೆ.

ಮೈಸೂರು ಜಿಲ್ಲಾ ನ್ಯಾಯಾಂಗ ಇಲಾಖೆ, ಲೋಕೋಪಯೋಗಿ ಇಲಾಖೆ ಮತ್ತು ಮೈಸೂರು ಜಿಲ್ಲಾ ವಕೀಲರ ಸಂಘದ ಸಹಯೋಗದಲ್ಲಿ ಆಯೋಜಿಸಿರುವ ಕಾರ್ಯಕ್ರಮದಲ್ಲಿ ವರ್ಚುವಲ್ ಮೂಲಕ ನೂತನ ವಸತಿ ಗೃಹಗಳನ್ನು ಉದ್ಘಾಟಿಸಿದ ನಂತರ ಮೈಸೂರು ಜಿಲ್ಲಾ ನ್ಯಾಯಾಂಗ ಸಂಘದ ಕಟ್ಟಡ ಮತ್ತು ಮಳಲವಾಡಿ ಹೊಸ ನ್ಯಾಯಾಲಯಗಳ ಸಂಕೀರ್ಣದಲ್ಲಿ ನಿರ್ಮಿಸಿರುವ ಎರಡು ಹೆಚ್ಚುವರಿ ಲಿಫ್ಟ್‌ಗಳ ಸೇವೆಗೆ ವಿದ್ಯುಕ್ತವಾಗಿ ಚಾಲನೆ ನೀಡಲಿದ್ದಾರೆ.

ಕಾರ್ಯಕ್ರಮದಲ್ಲಿ ಹೈಕೋರ್ಟ್ ನ್ಯಾಯಮೂರ್ತಿಗಳಾದ ಕೆ.ಸೋಮಶೇಖರ್, ಶ್ರೀನಿವಾಸ್ ಹರೀಶ್‌ಕುಮಾರ್, ಟಿ.ಜಿ. ಶಿವಶಂಕರೇಗೌಡ, ಮೈಸೂರು ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಶ್ರೀಮತಿ ಪ್ರಭಾವತಿ ಎಂ.ಹಿರೇಮಠ್, ಮೈಸೂರು ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಂ.ಮಹದೇವಸ್ವಾಮಿ, ಉಪಾಧ್ಯಕ್ಷ ಪುಟ್ಟಸಿದ್ದೇಗೌಡ, ಕಾರ್ಯದರ್ಶಿ ಎಸ್.ಉಮೇಶ್, ಅಧೀಕ್ಷಕ ಇಂಜಿನಿಯರ್ ಆರ್.ವಿನಯ್ ಕುಮಾರ್ ಹಾಗೂ ಕಾರ್ಯಕಾರಿ ಸಮಿತಿ ಸದಸ್ಯರು ಭಾಗವಹಿಸಲಿದ್ದಾರೆ.

ಸಿಜೆ ಬಗ್ಗೆ ಸಂಕ್ಷಿಪ್ತ ಮಾಹಿತಿ: ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ಪಿ.ಎಸ್.ದಿನೇಶ್ ಕುಮಾರ್ ಅವರು 1962 ಫೆ.25ರಂದು ಜನಿಸಿದ್ದು, ತಮ್ಮ ವಿದ್ಯಾಭ್ಯಾಸ ವನ್ನು ಬೆಂಗಳೂರಿನ ನ್ಯಾಷನಲ್ ಹೈಸ್ಕೂಲ್, ನ್ಯಾಷನಲ್ ಕಾಲೇಜು ಹಾಗೂ ಬಿಎಂಎಸ್ ಕಾನೂನು ಕಾಲೇಜಿನಲ್ಲಿ ಪೂರೈಸಿದ್ದಾರೆ. ಇವರು ರಾಷ್ಟ್ರಮಟ್ಟದ ಮೆರಿಟ್ ಸ್ಕಾಲರ್ ಸರ್ಟಿಫಿಕೇಟ್ ಪಡೆದ ವಿದ್ಯಾರ್ಥಿಯಾಗಿದ್ದರು ಎನ್ನುವುದು ಗಮನಾರ್ಹ. ಕಾನೂನು ಪದವಿ ನಂತರ ಕರ್ನಾಟಕ ಹೈಕೋರ್ಟ್‌ನಲ್ಲಿ 1990 ರಲ್ಲಿ ವಕೀಲ ವೃತ್ತಿಯನ್ನು ಸುಪ್ರೀಂ ಕೋರ್ಟ್ ನಿವೃತ್ತ ನ್ಯಾಯಮೂರ್ತಿ ಶಿವರಾಜ್ ವಿ.ಪಾಟೀಲ್ ಮಾರ್ಗದರ್ಶನದಲ್ಲಿ ಆರಂಭಿಸಿದರು. ನಂತರ ಕೇಂದ್ರ ಸರ್ಕಾರದ ಹೆಚ್ಚುವರಿ ವಕೀಲರಾಗಿ 1998ರಲ್ಲಿ ನೇಮಕಗೊಂಡರು. 2003ರಲ್ಲಿ ಸೀನಿಯರ್ ಸ್ಟ್ಯಾಂಡಿಗ್ ಕೌನ್ಸಿಲ್(ಹೈ ಕೋರ್ಟ್ ಹಿರಿಯ ವಕೀಲ) ಆಗಿ ನಿಯೋಜನೆಗೊಂಡರು. ನಂತರ ಕೇಂದ್ರ ತನಿಖಾ ಸಂಸ್ಥೆ, ಬಿಎಸ್‌ಎನ್‌ಎಲ್ ಸಂಸ್ಥೆ ವಕೀಲರಾಗಿ, ಕೇಂದ್ರ ಲೋಕಸೇವಾ ಆಯೋಗ, ಯುಜಿಸಿ ಸೇರಿದಂತೆ ಹಲವು ಪ್ರತಿಷ್ಠಿತ ಸಂಸ್ಥೆಗಳಲ್ಲಿ ಹಿರಿಯ ವಕೀಲರಾಗಿ ಕಾರ್ಯ ನಿರ್ವಹಿಸಿದರು. ಇವರು ಹೈಕೋರ್ಟ್ ಹಾಗೂ ಸುಪ್ರೀಂಕೋರ್ಟ್‌ನಲ್ಲಿ ಪ್ರಮುಖ ಪ್ರಕರಣಗಳಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಪರ ವಾದ ಮಂಡಿಸಿದ್ದಾರೆ. 2015ರ ಜ.2ರಂದು ಕರ್ನಾಟಕ ಹೈಕೋರ್ಟ್ ಹೆಚ್ಚುವರಿ ನ್ಯಾಯಮೂರ್ತಿಯಾಗಿ, 2016ರ ಡಿಸೆಂಬರ್ 30ರಂದು ಹೈಕೋರ್ಟ್‌ನ ಖಾಯಂ ನ್ಯಾಯಾಧೀಶರಾಗಿ ಅಧಿಕಾರ ಸ್ವೀಕರಿಸಿ, ಎಲ್ಲಾ ಜವಾಬ್ದಾರಿಗಳನ್ನು ನಿರ್ವಹಿಸುವ ಅಪಾರ ಅನುಭವಿ ದಿನೇಶ್ ಕುಮಾರ್ ಅವರು ಕೆಲ ದಿನಗಳ ಹಿಂದೆಯಷ್ಟೇ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಯಾಗಿ ನೇಮಕಗೊಂಡಿದ್ದಾರೆ.

ಹಿರಿಯರು, ಸಾಧಕರ ಜೀವನ ಅರಿಯಿರಿ

ವಿದ್ಯಾರ್ಥಿಗಳಿಗೆ ಮೈಸೂರು ಜಿಪಂ ಸಿಇಓ ಕೆ.ಎಂ. ಗಾಯಿತ್ರಿ ಕಿವಿಮಾತು


ಮೈಸೂರು ವಿಭಾಗ ಮಟ್ಟದ 'ಮಾದರಿ ವಿಧಾನಸಭಾ ಅಧಿವೇಶನ ಸ್ಪರ್ಧೆ' ಸಮಾರೋಪದಲ್ಲಿ ಮೈಸೂರು ಜಿಪಂ ಸಿಇಓ ಕೆ.ಎಂ.ಗಾಯಿತ್ರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮೈಸೂರು, ಫೆ.12(ಎಸ್‌ಪಿಎನ್)– ಹಿರಿಯರ ಅನುಭವ, ಸಾಧಕರ ಜೀವನ ಚರಿತ್ರೆಯನ್ನು ಇಂದಿನ ವಿದ್ಯಾರ್ಥಿಗಳು ಓದಿ, ಅಳವಡಿಸಿಕೊಳ್ಳಲು ಪ್ರಯತ್ನಿಸಬೇಕು ಎಂದು ಮೈಸೂರು ಜಿಪಂ ಸಿಇಓ ಕೆ.ಎಂ.ಗಾಯಿತ್ರಿ ಸಲಹೆ ನೀಡಿದರು.

ಮೈಸೂರು ಜಿಪಂ ಸಭಾಂಗಣದಲ್ಲಿ ಕರ್ನಾಟಕ ಕಾನೂನು ಮತ್ತು ಸಂಸದೀಯ ಸುಧಾರಣಾ ಸಂಸ್ಥೆ ಹಾಗೂ ವಿದ್ಯಾವರ್ಧಕ ಕಾನೂನು ಕಾಲೇಜು ಸಂಯುಕ್ತಾಶ್ರಯದಲ್ಲಿ ಶುಕ್ರವಾರ ಆಯೋಜಿಸಿದ್ದ ಮೈಸೂರು ವಿಭಾಗ ಮಟ್ಟದ 'ಮಾದರಿ ವಿಧಾನಸಭಾ ಅಧಿವೇಶನ ಸ್ಪರ್ಧೆ' ಸಮಾರೋಪದಲ್ಲಿ ಭಾಗವಹಿಸಿ ಮಾತನಾಡಿದರು.

ಇಂದಿನ 'ಮಾದರಿ ವಿಧಾನಸಭಾ ಅಧಿವೇಶನ ಸ್ಪರ್ಧೆ'ಯಲ್ಲಿ ಮೈಸೂರು ವಿಭಾಗದ 7 ಜಿಲ್ಲೆಗಳಿಂದ ಭಾಗವಹಿಸಿರುವ ವಿದ್ಯಾರ್ಥಿಗಳು, ಮುಖ್ಯಮಂತ್ರಿ ಹುದ್ದೆ, ವಿಪಕ್ಷ ನಾಯಕನ ಹುದ್ದೆ ಹಾಗೂ ಇತರೆ ಜನ ಪ್ರತಿನಿಧಿಗಳು ಕಲಾಪದಲ್ಲಿ ನಿರ್ವಹಿಸುವ ಕಾರ್ಯಗಳ ಬಗ್ಗೆ 'ಮಾದರಿ ವಿಧಾನಸಭಾ ಅಧಿವೇಶನ'ದಲ್ಲಿ ಅನುಭವ ಪಡೆದುಕೊಂಡಿದ್ದೀರಿ. ಅಲ್ಲದೆ, ಓರ್ವ ಜನಪ್ರತಿನಿಧಿಯಾಗಿ ಆಯ್ಕೆಯಾಗಿ ಅಧಿವೇಶನದ ಕಾರ್ಯ–ಕಲಾಪಗಳನ್ನು ಸ್ವತಃ ನೀವೇ ಭಾಗವಹಿಸಿ ಆನಂದಿಸಿದ್ದೀರಿ. ಈ ಅನುಭವಗಳು ಮುಂದಿನ ವೃತ್ತಿ ಜೀವನದಲ್ಲಿ ಸಹಾಯಕ್ಕೆ ಬರುತ್ತವೆ ಎಂದು ಕಿವಿಮಾತು ಹೇಳಿದರು.

ಪ್ರಸ್ತುತ ನಾನು ಜಿಪಂ ಸಿಇಓ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ. ಅಲ್ಲದೆ, ಸರ್ಕಾರದ ಇತರೆ ಹುದ್ದೆಗಳಲ್ಲೂ ಜವಾಬ್ದಾರಿ ವಹಿಸಿಕೊಂಡು ಕೆಲಸ ಮಾಡಿದ್ದೇನೆ. ಆದರೆ, ಇಲ್ಲಿಯವರೆಗೆ ನನಗೆ ಹತ್ತಿರದಿಂದ ವಿಧಾನಸಭಾ ಕಲಾಪಗಳಲ್ಲಿ ಪಾಲ್ಗೊಳ್ಳುವ ಅವಕಾಶ ಸಿಕ್ಕಿಲ್ಲ. ಆದರೆ, ಈ ಕಾರ್ಯಕ್ರಮಕ್ಕೆ ಅನುವು ಮಾಡಿಕೊಟ್ಟ ನಂತರ ಈ ಬಾರಿ ಅಧಿವೇಶನದಲ್ಲಿ ಭಾಗವಹಿಸಲು ಅವಕಾಶ ಸಿಕ್ಕಿದೆ ಎಂದರು.

ವಿದ್ಯಾವರ್ಧಕ ಕಾನೂನು ಕಾಲೇಜು ವಿದ್ಯಾರ್ಥಿಗಳು ಸೇರಿದಂತೆ 7 ಜಿಲ್ಲೆಗಳ ಕಾನೂನು ವಿದ್ಯಾರ್ಥಿಗಳು 'ಮಾದರಿ ವಿಧಾನಸಭಾ ಅಧಿವೇಶನ ಸ್ಪರ್ಧೆ'ಯಲ್ಲಿ ಭಾಗವಹಿಸುವ ಮೊದಲು, ನಂತರ ನಿಮ್ಮ ಭಾವನೆಗಳಲ್ಲಿ ಸಾಕಷ್ಟು ವ್ಯತ್ಯಾಸ ಕಾಣುತ್ತಿದ್ದೇನೆ. ಹಾಗಾಗಿ ಪ್ರತಿಯೊಬ್ಬರು ಹಿರಿಯರ ಅನುಭವ, ಸಾಧಕರ ಅನುಭವಗಳನ್ನು ಆಲಿಸುವುದು ಎಷ್ಟು ಮುಖ್ಯ ಎಂಬುದನ್ನು ಅರಿತುಕೊಳ್ಳಬೇಕು ಎಂದು ತಿಳಿಸಿದರು. ಈ ವೇಳೆ ವಿದ್ಯಾವರ್ಧಕ ವಿದ್ಯಾಸಂಸ್ಥೆಯ ವಿಶ್ವನಾಥ್, ಶ್ರೀಶೈಲ ರಾಮಣ್ಣನವರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

